24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 30 | ನವದೆಹಲಿ | ಬೆಲೆ ₹10 | ಜುಲೈ 26 2026, ಭಾನುವಾರ

## ಒಳಪುಟಗಳಲ್ಲಿ

ಆ.3ರಿಂದ ಬೆಂಗಳೂರು ಇಂಡಿಯಾ ನ್ಯಾನೋ ಸಮಾವೇಶ - ಪು.5

ಲಾರ್ಡ್ಸ್ ಇಂಡೋ-ಅಮೆರಿಕನ್ ಪಿಯು ಕಾಲೇಜು: ನವವಿದ್ಯಾರ್ಥಿಗಳಿಗೆ ಸ್ವಾಗತ - ಪು.6

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯಕ್ರಮದಲ್ಲಿ ಬಿಜೆಪಿ ಯುವ ಮುಖಂಡ ಪಾಲಣ್ಣ ಭಾಗಿ - ಪು.7

# ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಕೊನೆಗೂ ಪ್ರಧಾನ್ ರಾಜೀನಾಮೆ

### ರಾಷ್ಟ್ರ ವಿರೋಧಿ ಶಕ್ತಿಗಳು ನೀಟ್ ವಿಚಾರವನ್ನು ದುರುಪಯೋಗಪಡಿಸಿಕೊಳ್ಳುವುದನ್ನು ತಡೆಯುವ ಉದ್ದೇಶ



**ನವದೆಹಲಿ, ಜು.25:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಖಂಡಿಸಿ ನಡೆಯುತ್ತಿದ್ದ ರಾಷ್ಟ್ರವ್ಯಾಪಿ ಪ್ರತಿಭಟನೆ ನಡುವೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಶನಿವಾರ ರಾಜೀನಾಮೆ ಸಲ್ಲಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಲ್ಲಿಸಿದ 2 ಪುಟಗಳ ರಾಜೀನಾಮೆ ಪತ್ರವನ್ನು ಧರ್ಮೇಂದ್ರ ಪ್ರಧಾನ್ ತಮ್ಮ ಸೋಷಿಯಲ್ ಮೀಡಿಯಾ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರಿಗೆ ರಾಜೀನಾಮೆ ಪತ್ರ ಸಲ್ಲಿಸಿರುವುದಾಗಿ ತಿಳಿಸಿದ್ದಾರೆ.

ಈ ವಿಚಾರವನ್ನು ರಾಷ್ಟ್ರವಿರೋಧಿ ಶಕ್ತಿಗಳು ಗೊಂದಲ ಸೃಷ್ಟಿಸಲು ಮತ್ತು ತಮ್ಮ ಸ್ವಾರ್ಥಕ್ಕಾಗಿ ದುರುಪಯೋಗಪಡಿಸಿಕೊಳ್ಳದಂತೆ ತಡೆಯುವ ಉದ್ದೇಶದಿಂದ ಈ ನಿರ್ಧಾರ ಕೈಗೊಂಡಿದ್ದೇನೆ. ದೇಶದ ಹಿತಾಸಕ್ತಿಯನ್ನು ಗಮನದಲ್ಲಿ ಇಟ್ಟುಕೊಂಡು ಹುದ್ದೆಯಿಂದ ಕೆಳಗಿಳಿಯಲು ನಿರ್ಧರಿಸಿದ್ದೇನೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಕಳೆದ ಕೆಲವು ದಿನಗಳಿಂದ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣವನ್ನ ಖಂಡಿಸಿ ದೇಶದ ವಿವಿಧ ಭಾಗಗಳಲ್ಲಿ ವ್ಯಾಪಕ ಪ್ರತಿಭಟನೆಗಳು ನಡೆಯುತ್ತಿದ್ದು, ಕೇಂದ್ರ ಸರ್ಕಾರದ ಮೇಲೆ ತೀವ್ರ ಒತ್ತಡ ನಿರ್ಮಾಣವಾಗಿತ್ತು. ಈ ಬೆಳವಣಿಗೆಯ ನಡುವೆ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ಮಹತ್ವದ ರಾಜಕೀಯ ಬೆಳವಣಿಗೆಯಾಗಿ ಪರಿಗಣಿಸಲಾಗಿದೆ.

### ಪ್ರಲ್ಹಾದ ಜೋಶಿಗೆ ಶಿಕ್ಷಣ ಇಲಾಖೆ ಹೆಚ್ಚುವರಿ ಹೊಣೆ



**ನವದೆಹಲಿ, ಜು.25:** ನೀಟ್ ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ವಿರುದ್ಧ ನಡೆದ ವಿದ್ಯಾರ್ಥಿಗಳ ಪ್ರತಿಭಟನೆ ಬೆನ್ನಲ್ಲೇ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಿದ್ದು, ಇದೀಗ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ ಜೋಶಿಯವರಿಗೆ ಶಿಕ್ಷಣ ಖಾತೆಯ ಹೆಚ್ಚುವರಿ ಹೊಣೆ ನೀಡಲಾಗಿದೆ. ಈ ಸಂಬಂಧ ಪ್ರಧಾನ ಮಂತ್ರಿಗಳ ಶಿಫಾರಸಿನ ಮೇಲೆ ರಾಷ್ಟ್ರಪತಿಗಳು ಆದೇಶ ಹೊರಡಿಸಿದ್ದು, ಈ ಮೂಲಕ ಜೋಶಿ ನೇಮಕಾತಿಯನ್ನು ದೃಢಪಡಿಸಿದೆ.

### ಜನರ ಭಾವನೆ ಗೌರವಿಸುವುದೇ ಪ್ರಜಾಪ್ರಭುತ್ವ: ಮೋದಿ



ರಾಜೀನಾಮೆಯ ಬೆನ್ನಲ್ಲೇ ರಾಜಕೀಯ ಚಟುವಟಿಕೆಗಳು ಚುರುಕುಗೊಂಡಿದ್ದು, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾದರು. ಇದೇ ವೇಳೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಹಾಗೂ ಕೇಂದ್ರ ಸಚಿವ ಜೆ.ಪಿ. ನಡ್ಡಾ ಮತ್ತು ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಅವರು, ಈ ದೇಶವ್ಯಾಪಿ ಹೋರಾಟದ ನೇತೃತ್ವ ವಹಿಸಿದ್ದ 'ಕಾಕ್ರೋಚ್ ಜನತಾ ಪಾರ್ಟಿ' (ಸಿಜೆಪಿ) ಯುವ ಪ್ರತಿನಿಧಿಗಳೊಂದಿಗೆ ಚರ್ಚೆ ನಡೆಸಿದರು. ಈ ಬೆಳವಣಿಗೆಗಳಿಗೆ ಸ್ಪಂದಿಸಿದ ಪ್ರಧಾನಿ ಮೋದಿ, "ಜನರ ಭಾವನೆಗಳನ್ನು ಗೌರವಿಸುವುದೇ ಪ್ರಜಾಪ್ರಭುತ್ವ," ಎಂದು ಹೇಳಿದ್ದಾರೆ.

# ಬೇಡಿಕೆ ಈಡೇರಿಕೆಗೆ ಕೇಂದ್ರ ಒಪ್ಪಿದ ಬೆನ್ನಲ್ಲೇ ಕಾಕ್ರೋಚ್ ಪಕ್ಷದ ಹೋರಾಟ ವಾಪಸ್

### ಪ್ರಜಾಪ್ರಭುತ್ವ ಮರುಸ್ಥಾಪನೆಯಾಗಿದೆ ಎಂದ ಸಂಘಟನೆ ಮುಖ್ಯಸ್ಥರು




**ನವದೆಹಲಿ, ಜು.25:** ಪ್ರತಿಭಟನಾಕಾರರ ವಿರುದ್ಧದ ಎಫ್ಐಆರ್‌ಗಳನ್ನು ಹಿಂತೆಗೆದುಕೊಳ್ಳುವುದು, ಸಂತ್ರಸ್ತ ಕುಟುಂಬಗಳಿಗೆ 1 ಕೋಟಿ ರೂ. ಪರಿಹಾರ ಮತ್ತು ಪರೀಕ್ಷಾ ಸುಧಾರಣೆಗಳ ಪರಿಶೀಲನೆ ಸೇರಿ ಪ್ರಮುಖ ಬೇಡಿಕೆಗಳ ಕುರಿತು ಕೇಂದ್ರ ಸರ್ಕಾರದಿಂದ ಭರವಸೆ ದೊರೆತ ನಂತರ ತನ್ನ ಹೋರಾಟವನ್ನು ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಶನಿವಾರ ಹಿಂಪಡೆದಿದೆ.

ಸೌರವ್‌ದಾಸ್ ಮತ್ತು ಆಶುತೋಷ್ ರಾಂಕಾ ಅವರನ್ನೊಳಗೊಂಡ ಸಿಜೆಪಿ ನಿಯೋಗ ಹಾಗೂ ಪ್ರಧಾನ ಮಂತ್ರಿ ಕಚೇರಿಯ ಕೇಂದ್ರ ರಾಜ್ಯ ಸಚಿವ ಜಿತೇಂದ್ರ ಸಿಂಗ್ ಮತ್ತು ಕೇಂದ್ರ ಸಚಿವ ಜೆ.ಪಿ.ನಡ್ಡಾ ಅವರನ್ನೊಳಗೊಂಡ ಕೇಂದ್ರ ಸರ್ಕಾರದ ನಿಯೋಗವು ಮೂರನೇ ಹಂತದ ಚರ್ಚೆಯ ನಂತರ ನವದೆಹಲಿಯ ಕಾನ್‌ಸ್ಟಿಟ್ಯೂಷನ್ ಕ್ಲಬ್ ಆಫ್ ಇಂಡಿಯಾದಲ್ಲಿ ಜಂಟಿ ಸುದ್ದಿಗೋಷ್ಠಿ ನಡೆಸಿತು.

ಸಿಜೆಪಿ ಮುಖ್ಯ ವಕ್ತಾರ ಸೌರವ್ ದಾಸ್ ಪ್ರತಿಭಟನೆಯನ್ನು ಅಧಿಕೃತವಾಗಿ ಹಿಂಪಡೆಯಲಾಗಿದ್ದು, ಶಾಂತಿಯುತವಾಗಿ ಪ್ರತಿಭಟನಾ ಸ್ಥಳವನ್ನು ಖಾಲಿ ಮಾಡುವಂತೆ ಪ್ರತಿಭಟನಾಕಾರರಲ್ಲಿ ಮನವಿ ಮಾಡಿದರು. ಒಪ್ಪಿಕೊಂಡಿರುವ ಷರತ್ತುಗಳನ್ನು ನಿಗದಿತ ಸಮಯದೊಳಗೆ ಜಾರಿಗೆ ತರಲಾಗುವುದು ಎಂಬ ಭರವಸೆಯೊಂದಿಗೆ, ಸಿಜೆಪಿ ಈ ಹೋರಾಟವನ್ನು ಸದ್ಭಾವನೆಯಿಂದ ಹಿಂಪಡೆಯುತ್ತಿದೆ ಎಂದು ಘೋಷಿಸುತ್ತದೆ ಎಂದು ದಾಸ್ ಹೇಳಿದರು.

ಹೋರಾಟದ ಸಮಯದಲ್ಲಿ ನಡೆದ ಹಿಂಸಾಚಾರವನ್ನು ಖಂಡಿಸುತ್ತದೆ ಎಂದ ಅವರು, ಪರೀಕ್ಷಾ ವ್ಯವಸ್ಥೆಯ ಸುಧಾರಣೆಗಳ ಕುರಿತು ಸರ್ಕಾರದೊಂದಿಗೆ ಚರ್ಚೆ ಮುಂದುವರಿಸಲಾಗುವುದು ಎಂದು ಹೇಳಿದರು.

### ಪರೀಕ್ಷಾ ಸುಧಾರಣೆ ಸಂಬಂಧ ಕೇಂದ್ರದೊಂದಿಗೆ ಸಭೆ

ಸಿಜೆಪಿ ವಕ್ತಾರ ಸೌರವ್‌ದಾಸ್ ಮಾತನಾಡಿ, ಕೇವಲ ದೆಹಲಿ ಮಾತ್ರವಲ್ಲದೆ, ಎಲ್ಲಾ ಬಿಜೆಪಿ ಆಡಳಿತವಿರುವ ಮತ್ತು ಬಿಜೆಪಿ ಮಿತ್ರಪಕ್ಷಗಳ ರಾಜ್ಯಗಳಲ್ಲಿ ಪ್ರತಿಭಟನಾಕಾರರ ವಿರುದ್ಧ ದಾಖಲಾಗಿರುವ ಎಲ್ಲಾ ಎಫ್ಐಆರ್‌ಗಳನ್ನು ಹಿಂತೆಗೆದುಕೊಳ್ಳಬೇಕು ಎಂಬ ನಮ್ಮ ಎರಡನೇ ಬೇಡಿಕೆಯನ್ನು ಸರ್ಕಾರ ಒಪ್ಪಿಕೊಂಡಿದೆ. ಅದರೊಂದಿಗೆ, ಭವಿಷ್ಯದಲ್ಲಿ ಯಾವುದೇ ಪ್ರತಿಭಟನಾಕಾರರ ವಿರುದ್ಧ ಅಥವಾ ಸಿಜೆಪಿ ತಂಡ ಮತ್ತು ಆಯೋಜಕರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲಾಗುವುದಿಲ್ಲ ಎಂಬ ಬಗ್ಗೆಯೂ ಒಪ್ಪಂದ ಮಾಡಿಕೊಂಡಿದ್ದೇವೆ. ಈ ತಿಳುವಳಿಕೆಯ ಮೇಲೆ, ಸರ್ಕಾರಕ್ಕೆ ಲಿಖಿತವಾಗಿ ಮಾಹಿತಿ ಹಂಚಿಕೊಂಡಿದ್ದೇವೆ ಮತ್ತು ಸರ್ಕಾರ ಮಂಗಳವಾರದೊಳಗೆ ಅದರ ಬಗ್ಗೆ ನಮ್ಮ ಜತೆ ಚರ್ಚಿಸಲಿದೆ ಎಂದರು. ಪರೀಕ್ಷಾ ಸುಧಾರಣೆಗಳಿಗಾಗಿ ತನ್ನ ಐದು ಅಂಶಗಳ ಪಟ್ಟಿಯನ್ನು ಸರ್ಕಾರ ಪರಿಗಣಿಸುತ್ತದೆ ಮತ್ತು ಉದ್ದೇಶಿತ ಬದಲಾವಣೆಗಳ ಕುರಿತು ಚರ್ಚಿಸಲು ಹೆಚ್ಚಿನ ಸಭೆಗಳನ್ನು ನಡೆಸಲಾಗುವುದು ಎಂದು ಸಿಜೆಪಿ ಹೇಳಿದೆ.

### ಪ್ರತಿಭಟನೆ ಅಂತ್ಯಕ್ಕೆ ಸಿಜೆಪಿ ಮನವಿ

ಸಿಜೆಪಿ ವಕ್ತಾರ ಆಶುತೋಷ್ ರಾಂಕಾ ಮಾತನಾಡಿ, ನಮ್ಮ ಎಲ್ಲಾ ಬೇಡಿಕೆಗಳನ್ನು ಈಡೇರಿಸಲಾಗಿದೆ ಎಂದು ಹೇಳಿ, ಶಾಂತಿಯುತವಾಗಿ ಪ್ರತಿಭಟನೆಯನ್ನು ಅಂತ್ಯಗೊಳಿಸುವಂತೆ ಪ್ರತಿಭಟನಾಕಾರರಲ್ಲಿ ಮನವಿ ಮಾಡಿದರು. ಈ ಪ್ರಕಟಣೆಯ ನಂತರ ಜಂತರ್ ಮಂತರ್‌ನಲ್ಲಿ ಪ್ರತಿಭಟನಾಕಾರರು ಸಂಭ್ರಮಾಚರಣೆ ನಡೆಸಿದರೆ, ಸಿಜೆಪಿ ನಾಯಕರು ತಮ್ಮ ಬೆಂಬಲಿಗರಿಗೆ ಮನೆಗೆ ಹಿಂತಿರುಗುವಂತೆ ಮನವಿ ಮಾಡಿದರು.

ಕೇಂದ್ರ ಸಚಿವ ಜೆ.ಪಿ. ನಡ್ಡಾ ಮಾತನಾಡಿ, ಪ್ರತಿಭಟನಾಕಾರರು ಮತ್ತು ಆಯೋಜಕರ ವಿರುದ್ಧ ದಾಖಲಾಗಿರುವ ಎಫ್ಐಆರ್ ಹಿಂಪಡೆಯಲು ಸರ್ಕಾರ ಕ್ರಮ ಕೈಗೊಳ್ಳಲಿದೆ. ಅಲ್ಲದೆ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿವಾದದ ನಂತರ ಆತ್ಮಹತ್ಯೆಗೆ ಶರಣಾದ ವಿದ್ಯಾರ್ಥಿಗಳ ಕುಟುಂಬಗಳಿಗೆ "ಪ್ರಸ್ತುತ ಇರುವ ನಿಯಮಗಳ ಪ್ರಕಾರ" ಪರಿಹಾರ ನೀಡುವುದನ್ನು ಸರ್ಕಾರ ನಿರ್ಧರಿಸಲಿದೆ ಎಂದು ಹೇಳಿದರು. ಸಿಜೆಪಿ ಜತೆ ಸುದೀರ್ಘ ಚರ್ಚೆ ನಡೆಯಿತು. ವಕ್ತಾರರು ನಾಲ್ಕು ಅಂಶಗಳನ್ನು ಮಂಡಿಸಿದರು. ಜತೆಗೆ ಪ್ರತಿಭಟನಾಕಾರರ ವಿರುದ್ಧ ಯಾವುದೇ ಸೇಡು ತೀರಿಸಿಕೊಳ್ಳುವ ಕ್ರಮಗಳನ್ನು ಕೈಗೊಳ್ಳಬಾರದು, ಪರಿಹಾರ ನೀಡಬೇಕು ಮತ್ತು ಅವರ ಐದು ಅಂಶಗಳ ಸುಧಾರಣಾ ಪಟ್ಟಿಯನ್ನು ಪರಿಗಣಿಸಬೇಕು ಎಂದು ಒತ್ತಾಯಿಸಿದರು. ಈ ಬಗ್ಗೆ ವಿವರವಾಗಿ ಚರ್ಚೆ ನಡೆಯಿತು ಎಂದು ಹೇಳಿದರು.

# ವಿದ್ಯಾರ್ಥಿಗಳ ಹೋರಾಟಕ್ಕೆ ಜಯ: ಶಿಕ್ಷಣ ವ್ಯವಸ್ಥೆ ಕುರಿತು ರಾಷ್ಟ್ರೀಯ ಚರ್ಚೆಯಾಗಲಿ– ರಾಹುಲ್ ಗಾಂಧಿ




**ನವದೆಹಲಿ, ಜು.25:** ಧರ್ಮೇಂದ್ರ ಪ್ರಧಾನ್ ರಾಜೀನಾಮೆ ವಿದ್ಯಾರ್ಥಿಗಳ ಹೋರಾಟಕ್ಕೆ ದೊರೆತ ಜಯವಾಗಿದೆ. ಇದು ವಿದ್ಯಾರ್ಥಿಗಳ ಜಯವಾಗಿದ್ದು, ಭಾರತದ ಭವಿಷ್ಯವೇ ವಿದ್ಯಾರ್ಥಿಗಳ ಕೈಯಲ್ಲಿದೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಂದು ಕಾಲದಲ್ಲಿ ಭಾರತದ ಶಿಕ್ಷಣ ವ್ಯವಸ್ಥೆಗೆ ವಿಶ್ವದಾದ್ಯಂತ ಗೌರವವಿತ್ತು. ಆದರೆ ಅದನ್ನು ಕ್ರಮೇಣ ಖಾಸಗೀಕರಣದತ್ತ ತಳ್ಳಲಾಗಿದೆ. ಇದಕ್ಕೆ ಜೊತೆಗೆ ದೇಶದಲ್ಲಿ ಹೆಚ್ಚುತ್ತಿರುವ ನಿರುದ್ಯೋಗವೂ ವಿದ್ಯಾರ್ಥಿಗಳ ಆಕ್ರೋಶಕ್ಕೆ ಕಾರಣವಾಗಿದೆ ಎಂದು ಹೇಳಿದರು.

ಧರ್ಮೇಂದ್ರ ಪ್ರಧಾನ್ ಕುರಿತು ಮಾತನಾಡಿದ ರಾಹುಲ್ ಗಾಂಧಿ, ಪ್ರಧಾನ್ ಭ್ರಷ್ಟಾಚಾರದ ಸಂಕೇತವಾಗಿದ್ದರು. ಅವರು ರಾಜೀನಾಮೆ ನೀಡಲೇಬೇಕಾಗಿತ್ತು. ಈಗ ಅವರು ರಾಜೀನಾಮೆ ನೀಡಿರುವುದು ಒಳ್ಳೆಯ ಬೆಳವಣಿಗೆ ಎಂದು ಹೇಳಿದರು. ಶಿಕ್ಷಣ ವ್ಯವಸ್ಥೆಯಲ್ಲಿ ಮೂಲಭೂತ ಬದಲಾವಣೆಗಳ ಕುರಿತು ರಾಷ್ಟ್ರೀಯ ಮಟ್ಟದಲ್ಲಿ ಚರ್ಚೆ ಆರಂಭವಾಗಬೇಕು ಎಂದು ಆಗ್ರಹಿಸಿದ ಅವರು, ಶಿಕ್ಷಣ ಕ್ಷೇತ್ರದ ಮೇಲಿರುವ ಆರ್‌ಎಸ್‌ಎಸ್‌ನ ಹಿಡಿತವನ್ನು ತೆಗೆದುಹಾಕಬೇಕಿದೆ ಎಂದು ಹೇಳಿದರು. ಜ್ಞಾನದ ಮೇಲೆ ಆಕ್ರಮಣವಾಗಿದೆ. ಅದನ್ನು ದೂರ ಮಾಡಬೇಕು. ಆದರೆ ಈಗಿನ ಸರ್ಕಾರ ಅದನ್ನು ಮಾಡುವುದಿಲ್ಲ ಎಂದು ಟೀಕಿಸಿದರು.

ವಿದ್ಯಾರ್ಥಿಗಳ ಮೇಲಿನ ಹಲ್ಲೆ ಪ್ರಕರಣದ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗಬೇಕು. ಜನರಿಗೆ ನ್ಯಾಯ ದೊರೆಯುತ್ತಿರುವುದು ಗೋಚರಿಸಬೇಕು ಎಂದು ಒತ್ತಾಯಿಸಿದ ರಾಹುಲ್ ಗಾಂಧಿ, ವಿದ್ಯಾರ್ಥಿಗಳ ಮೇಲಿನ ದಾಳಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ದೇಶದ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು.

ದೆಹಲಿಯಲ್ಲಿ ನಡೆದ ಗಲಭೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಕಾರಣ ಎಂದು ಆರೋಪಿಸಿದ ಅವರು, ವಿದ್ಯಾರ್ಥಿಗಳ ಮೇಲೆ ಮೂಲಭೂತವಾದಿ ದಾಳಿ ನಡೆದಿದೆ ಎಂದು ಹೇಳಿದರು. ಈ ವಿಷಯವನ್ನು ಸಂಸತ್‌ನಲ್ಲಿ ಚರ್ಚೆ ನಡೆಸುವುದಾಗಿ ತಿಳಿಸಿದರು.

ದೇಶದ ವಿವಿಧ ವ್ಯವಸ್ಥೆಗಳು ದುರ್ಬಲಗೊಂಡಿದ್ದು, ಮುಂದಿನ ದಿನಗಳಲ್ಲಿ ದೇಶ ಗಂಭೀರ ಆರ್ಥಿಕ ಸಮಸ್ಯೆಯನ್ನು ಎದುರಿಸಲಿದೆ ಎಂದು ಎಚ್ಚರಿಕೆ ನೀಡಿದ ಅವರು, ಸರ್ಕಾರವು ಜನರ ಧ್ವನಿಯನ್ನು ಆಲಿಸಬೇಕು. ಅಧಿಕಾರವು ಯಾವುದೇ ವ್ಯಕ್ತಿ ಅಥವಾ ಸರ್ಕಾರಕ್ಕೆ ಸೇರಿದ್ದಲ್ಲ; ಅದು ದೇಶದ ಜನರಿಗೆ ಸೇರಿದ್ದು ಎಂಬುದನ್ನು ಸರ್ಕಾರ ನೆನಪಿಟ್ಟುಕೊಳ್ಳಬೇಕು ಎಂದು ಹೇಳಿದರು. ವಿದ್ಯಾರ್ಥಿಗಳ ಹೋರಾಟಕ್ಕೆ ಕಾಂಗ್ರೆಸ್ ಪಕ್ಷ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಪುನರುಚ್ಚರಿಸಿದ ರಾಹುಲ್ ಗಾಂಧಿ, "ಈ ಹೋರಾಟ ಮುಂದುವರಿಯುತ್ತದೆ. ಎಲ್ಲ ವಿದ್ಯಾರ್ಥಿಗಳಿಗೆ ಅಭಿನಂದನೆಗಳು. ಕಾಂಗ್ರೆಸ್ ಪಕ್ಷ ಮತ್ತು ನಾನು ವಿದ್ಯಾರ್ಥಿಗಳ ಬೆಂಬಲಕ್ಕಿದ್ದೇವೆ. ಭಾರತದ ಭವಿಷ್ಯದ ಜೊತೆಯಲ್ಲಿದ್ದೇವೆ" ಎಂದು ಹೇಳಿದರು.

### ಶಿಕ್ಷಣ ವ್ಯವಸ್ಥೆ ಮರು ರಚಿಸುವತ್ತ ದೊಡ್ಡಹೆಜ್ಜೆ

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯನ್ನು ಭಾರತದ ಶಿಕ್ಷಣ ವ್ಯವಸ್ಥೆಯನ್ನು ಪುನರ್ರಚಿಸುವತ್ತ ಒಂದು ದೊಡ್ಡ ಹೆಜ್ಜೆ ಮತ್ತು 2026ರ ನೀಟ್–ಯುಜಿ ಪ್ರಶ್ನೆಪತ್ರಿಕೆ ಸೋರಿಕೆಯ ವಿರುದ್ಧ ರಾಷ್ಟ್ರವ್ಯಾಪಿ ಪ್ರತಿಭಟನೆಗಳನ್ನು ಮುನ್ನಡೆಸಿದ ವಿದ್ಯಾರ್ಥಿಗಳಿಗೆ ಇದು ಒಂದು ಹೆಗ್ಗುರುತು ವಿಜಯ ಎಂದು ಕಾಂಗ್ರೆಸ್ ನಾಯಕ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಶನಿವಾರ ಬಣ್ಣಿಸಿದ್ದಾರೆ.

### ಯುವಕರ - ಪ್ರತಿಪಕ್ಷಗಳ ಒಗ್ಗಟ್ಟಿಗೆ ಸಂದ ಗೆಲುವು: ಮಲ್ಲಿಕಾರ್ಜುನ ಖರ್ಗೆ



ನೀಟ್–ಯುಜಿ 2026 ಪ್ರಶ್ನೆಪತ್ರಿಕೆ ಸೋರಿಕೆ ವಿವಾದ ಮತ್ತು ಸಿಬಿಎಸ್‌ಇಯ ಆನ್‌ಸ್ಕ್ರೀನ್ ಮಾರ್ಕಿಂಗ್ ವ್ಯವಸ್ಥೆಯಲ್ಲಿನ ಅಕ್ರಮಗಳ ವಿರುದ್ಧ ದೇಶಾದ್ಯಂತ ವಿದ್ಯಾರ್ಥಿ ಪ್ರತಿಭಟನೆ ತೀವ್ರಗೊಂಡ ಹಿನ್ನೆಲೆಯಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಿದ್ದಾರೆ. ರಾಜೀನಾಮೆ ಬೆನ್ನಲ್ಲೇ ದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನಾಕಾರರ ಸಂಭ್ರಮಾಚರಣೆಗೆ ಮುಗಿಲುಮುಟ್ಟಿತ್ತು. ಮತ್ತೊಂದೆಡೆ ವಿರೋಧ ಪಕ್ಷಗಳು ಇದನ್ನು "ಭಾರತದ ಯುವಜನತೆಯ ವಿಜಯ" ಎಂದು ಬಣ್ಣಿಸಿದ್ದು, ಸಚಿವರ ರಾಜೀನಾಮೆಯು ಹೊಣೆಗಾರಿಕೆ ಪ್ರಕ್ರಿಯೆಯ ಆರಂಭವಷ್ಟೇ ಎಂದು ಬಣ್ಣಿಸಿವೆ. ಕಾಂಗ್ರೆಸ್ ಅಧ್ಯಕ್ಷ ಹಾಗೂ ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಈ ಬೆಳವಣಿಗೆಯನ್ನು ಕೋಟ್ಯಂತರ ಯುವಕರ ಗೆಲುವು, ಒಗ್ಗಟ್ಟಿನ ವಿರೋಧ ಪಕ್ಷದ ಗೆಲುವು, ಸತ್ಯದ ಮತ್ತು ಸಂತ್ರಸ್ತ ಕುಟುಂಬಗಳ ಗೆಲುವು ಎಂದಿದ್ದಾರೆ.

# ಪ್ರಶ್ನೆಪತ್ರಿಕೆ ಸೋರಿಕೆಯಾದರೆ ಜಿಲ್ಲಾಧಿಕಾರಿಗಳೇ ಹೊಣೆ: ಡಿ.ಕೆ. ಶಿವಕುಮಾರ್ ಎಚ್ಚರಿಕೆ

### ಚಿತ್ರದುರ್ಗದ ಮುರುಘಾ ಮಠದ ಅನುಭವ ಮಂಟಪದಲ್ಲಿ ಬೆಂಗಳೂರು ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆ



ಸಿಎಂ ಡಿ ಕೆ ಶಿವಕುಮಾರ್ ಅವರು ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ವದ್ದಿಕೆರೆಯಲ್ಲಿ ರೈತರ ಜಮೀನಿಗೆ ಶನಿವಾರ ಭೇಟಿ ನೀಡಿ ಬರ ಪರಿಣಾಮದ ಬಗ್ಗೆ ಪರಿಶೀಲನೆ ಮಾಡಿದರು. ಸಿಎಂ ಅವರಿಗೆ ಪರಿಸ್ಥಿತಿ ಬಗ್ಗೆ ಅಧಿಕಾರಿಗಳು ವಿವರಿಸಿದರು. ಡಿಸಿಎಂ ಡಾ ಜಿ ಪರಮೇಶ್ವರ, ಸಚಿವರಾದ ಈಶ್ವರ್ ಖಂಡ್ರೆ, ಶಾಸಕ ಟಿ ರಘುಮೂರ್ತಿ ಇದ್ದರು.

**ಚಿತ್ರದುರ್ಗ, ಜು.25:** ಪ್ರಶ್ನೆಪತ್ರಿಕೆ ಸೋರಿಕೆ, ಅಕ್ರಮಗಳು ನಡೆದರೆ ಜಿಲ್ಲಾಧಿಕಾರಿಗಳೇ ಹೊಣೆ. ಹೊಸ ಬೋರ್‌ವೆಲ್ ವಿಡಿಯೋ, ಫೋಟೊ, ಜಿಪಿಎಸ್ ಕಡ್ಡಾಯ, ಕೇಂದ್ರಕ್ಕೆ ಬರ ಪರಿಸ್ಥಿತಿ ವಿವರಿಸಲು ಸಂಸದರ ಸಭೆ ಹಾಗೂ ಸರ್ವಪಕ್ಷ ನಿಯೋಗ, ಬಡವರಿಗೆ ಸೂರು, ಪ್ರತಿ ಕ್ಷೇತ್ರದ ಬಿತ್ತನೆಬೀಜ, ಗೊಬ್ಬರ ದಾಸ್ತಾನು ಬಗ್ಗೆ ಸ್ಥಳೀಯ ಶಾಸಕರಿಗೆ ಮಾಹಿತಿ ನೀಡಬೇಕು ಎನ್ನುವ ಅಂಶಗಳನ್ನು ಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು.

ಚಿತ್ರದುರ್ಗದ ಮುರುಘಾ ಮಠದ ಅನುಭವ ಮಂಟಪದಲ್ಲಿ ಶನಿವಾರ ನಡೆದ ಬೆಂಗಳೂರು ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಹಾಗೂ ನಂತರ ಮಾಧ್ಯಮಗೋಷ್ಠಿಯಲ್ಲಿ ಅವರು ಮಾತನಾಡಿದರು.

ರಾಜ್ಯದಲ್ಲಿ ನೇಮಕಾತಿ ಪರ್ವ ನಡೆಯುತ್ತಿದೆ. ಸುಮಾರು 70 ಸಾವಿರಕ್ಕೂ ಹೆಚ್ಚು ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ. ನೇಮಕಾತಿ ಪರೀಕ್ಷೆ ನಡೆಯುವ ಕಡೆ ಕಡ್ಡಾಯವಾಗಿ ಸಿಸಿ ಟಿವಿ ಕ್ಯಾಮರಾಗಳನ್ನು ಅಳವಡಿಸಬೇಕು. ಪ್ರಶ್ನೆಪತ್ರಿಕೆಗೆ ಹೆಚ್ಚಿನ ಭದ್ರತೆ ಒದಗಿಸಬೇಕು. ಪರೀಕ್ಷೆಯ, ಪ್ರಶ್ನೆಪತ್ರಿಕೆ ತಯಾರಿಕೆ, ಹಂಚಿಕೆ ಹೀಗೆ ಪ್ರತಿಯೊಂದು ಹಂತವೂ ದಾಖಲೆಯಾಗಬೇಕು. ನೀಟ್ ಹಗರಣ ಎಲ್ಲರ ಗಮನದಲ್ಲಿರಲಿ. ಪ್ರಶ್ನೆಪತ್ರಿಕೆ ಸೋರಿಕೆಯಾದರೆ ಅಧಿಕಾರಿಗಳೇ ಹೊಣೆ" ಎಂದು ಎಚ್ಚರಿಸಿದರು.

"ಜನರ ಮನೆ ಬಾಗಿಲಿಗೆ ಸರ್ಕಾರ ಹೋಗಬೇಕು. ಜನರು ಸರ್ಕಾರದ ಬಾಗಿಲಿಗೆ ಬರಬಾರದು. ಅಧಿಕಾರಿಗಳು ಸಮಸ್ಯೆಗಳಿಗೆ ಪರಿಹಾರ ಹುಡುಕಬೇಕು. ಸುಮ್ಮನೆ ತಕರಾರು ಮಾಡಿದರೆ ಕ್ರಮ ಕೈಗೊಳ್ಳುವೆ. ನಾನು ಕೊಟ್ಟ ಸ್ವಾತಂತ್ರ್ಯ ದುರುಪಯೋಗ ಮಾಡಿಕೊಂಡರೆ ಕ್ರಮ ತೆಗೆದುಕೊಳ್ಳಲಾಗುವುದು" ಎಂದು ಎಚ್ಚರಿಸಿದರು.

**ಹೊಸ ಬೋರ್‌ವೆಲ್ ವಿಡಿಯೋ, ಫೋಟೊ, ಜಿಪಿಎಸ್ ಕಡ್ಡಾಯ:** ಹೊಸ ಬೋರ್‌ವೆಲ್ ಕೊರೆಯುವ ಮುಂಚಿನ ಹಾಗೂ ನಂತರದ ವಿಡಿಯೋ, ಫೋಟೋಗಳನ್ನು ದಾಖಲಿಸಬೇಕು. ಜಿಪಿಎಸ್ ಕೂಡ ನಮೂದಿಸಬೇಕು. ಬೋರ್ ವೆಲ್ ಆಳದ ಬಗ್ಗೆಯೂ ದಾಖಲಿಸಬೇಕು. 150 ಅಡಿ ಆಳ ಕೊರೆದು 500–600 ಅಡಿ ಆಳ ಕೊರೆಯಲಾಗಿದೆ ಎಂದು ಅಕ್ರಮಕ್ಕೆ ಆಸ್ಪದ ನೀಡಬಾರದು. ಹೊಸದಾಗಿ ಬೋರ್‌ವೆಲ್ ಕೊರೆದರೆ, ದುರಸ್ತಿಗೊಳಿಸಿದರೆ ಪ್ರತಿಯೊಂದರ ಮಾಹಿತಿ ದಾಖಲಿಸಬೇಕು. ಹೊಸ ಬೋರ್ ವೆಲ್ ಕೊರೆದರೆ ಜಿಪಿಎಸ್ ಮಾಹಿತಿ ದಾಖಲಿಸಬೇಕು. ವಿದ್ಯುತ್ ಸಂಪರ್ಕ ಸೇರಿದಂತೆ ಪ್ರತಿ ತೀರ್ಮಾನದ ಬಗ್ಗೆಯೂ ಮಾಹಿತಿಗಳು ಪಾರದರ್ಶಕವಾಗಿರಬೇಕು" ಎಂದರು.

ಚಿತ್ರದುರ್ಗದ ಮುರುಘಾ ಮಠದ ಅನುಭವ ಮಂಟಪದಲ್ಲಿ ಬೆಂಗಳೂರು ಪ್ರಾದೇಶಿಕ ವಿಭಾಗ ಮಟ್ಟದ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ಸಭೆಯು ಸಿಎಂ ಡಿ.ಕೆ.ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಶನಿವಾರ ಜರುಗಿತು. ಡಿಸಿಎಂ ಡಾ ಜಿ ಪರಮೇಶ್ವರ, ಸಚಿವರಾದ ರಾಮಲಿಂಗಾರೆಡ್ಡಿ, ಈಶ್ವರ್ ಖಂಡ್ರೆ, ದೆಹಲಿಯಲ್ಲಿ ಕರ್ನಾಟಕದ ವಿಶೇಷ ಪ್ರತಿನಿಧಿ ಟಿ ಬಿ ಜಯಚಂದ್ರ, ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಮತ್ತಿತರರು ಉಪಸ್ಥಿತರಿದ್ದರು.

### ಮಂದಿನವಾರ ಸಂಪುಟ ವಿಸ್ತರಣೆ

ಮುಂದಿನವಾರ ಸಚಿವ ಸಂಪುಟ ವಿಸ್ತರಣೆ ಆಗಬಹುದು. ಆಗ ಎಲ್ಲಾ ಮಂತ್ರಿಗಳು ಕೈಜೋಡಿಸಿ ಕೆಲಸ ಮಾಡಬೇಕಾಗುತ್ತದೆ. ಒಟ್ಟಾಗಿ ರಾಜ್ಯದ ಬರ ಪರಿಸ್ಥಿತಿ ಅವಲೋಕಿಸಬೇಕು. ರೈತರಿಗೆ ತೊಂದರೆ ಆಗದಂತೆ ಎಚ್ಚರ ವಹಿಸಬೇಕು. ಇದೇ ನಮ್ಮ ಮುಂದಿರುವ ಹೊಣೆಗಾರಿಕೆ. ಜಿಲ್ಲಾಡಳಿತವು ಗ್ರಾಮೀಣ ಭಾಗದ ಪ್ರತಿ ವಿಧಾನಸಭೆ ಕ್ಷೇತ್ರದಲ್ಲಿ ಕುಡಿಯುವ ನೀರು ಪೂರೈಕೆಗೆ 1 ಕೋಟಿ ರೂ.ವರೆಗೆ ಖರ್ಚು ಮಾಡಬಹುದು ಎಂದು ಬೆಳಗಾವಿ ಸಭೆಯಲ್ಲಿ ತೀರ್ಮಾನ ಮಾಡಲಾಗಿತ್ತು. ಈ ಬಗ್ಗೆ ನಿರ್ಲಕ್ಷ್ಯ ಸಲ್ಲದು ಎಂದು ಡಿ.ಕೆ. ಶಿವಕುಮಾರ್ ಎಚ್ಚರಿಸಿದರು.

### ಕೇಂದ್ರದ ಬಳಿ ಸರ್ವಪಕ್ಷ ನಿಯೋಗ, ದೆಹಲಿಯಲ್ಲಿ ಸಂಸದರ ಸಭೆ

ಬರ ಪರಿಸ್ಥಿತಿ ಬಗ್ಗೆ ಕೇಂದ್ರ ಸರ್ಕಾರದ ಬಳಿ ಚರ್ಚಿಸಲು ಸರ್ವಪಕ್ಷ ನಿಯೋಗ ಕರೆದೊಯ್ಯಲಾಗುವುದು. ದೆಹಲಿಯಲ್ಲಿ ಸೋಮವಾರ ಸಂಸದರ ಸಭೆ ನಡೆಸಲಾಗುವುದು. ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸಲು ಸಾಧ್ಯವಿಲ್ಲ ಎಂದು ಕಾವೇರಿ ನೀರು ನಿರ್ವಹಣಾ ಸಮಿತಿ ಮುಂದೆ ಹೇಳಲಾಗಿದೆ. ಅವರಿಗೂ ಪರಿಸ್ಥಿತಿಯ ಬಗ್ಗೆ ಅರಿವಿದೆ. ಪ್ರಧಾನಿ ಮೋದಿ ಅವರು ಸಹ ಎಲ್‌ನೀನೋ ಪರಿಣಾಮದ ಬಗ್ಗೆ ಮಾತನಾಡಿದ್ದಾರೆ. ಈ ಎಚ್ಚರಿಕೆಯನ್ನು ಕಡೆಗಣಿಸಬಾರದು. ನಾನು ಸಹ ಪ್ರಧಾನಿಯವರಿಗೆ ಬರ ಪರಿಸ್ಥಿತಿ ಬಗ್ಗೆ ಮಾಹಿತಿ ನೀಡಿದ್ದೇನೆ. ಡಿಸಿಎಂ ಅವರೂ ಬರದ ಬಗ್ಗೆ ವಸ್ತುಸ್ಥಿತಿ ತಿಳಿಸಲು ಪ್ರಧಾನಿಯವರ ಬಳಿಗೆ ಶೀಘ್ರ ನಿಯೋಗ ಕಳುಹಿಸಲಿದ್ದಾರೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

### ನೇರವಾಗಿ ರೈತರಿಗೆ ಬೆಳೆ ವಿಮೆ

ಬೆಳೆ ವಿಮೆ ಬಗ್ಗೆ ರೈತರಿಗೆ ಅಧಿಕಾರಿಗಳು ನೆರವಾಗಬೇಕು. ಅರಿವು ಮೂಡಿಸಬೇಕು. ರೈತರು ಯಾವುದೇ ಕಾರಣಕ್ಕೂ ಮುಂದಿನ ಮಳೆ, ಅಣೆಕಟ್ಟು ನೀರು ನೆಚ್ಚಿಕೊಂಡು ಬೆಳೆ ಹಾಕಬಾರದು. ನೀರಾವರಿ ಸಮಿತಿ, ಅಧಿಕಾರಿಗಳು ಹಾಗೂ ಸರ್ಕಾರದ ಮಾರ್ಗದರ್ಶನ ಆಧಾರದ ಮೇಲೆ ಬೆಳೆ ಹಾಕಿಕೊಳ್ಳಬೇಕು. ನಿಮ್ಮಷ್ಟಕ್ಕೆ ನೀವೆ ಬೆಳೆ ಹಾಕಿದರೆ ನಷ್ಟಕ್ಕೆ ನೀವೇ ಹೊಣೆಯಾಗಬೇಕಾಗುತ್ತದೆ. ನಮ್ಮಿಂದ ಸಹಕಾರ ನೀಡಲು ಆಗುವುದಿಲ್ಲ. ಆಲಮಟ್ಟಿ ಹೊರತಾಗಿ ಬೇರೆ ಯಾವ ಜಲಾಶಯದಲ್ಲೂ ನೀರಿನ ಪರಿಸ್ಥಿತಿ ಉತ್ತಮವಾಗಿಲ್ಲ" ಎಂದರು.

# ಜಂತರ್-ಮಂತರ್ ಹೋರಾಟಕ್ಕೆ ಜಯ: ಸಂಪುಟ ವಿಸ್ತರಣೆ ಶುಭಸುದ್ದಿ ನಿರೀಕ್ಷೆಯಲ್ಲಿ ರಾಜ್ಯ ನಾಯಕರು

**ಬೆಂಗಳೂರು, ಜು.25:** ಜಂತರ್-ಮಂತರ್‌ನಲ್ಲಿ ನಡೆಯುತ್ತಿದ್ದ ಪ್ರತಿಭಟನೆ ವಾಪಸ್ ಆಗಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ಹೈಕಮಾಂಡ್ ಸ್ವಲ್ಪಮಟ್ಟಿಗೆ ನಿರಾಳವಾಗಿದ್ದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ವಿಸ್ತರಣೆಗೆ ಶೀಘ್ರದಲ್ಲೇ ಅನುಮತಿ ದೊರೆಯುವ ನಿರೀಕ್ಷೆಯಿದೆ.

ಶುಭಸುದ್ದಿ ನಿರೀಕ್ಷೆಯಲ್ಲಿ ರಾಜ್ಯ ನಾಯಕರಿದ್ದು, ಅನುಮತಿ ದೊರೆಯುತ್ತಿದ್ದಂತೆ ರಾಜಭವನದ ಗಾಜಿನಮನೆಯಲ್ಲಿ ಪ್ರಮಾಣ ವಚನ ಸ್ವೀಕಾರಕ್ಕೆ ಮುಹೂರ್ತ ನಿಗದಿಯಾಗಲಿದೆ. ಸಮಾರಂಭಕ್ಕೆ ಈಗಾಗಲೇ ಆರಂಭಿಕ ಸಿದ್ಧತೆಗಳು ಪೂರ್ಣಗೊಂಡಿವೆ.

ಬಹು ನಿರೀಕ್ಷಿತ ಸಚಿವ ಸಂಪುಟ ವಿಸ್ತರಣೆಯ ಕುರಿತು ಶುಕ್ರವಾರ ಬೆಂಗಳೂರಿಗೆ ಆಗಮಿಸಿದ್ದ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳ ಜೊತೆ ರಾಜ್ಯದ ನಾಯಕರು ಮಹತ್ವದ ಸಭೆ ನಡೆಸಿದ್ದು, ಸಂಭವನೀಯರ ಪಟ್ಟಿ ಬಹುತೇಕ ಅಂತಿಮಗೊಂಡಿದೆ. ಮುಂದಿನ ವಾರ ವರಿಷ್ಠ ನಾಯಕರ ಅನುಮೋದನೆ ಪಡೆದು ಸಂಪುಟ ವಿಸ್ತರಣೆಯಾಗುವುದು ಬಹುತೇಕ ಖಚಿತವಾಗಿದೆ.

ಕಳೆದ 15 ದಿನಗಳಿಂದಲೂ ಸಂಪುಟ ವಿಸ್ತರಣೆಯ ಹಗ್ಗಜಗ್ಗಾಟ ನಡೆಯುತ್ತಲೇ ಇದೆ. ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿ ಜೂನ್ 3ರಂದು ಪ್ರಮಾಣವಚನ ಸ್ವೀಕರಿಸಿದಾಗ ಅವರೊಂದಿಗೆ 13 ಮಂದಿ ಸಚಿವರು ಮಾತ್ರ ಸಂಪುಟ ಸೇರಿದ್ದಾರೆ. ಬಾಕಿ ಇರುವ 20 ಸ್ಥಾನಗಳಿಗೆ ಒಂದು ತಿಂಗಳ ಒಳಗಾಗಿಯೇ ವಿಸ್ತರಣೆ ಮಾಡುವುದಾಗಿ ಹೇಳಲಾಗಿತ್ತು. ಒಂದು ಮುಕ್ಕಾಲು ತಿಂಗಳು ಕಳೆದರೂ ಚರ್ಚೆಗಳು ತಾತ್ವಿಕ ಹಂತಕ್ಕೆ ಬಂದಿಲ್ಲ.

ಆರಂಭದಲ್ಲಿ ರಾಜ್ಯಸಭೆ ಮತ್ತು ವಿಧಾನ ಪರಿಷತ್ ಚುನಾವಣೆಗಳಿಂದಾಗಿ ಸಂಪುಟ ವಿಸ್ತರಣೆ ಮುಂದೂಡಿಕೆಯಾಗಿತ್ತು. ಬಳಿಕ ರಾಹುಲ್ ಗಾಂಧಿ ವಿದೇಶಿ ಪ್ರವಾಸ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ವಿದ್ಯಾರ್ಥಿಗಳ ಮೇಲೆ ದೆಹಲಿ ಪೊಲೀಸರು ನಡೆಸಿದ ದೌರ್ಜನ್ಯ ಪ್ರಕರಣ ವಿರೋಧಿಸಿ ಕಾಂಗ್ರೆಸ್ ಪ್ರತಿಭಟನೆ ನಡೆಸುತ್ತಿದೆ. ಈ ಕಾವು ರಾಜ್ಯ ಮತ್ತು ರಾಷ್ಟ್ರೀಯ ನಾಯಕರ ನಡುವೆ ಚರ್ಚೆಗೆ ಸಮಯ ಒದಗಿಸುತ್ತಿಲ್ಲ. ಆದರೆ ಈಗ ಕೇಂದ್ರ ಸಚಿವ ಸ್ಥಾನಕ್ಕೆ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಿದ ನಂತರ ರಣೋತ್ಸಾಹದಲ್ಲಿರುವ ಕಾಂಗ್ರೆಸ್ ನಾಯಕರು ಮಂತ್ರಿಮಂಡಲ ವಿಸ್ತರಣೆಗೆ ಒಂದೆರಡು ದಿನಗಳಲ್ಲಿ ಅನುಮತಿ ನೀಡುವ ಸಾಧ್ಯತೆಯಿದೆ.

ಬೆಂಗಳೂರಿನಲ್ಲಿ ಸಂಘಟನಾ ಸೃಜನ್ ಅಭಿಯಾನ ವೀಕ್ಷಕರ ಸಭೆಯಲ್ಲಿ ಭಾಗವಹಿಸಲು ಬೆಂಗಳೂರಿಗೆ ಆಗಮಿಸಿದ್ದ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್ ಮತ್ತು ರಣದೀಪ್ ಸಿಂಗ್ ಸುರ್ಜೇವಾಲ ಅವರ ಜೊತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ಸಂಪುಟ ವಿಸ್ತರಣೆ ಕುರಿತು ಮಹತ್ವದ ಚರ್ಚೆ ನಡೆಸಿದರು.

ಸಂಭವನೀಯ ಸಚಿವರ ಪಟ್ಟಿಯ ಕುರಿತು ರಾಹುಲ್ ಗಾಂಧಿಯವರು ಸೂಚಿಸಿರುವ ಮಾನದಂಡಕ್ಕೆ ಹೋಲಿಕೆಯಾಗುವವರ ಹೆಸರನ್ನು ರಾಜ್ಯ ನಾಯಕರು ಹೈಕಮಾಂಡ್ ಮುಂದಿಟ್ಟಿದ್ದಾರೆ. ಖಾಸಗಿ ಸಂಸ್ಥೆಯಿಂದ ವರದಿ ಪಡೆದು ಅದರ ಆಧಾರದ ಮೇಲೆ ರಾಹುಲ್ ಗಾಂಧಿ ಸೂಚಿಸಿದ್ದ ಕೆಲವರ ಹೆಸರುಗಳು, ರಾಜ್ಯ ನಾಯಕರ ಪಟ್ಟಿಯಲ್ಲಿ ಸೇರಿವೆ ಎನ್ನಲಾಗಿದೆ. ರಣದೀಪ್ ಸಿಂಗ್ ಸುರ್ಜೇವಾಲ ಶುಕ್ರವಾರ ರಾತ್ರಿಯೇ ದೆಹಲಿಗೆ ತೆರಳಿದ್ದು, ಕೆ.ಸಿ.ವೇಣುಗೋಪಾಲ್ ಬೆಂಗಳೂರಿನಲ್ಲೇ ಉಳಿದು ಪ್ರಮುಖ ನಾಯಕರ ಜೊತೆ ಚರ್ಚೆ ಮಾಡಿ ಇಂದು ದೆಹಲಿಗೆ ಪ್ರಯಾಣ ಬೆಳೆಸಿದರು.

ಈವರೆಗಿನ ಮಾಹಿತಿ ಪ್ರಕಾರ ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯ, ಹರಿಪ್ರಸಾದ್ ಅವರ ಪ್ರತ್ಯೇಕ ಪಟ್ಟಿಯಲ್ಲಿ ಕೆಲವರನ್ನು ಪರಿಗಣಿಸಲಾಗಿದೆ. ಆದರೆ ಪ್ರಮುಖವಾಗಿ ರಾಹುಲ್ ಗಾಂಧಿ ಸೂಚಿಸಿದವರು ಮುಂದಿನ ಸಂಪುಟ ವಿಸ್ತರಣೆಯಲ್ಲಿ ಸಚಿವರಾಗಲಿದ್ದಾರೆ. ಹಿರಿಯರಿಗೆ ಅವಕಾಶ ನೀಡುವ ನಿಟ್ಟಿನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂದು ಹೇಳಲಾಗಿದೆ.

ಆಗಸ್ಟ್ ಮೊದಲ ವಾರದಿಂದ ವಿಧಾನ ಮಂಡಲ ಅಧಿವೇಶನ ನಿಗದಿಯಾಗಬೇಕಿತ್ತು. ಸಂಪುಟ ವಿಸ್ತರಣೆ ವಿಳಂಬವಾಗಿರುವುದರಿಂದ ಅಧಿವೇಶನ ಕೂಡ ಎರಡು ಅಥವಾ ಮೂರನೇ ವಾರಕ್ಕೆ ಮುಂದೂಡಿಕೆಯಾಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

### ಯಾರಿಗೆ ಒಲಿಯಲಿದೆ ಅದೃಷ್ಟ?

ಹಿರಿಯ ಶಾಸಕ ಆರ್.ವಿ.ದೇಶಪಾಂಡೆ ಸಭಾಧ್ಯಕ್ಷರಾಗಲು ಒಪ್ಪಿದರೆ, ಎಚ್.ಕೆ.ಪಾಟೀಲ್‌ಗೆ ಸಚಿವ ಸ್ಥಾನ ಒಲಿದು ಬರಲಿದೆ. ಇಲ್ಲವಾದರೆ ಸಭಾಧ್ಯಕ್ಷ ಸ್ಥಾನ ಒಪ್ಪಿಕೊಳ್ಳುವುದು ಅನಿವಾರ್ಯವಾಗಲಿದೆ. ಟಿ.ಬಿ.ಜಯಚಂದ್ರ ಅವರಿಗೆ ಸಂಪುಟದಲ್ಲಿ ಸ್ಥಾನ ದೊರೆಯುವ ನಿರೀಕ್ಷೆಯಿದೆ.

ದಿನೇಶ್ ಗುಂಡೂರಾವ್ ಅವರನ್ನು ದೆಹಲಿ ವಿಶೇಷ ಪ್ರತಿನಿಧಿ ಸ್ಥಾನಕ್ಕೆ ಪರಿಗಣಿಸುವ ಚಿಂತನೆ ನಡೆದಿದೆ. ಒಕ್ಕಲಿಗ ಸಮುದಾಯದಲ್ಲಿ ಎಚ್.ಸಿ.ಬಾಲಕೃಷ್ಣ, ಎಸ್.ಆರ್.ಶ್ರೀನಿವಾಸ್, ಚಲುವರಾಯಸ್ವಾಮಿ, ರಮೇಶ್ ಬಂಡಿಸಿದ್ದೇಗೌಡ, ನಂಜೇಗೌಡ, ಟಿ.ಡಿ.ರಾಜೇ ಗೌಡ, ಡಾ.ಎಂ.ಸಿ.ಸುಧಾಕರ್ ನಡುವೆ ಪೈಪೋಟಿ ಇದೆ. ಅರಸೀಕೆರೆ ಶಾಸಕ ಕೆ.ಎಂ.ಶಿವಲಿಂಗೇಗೌಡ ಸಂಪುಟ ಸೇರುವುದು ಬಹುತೇಕ ಖಚಿತವಾಗಿದೆ.

ಎಂ.ಕೃಷ್ಣಪ್ಪ ಅಥವಾ ಅವರ ಪುತ್ರ ಪ್ರಿಯಕೃಷ್ಣ ಅವರಿಗೆ ಅವಕಾಶ ಸಿಗಲಿದೆ. ಐದು ಬಾರಿ ಗೆಲುವು ಕಂಡಿರುವ ಹಾಗೂ ಜೆಡಿಎಸ್ ನಾಯಕರಿಗೆ ಪ್ರತ್ಯುತ್ತರಿಸುವ ನಿಟ್ಟಿನಲ್ಲಿ ಪ್ರಬಲರಾಗಿ ನಿಂತಿರುವ ಮಾಗಡಿಯ ಎಚ್.ಸಿ.ಬಾಲಕೃಷ್ಣ ಅವರಿಗೆ ಅವಕಾಶ ನೀಡಬೇಕು ಎಂಬ ಚರ್ಚೆಗಳಾಗಿವೆ. ಶರತ್ ಬಚ್ಚೇಗೌಡ ಅವರಿಗೆ ಹೈಕಮಾಂಡ್ ಕೃಪಾಕಟಾಕ್ಷ ಇದೆ ಎನ್ನಲಾಗುತ್ತಿದೆ.

ಅಪ್ಪಾಜಿ ನಾಡಗೌಡ, ಹಂಪನಗೌಡ ಬಾದರ್ಲಿ, ಎನ್.ಎ.ಹ್ಯಾರಿಸ್, ಮಹಂತೇಶ್ ಶಿವಾನಂದ ಕೌಜಲಗಿ, ಜಿ.ಟಿ.ಪಾಟೀಲ್, ಎಂ.ವೈ.ಪಾಟೀಲ್, ಪುಟ್ಟರಂಗಶೆಟ್ಟಿ, ಸಂತೋಷ್ ಲಾಡ್, ಬಿ.ಕೆ.ಸಂಗಮೇಶ್ವರ್, ಬಿ.ನಾಗೇಂದ್ರ, ಅಜಯ್ ಧರ್ಮಸಿಂಗ್, ಪಿ.ಎಂ.ಅಶೋಕ್, ಲಕ್ಷ್ಮೀ ಹೆಬ್ಬಾಳ್ಕರ್, ಎ.ಆರ್.ಕೃಷ್ಣಮೂರ್ತಿ, ಬಿ.ಶಿವಣ್ಣ, ಕೆ.ಷಡಾಕ್ಷರಿ, ಟಿ.ರಘುಮೂರ್ತಿ ಹೆಸರುಗಳು ಪಟ್ಟಿಯಲ್ಲಿವೆ.

ಮಾಜಿ ಸಚಿವ ಮಧು ಬಂಗಾರಪ್ಪ ಅವರಿಗೆ ಬೇಳೂರು ಗೋಪಾಲಕೃಷ್ಣ ಪ್ರಬಲ ಪೈಪೋಟಿ ನೀಡುತ್ತಿದ್ದಾರೆ. ಕೋಲಾರ ಜಿಲ್ಲೆಯಲ್ಲಿ ಕೊತ್ತೂರು ಮಂಜುನಾಥ್‌ಗೆ ಎಸ್.ಎನ್.ನಾರಾಯಣಸ್ವಾಮಿ, ನಂಜೇಗೌಡ ಎದುರಾಳಿಗಳಾಗಿ ನಿಂತಿದ್ದಾರೆ. ಅಲ್ಪಸಂಖ್ಯಾತರ ಪೈಕಿ ವಿಧಾನಪರಿಷತ್ ಸದಸ್ಯ ಸಲೀಂ ಅಹಮದ್ ಹೆಸರು ಪರಿಗಣನೆಯಲ್ಲಿದೆ, ರಿಜ್ವಾನ್ ಅರ್ಷದ್, ಎನ್.ಎ.ಹ್ಯಾರೀಶ್ ಜೊತೆಗೆ ತನ್ವೀರ್ ಸೇಠ್ ಅವಕಾಶ ಕೇಳುತ್ತಿದ್ದಾರೆ.

ಮಹಿಳಾ ಹಾಗೂ ಮುಸ್ಲಿಂ ಕೋಟಾ ಎರಡರಲ್ಲೂ ಖನೀಜ್ ಫಾತಿಮಾ ಹೆಸರು ಚಾಲ್ತಿಯಲ್ಲಿದೆ. ಮೊದಲ ಬಾರಿ ಗೆದ್ದಿರುವವರ ಪೈಕಿ ಎ.ಎಸ್.ಪೊನ್ನಣ್ಣ, ಪ್ರದೀಪ್ ಈಶ್ವರ್ ಹೆಸರು ಮುಂಚೂಣಿಯಲ್ಲಿದೆ. ಉಳಿದಂತೆ ಬಸವರಾಜ್ ಶಿವಗಂಗಾ, ಅಶೋಕ್ ಕುಮಾರ್ ರೈ, ಆನಂದ ಕೆ.ಎಸ್. ಪೈಪೋಟಿಯಲ್ಲಿದ್ದಾರೆ.

**ನಿತ್ಯ ಪಂಚಾಂಗ 26.07.2026 ಭಾನುವಾರ**



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ,
ಉತ್ತರಾಯಣ-ದಕ್ಷಿಣಾಯಣ ಗ್ರೀಷ್ಮ ಋತು,
ಚಾಂದ್ರಮಾನ, ನಿಜ ಜ್ಯೇಷ್ಠ - ಆಷಾಢ ಮಾಸ

ಆಷಾಢ ಶುದ್ಧ, ದ್ವಾದಶಿ,
ಜ್ಯೇಷ್ಠ ನಕ್ಷತ್ರ, ಪ್ರದೋಷ,
ಶಯನದ್ವಾದಶಿ, ಶಾಕವ್ರತಾರಂಭ,
ವಾಮನಪೂಜಾ,
ಕೂಡಲಿ ವಾಲುಕೇಶ್ವರಭಾರತಿ ಪೀಠಾರೋಹಣ ದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 12.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಮೋದಿ ನಿರ್ಗಮಿಸುವವರೆಗೆ ಶಿಕ್ಷಣ ಕ್ಷೇತ್ರದ ಸುಧಾರಣೆ ಸಾಧ್ಯವಿಲ್ಲ: ಸಿದ್ದರಾಮಯ್ಯ



**ಬೆಂಗಳೂರು, ಜು.25:** ರಾಜಕೀಯದಿಂದ ಶಿಕ್ಷಣದವರೆಗೆ ಎಲ್ಲವನ್ನೂ ವ್ಯಾಪಾರೀಕರಣಗೊಳಿಸಿರುವ ಪ್ರಧಾನಿ ನರೇಂದ್ರ ಮೋದಿ ಅವರು ನಿರ್ಗಮಿಸುವವರೆಗೆ ಶಿಕ್ಷಣ ವ್ಯವಸ್ಥೆ ಸುಧಾರಣೆಯಾಗದು, ಭಾರತವೂ ಪ್ರಜಾಪ್ರಭುತ್ವ ದೇಶವಾಗಿ ಉಳಿಯಲಾರದು ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಒಬ್ಬ ಅಸಮರ್ಥ ಮತ್ತು ಭ್ರಷ್ಟ ಸಚಿವನ ರಾಜೀನಾಮೆಗಾಗಿ ಸಂಭ್ರಮಾಚರಣೆ ಮಾಡದೆ, ದೇಶದ ವಿದ್ಯಾರ್ಥಿ-ಯುವಜನರು ಕೇಂದ್ರದಲ್ಲಿರುವ ಅಸಮರ್ಥ ಮತ್ತು ಭ್ರಷ್ಟ ಸರ್ಕಾರವನ್ನು ಕಿತ್ತೊಗೆಯುವವರೆಗೆ ವಿರಮಿಸಬಾರದು. ಪ್ರಜಾಪ್ರಭುತ್ವ ಮತ್ತು ಸಂವಿಧಾನವನ್ನು ಉಳಿಸುವ ಹೋರಾಟದಲ್ಲಿ ಕಾಂಗ್ರೆಸ್ ಪಕ್ಷ ಸದಾ ಜನರ ಜೊತೆಗೆ ಇರುತ್ತದೆ ಎಂದಿದ್ದಾರೆ.

ಶಿಕ್ಷಣ ಸಚಿವರ ರಾಜೀನಾಮೆಯಿಂದ ಶಿಕ್ಷಣ ಕ್ಷೇತ್ರದ ಸರ್ವ ಸಮಸ್ಯೆಗಳು ಪರಿಹಾರವಾಗಲಾರದು. ಸರ್ವಾಧಿಕಾರ ಮತ್ತು ದುರಾಡಳಿತದ ಶಾಲೆಯ ಗುರುಗಳು ಕುರ್ಚಿಯಲ್ಲಿ ಭದ್ರವಾಗಿ ಕುಳಿತಿರುವಾಗ ಇಂತಹ ಶಿಷ್ಯರ ನಿರ್ಗಮನದಿಂದ ಶಾಲೆಯ ಸುಧಾರಣೆಯಾಗಲಾರದು. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ದೇಶದ ಎಚ್ಚೆತ್ತ ವಿದ್ಯಾರ್ಥಿ-ಯುವಜನರ ಗೆಲುವಾಗಿದೆ ಎಂದಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಇದು ಪ್ರಜಾಪ್ರಭುತ್ವ ಮತ್ತು ಸಂವಿಧಾನದ ವಿಜಯವಾಗಿದೆ. ಬಿಸಿಲು-ಮಳೆ-ಹಸಿವು-ಆರೋಗ್ಯವನ್ನು ಲೆಕ್ಕಿಸದೆ ದೆಹಲಿಯಲ್ಲಿ ಬೀಡುಬಿಟ್ಟು ಪೊಲೀಸರ ದೌರ್ಜನ್ಯದಿಂದಲೂ ಪ್ರಚೋದನೆಗೆ ಒಳಗಾಗದೆ ಶಾಂತಿಯುತ ಹೋರಾಟವನ್ನು ನಡೆಸಿದ ಲಕ್ಷಾಂತರ ವಿದ್ಯಾರ್ಥಿ-ಯುವಜನರು ದೇಶದಲ್ಲಿ ಹೊಸ ಭರವಸೆಯನ್ನು ಮೂಡಿಸಿದ್ದಾರೆ.

ಕಾಂಗ್ರೆಸ್ ಪಕ್ಷ ಕಾಲದ ಕರೆಗೆ ಓಗೊಟ್ಟು ಒಂದು ಜವಾಬ್ದಾರಿಯುತ ವಿರೋಧ ಪಕ್ಷದ ಕರ್ತವ್ಯವನ್ನು ಸಮರ್ಥವಾಗಿ ನಿರ್ವಹಿಸಿದೆ. ಸಕಾಲದಲ್ಲಿ ದೃಢಚಿತ್ತದ ನಾಯಕತ್ವ ನೀಡಿ ಹೋರಾಟವನ್ನು ಮುನ್ನಡೆಸಿದ ರಾಹುಲ್ ಗಾಂಧಿ ಅವರನ್ನು ಈ ಸಂದರ್ಭದಲ್ಲಿ ಅಭಿನಂದಿಸುತ್ತೇನೆ.

# ಧರ್ಮೇಂದ್ರ ಪ್ರಧಾನ್ ನಂತರ ಅಮಿತ್ ಶಾ ರಾಜೀನಾಮೆ ಪಡೆಯಿರಿ

## ವಿದ್ಯಾರ್ಥಿಗಳ ಹೋರಾಟಕ್ಕೆ ಸಂದ ಗೆಲುವು: ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್

**ಬೆಂಗಳೂರು, ಜು.25:** ಧರ್ಮೇಂದ್ರ ಪ್ರಧಾನ್ ಅವರು ಬರೆದಿರುವ ಪುಟಗಟ್ಟಲೆ ರಾಜೀನಾಮೆ ಪತ್ರ ಪ್ರಹಸನದಂತೆ ಕಾಣುತ್ತಿದೆ ಎಂದು ಟೀಕಿಸಿರುವ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಇದು ವಿದ್ಯಾರ್ಥಿಗಳ ಹೋರಾಟಕ್ಕೆ ಸಂದ ಗೆಲುವು ಎಂದು ಹೇಳಿದ್ದಾರೆ. ಮಕ್ಕಳ ಮೇಲಿನ ದೌರ್ಜನ್ಯಕ್ಕೆ ಗೃಹ ಸಚಿವ ಅಮಿತ್ ಶಾ ಅವರನ್ನು ಹೊಣೆಗಾರರನ್ನಾಗಿ ಮಾಡಿ ಅವರಿಂದಲೂ ರಾಜೀನಾಮೆ ಪಡೆಯಬೇಕು. ಪೊಲೀಸರ ದಾಳಿಗೆ ಒಬ್ಬ ಮಗು ಕಣ್ಣು ಕಳೆದುಕೊಂಡಿದೆ. ದೇಶದ ಎಲ್ಲಾ ವಿವಿಗಳಲ್ಲಿ ನಾಗ್ಪುರ ವಿವಿ, ವಾಟ್ಸಪ್ ಯೂನಿವರ್ಸಿಟಿ ಪ್ರೊಫೆಸರ್‌ಗಳನ್ನು ನೇಮಕ ಮಾಡಿ ಸಂಪೂರ್ಣವಾಗಿ ವಿವಿಗಳ ಸಾಮರ್ಥ್ಯ ಹಾಗೂ ಖ್ಯಾತಿಗೆ ಕುತ್ತು ತರಲಾಗಿದೆ ಎಂದಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಲ್ಕೈದು ಪುಟಗಳ ಪತ್ರದಲ್ಲಿ ತಮ್ಮ ಸಾಧನೆ ಹೇಳಿಕೊಳ್ಳಲು ಹೋಗಿ ನಗೆಪಾಟಲಿಗೆ ಒಳಗಾಗಿದ್ದಾರೆ. ಮೌಲಾನಾ ಅಬುಲ್ ಕಲಾಂ ಅಜಾದ್ ಅವರು 9 ವರ್ಷಗಳ ಕಾಲ ಶಿಕ್ಷಣ ಸಚಿವರಾಗಿದ್ದರು. ಆ ಸಮಯದಲ್ಲಿ ರವೀಂದ್ರನಾಥ ಟಾಗೋರ್ ಅವರ ಶಾಂತಿನಿಕೇತನವನ್ನು ವಿಶ್ವದರ್ಜೆಗೆ ಕೊಂಡೊಯ್ದರು. ಬನಾರಸ್ ಹಿಂದೂ ವಿಶ್ವವಿದ್ಯಾಲಯ, ಅಲಿಘಡ ಮುಸ್ಲಿಂ ವಿಶ್ವವಿದ್ಯಾಲಯ, ಜೆಎನ್‌ಯು ವಿವಿಗಳನ್ನು ವಿಶ್ವ ಶ್ರೇಷ್ಠತೆಗೆ ಕೊಂಡೊಯ್ದರು. ಈಗ ಧರ್ಮೇಂದ್ರ ಪ್ರಧಾನ್ ನಂತಹವರು ಈ ರಾಷ್ಟ್ರದಲ್ಲಿ ಶಿಕ್ಷಣ ಸಚಿವರಾಗಿದ್ದು ದುರಂತ ಎಂದರು.

ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡದ ಸರ್ಕಾರ ಯಾವುದಾದರೂ ಇದ್ದರೆ ಅದು ನರೇಂದ್ರ ಮೋದಿ ಸರ್ಕಾರ. ನೆಹರೂ ಅವರ ಕಾಲದಿಂದ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡಲಾಗುತ್ತಿತ್ತು. 1947ರಲ್ಲಿ 11% ಇದ್ದ ಸಾಕ್ಷರತೆ ಪ್ರಮಾಣ 76%ಗೆ ಏರಿಕೆಯಾಗಿದೆ. ಇದು ನೆಹರೂ ಅವರು ಹಾಕಿಕೊಟ್ಟ ಭದ್ರ ಬುನಾದಿ. ದೇಶದಲ್ಲಿ ವೈಜ್ಞಾನಿಕ ಶಿಕ್ಷಣ ವ್ಯವಸ್ಥೆಗೆ ಒತ್ತು ನೀಡಿ, ಐಐಟಿ, ಐಐಎಂ, ಏಮ್ಸ್ ಸ್ಥಾಪಿಸಿ ಈ ದೇಶದ ಭವಿಷ್ಯವನ್ನು ಮಕ್ಕಳು ನಿರ್ಮಿಸಲು ಎಲ್ಲಾ ಸೌಕರ್ಯ ಕಲ್ಪಿಸಿದ್ದರು. ಶಿಕ್ಷಣ ಇಲಾಖೆ ಈ ಹಿಂದೆ ಯಾರ ಕಾಲದಲ್ಲೂ ಭ್ರಷ್ಟಾಚಾರಕ್ಕೆ ಸಿಲುಕಿರಲಿಲ್ಲ. ಬಿಜೆಪಿಯ ಅವಿದ್ಯಾವಂತೆ ಸ್ಮೃತಿ ಇರಾನಿ ಕೂಡ ಶಿಕ್ಷಣ ಸಚಿವರಾಗಿದ್ದಾಗಲೂ ಭ್ರಷ್ಟಾಚಾರದ ಲೇಪ ಅವರಿಗೆ ಬಂದಿರಲಿಲ್ಲ ಎಂದರು.

ಪ್ರತಿಭಟನೆಯಲ್ಲಿ 400ಕ್ಕೂ ಹೆಚ್ಚು ಮಂದಿ ಕ್ರಿಮಿನಲ್ ಹಿನ್ನೆಲೆ ಹೊಂದಿದ್ದು, ಇದರಲ್ಲಿ ದೆಹಲಿ ಪೊಲೀಸರ ತಪ್ಪಿಲ್ಲ ಎಂಬ ಸಮರ್ಥನೆ ಬಗ್ಗೆ ಕೇಳಿದಾಗ, ಸರ್ಕಾರ ಹೇಳಿರುವ ಒಂದೇ ಒಂದು ಸತ್ಯ ಎಂದರೆ ನಾಗ್ಪುರದಿಂದ 400 ಕ್ರಿಮಿನಲ್‌ಗಳು ದೆಹಲಿಗೆ ಬಂದು ಪೊಲೀಸರ ವಸ್ತ್ರದಲ್ಲಿ ಈ ಆಂದೋಲನ ತಪ್ಪು ದಾರಿಗೆ ಎಳೆಯುವ ಪ್ರಯತ್ನ ಮಾಡಿದ್ದಾರೆ. ಇದರಲ್ಲಿ ನಾಗ್ಪುರ ವಿವಿಯ ಕ್ರಿಮಿನಲ್‌ಗಳು ಸೇರಿದ್ದಾರೆ. ವಿದ್ಯಾರ್ಥಿಗಳ ಪ್ರತಿಭಟನೆ ಅಹಿಂಸಾತ್ಮಕವಾಗಿತ್ತು. ಈ ಚಳವಳಿ ಮಧ್ಯೆ ನುಸುಳಿಕೊಂಡು ಆಂದೋಲನ ದಾರಿತಪ್ಪಿಸಲು ಪ್ರಯತ್ನಿಸಿದ್ದಾರೆ. ಇದರಲ್ಲಿ ನಾಗುಪುರ ವಿವಿ ಹಾಗೂ ವಾಟ್ಸಪ್ ವಿವಿಯವರು ನಿಸ್ಸೀಮರು ಎಂದರು.

ನಾಗಪುರ ವಿವಿ ಸಂಪೂರ್ಣವಾಗಿ ಗೃಹಸಚಿವರ ಆದೇಶದ ಮೇರೆಗೆ ಈ ಪಿತೂರಿ ಮಾಡಿದೆ. ವಿದ್ಯಾರ್ಥಿಗಳು ಹೋರಾಟ ಮಾಡಿದಾಗ ಅವರನ್ನು ದೇಶದ್ರೋಹಿಗಳು ಎಂದರು. ಬಿಜೆಪಿಯವರು ಸಂಪೂರ್ಣವಾಗಿ ನಕಲಿ ದೇಶಭಕ್ತರು. ಮಕ್ಕಳನ್ನು ದೇಶದ್ರೋಹಿ ಎನ್ನುವ ಚೇಲಾಗಳ ಹೇಳಿಕೆಗಳಿಗೆ ಮೋದಿ ಅವರು ಉತ್ತರ ನೀಡಬೇಕು. ರಾಜಕಾರಣಿ ಯಾದವನು ಮಕ್ಕಳಲ್ಲಿ ದೇಶಭಕ್ತಿ ಹುಟ್ಟುಹಾಕಬೇಕು. ಅವರನ್ನೇ ದೇಶದ್ರೋಹಿ ಎನ್ನುವ ಮಹಾದ್ರೋಹಿಗಳು ಬೇರೆ ಯಾರು ಇಲ್ಲ? ಎಂದು ತಿಳಿಸಿದರು.

ಫ್ರೀಡಂ ಪಾರ್ಕ್‌ನಲ್ಲಿ ಉಮರ್ ಖಾಲಿದ್ ಚಿತ್ರ ಹಿಡಿದಿದ್ದರ ಬಗ್ಗೆ ಕೇಳಿದಾಗ, ಉಮರ್ ಖಾಲಿದ್ ತಪ್ಪೇನಿದೆ. ಆತ ಐದು ವರ್ಷಗಳಿಂದ ಜೈಲಲ್ಲಿದ್ದು ಈವರೆಗೂ ಅವರ ವಿರುದ್ಧ ಯಾಕೆ ಎಫ್‌ಐಆರ್ ಆಗಿಲ್ಲ. ನಮ್ಮ ಕಾರ್ಯಕರ್ತರು ಒಂದು ಮೊಟ್ಟೆ ಹೊಡೆದಿದ್ದಕ್ಕೆ ಎಫ್‌ಐಆರ್ ಆಗುತ್ತದೆ.

ಉಮರ್ ಖಾಲಿದ್ ವಿರುದ್ಧ ಚಾರ್ಜ್ ಶೀಟ್ ಹಾಕಿದರೆ ನ್ಯಾಯಾಲಯ ತೀರ್ಮಾನ ಮಾಡುತ್ತದೆ. ನಾಗ್ಪುರ ವಿವಿ ತೀರ್ಮಾನ ಮಾಡಲು ಸಾಧ್ಯವಿಲ್ಲ. ಯಾವುದೇ ವಿಚಾರಣೆ ಆಗದೇ ಐದು ವರ್ಷ ಜೈಲಲ್ಲಿ ಇಟ್ಟಿದ್ದರಲ್ಲ ಇದು ಪಾಕಿಸ್ತಾನವೇ? ಬಿಜೆಪಿಯವರು ಪಾಕಿಸ್ತಾನವನ್ನು ನಕಲು ಮಾಡುತ್ತಿದ್ದಾರೆ ಎಂದು ಬಿ.ಕೆ. ಹರಿಪ್ರಸಾದ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.



### ಮೋದಿ ರೀಲ್ಸ್‌ನಲ್ಲಿ ಗುಟ್ಕಾ

ರೀಲ್‌ಗಳನ್ನು ಮಾಡಿ ಯುವಕರನ್ನು ತಲುಪುವ ಮೋದಿ ತಂತ್ರಗಾರಿಕೆ ಎಂದರೆ ಅಚ್ಚ ಕನ್ನಡದಲ್ಲಿ ಇದನ್ನು ರೀಲ್ ಬಿಡುವುದು ಎಂದು ಕರೆಯುತ್ತಾರೆ. ರೀಲ್ ಬಿಡುವುದರಲ್ಲಿ ಮೋದಿ ನಿಸ್ಸೀಮ. ಸುಳ್ಳಿನ ಸರದಾರ. ಈಗ ರೀಲಿನ ಸರದಾರ. ನಿನ್ನೆ ಮಾಡಿರುವ ರೀಲ್ ಅನ್ನು ಟೆಲಿಪ್ರಾಂಟರ್ ನೋಡಿ ಮಾಡಿರುವ ಗುಟ್ಕಾ ಮಾಸ್ಟರ್. ಅದನ್ನು ನೋಡಿ ವಿದ್ಯಾರ್ಥಿಗಳು ವ್ಯಂಗ್ಯವಾಡಿದ್ದಾರೆ. ಅವರಿಗೆ ಮಾನ ಮರ್ಯಾದೆ ಇದ್ದಿದ್ದರೆ ಅದನ್ನು ನೋಡಿದ ತಕ್ಷಣವೇ ಅಧಿಕಾರದಿಂದ ಕೆಳಗೆ ಇಳಿಯಬೇಕಾಗಿತ್ತು? ಎಂದು ವ್ಯಂಗವಾಡಿದರು. ಪ್ರಧಾನಿಗಳು ಗುಟ್ಕಾ ಹಾಕುತ್ತಾರಾ ಎಂದು ಕೇಳಿದಾಗ, ಆ ರೀಲ್‌ಗಳಲ್ಲಿ ಅವರ ಹಲ್ಲು ನೋಡಿ. ವಿಶ್ವಗುರು ಹಲ್ಲು ನೋಡಿದರೆ ಗೊತ್ತಾಗುತ್ತದೆ ಎಂದು ಬಿ.ಕೆ. ಹರಿಪ್ರಸಾದ್ ಹೇಳಿದರು.

# ಚಾಮುಂಡೇಶ್ವರಿ ದೇವಿ ದರ್ಶನದ ಹೆಸರಲ್ಲಿ ಭಕ್ತರಿಂದ ಲೂಟಿ: ಪ್ರತಿಪಕ್ಷ ನಾಯಕ್ ಆರ್.ಅಶೋಕ್ ಟೀಕೆ

**ಬೆಂಗಳೂರು, ಜು.25:** ಆಷಾಢ ಮಾಸದ ಸಂದರ್ಭದಲ್ಲಿ ನಾಡದೇವತೆ ಶ್ರೀ ಚಾಮುಂಡೇಶ್ವರಿ ದರ್ಶನದ ಹೆಸರಿನಲ್ಲಿ ಭಕ್ತಾಧಿಗಳಿಂದ 2,000 ರೂ. ಲೂಟಿ ಮಾಡಲಾಗುತ್ತಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಟೀಕಿಸಿದ್ದಾರೆ.

ಈ ಕುರಿತು ಸಾಮಾಜಿಕ ತಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, 2,000 ರೂ. ಪಡೆದು 20 ನಿಮಿಷದಲ್ಲಿ ವಿಶೇಷ ಶೀಘ್ರ ದರ್ಶನ ಎಂದು ಹೇಳಿ, ನಂತರ ವಿಐಪಿಗಳ ಆಗಮನದ ನೆಪದಲ್ಲಿ ಭಕ್ತರನ್ನು 4–5 ಗಂಟೆಗಳ ಕಾಲ ಸಾಲಿನಲ್ಲಿ ನಿಲ್ಲಿಸುವುದು ಯಾವ ಸೀಮೆ ವ್ಯವಸ್ಥೆ ಎಂದು ಪ್ರಶ್ನಿಸಿದ್ದಾರೆ. ವಯೋವೃದ್ಧರು, ಮಹಿಳೆಯರು, ಪುಟ್ಟ ಮಕ್ಕಳೊಂದಿಗೆ ಬಂದ ಕುಟುಂಬಗಳು ಅನುಭವಿಸಿದ ಸಂಕಷ್ಟಕ್ಕೆ ಯಾರು ಹೊಣೆ. ಭಕ್ತರಿಂದ ಹಣ ವಸೂಲಿ ಮಾಡುವಾಗ ಇರುವ ಆಸಕ್ತಿ, ಅವರಿಗೆ ಗೌರವಯುತ ದರ್ಶನ ವ್ಯವಸ್ಥೆ ಕಲ್ಪಿಸುವಲ್ಲಿ ಏಕೆ ಕಾಣಿಸುತ್ತಿಲ್ಲ ಮೈಸೂರು ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಪ್ರಶ್ನಿಸಿದ್ದಾರೆ.

ಆಷಾಢ ಮಾಸದಲ್ಲಿ ಲಕ್ಷಾಂತರ ಭಕ್ತರು ನಾಡ ಅಧಿದೇವತೆಯ ದರ್ಶನಕ್ಕಾಗಿ ಬರುತ್ತಾರೆ. ಅವರ ಧಾರ್ಮಿಕ ಭಾವನೆಗಳಿಗೆ ಗೌರವ ನೀಡುವುದು ಸರ್ಕಾರದ ಕರ್ತವ್ಯ. ವಿಐಪಿ ಸಂಸ್ಕೃತಿಯ ಹೆಸರಿನಲ್ಲಿ ಸಾಮಾನ್ಯ ಭಕ್ತರನ್ನು ಗಂಟೆಗಟ್ಟಲೆ ಕಾಯಿಸಿ ಕಳುಹಿಸುವುದು ಅತ್ಯಂತ ಖಂಡನೀಯ.

ದೇವಾಲಯದ ವ್ಯವಸ್ಥೆಯ ಜೊತೆ ಚೆಲ್ಲಾಟವಾಡಬೇಡಿ. ಭಕ್ತರಿಗೆ ಪಾರದರ್ಶಕ, ಸಮಯೋಚಿತ ಮತ್ತು ಗೌರವಯುತ ದರ್ಶನ ವ್ಯವಸ್ಥೆ ಕಲ್ಪಿಸಿ. ನಾಡ ಅಧಿದೇವತೆ ಚಾಮುಂಡೇಶ್ವರಿ ತಾಯಿಯ ಸನ್ನಿಧಿಯಲ್ಲಿ ಭಕ್ತರ ನಂಬಿಕೆಗೆ ಧಕ್ಕೆ ತರುವ ಆಡಳಿತವನ್ನು ಜನರು ಎಂದಿಗೂ ಒಪ್ಪುವುದಿಲ್ಲ ಎಂದು ಹೇಳಿದ್ದಾರೆ.



ಚಿತ್ರದುರ್ಗದ ಮುರುಘಾ ಮಠದ ಕರ್ತೃ ಮುರಿಗಿ ಶಾಂತವೀರ ಮುರುಘ ರಾಜೇಂದ್ರ ಸ್ವಾಮೀಜಿ ಅವರ ಗದ್ದಿಗೆಗೆ ಸಿಎಂ ಡಿ.ಕೆ.ಶಿವಕುಮಾರ್ ಅವರು ಶನಿವಾರ ನಮಿಸಿದರು. ಡಿಸಿಎಂ ಡಾ ಜಿ ಪರಮೇಶ್ವರ, ಸಚಿವ ಈಶ್ವರ್ ಖಂಡ್ರೆ, ಶಾಸಕರಾದ ವೀರೇಂದ್ರ ಪಪ್ಪಿ, ರಘುಮೂರ್ತಿ, ಮಾಜಿ ಶಾಸಕಿ ಪೂರ್ಣಿಮಾ ಶ್ರೀನಿವಾಸ್ ಮತ್ತಿತರರು ಜತೆಗಿದ್ದರು.

## ಅನ್ನಭಾಗ್ಯ ಅಕ್ಕಿ ಕಾಳಸಂತೆ ಮಾರಾಟ ತಡೆಯಲು ಹೊಸ ಕಾಯ್ದೆ

# ಆಹಾರ ಸಚಿವ ಕೆ.ಎಚ್. ಮುನಿಯಪ್ಪಗೆ ಸಚಿವ ಪ್ರಿಯಾಂಕ್ ಖರ್ಗೆ ಮನವಿ



ಅನ್ನಭಾಗ್ಯ ಅಕ್ಕಿ ಕಾಳಸಂತೆ ಮಾರಾಟಕ್ಕೆ ಕ್ರಮ ಕೈಗೊಳ್ಳುತ್ತೇನೆ. ಗೃಹ ಸಚಿವನಾಗಿ ನಾಲ್ಕು ವಾರ ಆಗಿದೆ. ಇನ್ನೊಂದು ತಿಂಗಳು ಬೇಕಾಗಿಲ್ಲ. ಮಾಧ್ಯಮಗಳಿಗೆ ಸದ್ಯದಲ್ಲೇ ಬ್ರೇಕಿಂಗ್ ನ್ಯೂಸ್ ನೀಡುತ್ತೇನೆ

–ಪ್ರಿಯಾಂಕ್ ಖರ್ಗೆ, ಗೃಹ ಸಚಿವ

**ಬೆಂಗಳೂರು, ಜು.25:** ಅನ್ನಭಾಗ್ಯ ಅಕ್ಕಿಯನ್ನು ಕಾಳಸಂತೆಯಲ್ಲಿ ಮಾರಾಟ ಮಾಡುವುದನ್ನು ತಡೆಯಲು ಹೊಸ ಕಾಯ್ದೆ ಜಾರಿಗೆ ತರಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. ಬೆಂಗಳೂರಿನಲ್ಲಿಂದು ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ಅನ್ನಭಾಗ್ಯ ಅಕ್ಕಿ ಕಾಳಸಂತೆ ಮಾರಾಟ ತಡೆಗೆ ಒಂದು ಹೊಸ ಕಾಯ್ದೆ ಜಾರಿಗೆ ತರುವಂತೆ ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಅವರಿಗೆ ಮನವಿ ಮಾಡಿದ್ದೇನೆ ಎಂದರು

ಅನ್ನಭಾಗ್ಯ ಅಕ್ಕಿ ಕಾಳಸಂತೆ ಮಾರಾಟ ದಂಧೆಯಲ್ಲಿ ಬಿಜೆಪಿ ನಾಯಕರೇ ಭಾಗಿಯಾಗಿರುವುದರ ಬಗ್ಗೆ ತಮ್ಮ ದಾಖಲೆಗಳಿವೆ ಎಂದರು.

ನಮ್ಮ ಭಾಗದಲ್ಲಿ ಹೆಚ್ಚಾಗಿ ಬಿಜೆಪಿ ನಾಯಕರೇ ಅನ್ನಭಾಗ್ಯ ಅಕ್ಕಿಯನ್ನು ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿದ್ದಾರೆ. ಯಾರು ಅಕ್ಕಿ ಕಳ್ಳತನ ಮಾಡುತ್ತಾರೋ ಅವರಿಗೆ ಬಿಜೆಪಿ ಚುನಾವಣೆಯಲ್ಲಿ ಟಿಕೆಟ್ ನೀಡುತ್ತಿದೆ ಎಂದು ವ್ಯಂಗ್ಯವಾಡಿದರು. ಅನ್ನಭಾಗ್ಯ ಅಕ್ಕಿ ಫ್ರಾನ್ಸ್, ಯುಎಐ, ಕತಾರ್‌ಗೆಲ್ಲಾ ಹೋಗುತ್ತಿದೆ. ಇದು ಬಿಜೆಪಿ ನಾಯಕರೇ ಮಾಡುತ್ತಿರುವ ಅಕ್ರಮ. ಇದು ಆರೋಪವಲ್ಲ. ಆರೋಪ ಸಾಬೀತಾಗಿದೆ. ಆರೋಪ ಪಟ್ಟಿಯನ್ನು ಸಲ್ಲಿಸಿದ್ದೇವೆ. ನಾನು ದಾಖಲೆ ಇಲ್ಲದೆ ಮಾತನಾಡಲ್ಲ ಎಂದರು.

# ಬಿಜೆಪಿ ರಾಜ್ಯ ಅಧ್ಯಕ್ಷರ ಹೇಳಿಕೆ ನಾಚಿಕೆಗೇಡಿನ ಪರಮಾವಧಿ

ದೇಶದ ವಿದ್ಯಾರ್ಥಿಗಳ ಮತ್ತು ಯುವ ಜನಾಂಗದ ಐತಿಹಾಸಿಕ ಪ್ರತಿಭಟನೆಯ ನಂತರ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಆದರೆ ಶಿಕ್ಷಣ ಸಚಿವರ ರಾಜಿನಾಮೆಯನ್ನು ರಾಜಕೀಯ ಕಾರಣಗಳಿಗೆ ಹೋಲಿಕೆ ಮಾಡಲು ಹೋಗಿ ಕರ್ನಾಟಕ ಬಿಜೆಪಿ ಬಾಲ ಭವನದ ಅಧ್ಯಕ್ಷ ವಿಜಯೇಂದ್ರ ಅವರು ತಮ್ಮ ವ್ಯಕ್ತಿತ್ವಕ್ಕೆ ತಾವೇ ಮಸಿ ಬಳಿದುಕೊಂಡಿದ್ದಾರೆ.

ರಾಜಕೀಯ ಹೇಳಿಕೆ ನೀಡುವ ಸಂದರ್ಭದಲ್ಲಿ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಮತ್ತು ಕರ್ನಾಟಕ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೆಸರುಗಳನ್ನು ಬಳಸಿಕೊಂಡು ಟೀಕೆ ಮಾಡುವ ನೆಪದಲ್ಲಿ ತಾವೇ ಬೆತ್ತಲಾಗಿದ್ದಾರೆ. ದೇಶದ 11 ವರ್ಷಗಳ ಕೇಂದ್ರ ಬಿಜೆಪಿ ಸರ್ಕಾರದ ನೀತಿಗೆಟ್ಟ ಆಡಳಿತದಿಂದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಮಂಕಾಗುವುದರ ಜೊತೆಗೆ, ನೂರಾರು ವಿದ್ಯಾರ್ಥಿಗಳು ತಮ್ಮ ಪ್ರಾಣ ಮತ್ತು ಬದುಕನ್ನು ಕಳೆದುಕೊಂಡಿರುತ್ತಾರೆ. ಅವರ ಅಸಮಾಧಾನ ರಾಷ್ಟ್ರಮಟ್ಟದ ವಿದ್ಯಾರ್ಥಿ ಚಳವಳಿಗೆ ಮತ್ತು ದೊಡ್ಡಮಟ್ಟದ ಪ್ರತಿಭಟನೆಗೆ ಕಾರಣವಾಗಿರುತ್ತದೆ. ದೇಶದಲ್ಲಿ ವಿದ್ಯಾರ್ಥಿಗಳ ಬದುಕನ್ನು ಬೀದಿಗೆ ತಂದ ಕಾರಣಕ್ಕಾಗಿ ಭಾರತೀಯ ಜನತಾ ಪಕ್ಷದ ಪರವಾಗಿ ಬಾಲ ಬಿಜೆಪಿ ಭವನದ ಅಧ್ಯಕ್ಷ ವಿಜಯೇಂದ್ರ ಅವರು ಕ್ಷಮೆ ಕೇಳಿದ್ದರೆ ಸ್ವಲ್ಪವಾದರೂ ಗೌರವ ಉಳಿಯುತ್ತಿತ್ತು, ಆದರೆ ಕೆಪಿಸಿಸಿ ಅಧ್ಯಕ್ಷರನ್ನು ಮತ್ತು ರಾಜ್ಯ ಗೃಹ ಸಚಿವರನ್ನು ಗುರಿಯಾಗಿಸಿಕೊಂಡು ಟೀಕೆ ಮಾಡಿರುವುದು ಅವರ ರಾಜಕೀಯ ಎಲಸುತನದ ಜೊತೆಗೆ ನೈತಿಕತೆಯ ಅಧೋಗತಿ ಆಗಿರುತ್ತದೆ.

ಸೈದ್ಧಾಂತಿಕವಾಗಿ ಕೆಪಿಸಿಸಿ ಅಧ್ಯಕ್ಷರು ಮತ್ತು ಗೃಹ ಸಚಿವರು ಕಾಂಗ್ರೆಸ್ ಪಕ್ಷದ ಸಿದ್ಧಾಂತಕ್ಕೆ ಅನುಗುಣವಾಗಿ ಸಂಘ ಪರಿವಾರದ ತಪ್ಪುಗಳನ್ನು ಟೀಕಿಸುತ್ತಿದ್ದಾರೆ ಮತ್ತು ಸಾರ್ವಜನಿಕ ಹಿತ ದೃಷ್ಟಿಯಿಂದ ಮಾಹಿತಿಯನ್ನು ನೀಡುತ್ತಿದ್ದಾರೆ. ಬಿಜೆಪಿ ಪಕ್ಷದಲ್ಲಿ ಅಧ್ಯಕ್ಷ ಸ್ಥಾನವನ್ನು ಉಳಿಸಿಕೊಳ್ಳಲು ಪ್ರತಿದಿನ ತಮ್ಮ ತಂದೆ ಯಡಿಯೂರಪ್ಪನವರ ಹೆಸರನ್ನು ಬಳಸಿಕೊಂಡು ರಾಜಕೀಯ ಅಸ್ತಿತ್ವಕ್ಕೆ ಒದ್ದಾಡುತ್ತಿರುವ ವಿಜಯೇಂದ್ರ ಅವರು, ಕಾಂಗ್ರೆಸ್ ನಾಯಕರನ್ನು ಟೀಕೆ ಮಾಡುವುದನ್ನು ಹವ್ಯಾಸ ಮಾಡಿಕೊಂಡು ಅದನ್ನೇ ತಮ್ಮ ಸಾಧನೆ ಎಂದು ಬಿಂಬಿಸಿಕೊಳ್ಳುತ್ತಿದ್ದಾರೆ. ಅವರದೇ ಪಕ್ಷದ ಅನೇಕ ಹಿರಿಯ ನಾಯಕರು ಎತ್ತಿರುವ ಧ್ವನಿಗಳಿಗೆ ಇಲ್ಲಿಯವರಿಗೆ ಸಾರ್ವಜನಿಕವಾಗಿ ಉತ್ತರ ಕೊಡಲು ಆಗದ ವಿಜಯೇಂದ್ರರವರು, ತಮ್ಮ ರಾಜಕೀಯ ಉಳಿವಿಗಾಗಿ ಕಾಂಗ್ರೆಸ್ ನಾಯಕರನ್ನು ಟೀಕೆ ಮಾಡುತ್ತಿದ್ದಾರೆ. ಕರ್ನಾಟಕದಲ್ಲಿ ಮುಖ್ಯಮಂತ್ರಿಗಳ ಸಹಿಯನ್ನು ನಕಲು ಮಾಡಿದ ಆರೋಪ ಹಾಗೂ ನೀರಾವರಿ ಇಲಾಖೆಯಲ್ಲಿ 20,000 ಕೋಟಿ ರೂ.ಗಳ ಭ್ರಷ್ಟಾಚಾರದ ಆರೋಪವನ್ನು ಅವರದೇ ಪಕ್ಷದ ಶಾಸಕರು ಮಾಡಿದ್ದರೂ ಇಲ್ಲಿಯವರೆಗೂ ಇವರು ಉತ್ತರ ಕೊಡಲು ಸಾಧ್ಯವಾಗಿಲ್ಲ. ಬಹುಶಃ ಇಂತಹ ಆರೋಪಗಳಿಗೆ ಸಾರ್ವಜನಿಕವಾಗಿ ಉತ್ತರ ನೀಡಿದರೆ ಪಕ್ಷದಿಂದ ಆಚೆ ಹಾಕುವುದಾಗಿ ಸಂಘ ಪರಿವಾರದಿಂದ ಇವರಿಗೆ ನಿರ್ದೇಶನ ಬಂದಿರಬೇಕು!

ಹರಿಹರ ಕ್ಷೇತ್ರದ ಶಾಸಕ ಹರೀಶ್ ಮೇಲೆ ಮೊಟ್ಟೆ ಎಸೆದ ಪ್ರಕರಣದಲ್ಲಿ ಬಿಜೆಪಿ ಅಧ್ಯಕ್ಷ ವಿಜಯೇಂದ್ರ ಷಡ್ಯಂತ್ರ ಇರುವ ಕುರಿತು ಅನುಮಾನ ಇರುತ್ತದೆ. ರಾಜಕೀಯವಾಗಿ ವಿಜಯೇಂದ್ರ ಮತ್ತು ಬಿ.ಎಸ್. ಯಡಿಯೂರಪ್ಪನವರ ಗುಂಪಿಗೆ ವಿರುದ್ಧವಾಗಿ ಇರುವ ಹರೀಶ್ ರವರನ್ನು ರಾಜಕೀಯವಾಗಿ ಮುಗಿಸಲು ಇವರೇ ಮೊಟ್ಟೆ ಎಸೆಯಲು ಅವಕಾಶ ಮಾಡಿರಬಹುದು. ಹರೀಶ್ ಮೇಲೆ ಇವರಿಗೆ ಇರುವ ವೈಯಕ್ತಿಕ ದ್ವೇಷ, ರಾಜಕೀಯ ದ್ವೇಷದ ಕಾರಣಕ್ಕಾಗಿ ಇಲ್ಲಿಯವರಿಗೆ ಈ ಘಟನೆಯನ್ನು ಖಂಡಿಸುವ ಪ್ರಯತ್ನವನ್ನೇ ವಿಜಯೇಂದ್ರ ಪ್ರಾಮಾಣಿಕವಾಗಿ ಮಾಡಿರುವುದಿಲ್ಲ. ಪಕ್ಷದಲ್ಲಿರುವ ಗುಂಪುಗಾರಿಕೆಯನ್ನು ತಡೆಯಲು ಸಾಧ್ಯವಾಗದೆ ಕೈಚೆಲ್ಲಿ ಕುಳಿತಿರುವ ವಿಜಯೇಂದ್ರರವರು ಕಾಂಗ್ರೆಸ್ ನಾಯಕರನ್ನು ಟೀಕೆ ಮಾಡಿ ಸಂಘ ಪರಿವಾರವನ್ನು ಮೆಚ್ಚಿಸಲು ಹೊರಟಿದ್ದಾರೆ.


ಬಿಜೆಪಿಯಲ್ಲಿ ಒಬ್ಬ ಸಮರ್ಥ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಲು ವಿಫಲರಾಗಿರುವ ವಿಜಯೇಂದ್ರ ಅವರು, ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಮತ್ತು ಗೃಹ ಸಚಿವ ಪ್ರಿಯಾಂಕ ಖರ್ಗೆಅವರನ್ನು ಟೀಕೆ ಮಾಡುವುದರ ಮೂಲಕ ಸಂಘ ಪರಿವಾರವನ್ನು ಮೆಚ್ಚಿಸಿ ತಮ್ಮ ಕುರ್ಚಿಯನ್ನು ಉಳಿಸಿಕೊಳ್ಳಲು ಒದ್ದಾಡುತ್ತಿದ್ದಾರೆ. ಇದು ಅವರ ರಾಜಕೀಯ ಎಳಸುತನಕ್ಕೆ ಸಾಕ್ಷಿಯಾಗಿದೆ. ಅವರು ಇಂತಹ ಎಳೆಸುತನದ ರಾಜಕೀಯ ಮಾಡುವ ಬದಲು ರಾಜ್ಯ ಬಿಜೆಪಿ ಬಾಲ ಭವನದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದರೆ, ಬಹುಶಃ ಅವರಿಗೆ ಗೌರವ ಸಿಗಬಹುದು. ಅವರದೇ ಪಕ್ಷದ ಶಾಸಕರಾದ ಯತ್ನಾಳ್ ಎದುರಿಸಲು ಸಾಧ್ಯವಾಗದೆ ಮನೆಯಲ್ಲಿ ಅಡಗಿ ಕುಳಿತುಕೊಳ್ಳುವ ವಿಜಯೇಂದ್ರರವರು, ಕಾಂಗ್ರೆಸ್ ನಾಯಕರನ್ನು ಅಥವಾ ಕಾಂಗ್ರೆಸ್ ಪಕ್ಷವನ್ನು ಟೀಕಿಸುವ ಬದಲು ಅವರ ತಂದೆ ಬಿ.ಎಸ್.ಯಡಿಯೂರಪ್ಪ ನವರ ಬಳಿ ರಾಜಕೀಯ ಅನುಭವದ ಮಾತುಗಳನ್ನು ಆಲಿಸಿ ಕಲಿತುಕೊಳ್ಳುವುದು ಕರ್ನಾಟಕದ ಹಿತದೃಷ್ಟಿಯಿಂದ ಒಳ್ಳೆಯದು ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಪಕ್ಷ ಹೇಳಲು ಬಯಸುತ್ತದೆ.



**ರಮೇಶ್‌ಬಾಬು,**
ಅಧ್ಯಕ್ಷರು, ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗ, ಬೆಂಗಳೂರು

### ನಿಧನವಾರ್ತೆ

# ಮಾಜಿ ಸಚಿವ ಸಿ.ವೀರಣ್ಣ ನಿಧನ ಸಿಎಂ ಡಿ.ಕೆ.ಶಿವಕುಮಾರ್ ಸಂತಾಪ



**ಬೆಂಗಳೂರು, ಜು.25:** ಮಾಜಿ ಸಚಿವ, ಮಾಜಿ ಉಪಸಭಾಪತಿ ಸಿ. ವೀರಣ್ಣ ಅವರ ನಿಧನದ ಸುದ್ದಿ ತಿಳಿದು ತೀವ್ರ ದುಃಖವಾಯಿತು. ಸಚಿವರಾಗಿ ಹಾಗೂ ಕೊರಟಗೆರೆ ಕ್ಷೇತ್ರದ ಶಾಸಕರಾಗಿ ನಾಡಿಗೆ ಅವರು ನೀಡಿದ ಸೇವೆ ಅಪಾರ.

ರಾಜ್ಯದ ಹಿತ ಮತ್ತು ಶೋಷಿತ ಸಮುದಾಯಗಳ ಏಳಿಗೆಗಾಗಿ ಸದಾ ಶ್ರಮಿಸುತ್ತಿದ್ದ ಅವರು, ತಮ್ಮ ಹೋರಾಟದ ಬದುಕು ಹಾಗೂ ತಳಸಮುದಾಯಗಳ ಬಗೆಗಿನ ಕಾಳಜಿಯ ಮೂಲಕ ಸದಾ ನಮ್ಮ ನೆನಪಿನಲ್ಲಿ ಉಳಿಯಲಿದ್ದಾರೆ.

ಮೃತರ ಆತ್ಮಕ್ಕೆ ಶಾಂತಿ ಸಿಗಲಿ, ಅವರ ಕುಟುಂಬ ವರ್ಗ ಹಾಗೂ ಅಭಿಮಾನಿಗಳಿಗೆ ಈ ನೋವನ್ನು ಭರಿಸುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಪ್ರಾರ್ಥಿಸುತ್ತೇನೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಕೆಳಸೇತುವೆ ನಿರ್ಮಾಣದ ಮೂಲಕ ಲೆವೆಲ್ ಕ್ರಾಸಿಂಗ್ ತೆಗೆಯಲು ಆದ್ಯತೆ: ಕೇಂದ್ರ ಸಚಿವ ವಿ.ಸೋಮಣ್ಣ

## ರಾಮೋಹಳ್ಳಿ ಗೇಟ್‌ಗೆ ಬದಲಾಗಿ ನಿರ್ಮಾಣವಾದ ರಸ್ತೆ ಕೆಳಸೇತುವೆ ಉದ್ಘಾಟನೆ



**ಬೆಂಗಳೂರು, ಜು.25:** ಮೈಸೂರು ರಸ್ತೆಯ ಸಮೀಪದ ರಾಮೋಹಳ್ಳಿ ಗೇಟ್‌ಗೆ ಬದಲಿಯಾಗಿ ನಿರ್ಮಿಸಲಾದ ರಸ್ತೆಯ ಕೆಳಸೇತುವೆಯನ್ನು ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಮತ್ತಿತರರು ಇದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ವಿ. ಸೋಮಣ್ಣ ಅವರು, ರಾಮೋಹಳ್ಳಿ ಗೇಟ್‌ನಲ್ಲಿ ರಸ್ತೆ ಕೆಳಸೇತುವೆ ನಿರ್ಮಿಸುವ ಬಹುಕಾಲದ ಬೇಡಿಕೆ ಇದೀಗ ಈಡೇರಿದೆ. ರಸ್ತೆ ಹಾಗೂ ರೈಲು ಸಂಚಾರದ ಸುರಕ್ಷತೆಯನ್ನು ಹೆಚ್ಚಿಸಲು ಭಾರತೀಯ ರೈಲ್ವೆಯು ರಸ್ತೆ ಮೇಲ್ಸೇತುವೆ ಹಾಗೂ ರಸ್ತೆ ಕೆಳ ಸೇತುವೆಗಳ ನಿರ್ಮಾಣದ ಮೂಲಕ ಲೆವೆಲ್ ಕ್ರಾಸಿಂಗ್ ಗೇಟ್‌ಗಳನ್ನು ತೆಗೆದುಹಾಕಲು ಆದ್ಯತೆ ನೀಡುತ್ತಿದೆ ಎಂದು ಅವರು ಹೇಳಿದರು.

ಕರ್ನಾಟಕದ 61 ರೈಲು ನಿಲ್ದಾಣಗಳನ್ನು ಎಸ್ಕಲೇಟರ್‌ಗಳು, ಲಿಫ್ಟ್‌ಗಳು, ಪಾದಚಾರಿ ಮೇಲ್ಸೇತುವೆಗಳು, ಹಿರಿಯ ನಾಗರಿಕರು ಮತ್ತು ದಿವ್ಯಾಂಗ ಪ್ರಯಾಣಿಕರಿಗೆ ಅನುಕೂಲವಾಗುವ ಪ್ರಯಾಣಿಕಸ್ನೇಹಿ ಸೌಲಭ್ಯಗಳೊಂದಿಗೆ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಅವರು ತಿಳಿಸಿದರು. ರೈಲ್ವೆ ಮೂಲಸೌಕರ್ಯ ಅಭಿವೃದ್ಧಿಗೆ ವೇಗ ನೀಡುವ ಉದ್ದೇಶದಿಂದ ರಸ್ತೆ ಮೇಲ್ಸೇತುವೆ ಮತ್ತು ರಸ್ತೆ ಕೆಳಸೇತುವೆ ಯೋಜನೆಗಳನ್ನು ರಾಜ್ಯ ಸರ್ಕಾರದೊಂದಿಗೆ ವೆಚ್ಚ ಹಂಚಿಕೊಳ್ಳುವ ಬದಲು, ಸಂಪೂರ್ಣ ವೆಚ್ಚವನ್ನು ರೈಲ್ವೆ ಸಚಿವಾಲಯವೇ ಭರಿಸಿ ಕೈಗೆತ್ತಿಕೊಂಡಿದೆ. ಪ್ರಯಾಣಿಕರಿಗೆ ಉತ್ತಮ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ ಬೆಂಗಳೂರು ಕಂಟೋನ್ಮೆಂಟ್ ಮತ್ತು ಯಶವಂತಪುರ ರೈಲು ನಿಲ್ದಾಣಗಳನ್ನು ಪುನರಾಭಿವೃದ್ಧಿಗೊಳಿಸಲಾಗುತ್ತಿದೆ ಎಂದು ಹೇಳಿದರು. 8.84 ಕೋಟಿ ವೆಚ್ಚದಲ್ಲಿ ನಿರ್ಮಿಸಲಾದ ಈ ರಸ್ತೆ ಕೆಳಸೇತುವೆಯು ಲೆವೆಲ್ ಕ್ರಾಸಿಂಗ್ ಗೇಟ್‌ನಿಂದ ಉಂಟಾಗುತ್ತಿದ್ದ ವಿಳಂಬ ಮತ್ತು ಸಂಚಾರ ದಟ್ಟಣೆಯನ್ನು ನಿವಾರಿಸಿ, ವಾಹನಗಳ ಸುಗಮ ಹಾಗೂ ಸುರಕ್ಷಿತ ಸಂಚಾರಕ್ಕೆ ನೆರವಾಗಲಿದೆ.

ಈ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಟಿ.ಎನ್. ಜವರಾಯಿ ಗೌಡ, ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಪ್ರವೀಣ್ ಕಾತರಕಿ, ಪತ್ರಕರ್ತ ರವೀಂದ್ರ ಭಟ್ ಹಾಗೂ ಇತರರು ಇದ್ದರು.

**ಬೆಂಗಳೂರು – ಕೋಲಾರ ನೇರ ರೈಲುಮಾರ್ಗ**

ಗದಗ – ವಾಡಿ, ತುಮಕೂರು – ರಾಯದುರ್ಗ ಹಾಗೂ ಮಾರಿಕುಪ್ಪಂ – ಕುಪ್ಪಂ ರೈಲು ಮಾರ್ಗಗಳಂತಹ ಬಹುಕಾಲದಿಂದ ಬಾಕಿ ಉಳಿದಿರುವ ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುತ್ತಿದೆ. ಬೆಂಗಳೂರು–ಕೋಲಾರ ನೇರ ರೈಲು ಮಾರ್ಗ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ವಿ.ಸೋಮಣ್ಣ ತಿಳಿಸಿದರು.


### ಬಹುಕಾಲದ ಬೇಡಿಕೆ ಈಡೇರಿದೆ

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಮಾತನಾಡಿ, ನಿಗದಿತ ಅವಧಿಗೂ ಮುನ್ನವೇ ರಸ್ತೆ ಕೆಳಸೇತುವೆ ಕಾಮಗಾರಿಯನ್ನು ಪೂರ್ಣಗೊಳಿಸಿ ಸ್ಥಳೀಯ ಜನರ ಬಹುಕಾಲದ ಬೇಡಿಕೆಯನ್ನು ಈಡೇರಿಸಿದ ರೈಲ್ವೆ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಶ್ಲಾಘಿಸಿದರು. ಈ ರಸ್ತೆ ಕೆಳಸೇತುವೆಯು ಸುರಕ್ಷತೆಯನ್ನು ಹೆಚ್ಚಿಸುವುದರೊಂದಿಗೆ, ಪ್ರಯಾಣದ ಸಮಯವನ್ನು ಕಡಿಮೆ ಮಾಡಿ, ಸಾವಿರಾರು ಪ್ರಯಾಣಿಕರಿಗೆ ಉತ್ತಮ ಸಂಪರ್ಕವನ್ನು ಒದಗಿಸಲಿದೆ ಎಂದು ಹೇಳಿದರು. ಸರಕು ಸಾಗಣೆ ಸಮಯವನ್ನು ಕಡಿಮೆ ಮಾಡಲು, ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಹಾಗೂ ರೈಲ್ವೆ ಜಾಲದ ಸಾಮರ್ಥ್ಯವನ್ನು ವೃದ್ಧಿಸಲು ಕೇಂದ್ರ ಸರ್ಕಾರವು ವಿಶೇಷ ಸರಕು ಸಾಗಣೆ ರೈಲು ಮಾರ್ಗಗಳನ್ನು ಸಹ ಅಭಿವೃದ್ಧಿಪಡಿಸುತ್ತಿದೆ ಎಂದು ತಿಳಿಸಿದರು.




ಭಾರತದ ಉಪರಾಷ್ಟ್ರಪತಿ ಮತ್ತು ರಾಜ್ಯಸಭೆಯ ಅಧ್ಯಕ್ಷರಾದ ಸಿ.ಪಿ. ರಾಧಾಕೃಷ್ಣನ್ ಅವರು ಶನಿವಾರ ನವದೆಹಲಿಯಲ್ಲಿ ರಾಜ್ಯಸಭೆಗೆ ಹೊಸದಾಗಿ ಆಯ್ಕೆಯಾದ/ನಾಮನಿರ್ದೇಶಿತ ಸದಸ್ಯರಿಗೆ ಎರಡು ದಿನಗಳ ಓರಿಯಂಟೇಶನ್–ಕಮ್–ತರಬೇತಿ ಕಾರ್ಯಕ್ರಮ (ಪ್ರಾರಂಭ್) ಉದ್ಘಾಟಿಸಿದರು ಮತ್ತು ಸದಸ್ಯರ ದೃಷ್ಟಿಕೋನ ಮತ್ತು ಜವಾಬ್ದಾರಿಗಳನ್ನು ವಿವರಿಸುವ ಮುಖ್ಯ ಭಾಷಣ ಮಾಡಿದರು.

# ಹೊರವರ್ತುಲ ರಸ್ತೆ ಮರು ಅಭಿವೃದ್ಧಿಗೆ 450 ಕೋಟಿ ರೂ. ಅನುದಾನ: ಸಚಿವ ಕೃಷ್ಣಬೈರೇಗೌಡ




**ಬೆಂಗಳೂರು, ಜು.25:** ಕೆ.ಆರ್. ಪುರಂನಿಂದ ಸೆಂಟ್ರಲ್ ಸಿಲ್ಕ್ ಬೋರ್ಡ್‌ವರೆಗಿನ ಹೊರವರ್ತುಲ ರಸ್ತೆಯನ್ನು ಆಮೂಲಾಗ್ರವಾಗಿ ಮೇಲ್ದರ್ಜೆಗೇರಿಸಲು, ಮೂಲ ಸೌಕರ್ಯ ಸುಧಾರಿಸಲು ಹಾಗೂ ವಾಹನ ದಟ್ಟಣೆ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ರಾಜ್ಯ ಸರ್ಕಾರ 450 ಕೋಟಿ ರೂ. ಅನುದಾನ ಮೀಸಲಿಟ್ಟಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಗೋಲ್ಡ್‌ಮನ್ ಸ್ಯಾಕ್ಸ್, ಹೆಲಿಯೊಸ್ ಬಿಸಿನೆಸ್ ಪಾರ್ಕ್, ಕಾಡುಬೀಸನಹಳ್ಳಿಯಲ್ಲಿ ಹೊರ ವರ್ತುಲ ರಸ್ತೆ ಕಂಪನಿಗಳ ಸಂಘ, ಐಟಿ ಪಾರ್ಕ್ ಮಾಲೀಕರು ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಹಾಗೂ ಸ್ಥಳೀಯ ಜನಸಾಮಾನ್ಯರೊಂದಿಗೆ ಶನಿವಾರ ಸಮಾಲೋಚನಾ ಸಭೆ ನಡೆಸಲಾಯಿತು.

ಸಭೆಯಲ್ಲಿ ಹೊರ ವರ್ತುಲ ರಸ್ತೆ ವ್ಯಾಪ್ತಿಯಲ್ಲಿರುವ ಪ್ರಮುಖ ಜಂಕ್ಷನ್‌ಗಳು, ಸರ್ವಿಸ್ ರಸ್ತೆಗಳು, ಪಾದಚಾರಿ ಮಾರ್ಗಗಳು, ಮೆಟ್ರೋ ಕಾಮಗಾರಿಗಳು, ಮಳೆನೀರು ಚರಂಡಿಗಳು, ಸಾರ್ವಜನಿಕ ಸಾರಿಗೆ ಸಂಪರ್ಕ, ವಾಹನ ನಿಲುಗಡೆ ವ್ಯವಸ್ಥೆ ಹಾಗೂ ನಾಗರಿಕರ ಸುರಕ್ಷತೆಯನ್ನು ಒಳಗೊಂಡ ಹಲವು ವಿಷಯಗಳ ಕುರಿತು ಸುದೀರ್ಘವಾಗಿ ಚರ್ಚಿಸಿ ಸಂಬಂಧಿಸಿದ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಯಿತು.

ಹೊರವರ್ತುಲ ರಸ್ತೆಯು ದೇಶದ ಆರ್ಥಿಕತೆಗೆ ಮತ್ತು ಐಟಿ ಕ್ಷೇತ್ರದ ಅಭಿವೃದ್ಧಿಗೆ ಅತ್ಯಂತ ಪ್ರಮುಖವಾದ ಕಾರಿಡಾರ್ ಆಗಿದೆ. ಆದರೆ, ಕಳೆದ 30–40 ವರ್ಷಗಳಿಂದ ಅನಧಿಕೃತ ಹಾಗೂ ನಿಯಮ ಬಾಹಿರವಾಗಿ ಲೇಔಟ್‌ಗಳು ಮತ್ತು ಕಟ್ಟಡಗಳು ನಿರ್ಮಾಣಗೊಂಡಿದ್ದರಿಂದ ಇಂದು ರಸ್ತೆ ಅಗಲ, ಒಳಚರಂಡಿ ಮತ್ತು ಪಾದಚಾರಿ ಮಾರ್ಗಗಳ ಅಭಾವ ಎದುರಾಗಿದೆ. ಉದಾಹರಣೆಗೆ ಜಯನಗರದಲ್ಲಿ ಶೇಕಡಾ 23ರಷ್ಟು ಜಾಗ ರಸ್ತೆಗೆ ಲಭ್ಯವಿದ್ದರೆ, ಈ ಈಸ್ಟ್ ಝೋನ್‌ನಲ್ಲಿ ಶೇಕಡಾ 8ರಷ್ಟು ಮಾತ್ರ ಲಭ್ಯವಿದೆ. ಜೊತೆಗೆ ಅನಧಿಕೃತ ಕಟ್ಟಡಗಳಿಂದಾಗಿ ಪಾರ್ಕಿಂಗ್ ಜಾಗವಿಲ್ಲದೆ ವಾಹನಗಳು ರಸ್ತೆಯಲ್ಲೇ ನಿಲ್ಲುವುದರಿಂದ ಹಾಗೂ ನಿಯಮಬಾಹಿರವಾಗಿ ಕ್ರಾಸ್ ಆಗುವುದರಿಂದ ಸಂಚಾರ ದಟ್ಟಣೆ ಹೆಚ್ಚಾಗಿದೆ. ಈ ಸಮಸ್ಯೆಗೆ ಸ್ಪಂದಿಸಿರುವ ಮುಖ್ಯಮಂತ್ರಿಗಳು ಹಾಗೂ ರಾಜ್ಯ ಸರ್ಕಾರವು 450 ಕೋಟಿ ರೂ. ಬಿಡುಗಡೆ ಮಾಡಿದ್ದು, ಅಗತ್ಯವಿದ್ದರೆ ಹೆಚ್ಚುವರಿ ಅನುದಾನ ನೀಡಲು ಬದ್ಧವಾಗಿದೆ. ಕೇವಲ ರಸ್ತೆಯ ಮೇಲ್ಮೈ ಸರಿಪಡಿಸುವುದರಿಂದ ದಟ್ಟಣೆ ಕಡಿಮೆಯಾಗುವುದಿಲ್ಲ, ಬದಲಾಗಿ ಮೂಲಸೌಕರ್ಯ ಸರಿಪಡಿಸುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಹೊರ ವರ್ತುಲ ರಸ್ತೆ ವ್ಯಾಪ್ತಿಯಲ್ಲಿ ಸಂಚಾರ ದಟ್ಟಣೆ ಹೆಚ್ಚಿರುವ ಜಂಕ್ಷನ್‌ಗಳನ್ನು ಗುರುತಿಸಿ ವೈಜ್ಞಾನಿಕ ಟ್ರಾಫಿಕ್ ನಿರ್ವಹಣಾ ಯೋಜನೆ ರೂಪಿಸಬೇಕು. ಅಗತ್ಯವಿರುವ ಸ್ಥಳಗಳಲ್ಲಿ ಜಂಕ್ಷನ್ ಮರುವಿನ್ಯಾಸ, ಸಿಗ್ನಲ್ ಸಮನ್ವಯ, ಯು–ಟರ್ನ್ ವ್ಯವಸ್ಥೆ ಹಾಗೂ ಸರ್ವಿಸ್ ರಸ್ತೆಗಳ ಸುಧಾರಣೆ ಮೂಲಕ ವಾಹನ ಸಂಚಾರವನ್ನು ಸುಗಮಗೊಳಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ಮಳೆನೀರು ಚರಂಡಿ ಮತ್ತು ಯುಟಿಲಿಟಿ ಕಾಮಗಾರಿಗಳಿಗೆ ಸಮನ್ವಯ: ಮಳೆನೀರು ಚರಂಡಿ, ಕುಡಿಯುವ ನೀರು, ಒಳಚರಂಡಿ, ವಿದ್ಯುತ್ ಹಾಗೂ ಅನಿಲ ಪೈಪ್‌ಲೈನ್ ಸೇರಿದಂತೆ ವಿವಿಧ ಯುಟಿಲಿಟಿ ಕಾಮಗಾರಿಗಳನ್ನು ಪರಸ್ಪರ ಸಮನ್ವಯದೊಂದಿಗೆ ಕೈಗೊಳ್ಳಬೇಕು. ರಸ್ತೆಗಳನ್ನು ಪುನಃ ಪುನಃ ಅಗೆದ ಪರಿಸ್ಥಿತಿ ಉಂಟಾಗದಂತೆ ಎಲ್ಲಾ ಇಲಾಖೆಗಳು ಸಮಗ್ರ ಕಾರ್ಯ ಯೋಜನೆ ರೂಪಿಸುವಂತೆ ಸೂಚಿಸಿದರು.

### ಪ್ರಮುಖ ಕ್ಯಾರಿಯೇಜ್ ವೇಗಳಲ್ಲಿ ಆಸ್ಫಾಲ್ಟ್ ಅಥವಾ ವೈಟ್‌ಟಾಪಿಂಗ್

ಪ್ರಮುಖ ಕ್ಯಾರಿಯೇಜ್‌ವೇಗಳಲ್ಲಿ ಆಸ್ಫಾಲ್ಟ್ ಅಥವಾ 'ವೈಟ್ ಟಾಪಿಂಗ್' ಮಾಡುವ ಕುರಿತು ಪರಿಶೀಲನೆ ನಡೆಯುತ್ತಿದ್ದು, ವೈಟ್‌ಟಾಪಿಂಗ್ ಮಾಡುವುದರಿಂದ ಸುಮಾರು 25 ವರ್ಷಗಳ ಕಾಲ ರಸ್ತೆ ಬಾಳಿಕೆ ಬರಲಿದೆ. ಇನ್ನು ಸರ್ವಿಸ್ ರಸ್ತೆಗಳಲ್ಲಿ ಭೂಗತ ಯುಟಿಲಿಟಿ ಲೈನ್‌ಗಳಿರುವುದರಿಂದ ಅಲ್ಲಿ ಆಸ್ಫಾಲ್ಟ್ ರಸ್ತೆಗಳನ್ನೇ ಮರುನಿರ್ಮಾಣ ಮಾಡಲಾಗುವುದು. ರಸ್ತೆ ಅತಿಕ್ರಮಣ ತೆರವುಗೊಳಿಸಲು ಮೂಲ ಭೂಸ್ವಾಧೀನ ದಾಖಲೆಗಳ ಪ್ರಕಾರ ಸರ್ವೇ ನಡೆಸಿ ಪೂರ್ಣ ಪ್ರಮಾಣದ ರಸ್ತೆ ಅಗಲವನ್ನು ಹಿಂಪಡೆಯಲು ಸೂಚಿಸಲಾಗಿದೆ. ವಿಶೇಷವಾಗಿ, ರಸ್ತೆ ಗುಣಮಟ್ಟವನ್ನು ಕಾಯ್ದುಕೊಳ್ಳಲು 'ಆ್ಯನುಟಿ ಪೇಮೆಂಟ್' ಮಾದರಿಯನ್ನು ಚಿಂತಿಸಲಾಗುತ್ತಿದೆ. ಇದರ ಪ್ರಕಾರ, ಗುತ್ತಿಗೆದಾರರೇ ಮುಂದಿನ 10 ರಿಂದ 12 ವರ್ಷಗಳ ಕಾಲ ರಸ್ತೆ ನಿರ್ವಹಣೆಯ ಸಂಪೂರ್ಣ ಜವಾಬ್ದಾರಿ ಹೊರಬೇಕಾಗುತ್ತದೆ. ರಸ್ತೆಯ ಮೇಲ್ಮೈ, ದೀಪಗಳು ಹಾಗೂ ಪಾದಚಾರಿ ಮಾರ್ಗದ ಗುಣಮಟ್ಟವನ್ನು ವರ್ಷಂಪ್ರತಿ ಪರಿಶೀಲಿಸಿ ಸರ್ಕಾರವು ಅವರಿಗೆ ಕಂತುಗಳಲ್ಲಿ ಹಣ ಪಾವತಿಸಲಿದೆ ಎಂದು ಕೃಷ್ಣಬೈರೇಗೌಡ ವಿವರಿಸಿದರು.

# ಉದ್ಯೋಗ ಖಾತ್ರಿಯಲ್ಲಿ ಗ್ರಾ.ಪಂ.ವ್ಯಾಪ್ತಿಯಲ್ಲಿ ಫಲ ವೃಕ್ಷೋದ್ಯಾನ: ಈಶ್ವರ ಖಂಡ್ರೆ



**ಬೆಂಗಳೂರು, ಜು.25:** ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಸರ್ಕಾರಿ ಜಮೀನಿನಲ್ಲಿ ಫಲ ವೃಕ್ಷೋದ್ಯಾನ ಅಭಿವೃದ್ಧಿಪಡಿಸಿ ಇದನ್ನು ವಾರ್ಷಿಕ ಆಧಾರದ ಮೇಲೆ ಪಾರದರ್ಶಕವಾಗಿ ಹರಾಜು ಮೂಲಕ ಅದೇ ಗ್ರಾಮದ ಯುವಜನರಿಗೆ ಗುತ್ತಿಗೆ ನೀಡುವ ಬಗ್ಗೆ ಕ್ರಮ ವಹಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ.

ಪ್ರತಿ ಗ್ರಾಮದಲ್ಲಿ ಈ ರೀತಿಯ ಫಲವೃಕ್ಷೋದ್ಯಾನ ಅಭಿವೃದ್ಧಿಪಡಿಸುವುದರಿಂದ ಗ್ರಾಮದಲ್ಲಿನ ಹಸಿರು ಹೊದಿಕೆಯೂ ಹೆಚ್ಚುತ್ತದೆ. ನಿರುದ್ಯೋಗಿ, ಭೂರಹಿತ ಯುವಜನರಿಗೆ ಉದ್ಯೋಗವೂ ಲಭಿಸುತ್ತದೆ ಜೊತೆಗೆ ಗ್ರಾಮ ಪಂಚಾಯತಿ ಮತ್ತು ಕಂದಾಯ ಇಲಾಖೆಗೆ ಆದಾಯವೂ ಬರುತ್ತದೆ ಎಂದು ಇಲಾಖೆಯ ಕಾರ್ಯದರ್ಶಿಯವರಿಗೆ ನೀಡಿರುವ ಲಿಖಿತ ಸೂಚನೆಯಲ್ಲಿ ತಿಳಿಸಿದ್ದಾರೆ.

ಪಂಚಾಯತಿ ವ್ಯಾಪ್ತಿಯ ಕಂದಾಯ ಇಲಾಖೆಗೆ ಸೇರಿದ ಸರ್ಕಾರಿ ಭೂಮಿಯಲ್ಲಿ ತೋಟಗಾರಿಕೆ ಬೆಳೆಗಳಾದ ಮಾವು, ಸಪೋಟ, ಬೆಟ್ಟನೆಲ್ಲಿಕಾಯಿ, ತೆಂಗು, ಹೈಬ್ರೀಡ್ ನೇರಳೆ, ಹುಣಸೆ ಇತ್ಯಾದಿ ಬೆಳೆಸಿದರೆ ಅದರಿಂದ ಪಂಚಾಯತಿಗಳಿಗೆ ಮತ್ತು ಕಂದಾಯ ಇಲಾಖೆಗೆ ಆದಾಯ ಬರುತ್ತದೆ. ಸರ್ಕಾರಿ ಭೂಮಿ ಒತ್ತುವರಿಯ ನಿಲ್ಲುತ್ತದೆ. ತೋಟಗಾರಿಕೆ ಬೆಳೆಯ ಈ ವೃಕ್ಷಗಳನ್ನು ಯಾವಾಗ ಬೇಕಾದರೂ ತೆರವು ಮಾಡಿ ಸರ್ಕಾರದ ಯೋಜನೆಗಳಿಗೆ ಭೂ ಬಳಕೆ ಮಾಡಲೂ ಅವಕಾಶ ಇರುತ್ತದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಇದರ ಜೊತೆಗೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ರಾಜ್ಯ ಹೆದ್ದಾರಿ, ಜಿಲ್ಲಾ ಮುಖ್ಯರಸ್ತೆ, ಸಂಪರ್ಕ ರಸ್ತೆಗಳ ಎರಡೂ ಬದಿಯಲ್ಲಿ ಹುಣಸೆ, ಮಾವು ಇತ್ಯಾದಿ ಮರಗಳನ್ನು ನೆಟ್ಟು, ಇವುಗಳನ್ನು ಸಹ ವಾರ್ಷಿಕ ಆಧಾರದಲ್ಲಿ ಸ್ಥಳೀಯರಿಗೆ ಹರಾಜು ಮೂಲಕ ಗುತ್ತಿಗೆ ನೀಡಿದರೆ ಇದರಿಂದಲೂ ಪಂಚಾಯತಿಗಳಿಗೆ ಆದಾಯ ಬರಲಿದ್ದು, ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿಗೆ ಹೆಚ್ಚುವರಿ ಆರ್ಥಿಕ ನೆರವು ಲಭಿಸುತ್ತದೆ. ಗ್ರಾಮೀಣರಿಗೆ ಹೆಚ್ಚುವರಿ ಆದಾಯವೂ ಲಭಿಸುತ್ತದೆ ಎಂದು ತಿಳಿಸಿದ್ದಾರೆ.

ಈ ನಿಟ್ಟಿನಲ್ಲಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬರುವ ಕಂದಾಯ ಇಲಾಖೆಗೆ ಸೇರಿದ ಸರ್ಕಾರಿ ಜಮೀನುಗಳಲ್ಲಿ ವಿಬಿ ಜಿ ರಾಮ್ ಜಿ ಸಹಯೋಗದಲ್ಲಿ ಈ ರೀತಿ ಫಲವೃಕ್ಷೋದ್ಯಾನ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕಂದಾಯ ಇಲಾಖೆ ಮತ್ತು ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಕ್ರಿಯಾಯೋಜನೆ ರೂಪಿಸುವಂತೆ ಕಾರ್ಯದರ್ಶಿಗೆ ಸೂಚಿಸಿದ್ದಾರೆ.

# ಗ್ರಾಮೀಣ ಭಾಗದಲ್ಲಿ ವೈದ್ಯರ ಕೊರತೆ ನೀಗಿಸಲು ತಂತ್ರಜ್ಞಾನ ಆಧಾರಿತ ಆರೋಗ್ಯ ಸೇವೆ ಅಗತ್ಯ: ಡಾ. ಶರಣ ಪ್ರಕಾಶ್ ಪಾಟೀಲ್



**ಬೆಂಗಳೂರು, ಜು.25:** ಕರ್ನಾಟಕದಲ್ಲಿ ಪ್ರತಿವರ್ಷ ಸುಮಾರು 14,900 ವೈದ್ಯರು ಪದವಿ ಪಡೆದರೂ ಗ್ರಾಮೀಣ ಪ್ರದೇಶಗಳಲ್ಲಿ ವೈದ್ಯರ ಕೊರತೆ ಮುಂದುವರಿದಿರುವುದು ನಮ್ಮ ಮುಂದಿನ ಗಂಭೀರ ಸವಾಲಾಗಿದೆ. ಕೃತಕ ಬುದ್ಧಿಮತ್ತೆ, ಟೆಲಿಮೆಡಿಸಿನ್ ಹಾಗೂ ಡಿಜಿಟಲ್ ಆರೋಗ್ಯ ಸೇವೆಗಳಂತಹ ತಂತ್ರಜ್ಞಾನ ಆಧಾರಿತ ಪರಿಹಾರಗಳು ಇಂದಿನ ಅಗತ್ಯಗಳಾಗಿವೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಆರ್. ಪಾಟೀಲ್ ಹೇಳಿದ್ದಾರೆ.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ಆಯೋಜಿಸಿದ್ದ ವೈದ್ಯಕೀಯ ಶಿಕ್ಷಣದ ಭವಿಷ್ಯಕ್ಕಾಗಿ ಕೃತಕ ಬುದ್ಧಿಮತ್ತೆ ಮತ್ತು ದತ್ತಾಂಶ ವಿಷಯದ ವಿಶೇಷ ಶೈಕ್ಷಣಿಕ ಸಂವಾದ–ಸಭೆಯಲ್ಲಿ ಅವರು ಮಾತನಾಡಿ, ಕರ್ನಾಟಕದ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ವ್ಯವಸ್ಥೆಯ ಅಗತ್ಯಗಳಿಗೆ ಹೊಂದುವಂತೆ ರಾಜ್ಯಕ್ಕೆ ವಿಶೇಷವಾದ ಕೃತಕ ಬುದ್ಧಿಮತ್ತೆ ಮಾದರಿಯನ್ನು ಅಭಿವೃದ್ಧಿಪಡಿಸಬೇಕಿದೆ. ವೈದ್ಯಕೀಯ ಶಿಕ್ಷಣದಲ್ಲಿ ಕೃತಕ ಬುದ್ಧಿಮತ್ತೆ ಅಳವಡಿಕೆಗೆ ಸ್ಪಷ್ಟ ಹಾಗೂ ಸಮಗ್ರ ಕಾರ್ಯತಂತ್ರ ರೂಪಿಸುವುದು ಕಾಲದ ಅಗತ್ಯವಾಗಿದೆ ಎಂದು ಅವರು ಹೇಳಿದರು.

ಕೃತಕ ಬುದ್ಧಿಮತ್ತೆಯನ್ನು ಸಮರ್ಪಕವಾಗಿ ಅಳವಡಿಸಿಕೊಂಡರೆ ವೈದ್ಯಕೀಯ ಶಿಕ್ಷಣದಲ್ಲಿ ಉತ್ಪಾದಕತೆ ಹೆಚ್ಚುವ ಜೊತೆಗೆ ಬೋಧನೆ, ಕಲಿಕೆ, ಸಂಶೋಧನೆ ಹಾಗೂ ಆರೋಗ್ಯ ಸೇವೆಗಳ ಗುಣಮಟ್ಟವನ್ನು ಸುಧಾರಿಸಬಹುದು. ಭವಿಷ್ಯದ ವೈದ್ಯಕೀಯ ವೃತ್ತಿಪರರು ತಂತ್ರಜ್ಞಾನ ಆಧಾರಿತ ಆರೋಗ್ಯ ವ್ಯವಸ್ಥೆಯಲ್ಲಿ ಸಮರ್ಥವಾಗಿ ಕಾರ್ಯನಿರ್ವಹಿಸಲು ಕೃತಕ ಬುದ್ಧಿಮತ್ತೆ ಪರಿಕರಗಳ ಬಳಕೆಯಲ್ಲಿ ಪರಿಣತಿ ಹೊಂದುವುದು ಕೂಡ ಅಷ್ಟೇ ಮುಖ್ಯ. ಈ ನಿಟ್ಟಿನಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಸೂಕ್ತ ಮಾರ್ಗಸೂಚಿಗಳನ್ನು ಸಿದ್ಧಗೊಳಿಸಬೇಕು ಎಂದು ಸಲಹೆ ನೀಡಿದರು.

### ಎಐ ಕ್ರಾಂತಿಗೆ ವಿ.ವಿ ಬದ್ಧ



ಆರ್‌ಜಿಯುಎಚ್‌ಎಸ್ ಕುಲಪತಿ ಡಾ. ಬಿ.ಸಿ. ಭಗವಾನ್ ಮಾತನಾಡಿ, ವೈದ್ಯಕೀಯ ಶಿಕ್ಷಣದಲ್ಲಿ ಸಾಮರ್ಥವಾಗಿ ಮತ್ತು ಪರಿಣಾಮಕಾರಿಯಾಗಿ ಕೃತಕ ಬುದ್ಧಿಮತ್ತೆಯನ್ನು ಬಳಸಿಕೊಳ್ಳುವ ಮೂಲಕ ಕೃತಕ ಬುದ್ಧಿಮತ್ತೆ ಕ್ರಾಂತಿಗೆ ವಿಶ್ವವಿದ್ಯಾಲಯ ಬದ್ಧವಾಗಿದೆ ಎಂದು ಹೇಳಿದರು. ವಿಶ್ವವಿದ್ಯಾಲಯದ ಶೈಕ್ಷಣಿಕ ಹಾಗೂ ಸಂಶೋಧನಾ ಚಟುವಟಿಕೆಗಳಲ್ಲಿ ಈಗಾಗಲೇ ಕೃತಕ ಬುದ್ಧಿಮತ್ತೆ ಅಳವಡಿಸಿಕೊಳ್ಳಲಾಗಿದ್ದು, ಅದರ ಆರಂಭಿಕ ಫಲಿತಾಂಶಗಳು ಆಶಾದಾಯಕವಾಗಿವೆ. ಮುಂದಿನ ದಿನಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳು, ಸಂಶೋಧನೆ, ಕ್ಲಿನಿಕಲ್ ತರಬೇತಿ, ಮೌಲ್ಯಮಾಪನ ಮತ್ತು ವಿಶ್ವವಿದ್ಯಾಲಯದ ಆಡಳಿತ ವ್ಯವಸ್ಥೆಯ ಎಲ್ಲ ಹಂತಗಳಲ್ಲಿಯೂ ಎಐ ಅನ್ನು ಸಮಗ್ರವಾಗಿ ಅಳವಡಿಸಲಾಗುವುದು ಎಂದು ತಿಳಿಸಿದರು. ನವೋದ್ಯಮ ಹಾಗೂ ಜಾಗತಿಕ ಸಹಭಾಗಿತ್ವದ ಮೂಲಕ ಆರೋಗ್ಯ ವಿಜ್ಞಾನ ಶಿಕ್ಷಣದಲ್ಲಿ ಗುಣಾತ್ಮಕ ಪರಿವರ್ತನೆ ತಂದು, ಕಾರ್ಯಕ್ಷಮತೆ ಹಾಗೂ ರೋಗಿಕೇಂದ್ರಿತ ಆರೋಗ್ಯ ವ್ಯವಸ್ಥೆಯನ್ನು ಸುಧಾರಿಸಲಾಗುವುದು ಎಂದು ಹೇಳಿದರು.

# ಭವಿಷ್ಯದ ಅಗತ್ಯಕ್ಕೆ ಅನುಗುಣವಾಗಿ ಅಗ್ನಿಶಾಮಕ ಹಾಗೂ ವಿಪತ್ತು ನಿರ್ವಹಣಾ ಸೇವೆ ಬಲವರ್ಧನೆ ಅಗತ್ಯ: ಸಚಿವ ಪ್ರಿಯಾಂಕ್ ಖರ್ಗೆ



**ಬೆಂಗಳೂರು, ಜು.25:** ಕರ್ನಾಟಕ ವೇಗವಾಗಿ ಕೈಗಾರಿಕೀಕರಣ, ನಗರೀಕರಣ ಹಾಗೂ ತಂತ್ರಜ್ಞಾನ ಆಧಾರಿತ ನವೋದ್ಯಮಗಳ ಬೆಳವಣಿಗೆಯತ್ತ ಸಾಗುತ್ತಿರುವ ಹಿನ್ನೆಲೆಯಲ್ಲಿ, ಜನಸಂಖ್ಯೆ ಹಾಗೂ ಕೈಗಾರಿಕಾ ವಿಸ್ತರಣೆಗೆ ಅನುಗುಣವಾಗಿ ಅಗ್ನಿಶಾಮಕ ಮತ್ತು ವಿಪತ್ತು ನಿರ್ವಹಣಾ ಸೇವೆಗಳನ್ನು ಮರುಪರಿಶೀಲಿಸಿ ಬಲಪಡಿಸುವುದು ಅಗತ್ಯ ಎಂದು ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವರಾದ ಪ್ರಿಯಾಂಕ್ ಖರ್ಗೆ ಅಭಿಪ್ರಾಯಪಟ್ಟರು.

ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ರಾಜ್ಯ ವಿಪತ್ತು ಸ್ಪಂದನಾ ಪಡೆಯ ಮುಖ್ಯ ಕಚೇರಿಗೆ ಭೇಟಿ ನೀಡಿ ಇಲಾಖೆಯ ಕಾರ್ಯಚಟುವಟಿಕೆಗಳು, ಮೂಲಸೌಕರ್ಯ, ಸಿಬ್ಬಂದಿ, ತರಬೇತಿ, ಆಧುನೀಕರಣ ಹಾಗೂ ಭವಿಷ್ಯದ ಅಭಿವೃದ್ಧಿ ಯೋಜನೆಗಳ ಕುರಿತು ಅಧಿಕಾರಿಗಳಿಂದ ಸಮಗ್ರ ಪ್ರಾತ್ಯಕ್ಷಿಕೆ ಸ್ವೀಕರಿಸಿದರು.

ನಂತರ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡುವ ಜೊತೆಗೆ ಅಗತ್ಯವಿರುವ ಹೊಸ ಅಗ್ನಿಶಾಮಕ ಠಾಣೆಗಳ ನಿರ್ಮಾಣಕ್ಕೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂದು ಭರವಸೆ ನೀಡಿದರು. ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಮುಂಬಡ್ತಿ, ಸೇವಾ ಸೌಲಭ್ಯಗಳು ಮತ್ತು ಕಲ್ಯಾಣ ಕ್ರಮಗಳ ಕುರಿತು ಸರ್ಕಾರ ಸಕಾರಾತ್ಮಕವಾಗಿ ಪರಿಶೀಲಿಸಿ ಸೂಕ್ತ ನಿರ್ಧಾರ ಕೈಗೊಳ್ಳಲಿದೆ ಎಂದು ಹೇಳಿದರು.

ಪ್ರಾತ್ಯಕ್ಷಿಕೆಯ ವೇಳೆ ಇಲಾಖೆಯು ಪ್ರಸ್ತುತ ರಾಜ್ಯದಾದ್ಯಂತ 219 ಅಗ್ನಿಶಾಮಕ ಠಾಣೆಗಳು, ಆರು ಅಗ್ನಿ ನಿಯಂತ್ರಣ ಘಟಕಗಳು, ಅಗ್ನಿಶಾಮಕ ತರಬೇತಿ ಅಕಾಡೆಮಿ, ಆಧುನಿಕ ಅಗ್ನಿಶಾಮಕ ವಾಹನಗಳು, ರಕ್ಷಣಾ ಉಪಕರಣಗಳು, ಅಗ್ನಿ–2 ಡಿಜಿಟಲ್ ಸೇವಾ ವ್ಯವಸ್ಥೆ, ರಾಜ್ಯ ವಿಪತ್ತು ಸ್ಪಂದನಾ ಪಡೆಯ ಐದು ಕಂಪನಿಗಳು ಸೇರಿ ಹಲವು ಸೌಲಭ್ಯಗಳನ್ನು ಹೊಂದಿರುವುದರ ಜೊತೆಗೆ ಹೊಸ ಠಾಣೆಗಳ ನಿರ್ಮಾಣ, ವಾಹನಗಳ ಖರೀದಿ ಹಾಗೂ ಇಲಾಖೆಯ ಆಧುನೀಕರಣಕ್ಕೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಅಧಿಕಾರಿಗಳು ಸಚಿವರಿಗೆ ಮಾಹಿತಿ ನೀಡಿದರು.

ಗೃಹರಕ್ಷಕ ಪಡೆಯನ್ನು ಇನ್ನಷ್ಟು ಸಮರ್ಥವಾಗಿ ಬಳಸಿಕೊಳ್ಳಲು ಸಮಗ್ರ ಕಾರ್ಯಸೂಚಿ ರೂಪಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚಿಸಿದರು. ಗೃಹರಕ್ಷಕರ ಸೇವೆಯನ್ನು ವಿವಿಧ ಸಾರ್ವಜನಿಕ ಭದ್ರತೆ ಹಾಗೂ ತುರ್ತು ಪರಿಸ್ಥಿತಿಗಳಲ್ಲಿ ಇನ್ನಷ್ಟು ಪರಿಣಾಮಕಾರಿಯಾಗಿ ಬಳಸಿಕೊಳ್ಳುವ ಬಗ್ಗೆ ಯೋಜನೆ ರೂಪಿಸುವಂತೆ ತಿಳಿಸಿದರು. ಅದೇ ವೇಳೆ, ಗೃಹರಕ್ಷಕ ಪಡೆಯ ಸಿಬ್ಬಂದಿಯ ಸೇವಾ ಸೌಲಭ್ಯಗಳು ಹಾಗೂ ಗೌರವಧನವನ್ನು ಹೆಚ್ಚಿಸಲು ಅಗತ್ಯ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅಡುಗೆ ಅನಿಲ ಸೋರಿಕೆಯಿಂದ ಉಂಟಾಗುವ ಅವಘಡಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಅಗ್ನಿಶಾಮಕ ಸಿಬ್ಬಂದಿಗೆ ವಿಶೇಷ ತಾಂತ್ರಿಕ ತರಬೇತಿ ನೀಡುವ ವ್ಯವಸ್ಥೆ ರೂಪಿಸಬೇಕು ಎಂದು ಸಚಿವರು ಸಲಹೆ ನೀಡಿದರು. ಸಾರ್ವಜನಿಕರ ಜೀವ ಹಾಗೂ ಆಸ್ತಿ ರಕ್ಷಣೆಯಲ್ಲಿ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಆಧುನಿಕ ತಂತ್ರಜ್ಞಾನ, ಸಮರ್ಪಕ ಮಾನವ ಸಂಪನ್ಮೂಲ, ನಿರಂತರ ತರಬೇತಿ ಹಾಗೂ ಉತ್ತಮ ಮೂಲಸೌಕರ್ಯದ ಮೂಲಕ ಇಲಾಖೆಯನ್ನು ಮತ್ತಷ್ಟು ಬಲಿಷ್ಠಗೊಳಿಸಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. ಇಲಾಖೆಯ ಅಭಿವೃದ್ಧಿಗೆ ಅಗತ್ಯವಿರುವ ಎಲ್ಲ ಪ್ರಸ್ತಾವನೆಗಳನ್ನು ಆದ್ಯತೆಯ ಮೇರೆಗೆ ಪರಿಶೀಲಿಸಲಾಗುವುದು ಎಂದು ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯು ಪೊಲೀಸ್ ಮಹಾನಿರ್ದೇಶಕ ಪ್ರಶಾಂತ್ ಕುಮಾರ್ ಠಾಕೂರ್, ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಎಂ.ನಂಜುಂಡಸ್ವಾಮಿ ಹಾಗೂ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.




ಬಿಹಾರದ ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಶನಿವಾರ ಪಾಟ್ನಾದಲ್ಲಿ ಬಿಐಟಿ ಮೆಸ್ರಾದ ಪಾಟ್ನಾ ಕ್ಯಾಂಪಸ್‌ನಲ್ಲಿ 11,464 ಕೋಟಿ ಮೌಲ್ಯದ 2,476 ಅಭಿವೃದ್ಧಿ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ಈ ಕಾರ್ಯಕ್ರಮ ರಾಜ್ಯ ಸರ್ಕಾರದ ಅಧಿಕಾರಾವಧಿಯ 100 ದಿನಗಳನ್ನು ಸೂಚಿಸುತ್ತದೆ.

# ಜಂತರ್‌ಮಂತರ್ ಪ್ರತಿಭಟನೆ ಬಗ್ಗೆ ಸುಳ್ಳು ಮಾಹಿತಿ ಆರೋಪ

## 400ಕ್ಕೂ ಹೆಚ್ಚು ಪಾಕಿಸ್ತಾನ ಸಂಪರ್ಕ ಹೊಂದಿದ್ದ ಸೋಶಿಯಲ್ ಮೀಡಿಯಾ ಖಾತೆಗಳು ಬಂದ್

**ನವದೆಹಲಿ, ಜು.25:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಕುರಿತು ಜಂತರ್ ಮಂತರ್‌ನಲ್ಲಿ ನಡೆಯುತ್ತಿರುವ ವಿದ್ಯಾರ್ಥಿ ಪ್ರತಿಭಟನೆಗೆ ಸಂಬಂಧಿಸಿದಂತೆ ಎಐ–ಚಾಲಿತ (ಕೃತಕ ಬುದ್ಧಿಮತ್ತೆ) ಮತ್ತು ಹಾದಿತಪ್ಪಿಸುವ ವಿಷಯಗಳನ್ನು ಹರಡುತ್ತಿದ್ದ 400ಕ್ಕೂ ಹೆಚ್ಚು ಪಾಕಿಸ್ತಾನ ಸಂಚಾಲಿತ ಸಾಮಾಜಿಕ ಮಾಧ್ಯಮ ಖಾತೆಗಳನ್ನು ಬ್ಲಾಕ್ ಮಾಡಲಾಗಿದೆ ಎಂದು ದೆಹಲಿ ಪೊಲೀಸರು ಶನಿವಾರ ತಿಳಿಸಿದ್ದಾರೆ. ಜೊತೆಗೆ, ಸಾರ್ವಜನಿಕರು ಆನ್‌ಲೈನ್‌ನಲ್ಲಿ ದೃಢೀಕರಿಸದ ಮಾಹಿತಿಯನ್ನು ಹಂಚಿಕೊಳ್ಳದಂತೆ ಎಚ್ಚರಿಕೆನೀಡಿದ್ದಾರೆ. ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಸೆಂಟ್ರಲ್ ಡಿಸ್ಟ್ರಿಕ್ಟ್ ಡಿಸಿಪಿ ರೋಹಿತ್ ರಾಜ್‌ಬೀರ್ ಸಿಂಗ್, ಪ್ರತಿಭಟನೆಯ ಬಗ್ಗೆ ಜನರನ್ನು ಹಾದಿತಪ್ಪಿಸುವ ಉದ್ದೇಶದಿಂದ ಈ ಬ್ಲಾಕ್ ಮಾಡಲಾದ ಖಾತೆಗಳು ಡೀಪ್‌ಫೇಕ್ ವೀಡಿಯೊಗಳು, ಎಡಿಟ್ ಮಾಡಿದ ಫೋಟೋಗಳು ಮತ್ತು ನಕಲಿ ಪೋಸ್ಟ್‌ಗಳನ್ನು ಹರಡುತ್ತಿದ್ದವು ಎಂದು ಹೇಳಿದ್ದಾರೆ.

ದೆಹಲಿ ಪೊಲೀಸರು ಸಂಬಂಧಪಟ್ಟ ಸಂಸ್ಥೆಗಳೊಂದಿಗೆ ಸಹಯೋಗದೊಂದಿಗೆ ಇಂತಹ ಹೆಚ್ಚಿನ ಖಾತೆಗಳನ್ನು ಗುರುತಿಸಲು ನಿರಂತರವಾಗಿ ಕೆಲಸ ಮಾಡುತ್ತಿದ್ದಾರೆ. ಪ್ರತಿಭಟನೆಗೆ ಸಂಬಂಧಿಸಿದಂತೆ ಎಐ–ಚಾಲಿತ ವಿಷಯ, ಡೀಪ್‌ಫೇಕ್ ವೀಡಿಯೊಗಳು,




ಎಡಿಟ್ ಮಾಡಿದ ಫೋಟೋಗಳು ಮತ್ತು ಇತರ ಸುಳ್ಳು ಮಾಹಿತಿಯನ್ನು ಹರಡುತ್ತಿದ್ದ 400ಕ್ಕೂ ಹೆಚ್ಚು ಹ್ಯಾಂಡಲ್‌ಗಳನ್ನು ಇದುವರೆಗೆ ಗುರುತಿಸಿ ಬ್ಲಾಕ್ ಮಾಡಲಾಗಿದೆ," ಎಂದು ಸಿಂಗ್ ತಿಳಿಸಿದ್ದಾರೆ.ಈ ಖಾತೆಗಳಲ್ಲಿ ಕೆಲವು 'ಆಪರೇಷನ್ ಸಿಂಧೂರ್' ಸಮಯದಲ್ಲಿಯೂ ಸಕ್ರಿಯವಾಗಿದ್ದು, ಹಿರಿಯ ಪೊಲೀಸ್ ಅಧಿಕಾರಿಗಳ ಅಧಿಕೃತ ಹೇಳಿಕೆಗಳನ್ನು ತಿರುಚಿ, ತಪ್ಪು ಮಾಹಿತಿ ಹರಡಲು ನಕಲಿ ದೃಶ್ಯಾವಳಿಗಳನ್ನು ಪ್ರಸಾರ ಮಾಡಿದ್ದವು ಎಂದೂ ಅವರು ಸೇರಿಸಿದರು.ವಿಶೇಷವಾಗಿ ಇನ್‌ಸ್ಟಾಗ್ರಾಮ್‌ನಂತಹ ಪ್ಲಾಟ್‌ಫಾರ್ಮ್‌ಗಳಲ್ಲಿ ಸುಳ್ಳುಮಾಹಿತಿ ವೇಗವಾಗಿ ಹರಡುವುದರಿಂದ ಪೊಲೀಸರು ಸಾಮಾಜಿಕ ಮಾಧ್ಯಮಗಳನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. "ಕಾಕ್ರೋಚ್ ಜನತಾ ಪಾರ್ಟಿಯಿಂದ ಕಳೆದ ಕೆಲವು ವಾರಗಳಿಂದ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಯುತ್ತಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ಮಾಹಿತಿ ವೇಗವಾಗಿ ವೈರಲ್ ಆಗುತ್ತದೆ, ಆದರೆ ಪ್ರತಿಯೊಂದು ಪೋಸ್ಟ್, ವೀಡಿಯೊ ಅಥವಾ ಫೋಟೋ ನಿಖರವಾಗಿರುತ್ತದೆ ಎಂದೇನಿಲ್ಲ. ಯಾವುದೇ ಮಾಹಿತಿಯನ್ನು ನಂಬುವ ಮೊದಲು ಅಥವಾ ಅದನ್ನು ಮುಂದುವರಿಸಿ ಹಂಚಿಕೊಳ್ಳುವ ಮೊದಲು ಸತ್ಯಾಸತ್ಯತೆಯನ್ನು ಪರಿಶೀಲಿಸುವುದು ಅತ್ಯಂತ ಮುಖ್ಯ," ಎಂದು ಅವರು ಹೇಳಿದರು.

ಸಾರ್ವಜನಿಕರಿಗೆ ನಿಜವಾದ ಮತ್ತು ನಕಲಿ ವಿಷಯಗಳ ನಡುವಿನ ವ್ಯತ್ಯಾಸವನ್ನು ಗುರುತಿಸಲು ಅನುಕೂಲವಾಗುವಂತೆ, ದೆಹಲಿ ಪೊಲೀಸರು ತಮ್ಮ ಅಧಿಕೃತ ಸಾಮಾಜಿಕ ಮಾಧ್ಯಮ ಖಾತೆಗಳನ್ನು ಬಳಸಿ ಐಖ–ಚಾಲಿತ ಮತ್ತು ಡೀಪ್‌ಫೇಕ್ ವೀಡಿಯೊಗಳು ಸೇರಿದಂತೆ ನಕಲಿ ಸುದ್ದಿಗಳನ್ನು ನಿಯಮಿತವಾಗಿ ಬಯಲಿಗೆಳೆಯುತ್ತಿದ್ದಾರೆ ಎಂದು ಸಿಂಗ್ ಹೇಳಿದರು.ಜುಲೈ 20ರ ಪ್ರತಿಭಟನೆಯ ಸಮಯದಲ್ಲಿ ಪ್ರತಿಭಟನಾಕಾರರೊಬ್ಬರು ಸಾವನ್ನಪ್ಪಿದ್ದಾರೆ ಎಂಬ ವದಂತಿಗಳನ್ನು ಅವರು ತಳ್ಳಿಹಾಕಿದರು. ದೆಹಲಿ ಪೊಲೀಸರು ಎಕ್ಸ್ (ಟ್ವಿಟರ್) ನಲ್ಲಿ ನೀಡಿದ ಹಿಂದಿನ ಸಲಹೆಯನ್ನು ಉಲ್ಲೇಖಿಸಿದ ಸಿಂಗ್, ವೈರಲ್ ಪೋಸ್ಟ್‌ಗಳಲ್ಲಿ ಉಲ್ಲೇಖಿಸಲಾದ ಮಹಿಳೆ ಜೀವಂತವಾಗಿದ್ದು, ರಾಮ್ ಮನೋಹರ್ ಲೋಹಿಯಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಆಕೆಯ ಸ್ಥಿತಿ ಸ್ಥಿರವಾಗಿದ್ದು, ಅಪಾಯದಿಂದ ಹೊರಗಿದ್ದಾರೆ ಎಂದು ವೈದ್ಯರು ದೃಢಪಡಿಸಿದ್ದಾರೆ ಎಂದರು.

ಈ ಮಧ್ಯೆ, ಪ್ರತಿಭಟನೆ ಮುಂದುವರಿದಿರುವ ಹಿನ್ನೆಲೆಯಲ್ಲಿ ದೆಹಲಿ ಪೊಲೀಸರು ಜಂತರ್ ಮಂತರ್ ಸುತ್ತಲೂ ಹೆಚ್ಚುವರಿ ಬ್ಯಾರಿಕೇಡ್‌ಗಳನ್ನು ಅಳವಡಿಸಿ ಭದ್ರತಾ ವ್ಯವಸ್ಥೆಯನ್ನು ಬಲಪಡಿಸಿದ್ದಾರೆ.

# ಧರ್ಮೇಂದ್ರ ರಾಷ್ಟ್ರೀಯ ಹಿತಾಸಕ್ತಿಗೆ ಆದ್ಯತೆ ನೀಡುವ ಮೂಲಕ ರಾಜೀನಾಮೆ: ದೆಹಲಿ ಸಿಎಂ



**ನವದೆಹಲಿ, ಜು.25:** ಪ್ರಶ್ನೆಪತ್ರಿಕೆ ಸೋರಿಕೆ ಸಮಸ್ಯೆಗಳ ಆರೋಪದ ಮೇಲೆ ನಡೆದ ಪ್ರತಿಭಟನೆಗಳ ನಡುವೆ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಿದ್ದಕ್ಕೆ ಪ್ರತಿಕ್ರಿಯಿಸಿದ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ಸಾರ್ವಜನಿಕ ಜೀವನದಲ್ಲಿನ ಪ್ರತಿಯೊಂದು ಜವಾಬ್ದಾರಿಯನ್ನು ಸಮರ್ಪಣೆ, ಪ್ರಾಮಾಣಿಕತೆ ಮತ್ತು ಬದ್ಧತೆಯಿಂದ ಪೂರೈಸಿದ್ದೇನೆ ಎಂದು ಶನಿವಾರ ಹೇಳಿದ್ದಾರೆ. ಪ್ರಧಾನ್ ಅವರು ಎಲ್ಲಕ್ಕಿಂತ ಹೆಚ್ಚಾಗಿ ರಾಷ್ಟ್ರೀಯ ಹಿತಾಸಕ್ತಿಗೆ ಆದ್ಯತೆ ನೀಡುವ ಮೂಲಕ ತಮ್ಮ ರಾಜೀನಾಮೆಯನ್ನು ಸಲ್ಲಿಸಿದ್ದಾರೆ ಎಂದು ಗುಪ್ತಾ ಹೇಳಿದರು, ಈ ನಿರ್ಧಾರವು ಸಾರ್ವಜನಿಕ ಜೀವನದಲ್ಲಿ ನೈತಿಕ ಮೌಲ್ಯಗಳು, ಘನತೆ ಮತ್ತು ತತ್ವಗಳಿಗೆ ಅವರ ಅಚಲ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು. ರಾಷ್ಟ್ರದ ಸೇವೆಯಲ್ಲಿ ಅವರ ನಿರಂತರ ಪ್ರಯತ್ನಗಳು ಹೆಚ್ಚಿನ ಎತ್ತರವನ್ನು ತಲುಪುತ್ತವೆ ಎಂದು ಅವರು ಆಶಿಸಿದರು. ಶಿಕ್ಷಣ ಸಚಿವರಾಗಿ ಪ್ರಧಾನ್ ಅವರು ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) 2020 ರ ಪರಿಣಾಮಕಾರಿ ಅನುಷ್ಠಾನಕ್ಕೆ ಗಮನಾರ್ಹ ಕೊಡುಗೆಗಳನ್ನು ನೀಡಿದ್ದಾರೆ ಎಂದು ದೆಹಲಿ ಮುಖ್ಯಮಂತ್ರಿ ಹೇಳಿದರು. ಅವರು ಶಿಕ್ಷಣ ವ್ಯವಸ್ಥೆಯಲ್ಲಿ ಹಲವಾರು ಅರ್ಥಪೂರ್ಣ ಸುಧಾರಣೆಗಳನ್ನು ಪರಿಚಯಿಸಿದ್ದಾರೆ, ಭಾರತೀಯ ಭಾಷೆಗಳಲ್ಲಿ ಶಿಕ್ಷಣವನ್ನು ಬಲಪಡಿಸಿದ್ದಾರೆ, ತಾಂತ್ರಿಕ ಮತ್ತು ಉನ್ನತ ಶಿಕ್ಷಣವನ್ನು ವಿಸ್ತರಿಸಿದ್ದಾರೆ ಮತ್ತು ವಿದ್ಯಾರ್ಥಿಗಳಿಗೆ ಹೊಸ ಅವಕಾಶಗಳನ್ನು ಸೃಷ್ಟಿಸಿದ್ದಾರೆ ಎಂದು ಅವರು ಹೇಳಿದರು. ಇದಕ್ಕೂ ಮೊದಲು, ಪ್ರಧಾನಿ ನರೇಂದ್ರ ಮೋದಿ ತಮ್ಮ ಸಂದೇಶ ಮತ್ತು ಸಲಹೆಗಳಿಗೆ ಯುವಜನರ ಅಗಾಧ ಪ್ರತಿಕ್ರಿಯೆಗಾಗಿ ಧನ್ಯವಾದ ಹೇಳಿದ್ದಕ್ಕೆ ಪ್ರತಿಕ್ರಿಯಿಸಿದ ಗುಪ್ತಾ, ಪ್ರಧಾನಿಯವರ ಹೇಳಿಕೆಗಳು ಪ್ರತಿಯೊಬ್ಬ ಯುವ ಭಾರತೀಯರ ಧ್ವನಿಯನ್ನು ಗೌರವಿಸುವ ಮತ್ತು ಅವರನ್ನು ವಿಕ್ಷಿತ ಭಾರತವನ್ನು ನಿರ್ಮಿಸುವಲ್ಲಿ ಸಕ್ರಿಯ ಪಾಲುದಾರರಾಗಿ ನೋಡುವ ನಾಯಕತ್ವವನ್ನು ಪ್ರತಿಬಿಂಬಿಸುತ್ತವೆ ಎಂದು ಹೇಳಿದರು.

ಏತನ್ಮಧ್ಯೆ, ಪ್ರಧಾನ್ ಅವರ ರಾಜೀನಾಮೆಗೆ ಪ್ರತಿಕ್ರಿಯಿಸಿದ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್, ಕೇಂದ್ರ ಶಿಕ್ಷಣ ಸಚಿವರಾಗಿ, ಅವರು ಭಾರತದ ಶಿಕ್ಷಣ ಭೂದೃಶ್ಯವನ್ನು ಸುಧಾರಿಸುವಲ್ಲಿ ಮತ್ತು ಇತರ ಉಪಕ್ರಮಗಳ ಜೊತೆಗೆ ಹೆಗ್ಗುರುತು ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) 2020 ಅನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ಹೇಳಿದರು. ಪ್ರಧಾನ್ ಅವರ ರಾಜೀನಾಮೆ ನಿರ್ಧಾರವು ಸಾರ್ವಜನಿಕ ಜೀವನದಲ್ಲಿ ಸಮಗ್ರತೆ ಮತ್ತು ನಿಸ್ವಾರ್ಥ ಸೇವೆಯ ಅತ್ಯುನ್ನತ ಮಾನದಂಡಗಳನ್ನು ಪ್ರತಿಬಿಂಬಿಸುತ್ತದೆ ಎಂದು ನಬೀನ್ ಹೇಳಿದರು. "ಈ ನಿರ್ಧಾರದಲ್ಲಿ ಪಕ್ಷವು ಧರ್ಮೇಂದ್ರ ಪ್ರಧಾನ್ ಅವರೊಂದಿಗೆ ದೃಢವಾಗಿ ನಿಲ್ಲುತ್ತದೆ. ಅವರ ಭವಿಷ್ಯದ ಪ್ರಯತ್ನಕ್ಕೆ ನನ್ನ ಶುಭಾಶಯಗಳನ್ನು ಕೋರುತ್ತೇನೆ" ಎಂದು ನಬೀನ್ ಹೇಳಿದರು.

# ಜಂತರ್ ಮಂತರ್‌ನಲ್ಲಿ ಆಹಾರ ನೀಡುತ್ತಿದ್ದ ಜುನೈದ್ ಮನೆಗೆ ಪೊಲೀಸ್ ದಾಳಿ

**ನವದೆಹಲಿ, ಜು. 25:** ದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿರುವ ವಿದ್ಯಾರ್ಥಿಗಳಿಗೆ ಹಾಗೂ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಕಾರ್ಯಕರ್ತರಿಗೆ ಆಹಾರ ಮತ್ತು ನೀರು ಪೂರೈಸುತ್ತಿದ್ದ ಸ್ವಯಂಸೇವಕ ಮೊಹಮ್ಮದ್ ಜುನೈದ್ ಅವರ ಮನೆಯ ಮೇಲೆ ಉತ್ತರ ಪ್ರದೇಶದ ಪೊಲೀಸರು ದಾಳಿ ಮಾಡಿದ್ದಾರೆ. ಪೊಲೀಸರ ಈ ದೌರ್ಜನ್ಯವು ರಾಷ್ಟ್ರಮಟ್ಟದಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದೆ. ನೆಟ್ಟಿಗರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ಶೈಕ್ಷಣಿಕವಾಗಿ ನಡೆದಿರುವ ಹಲವು ಪ್ರಮಾದಗಳ ಹೊಣೆಯನ್ನು ಹೊತ್ತು ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿ ಕಳೆದ 30ಕ್ಕೂ ಹೆಚ್ಚು ದಿನಗಳಿಂದ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಯುತ್ತಿದೆ. ಈ ಪ್ರತಿಭಟನಾ ಸ್ಥಳದಲ್ಲಿ ಜುನೈದ್ ಹಾಗೂ ಅವರ ಸಹೋದ್ಯೋಗಿಗಳು ಉಚಿತವಾಗಿ ಆಹಾರ, ಕುಡಿಯುವ ನೀರು ಹಾಗೂ ಅಗತ್ಯ ಸೌಲಭ್ಯಗಳನ್ನು ತಲುಪಿಸುವ



ಕೆಲಸ ಮಾಡುತ್ತಿದ್ದರು. ಆದರೆ ಪೊಲೀಸರ ಜುನೈದ್ ಮನೆಯ ಮೇಲೆ ದಾಳಿ ನಡೆಸಿದ್ದಾರೆ.

ಸಿಜೆಪಿಯು ತಮ್ಮ ಅಧಿಕೃತ ಟ್ವಿಟರ್ ಖಾತೆಯಲ್ಲಿ ಪೋಸ್ಟ್ ಒಂದನ್ನು ಹಂಚಿಕೊಳ್ಳುವ ಮೂಲಕ ಪೊಲೀಸರ ನಡವಳಿಕೆಯನ್ನು ತೀವ್ರವಾಗಿ ಖಂಡಿಸಿದೆ. ನಮ್ಮ ಸ್ವಯಂಸೇವಕ ಮೊಹಮ್ಮದ್ ಜುನೈದ್ ಪ್ರತಿಭಟನಾ ನಿರತ ಯುವಕರಿಗೆ ಆಹಾರ ಮತ್ತು ನೀರು ಪೂರೈಸುತ್ತಿದ್ದಾರೆ. ಆದರೆ, ಕ್ರಿಮಿನಲ್‌ಗಳನ್ನು ಬಂಧಿಸುವ ಬದಲು, ಸಮಾಜಸೇವೆ ಮಾಡುತ್ತಿರುವ ಜುನೈದ್ ಅವರ ನಿವಾಸದ ಮೇಲೆ ಪೊಲೀಸರು ದಾಳಿ ನಡೆಸಿ, ಅವರ ಕುಟುಂಬಸ್ಥರನ್ನು ಕಸ್ಟಡಿಗೆ ಪಡೆದು ಕಿರುಕುಳ ನೀಡುತ್ತಿದ್ದಾರೆ ಎಂದು ಸಿಜೆಪಿ ಆರೋಪಿಸಿದೆ.

ಇನ್ನು ಈ ಸುದ್ದಿ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದ್ದಂತೆ ನೆಟ್ಟಿಗರು ಸರ್ಕಾರದ ಹಾಗೂ ಪೊಲೀಸ್ ಇಲಾಖೆಯ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹಸಿವಿನಿಂದಿದ್ದ ಪ್ರತಿಭಟನಾಕಾರರಿಗೆ ಆಹಾರ ನೀಡುವುದು ಯಾವ ಕಾನೂನಿನ ಪ್ರಕಾರ ಅಪರಾಧ ಎಂದು ಹಲವರು ಪ್ರಶ್ನಿಸಿದ್ದಾರೆ.

ಎಕ್ಸ್ ಮತ್ತು ಯೂಟ್ಯೂಬ್‌ನಲ್ಲಿ #JantarMantar, #MohammadJunaid ಮುಂತಾದ ಹ್ಯಾಶ್‌ಟ್ಯಾಗ್‌ಗಳ ಅಡಿಯಲ್ಲಿ ಸಾವಿರಾರು ಜನರು ಕಮೆಂಟ್ ಮಾಡಿದ್ದು, ಕೇವಲ ಆಹಾರ ವಿತರಿಸಿದ್ದಕ್ಕಾಗಿ ನಿರಪರಾಧಿ ಕುಟುಂಬದ ಮೇಲೆ ಈ ರೀತಿ ಒತ್ತಡ ಹೇರುವುದು ಪ್ರಜಾಪ್ರಭುತ್ವದ ವಿರೋಧಿ ನಡೆ ಎಂದು ಖಂಡಿಸಿದ್ದಾರೆ. ದೇಶದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಬದಲು ಸೇವಾ ಮನೋಭಾವದ ಯುವಕರನ್ನು ಗುರಿಯಾಗಿಸಲಾಗುತ್ತಿದೆ ಎಂದು ಬಳಕೆದಾರರು ಕಟುವಾಗಿ ಟೀಕಿಸಿದ್ದಾರೆ.



**ಬಿಎಸ್‌ಪಿ ಮುಖ್ಯಸ್ಥೆ ಮತ್ತು ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ ಮಾಯಾವತಿ ಅವರ ನಿವಾಸದ ಹೊರಗೆ, ಸಹಾಯಕ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದ ಅಭ್ಯರ್ಥಿಗಳು ನ್ಯಾಯ ಹಾಗೂ ದೀರ್ಘಕಾಲದಿಂದ ಬಾಕಿ ಉಳಿದಿರುವ ನೇಮಕಾತಿ ಸಮಸ್ಯೆಯ ಪರಿಹಾರವನ್ನು ಕೋರಿ ಪ್ರತಿಭಟನೆ ನಡೆಸಿದರು. ನಂತರ ಪೊಲೀಸರು ಪ್ರತಿಭಟನಾಕಾರರನ್ನು ವಶಕ್ಕೆ ಪಡೆದು, ಶನಿವಾರ ಲಖನೌದ ಇಕೋ ಗಾರ್ಡನ್‌ಗೆ ಕರೆದೊಯ್ದರು.**


# ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ಪ್ರಜಾಪ್ರಭುತ್ವದ ಅತಿದೊಡ್ಡ ಗೆಲುವು: ಕೇಜ್ರಿವಾಲ್

ನವದೆಹಲಿ, ಜುಲೈ 25: ಆಮ್ ಆದ್ಮಿ ಪಕ್ಷದ (ಎಎಪಿ) ರಾಷ್ಟ್ರೀಯ ಸಂಚಾಲಕ ಮತ್ತು ದೆಹಲಿಯ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಶನಿವಾರ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯನ್ನು ಪ್ರಜಾಪ್ರಭುತ್ವದ ಪ್ರಮುಖ ಗೆಲುವು ಎಂದು ಬಣ್ಣಿಸಿದರು, ದೇಶದ ಯುವಕರ ನಿರಂತರ ಹೋರಾಟವು ಸರ್ಕಾರವನ್ನು ಕಾರ್ಯನಿರ್ವಹಿಸುವಂತೆ ಒತ್ತಾಯಿಸಿದೆ ಎಂದು ಹೇಳಿದರು. ಸರ್ಕಾರಗಳು ಅಂತಿಮವಾಗಿ ಜನರ ಧ್ವನಿಯನ್ನು ಕೇಳಬೇಕು ಎಂದು ಸಾಬೀತುಪಡಿಸುವ ಮೂಲಕ ಈ ಬೆಳವಣಿಗೆ ಪ್ರಜಾಪ್ರಭುತ್ವದ ಮೇಲಿನ ನಂಬಿಕೆಯನ್ನು ಪುನಃಸ್ಥಾಪಿಸಿದೆ ಎಂದು ಕೇಜ್ರಿವಾಲ್ ಹೇಳಿದರು. ಸರ್ಕಾರವು ಈಗ ಪರೀಕ್ಷಾ ವ್ಯವಸ್ಥೆಯನ್ನು ಸುಧಾರಿಸುತ್ತದೆ, ಭವಿಷ್ಯದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯನ್ನು ತಡೆಯುತ್ತದೆ ಮತ್ತು ಯಾವುದೇ ಮಗು ಮತ್ತೆ ಆತ್ಮಹತ್ಯೆಗೆ ಶರಣಾಗದಂತೆ ನೋಡಿಕೊಳ್ಳುತ್ತದೆ ಎಂದು ಅವರು ಆಶಿಸಿದರು. ಎಎಪಿ ರಾಷ್ಟ್ರೀಯ



ಸಂಚಾಲಕ "ನಮ್ಮ ದೇಶದ ಯುವಕರಿಗೆ ಮತ್ತು ಜನರಲ್ ಝಡ್‌ಗೆ ಅಭಿನಂದನೆಗಳು. ನಿಮ್ಮ ಹೋರಾಟವು ಫಲ ನೀಡಿರುವುದು ಬಹಳ ಸಂತೋಷದ ವಿಷಯ ಮತ್ತು ಅಂತಿಮವಾಗಿ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕಾಯಿತು. ಇದು ಪ್ರಜಾಪ್ರಭುತ್ವಕ್ಕೆ ಸಿಕ್ಕ ದೊಡ್ಡ ಗೆಲುವು" ಎಂದು ಹೇಳಿದರು.

## ಈ ರಾಜೀನಾಮೆಯೇ ಕೊನೆಯಲ್ಲ: ಜೈರಾಂ ರಮೇಶ್



**ಜೈರಾಮ್ ರಮೇಶ್ ಮಾತನಾಡಿ, ವಿದ್ಯಾರ್ಥಿಗಳು ಮತ್ತು ವಿರೋಧ ಪಕ್ಷಗಳ ಸುದೀರ್ಘ ಒತ್ತಡದ ನಂತರ ಪ್ರಧಾನ್ ರಾಜೀನಾಮೆ ನೀಡಲು ಬಂಧಿತರಾಗಿದ್ದಾರೆ ಎಂದಿದ್ದಾರೆ. ಅಸಮರ್ಥ, ಕರುಣೆಯಿಲ್ಲದ ಮತ್ತು ಅಹಂಕಾರಿ ಮಂತ್ರಿ ಪ್ರಧಾನ್ ಅಂತಿಮವಾಗಿ ರಾಜೀನಾಮೆ ನೀಡಲು ಮುಂದಾಗಿದ್ದಾರೆ. ಯುವಕರ ನಿರಂತರ ಒತ್ತಡವೇ ಪ್ರಧಾನ ಮಂತ್ರಿ ಅವರಿಗೆ ನೀಡುತ್ತಿದ್ದ ರಾಜಕೀಯ ರಕ್ಷಣೆಯನ್ನು ಹಿಂತೆಗೆದುಕೊಳ್ಳುವಂತೆ ಮಾಡಿತು ಎಂದು ರಮೇಶ್ ಹೇಳಿದರು. ಈ ರಾಜೀನಾಮೆಯು ಅಂತ್ಯವಲ್ಲ ಎಂದ ಅವರು, ಪ್ರಧಾನಿ ಮೋದಿ ವಿದ್ಯಾರ್ಥಿಗಳ ಕ್ಷಮೆಯಾಚಿಸಬೇಕು ಹಾಗೂ ಪ್ರತಿಭಟನಾಕಾರರ ವಿರುದ್ಧ ಪೆಲೆಟ್ ಗನ್ ಬಳಸಿರುವ ಆರೋಪ ಸೇರಿ ಪೊ?ಲೀಸ್ ದೌರ್ಜನ್ಯಕ್ಕೆ ಕಾರಣರಾದವರನ್ನು ಹೊಣೆಗಾರರನ್ನಾಗಿ ಮಾಡಬೇಕು ಎಂಬ ಪಕ್ಷದ ಬೇಡಿಕೆಯನ್ನು ಪುನರುಚ್ಚರಿಸಿದರು.**

# ಸರ್ಕಾರದೊಂದಿಗೆ ಒಪ್ಪಂದ ಆರೋಪ ನಿರಾಕರಿಸಿದ ವಾಂಗ್ಚುಕ್

**ನವದೆಹಲಿ, ಜು. 25:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಇತರ ಪರೀಕ್ಷಾ ಅಕ್ರಮಗಳನ್ನು ಖಂಡಿಸಿ ಕಳೆದ 26 ದಿನಗಳಿಂದ ನಡೆಸುತ್ತಿದ್ದ ಉಪವಾಸ ಸತ್ಯಾಗ್ರಹವನ್ನು ಅಂತ್ಯಗೊಳಿಸಲು ಸರ್ಕಾರದೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ ಎಂಬ ಆರೋಪಗಳನ್ನು ಪರಿಸರ ಹೋರಾಟಗಾರ ಸೋನಂ ವಾಂಗ್ಚುಕ್ ಅವರು ಬಲವಾಗಿ ತಳ್ಳಿಹಾಕಿದ್ದಾರೆ. ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆಯುತ್ತಿರುವ ಪ್ರತಿಭಟನೆಯ ಪ್ರಮುಖ ಮುಖವಾಗಿದ್ದವರು ಹವಾಮಾನ ಹೋರಾಟಗಾರ ಸೋನಮ್ ವಾಂಗ್ಚುಕ್. ಸತತ 26 ದಿನಗಳ ಕಾಲ ಉಪವಾಸವಿದ್ದರೂ ನನ್ನ ಪ್ರಾಮಾಣಿಕತೆಯನ್ನು ಸಾಬೀತುಪಡಿಸಲು ಇನ್ನೇನು ಮಾಡಬೇಕು ಎಂದು ಅವರು ಟೀಕಾಕಾರರನ್ನು ಪ್ರಶ್ನಿಸಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ವಿಡಿಯೊ ಸಂದೇಶವೊಂದನ್ನು ಹಂಚಿಕೊಂಡಿರುವ ಅವರು, ಸರ್ಕಾರದೊಂದಿಗೆ ರಾಜಿ ಮಾಡಿಕೊಳ್ಳಲಾಗಿದೆ ಎಂಬ ವದಂತಿಗಳ ಬಗ್ಗೆ



ತೀವ್ರ ಬೇಸರ ವ್ಯಕ್ತಪಡಿಸಿದ್ದಾರೆ. 26 ದಿನಗಳ ಸುದೀರ್ಘ ಉಪವಾಸದ ನಂತರವೂ ನಾನು ನನ್ನ ಪ್ರಾಮಾಣಿಕತೆಯನ್ನು ಸಾಬೀತುಪಡಿಸುವ ಅಗತ್ಯವಿದೆಯೇ ಎಂದು ಅಸಮಾಧಾನ ಹೊರಹಾಕಿರುವ ಅವರು, ಉಪವಾಸ ಕೈಬಿಡುವ ತಮ್ಮ ನಿರ್ಧಾರವನ್ನು ಕೇವಲ ರಾಜಕೀಯ ಊಹಾಪೋಹಗಳ ದೃಷ್ಟಿಕೋನದಿಂದ ನೋಡಬಾರದು ಎಂದು ಮನವಿ ಮಾಡಿದ್ದಾರೆ. ಅಲ್ಲದೆ, ಯಾವುದೇ ನಿರ್ಣಯಕ್ಕೆ ಬರುವ ಮುನ್ನ ಯೂಟ್ಯೂಬ್‌ನಲ್ಲಿ ಲಭ್ಯವಿರುವ 22 ನಿಮಿಷಗಳ ಸಂಪೂರ್ಣ ವಿಡಿಯೊವನ್ನು ವೀಕ್ಷಿಸಿ ಮತ್ತು ಈ ಸಂದೇಶವನ್ನು ಎಲ್ಲರಿಗೂ ತಲುಪಿಸಲು ನೆರವಾಗಿ ಎಂದು ಕೋರಿದ್ದಾರೆ. ಇದಕ್ಕೂ ಮುನ್ನ ವಾಂಗ್ಚುಕ್ ಅವರ ಪತ್ನಿ ಗೀತಾಂಜಲಿ ಆಂಗ್ಮೊ ಅವರು ಮಾತನಾಡಿ, ಉಪವಾಸದ ಪರಿಣಾಮ ವಾಂಗ್ಚುಕ್ ಅವರು ಬರೋಬ್ಬರಿ 11 ಕೆ.ಜಿ. ತೂಕ ಕಳೆದುಕೊಂಡಿದ್ದು, ಸದ್ಯ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ದಯವಿಟ್ಟು ಯಾರೂ ಕೂಡ ಅವರನ್ನು ತಪ್ಪಾಗಿ ನಿರ್ಣಯಿಸಬಾರದು ಎಂದು ಟೀಕಾಕಾರರಲ್ಲಿ ಮನವಿ ಮಾಡಿದ್ದರು. ಕೇಂದ್ರ ಸರ್ಕಾರದೊಂದಿಗಿನ ಸರಣಿ ಮಾತುಕತೆಗಳ ಬಳಿಕ ಶುಕ್ರವಾರ ಗುರುಗ್ರಾಮದ ಮೇದಾಂತ ಆಸ್ಪತ್ರೆಯಲ್ಲಿ ವಾಂಗ್ಚುಕ್ ತಮ್ಮ 26 ದಿನಗಳ ಉಪವಾಸ ಸತ್ಯಾಗ್ರಹವನ್ನು ಅಂತ್ಯಗೊಳಿಸಿದ್ದರು.

# ದೇಶದ ಮೊದಲ ತೈಲಬಾವಿ ಕೊರೆಯುವ ಕಾರ್ಯಕ್ಕೆ ಚಾಲನೆ

ನವದೆಹಲಿ, ಜು.25:: ಮಹಾನದಿ ಜಲಾನಯನದಲ್ಲಿ (ಕರಾವಳಿ ತೀರ) ಮೊದಲ ತೈಲ ಬಾವಿ ಕೊರೆಯುವ ಕಾರ್ಯಕ್ಕೆ ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಶನಿವಾರ ಚಾಲನೆ ನೀಡಿದ್ದಾರೆ.

ನಂತರ ಮಾತನಾಡಿದ ಅವರು, ಇಂಧನ ಭದ್ರತೆಯತ್ತ ಭಾರತದ ಪಯಣದಲ್ಲಿ ಹೊಸ ಅಧ್ಯಾಯದ ಆರಂಭವಾಗಿದೆ. ಈ ಕಾರ್ಯ ಭಾರತದ ಪರಿಶೋಧನೆ ಮತ್ತು ಉತ್ಪಾದನಾ ರಂಗವನ್ನು ರೂಪಾಂತರಿಸಿದ ಒಂದು ದಶಕದ ಸುಧಾರಣೆಗಳ ಫಲಿತಾಂಶವಾಗಿದೆ ಎಂದು ಹೇಳಿದ್ದಾರೆ.

ಮಹಾನದಿ ಕರಾವಳಿ ತೀರದಲ್ಲಿ ಕೊರೆಯಲಾಗುತ್ತಿರುವ ತೈಲಬಾವಿಯು, ಭಾರತದ ಅತ್ಯಂತ ಭರವಸೆಯ ಕರಾವಳಿ ತೀರಗಳನ್ನು ವ್ಯವಸ್ಥಿತವಾಗಿ ಮೌಲ್ಯಮಾಪನ ಮಾಡಲು ಯೋಜಿಸಲಾದ ನಾಲ್ಕು ಆಳಸಮುದ್ರ (Deepwater) ಬಾವಿಗಳಲ್ಲಿ ಮೊದಲನೆಯದಾಗಿದೆ. ಈ ಕೊರೆಯುವಿಕೆಯ ಕಾರ್ಯಕ್ರಮವು ಹೊಸ ಹೈಡ್ರೋಕಾರ್ಬನ್ ಸಂಪನ್ಮೂಲಗಳನ್ನು ಹೊರತರಲು



ಮತ್ತು ಭಾರತದ ದೇಶೀಯ ಉತ್ಪಾದನಾ ಸಾಮರ್ಥ್ಯವನ್ನು ಬಲಪಡಿಸಲು ವಿಶ್ವದರ್ಜೆಯ ಆಳಸಮುದ್ರ ಕೊರೆಯುವ ತಂತ್ರಜ್ಞಾನವನ್ನು ಬಳಸಿಕೊಳ್ಳಲಿದೆ.

ಕಳೆದ ಒಂದು ದಶಕದಲ್ಲಿ, ಸರ್ಕಾರವು ಮೈಲಿಗಲ್ಲಾಗುವಂತಹ ನೀತಿ ಮತ್ತು ನಿಯಂತ್ರಕ ಸುಧಾರಣೆಗಳ ಮೂಲಕ ಪರಿಶೋಧನೆ ಮತ್ತು ಉತ್ಪಾದನಾ ವ್ಯವಸ್ಥೆಯನ್ನು ಮೂಲಭೂತವಾಗಿ ರೂಪಾಂತರಿಸಿದೆ ಎಂದು ಸಚಿವರು ಹೇಳಿದರು.

ಭಾರತದ ಇಂಧನ ಭವಿಷ್ಯವು ಒಂದೇ ಒಂದು ಸಂಶೋಧನೆಯಿಂದ ಭದ್ರವಾಗುವುದಿಲ್ಲ, ಬದಲಿಗೆ ನಿರಂತರ ಸುಧಾರಣೆಗಳು, ಅತ್ಯಾಧುನಿಕ ತಂತ್ರಜ್ಞಾನ, ವೈಜ್ಞಾನಿಕ ಪರಿಶೋಧನೆ ಮತ್ತು ಸಾವಿರಾರು ಭೂವಿ ಜ್ಞಾನಿಗಳು, ಎಂಜಿನಿಯರ್‌ಗಳು, ವಿಜ್ಞಾನಿಗಳು ಮತ್ತು ಆಫ್‌ಶೋರ್ ವೃತ್ತಿಪರರ ಸಮರ್ಪಣೆಯಿಂದ ಭದ್ರವಾಗುತ್ತದೆ ಎಂದು ಸಚಿವರು ಒತ್ತಿಹೇಳಿದರು.

ನಾವು ಇಂದು ಈ ಮೊದಲ ಬಾವಿಯನ್ನು ಪ್ರಾರಂಭಿಸುತ್ತಿರುವಾಗ, ಕೇವಲ ಸಮುದ್ರದಾಳದಲ್ಲಿ ಕೊರೆಯುತ್ತಿಲ್ಲ. ಬದಲಾಗಿ ಪ್ರತಿಯೊಂದು ಮೀಟರ್ ಸಹ ಆಮದು ಅವಲಂಬನೆಯನ್ನು ಕಡಿಮೆ ಮಾಡಲು, ಸ್ವಾವಲಂಬನೆಯನ್ನು ಬಲಪಡಿಸಲು ಮತ್ತು ವಿಕಸಿತ ಭಾರತದ ಕಲ್ಪನೆಯನ್ನು ನನಸು ಮಾಡಲು ನಮ್ಮನ್ನು ಹತ್ತಿರಗೊಳಿಸುತ್ತದೆ," ಎಂದು ಸಚಿವರು ಹೇಳಿದರು.

ಓಎನ್‌ಜಿಸಿ, ಆಯಿಲ್ ಇಂಡಿಯಾ ಸಂಸ್ಥೆ, ಹೈಡ್ರೋಕಾರ್ಬನ್ ಮಹಾನಿರ್ದೇಶನಾಲಯ, ತಾಂತ್ರಿಕ ಪಾಲುದಾರರು ಮತ್ತು ಇಡೀ ಪರಿಶೋಧನಾ ಸಮುದಾಯಕ್ಕೆ ಅಭಿನಂದನೆ ಸಲ್ಲಿಸಿದ ಪುರಿ, ಇಂದಿನ ಕೊರೆಯುವಿಕೆಯ ಪ್ರಾರಂಭವು ಭಾರತದ ಆಫ್‌ಶೋರ್ ಪರಿಶೋಧನಾ ಪ್ರಯತ್ನಗಳನ್ನು ಮತ್ತಷ್ಟು ಬಲಪಡಿಸುತ್ತದೆ ಮತ್ತು ದೇಶದ ದೀರ್ಘಕಾಲೀನ ಇಂಧನ ಭದ್ರತೆ ಹಾಗೂ ಇಂಧನ ಸ್ವಾವಲಂಬನೆಯ ಗುರಿಗೆ ಕೊಡುಗೆ ನೀಡುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ದೆಹಲಿಯ ಬಿಜೆಪಿಯ ಮೊದಲ ಮಹಿಳಾ ಮೇಯರ್ ಶಕುಂತಲಾ ಆರ್ಯ ನಿಧನ

**ನವದೆಹಲಿ, ಜು.25:** ಬಿಜೆಪಿ ದೆಹಲಿಯ ಮೊದಲ ಮಹಿಳಾ ಮೇಯರ್ ಶಕುಂತಲಾ ಆರ್ಯ ಅವರು ಶನಿವಾರ ನಿಧನರಾಗಿದ್ದಾರೆ. ಅವರಿಗೆ 98 ವರ್ಷ ವಯಸ್ಸಾಗಿತ್ತು. ಆರ್ಯ ಅವರು 1997–98ರ ಅವಧಿಗೆ ಮೇಯರ್ ಆಗಿ ಆಯ್ಕೆಯಾಗಿದ್ದರು. ಅವರು ದಕ್ಷಿಣ ದೆಹಲಿಯ ಲಜಪತ್ ನಗರದ ನಿವಾಸಿಯಾಗಿದ್ದರು. ಅವರ ಅಗಲಿಕೆಗೆ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಮತ್ತು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಹರ್ಷ್ ಮಲ್ಹೋತ್ರಾ ಅವರು ತೀವ್ರ ಕಂಬನಿ ಮಿಡಿದಿದ್ದಾರೆ. ಈ ಸುದ್ದಿ ಕೇಳಿ ಹೃದಯ ಒಡೆದುಹೋದಂತಾಗಿದೆ ಎಂದು ಮುಖ್ಯಮಂತ್ರಿ ರೇಖಾ ಗುಪ್ತಾ ಹೇಳಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಬರೆದುಕೊಂಡಿರುವ ಗುಪ್ತಾ, ದೆಹಲಿಯ ಅಭಿವೃದ್ಧಿ, ಸಾರ್ವಜನಿಕ ಸೇವೆ ಮತ್ತು ಪಕ್ಷದ ಸಂಘಟನೆಗೆ ಆರ್ಯ ಅವರು ನೀಡಿದ ಕೊಡುಗೆಯನ್ನು ಯಾವಾಗಲೂ ಗೌರವದಿಂದ ನೆನಪಿಸಿಕೊಳ್ಳಲಾಗುತ್ತದೆ ಎಂದಿದ್ದಾರೆ. "

ಅವರ ಜೀವನವು ಸೇವೆ, ಕರ್ತವ್ಯ ಮತ್ತು ಮಹಿಳಾ ನಾಯಕತ್ವಕ್ಕೆ ಒಂದು ಸ್ಫೂರ್ತಿದಾಯಕ ಉದಾಹರಣೆಯಾಗಿದೆ. ಅಗಲಿದ ಆತ್ಮಕ್ಕೆ ಭಗವಂತ ಶಾಂತಿ ನೀಡಲಿ ಹಾಗೂ ಅವರ ಕುಟುಂಬಕ್ಕೆ ಈ ಅಪಾರ ದುಃಖವನ್ನು ಭರಿಸುವ ಶಕ್ತಿಯನ್ನು ನೀಡಲಿ," ಎಂದು ಅವರು ಪ್ರಾರ್ಥಿಸಿದ್ದಾರೆ. ಮತ್ತೊಂದೆಡೆ, ದೆಹಲಿ ಬಿಜೆಪಿ ಅಧ್ಯಕ್ಷರು ಮಾತನಾಡಿ, ಸಂಘಟನೆ ಮತ್ತು ಕಾರ್ಯಕರ್ತರು ಆರ್ಯ ಅವರ ಸೇವೆಯನ್ನು, ವಿಶೇಷವಾಗಿ 1980 ರ ದಶಕದ ಕೊನೆಯಿಂದ 2010 ರವರೆಗೆ ನೆನಪಿಸಿಕೊಳ್ಳುತ್ತಾರೆ ಎಂದರು. ರಾಷ್ಟ್ರ ರಾಜಧಾನಿಯಲ್ಲಿ ಬಿಜೆಪಿಯ ಮೊದಲ ಮಹಿಳಾ ಮೇಯರ್ ಆಗಿ ಹೊರಹೊಮ್ಮಿದ ಆರ್ಯ ಅವರು ಮಹಿಳಾ ಸಬಲೀಕರಣದ ನಿಜವಾದ ಸಂಕೇತವಾಗಿದ್ದರು ಎಂದು ಮಲ್ಹೋತ್ರಾ ಬಣ್ಣಿಸಿದ್ದಾರೆ.

# ಕನ್ಹಯ್ಯ ಕುಮಾರ್ ಬಂಧನ

**ನವದೆಹಲಿ, ಜು. 25:** ರಾಷ್ಟ್ರೀಯ ವಿದ್ಯಾರ್ಥಿ ಯೂನಿಯನ್ ಉಸ್ತುವಾರಿ, ಕಾಂಗ್ರೆಸ್ ನಾಯಕ ಕನ್ಹಯ್ಯ ಕುಮಾರ್ ಅವರನ್ನು ದೆಹಲಿ ಪೊಲೀಸರು ಶುಕ್ರವಾರ ರಾತ್ರಿ ಬಂಧಿಸಿದ್ದಾರೆ. ದೆಹಲಿಯಲ್ಲಿರುವ ಕೇರಳ ಹೌಸ್ನ ರೆಸಿಡೆಂಟ್ ಕಮಿಷನರ್ ಪುನೀತ್ ಕುಮಾರ್ ಅವರು ನೀಡಿದ ದೂರಿನ ಆಧಾರದ ಮೇಲೆ ಕನ್ಹಯ್ಯರನ್ನು ಬಂಧಿಸಲಾಗಿದೆ ಎಂದು ತಿಳಿದುಬಂದಿದೆ.

ಕನ್ಹಯ್ಯ ಕುಮಾರ್ ಅವರು ತಮ್ಮ ಸ್ನೇಹಿತರೊಬ್ಬರ ಹೆಸರಿನಲ್ಲಿ ಕಾಯ್ದಿರಿಸಲಾಗಿದ್ದ ಕೊಠಡಿಗೆ ಆಗಮಿಸಿದ್ದರು. ಆದರೆ, ಯಾವುದೇ ಕೊಠಡಿ ಖಾಲಿ ಇಲ್ಲ ಎಂದು ಅಧಿಕಾರಿಗಳು ತಿಳಿಸಿದಾಗ, ಅವರು ಸ್ಪಷ್ಟನೆಗಾಗಿ ರೆಸಿಡೆಂಟ್ ಕಮಿಷನರ್ ಅವರನ್ನು ಸಂಪರ್ಕಿಸಿದರು. ಈ ವೇಳೆ ಇಬ್ಬರ ನಡುವೆ ತೀವ್ರ ವಾಕ್ಸಮರ ನಡೆದು, ರೆಸಿಡೆಂಟ್ ಕಮಿಷನರ್ ಅವರು ದೆಹಲಿ ಪೊಲೀಸರಿಗೆ ಕರೆ ಮಾಡಿ ಕನ್ಹಯ್ಯ ಕುಮಾರ್ ಅವರನ್ನು ಆವರಣದಿಂದ ಹೊರ ಕಳಿಸುವಂತೆ ಮನವಿ ಮಾಡಿದ್ದರು. ಇದೇ ಕಾರಣವಾಗಿ ಕನ್ಹಯ್ಯರನ್ನು ಬಂಧಿಸಲಾಗಿದೆ ಎಂದು ವರದಿಯಾಗಿದೆ.

ತಮ್ಮನ್ನು ವಶಕ್ಕೆ ಪಡೆದ ಸಂದರ್ಭದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಕನ್ಹಯ್ಯ ಕುಮಾರ್, ಕೇರಳ ರಾಜ್ಯಪಾಲ ರಾಜೇಂದ್ರ ಅರ್ಲೇಕರ್ ಅವರು ಇಂದು ಕೇರಳ ಹೌಸ್‌ಗೆ ಬರಲಿದ್ದಾರೆ ಎಂದು ನನಗೆ ತಿಳಿಸಲಾಯಿತು. ಕಮೀಸನರ್ ನಡೆಯು ರಾಜ್ಯಪಾಲರು ಬರುತ್ತಿದ್ದಾರೆ, ಅವರು ರಾಜರಿದ್ದಂತೆ ಎಂಬ ಧೋರಣೆಯಲ್ಲಿತ್ತು. ನಾನು ನನ್ನ ಸ್ನೇಹಿತನನ್ನು ಭೇಟಿಯಾಗಲು ಬಂದಿದ್ದೆ. ಆದರೆ, ನನ್ನನ್ನು ಬಂಧಿಸಲಾಗಿದೆ. ಇದು ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ದೆಹಲಿ ಪೊಲೀಸರ ಧೋರಣೆಯನ್ನು ತೋರಿಸುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪ್ರಸ್ತುತ ಕನ್ಹಯ್ಯ ಕುಮಾರ್ ಅವರನ್ನು ನೈಋತ್ಯ ದೆಹಲಿಯ ಜಾಫರ್ಪುರ್ ಕಲಾನ್ ಪೊಲೀಸ್ ಠಾಣೆಯಲ್ಲಿ ಬಂಧನದಲ್ಲಿಡಲಾಗಿದೆ. ಅವರ ಕಚೇರಿಯು ಅವರಿಗೆ ಅಗತ್ಯ ಕಾನೂನು ನೆರವು ಒದಗಿಸುತ್ತಿರುವುದಾಗಿ ತಿಳಿಸಿದೆ.

### ತಂತ್ರಜ್ಞಾನದ ಭವಿಷ್ಯದ ಹೊಸ ಅಲೆ ಸೃಷ್ಟಿಸುವತ್ತ 14ನೇ ಆವೃತ್ತಿಯ ದೃಢಹೆಜ್ಜೆ

# ಆ.3ರಿಂದ ಬೆಂಗಳೂರು ಇಂಡಿಯಾ ನ್ಯಾನೋ ಸಮಾವೇಶ

**ಬೆಂಗಳೂರು, ಜು.25:** ನ್ಯಾನೋ ತಂತ್ರಜ್ಞಾನಕ್ಕೆ ಸಂಬಂಧಿಸಿದಂತೆ ದೇಶದ ಅತಿದೊಡ್ಡ ಹಾಗೂ ಸಮಗ್ರ ಸ್ವರೂಪದ ಅಂತಾರಾಷ್ಟ್ರೀಯ ಸಮ್ಮೇಳನ ಮತ್ತು ಪ್ರದರ್ಶನವಾಗಿರುವ ಬೆಂಗಳೂರು ಇಂಡಿಯಾ ನ್ಯಾನೋ ಸಮಾವೇಶದ 14ನೇ ಆವೃತ್ತಿಯು ಇದೇ ಆಗಸ್ಟ್ 3ರಿಂದ 5ರವರೆಗೆ ನಗರದ ಲಲಿತ್ ಹೋಟೆಲ್‌ನಲ್ಲಿ ನಡೆಯಲಿದೆ.



**ಈ ಆವೃತ್ತಿಯ ಮುಖ್ಯ ಆಶಯವು ನ್ಯಾನೋ ತಂತ್ರಜ್ಞಾನದ ಮುಂದಿನ ಗಡಿ:** ಕೃತಕ ಬುದ್ಧಿಮತ್ತೆ ಮತ್ತು ಅದರಾಚೆಗೆ – ಪರಿಕಲ್ಪನೆ, ಸಮನ್ವಯ, ವಾಣಿಜ್ಯೀಕರಣ ಆಗಿದೆ. ನ್ಯಾನೋ ತಂತ್ರಜ್ಞಾನವು ಕೃತಕ ಬುದ್ಧಿಮತ್ತೆ ಸೇರಿದಂತೆ ಪ್ರವರ್ಧಮಾನಕ್ಕೆ ಬರುತ್ತಿರುವ ತಂತ್ರಜ್ಞಾನಗಳ ಜೊತೆಗೆ ವೇಗವಾಗಿ ಬೆರೆಯುತ್ತಿರುವ ಹೊಸ ಬೆಳವಣಿಗೆಯನ್ನು ಇದು ಸೂಚಿಸುತ್ತದೆ.

ಬೆಂಗಳೂರಿನಲ್ಲಿ ನಡೆಯುತ್ತಿರುವ ಈ ಕಾರ್ಯಕ್ರಮದಲ್ಲಿ ದೇಶ–ವಿದೇಶಗಳ ಖ್ಯಾತ ವಿಜ್ಞಾನಿಗಳು, ಕೈಗಾರಿಕಾ ವಲಯದ ಪ್ರಮುಖರು, ನವೋದ್ಯಮ ಸಂಸ್ಥೆಗಳು, ಹೂಡಿಕೆದಾರರು, ನೀತಿ ನಿರೂಪಕರು ಹಾಗೂ ತಂತ್ರಜ್ಞಾನ ಕ್ಷೇತ್ರದ ಪರಿಣಿತರು ಒಂದೇ ವೇದಿಕೆಯಡಿ ಚಿಂತನೆ–ಮಂಥನ ನಡೆಸಲಿದ್ದಾರೆ. ಪರಸ್ಪರ ಸಹಭಾಗಿತ್ವ ಉತ್ತೇಜಿಸುವ ಜೊತೆಗೆ, ಅತ್ಯಾಧುನಿಕ ಸಂಶೋಧನೆಗಳನ್ನು ಪರಿಚಯಿಸಿ, ನ್ಯಾನೋ ತಂತ್ರಜ್ಞಾನ ಆಧಾರಿತ ಆವಿಷ್ಕಾರಗಳ ವಾಣಿಜ್ಯೀಕರಣಕ್ಕೆ ವೇಗ ನೀಡುವುದಕ್ಕೆ ಸಮಾವೇಶವು ಚಿಮ್ಮು ಹಲಗೆಯಾಗಿ ಕಾರ್ಯನಿರ್ವಹಿಸಲಿದೆ. ಸಮಾವೇಶದ ಪೂರ್ವಭಾವಿ ಕಾರ್ಯಕ್ರಮವು ಇಂದು ವಿಧಾನಸೌಧದಲ್ಲಿ ನಡೆಯಿತು.

ಗೃಹ, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಕಾರ್ಯದರ್ಶಿ ಡಾ. ಮಂಜುಳಾ ಎನ್., ನ್ಯಾನೋ ತಂತ್ರಜ್ಞಾನ ವಿಷನ್ ಗ್ರೂಪ್ ಅಧ್ಯಕ್ಷ ಪ್ರೊ. ನವಕಾಂತ ಭಟ್, ಸಮಾವೇಶದ ಕೇಂದ್ರ ಕಾರ್ಯಕಾರಿ ಸಮಿತಿಯ ಅಧ್ಯಕ್ಷ ಪ್ರೊ. ಅನಿಲ್ ಕುಮಾರ್ ಪಿ.ಎಸ್. ಹಾಗೂ ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ನಿರ್ದೇಶಕರು ಹಾಗೂ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಉತ್ತೇಜನ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಭರತ್ ಎಸ್. ಅವರು ಉಪಸ್ಥಿತರಿದ್ದರು.

ಸಚಿವ ಪ್ರಿಯಾಂಕ್ ಖರ್ಗೆ ಅವರು ಮಾತನಾಡಿ, ದೂರದೃಷ್ಟಿಯ ನೀತಿಗಳು ಹಾಗೂ ಕೈಗಾರಿಕಾ ವಲಯದ ಉತ್ತಮ ಸಹಭಾಗಿತ್ವದ ನೆರವಿನಿಂದ ವಿಜ್ಞಾನ ಕ್ಷೇತ್ರದಲ್ಲಿನ ಶ್ರೇಷ್ಠತೆಯನ್ನು ಸಂಯೋಜಿಸಿದರೆ ಗಮನಾರ್ಹ ಬದಲಾವಣೆ ಸಾಧ್ಯ ಎಂಬುದನ್ನು ಕರ್ನಾಟಕ ನಿರಂತರವಾಗಿ ಸಾಬೀತುಪಡಿಸುತ್ತಾ ಬಂದಿದೆ. ಬೆಂಗಳೂರು ಇಂಡಿಯಾ ನ್ಯಾನೋ ಸಮಾವೇಶವು ಇದೇ ಚಿಂತನೆಯ ಪ್ರತೀಕವಾಗಿದ್ದು, ಸಂಶೋಧಕರು, ನವೋದ್ಯಮಿಗಳು, ನವೋದ್ಯಮ ಸಂಸ್ಥೆಗಳು, ಶೈಕ್ಷಣಿಕ ವಲಯ ಮತ್ತು ಕೈಗಾರಿಕೆಗಳನ್ನು ಒಂದೇ ವೇದಿಕೆಗೆ ಕರೆತಂದು ಸಂಶೋಧನೆಗಳ ವಾಣಿಜ್ಯೀಕರಣಕ್ಕೆ ವೇಗ ನೀಡುತ್ತಿದೆ ಎಂದರು.

ಸಮಾವೇಶದಲ್ಲಿ ಬಹು ವಿಷಯಾಧಾರಿತ ಸಮ್ಮೇಳನಗಳು, ವಿಶೇಷ ಉಪನ್ಯಾಸಗಳು, ಸಮ್ಮೇಳನ ಪೂರ್ವ ತರಬೇತಿ ಕಾರ್ಯಾಗಾರಗಳು, ಕೈಗಾರಿಕಾ ವಲಯದ ದುಂಡುಮೇಜಿನ ಚರ್ಚೆಗಳು, ಪ್ರದರ್ಶನ, ನವೋದ್ಯಮ ಪೆವಿಲಿಯನ್, ನ್ಯಾನೋ ತಂತ್ರಜ್ಞಾನ ರಸಪ್ರಶ್ನೆ, ಸಂಶೋಧನಾ ಪ್ರಬಂಧಗಳ ಪ್ರದರ್ಶನ ಹಾಗೂ ಪ್ರತಿಷ್ಠಿತ ಬೆಂಗಳೂರು ಇಂಡಿಯಾ ನ್ಯಾನೋ ಶ್ರೇಷ್ಠತಾ ಪ್ರಶಸ್ತಿ ಪ್ರದಾನ ಸಮಾರಂಭ ಸೇರಿದಂತೆ ವೈವಿಧ್ಯಮಯ ಕಾರ್ಯಕ್ರಮಗಳು ನಡೆಯಲಿವೆ.

> **ಅತ್ಯಾಧುನಿಕ ಸಂಶೋಧನೆಗಳನ್ನು, ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಬಲ್ಲ ಉತ್ಪನ್ನಗಳು, ಸುಸ್ಥಿರ ಕೈಗಾರಿಕೆಗಳು ಮತ್ತು ಜನರ ಜೀವನಮಟ್ಟ ಸುಧಾರಿಸುವ ಪರಿಹಾರಗಳಾಗಿ ರೂಪಿಸುವ ವ್ಯವಸ್ಥೆ ಅಭಿವೃದ್ಧಿಪಡಿಸಲು ಕರ್ನಾಟಕ ಸರ್ಕಾರ ಬದ್ಧವಾಗಿದೆ –ಪ್ರಿಯಾಂಕ್ ಖರ್ಗೆ, ಗೃಹ, ಐಟಿ–ಬಿಟಿ ಹಾಗೂ ಇ–ಆಡಳಿತ ಸಚಿವ**

ಈ ಎಲ್ಲ ಕಾರ್ಯಕ್ರಮಗಳ ಮೂಲಕ ನಾವೀನ್ಯತೆ, ಸಹಭಾಗಿತ್ವ ಮತ್ತು ಜ್ಞಾನ ವಿನಿಮಯಕ್ಕೆ ಸಮಗ್ರ ವೇದಿಕೆ ಕಲ್ಪಿಸಲಾಗುತ್ತದೆ. ಆಗಸ್ಟ್ 3ರಂದು ಸಮ್ಮೇಳನ ಪೂರ್ವ ವಿಶೇಷ ಕಾರ್ಯಾಗಾರಕ್ಕೆ ಚಾಲನೆ ದೊರೆಯಲಿದೆ. ಆಗಸ್ಟ್ 4 ಮತ್ತು 5ರಂದು ಮುಖ್ಯ ಸಮ್ಮೇಳನ ನಡೆಯಲಿದ್ದು, ನ್ಯಾನೋ ತಂತ್ರಜ್ಞಾನದ ಸಂಶೋಧನೆ ಹಾಗೂ ವಾಣಿಜ್ಯೀಕರಣದ ಅತ್ಯಂತ ಭರವಸೆಯ ಮೂರು ಪ್ರಮುಖ ಕ್ಷೇತ್ರಗಳಾದ ಸೆಮಿಕಂಡಕ್ಟರ್, ಕೃಷಿ ಮತ್ತು ಆರೋಗ್ಯ, ಇಂಧನ ಮತ್ತು ಪರಿಸರ ಕ್ಷೇತ್ರಗಳಲ್ಲಿ ನ್ಯಾನೋ ತಂತ್ರಜ್ಞಾನ ಎಂಬ ವಿಷಯಗಳ ಮೇಲೆ ವಿಶೇಷ ಗಮನ ಹರಿಸಲಾಗುತ್ತದೆ. ಸಮಾವೇಶದ ಧ್ಯೇಯವಾಗಿರುವ ನಾವೀನ್ಯತೆಗಳ ವಾಣಿಜ್ಯೀಕರಣಕ್ಕೆ ಅನುಗುಣವಾಗಿ, ನವೋದ್ಯಮ ಸಂಸ್ಥೆಗಳು ಹಾಗೂ ತಂತ್ರಜ್ಞಾನ ಉದ್ಯಮಿಗಳಿಗೆ ವಿಶೇಷ ಆದ್ಯತೆ ನೀಡಲಾಗುತ್ತಿದೆ.

**ಯುವ ಸಂಶೋಧಕರಿಗೆ ಉತ್ತೇಜನ**

ಯುವ ಸಂಶೋಧಕರು ಹಾಗೂ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವುದು ಈ ಸಮಾವೇಶದ ಪ್ರಮುಖ ಆದ್ಯತೆಗಳಲ್ಲಿ ಒಂದಾಗಿದೆ. ಯುವಕರಿಗಾಗಿ ನ್ಯಾನೋ ಕಾರ್ಯಕ್ರಮ, ನ್ಯಾನೋ ತಂತ್ರಜ್ಞಾನ ರಸಪ್ರಶ್ನೆ ಹಾಗೂ ಬಹು ನಿರೀಕ್ಷಿತ ಸಂಶೋಧನೆಯ ಪಥ ಸಂಶೋಧನಾ ಪ್ರಬಂಧ ಮಂಡನೆ ಮೂಲಕ ಉದಯೋನ್ಮುಖ ಸಂಶೋಧಕರಿಗೆ ತಮ್ಮ ಹೊಸ ಆಲೋಚನೆಗಳನ್ನು ಮಂಡಿಸುವ, ಪರಿಣಾಮಕಾರಿ ಸಂಶೋಧನೆಗಳನ್ನು ಪ್ರದರ್ಶಿಸುವ ಹಾಗೂ ಶೈಕ್ಷಣಿಕ ವಲಯ ಮತ್ತು ಕೈಗಾರಿಕಾ ಕ್ಷೇತ್ರದ ತಜ್ಞರೊಂದಿಗೆ ನೇರವಾಗಿ ಸಂವಾದ ನಡೆಸುವ ಅವಕಾಶ ಒದಗಿಸಲಾಗುತ್ತದೆ.

**ಸಂಶೋಧನಾ ಪ್ರಬಂಧ ಪ್ರದರ್ಶನ ಅನ್ವೇಷಣೆಯ ಪಥ: ಪ್ರಮುಖ ಆಕರ್ಷಣೆ**

ಕಾರ್ಯಕ್ರಮದ ಪ್ರಮುಖ ಆಕರ್ಷಣೆಗಳಲ್ಲಿ ಒಂದಾದ ಸಂಶೋಧನೆಯ ಪಥ ಸಂಶೋಧನಾ ಪ್ರಬಂಧ ಪ್ರದರ್ಶನದಲ್ಲಿ, ನ್ಯಾನೋ ವಿಜ್ಞಾನ ಮತ್ತು ನ್ಯಾನೋ ತಂತ್ರಜ್ಞಾನದ ಭವಿಷ್ಯವನ್ನು ರೂಪಿಸುವ ಸಾಮರ್ಥ್ಯ ಹೊಂದಿರುವ ಅತ್ಯಾಧುನಿಕ ಸಂಶೋಧನೆಗಳನ್ನು ಪ್ರದರ್ಶಿಸಲಾಗುತ್ತದೆ.

**ಶ್ರೇಷ್ಠತಾ ಪ್ರಶಸ್ತಿ:** ಬೆಂಗಳೂರು ಇಂಡಿಯಾ ನ್ಯಾನೋ ಶ್ರೇಷ್ಠತಾ ಪ್ರಶಸ್ತಿಗಳ ಮೂಲಕ ನ್ಯಾನೋ ವಿಜ್ಞಾನ ಮತ್ತು ನ್ಯಾನೋ ತಂತ್ರಜ್ಞಾನ ಕ್ಷೇತ್ರದಲ್ಲಿ ಅತ್ಯಾಧುನಿಕ ಸಂಶೋಧನೆ, ನಾವೀನ್ಯತೆ ಹಾಗೂ ಯಶಸ್ವಿ ಪ್ರಾಯೋಗಿಕ ಅನ್ವಯಗಳ ಮೂಲಕ ಗಮನಾರ್ಹ ಸಾಧನೆ ಮಾಡಿದ ವ್ಯಕ್ತಿಗಳು, ಸಂಶೋಧನಾ ತಂಡಗಳು, ನವೋದ್ಯಮ ಸಂಸ್ಥೆಗಳು ಹಾಗೂ ಸಂಘಟನೆಗಳನ್ನು ಗುರುತಿಸಿ ಗೌರವಿಸಲಾಗುತ್ತದೆ.



ನಟ, ನಿರ್ದೇಶಕ ಜೋಗಿ ಪ್ರೇಮ್ ಅವರು ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಸದಾಶಿವನಗರದ ನಿವಾಸದಲ್ಲಿ ಶನಿವಾರ ಭೇಟಿಮಾಡಿ ಅಭಿನಂದಿಸಿದರು.

### ಮನೆಮನೆಗೆ ಭೇಟಿ ನೀಡಿ ಜಾಗೃತಿ

## ಎಸ್‌ಐಆರ್ ಮಹಾ ಸಂಪರ್ಕ ಅಭಿಯಾನದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭಾಗಿ



**ಬೆಂಗಳೂರು, ಜು.25:** ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್.) ಮಹಾ ಸಂಪರ್ಕ ಅಭಿಯಾನ ಪ್ರಯುಕ್ತ ಶಾಸಕ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಹೆಬ್ಬಾಳ ವಿಧಾನಸಭಾ ಕ್ಷೇತ್ರದ ಮನೆ ಮನೆಗೆ ಶನಿವಾರ ಭೇಟಿ ನೀಡಿ ಕಾರ್ಯಕರ್ತರಿಗೆ ಎಸ್‌ಐಆರ್ ಮಹತ್ವದ ಕುರಿತು ಮಾಹಿತಿ ನೀಡಿದರು.

ರಾಜ್ಯದಾದ್ಯಂತ ಇಂದು ಮತ್ತು ನಾಳೆ ಬಿಜೆಪಿ ವತಿಯಿಂದ ಎಸ್‌ಐಆರ್ ಮಹಾ ಸಂಪರ್ಕ ಅಭಿಯಾನ ನಡೆಯುತ್ತಿದೆ ಎಂದು ಅವರು ತಿಳಿಸಿದ್ದಾರೆ. ಪ್ರತಿಯೊಬ್ಬ ಪ್ರಮುಖ ಕಾರ್ಯಕರ್ತ 20 ಮನೆಗಳಿಗೆ ತೆರಳುವಂತೆ ಗುರಿ ನೀಡಿದ್ದೇವೆ. ಆ ಮನೆಯವರಿಗೆ ಫಾರ್ಮ್ ಸಿಕ್ಕಿದೆಯೇ ಎಂದು ವಿಚಾರಿಸುತ್ತಿದ್ದಾರೆ ಎಂದು ವಿವರಿಸಿದರು. ಪಕ್ಷದ ಪ್ರಮುಖರು ಉಪಸ್ಥಿತರಿದ್ದರು.

ಪ್ರತಿಯೊಬ್ಬ ಕಾರ್ಯಕರ್ತರು ದಿನಕ್ಕೆ 10 ಮನೆಯಂತೆ ಭೇಟಿ ಮಾಡುತ್ತಿದ್ದಾರೆ. ಮತದಾರರ ಜೊತೆ ಐದ್ಹತ್ತು ನಿಮಿಷ ಕಾಲ ಕಳೆದು ಕರಡು ಮತದಾರರ ಪಟ್ಟಿ ಬಳಿಕ ಏನು ಎಂಬ ವಿವರ ನೀಡಲು ತಿಳಿಸಿದ್ದೇವೆ ಎಂದು ಎಸ್.ಐ.ಆರ್ ಮಹಾಭಿಯಾನದ ಸಂಚಾಲಕ ಮತ್ತು ಬಿಜೆಪಿ ಪ್ರಕೋಷ್ಠಗಳ ರಾಜ್ಯ ಸಂಯೋಜಕ ಎಸ್. ದತ್ತಾತ್ರಿ ಅವರು ತಿಳಿಸಿದ್ದಾರೆ.

ನಮ್ಮ ಪಕ್ಷದ ಎಲ್ಲ ಪ್ರಮುಖರು, ಕಾರ್ಯಕರ್ತರಿಗೆ ಎಸ್‌ಐಆರ್ ಕುರಿತಂತೆ ಕಳೆದ 6 ತಿಂಗಳಿನಿಂದ ತರಬೇತಿ ಕೊಡಲಾಗಿದೆ. ಇದಲ್ಲದೇ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಬ್ಬರನ್ನು ಪ್ರಭಾರಿಯಾಗಿ ನೇಮಿಸಿ, ಅವರು ಎಸ್‌ಐಆರ್ ಚಟುವಟಿಕೆ ನೋಡಿಕೊಳ್ಳಲು ತಿಳಿಸಿದ್ದೇವೆ ಎಂದರು.

ಎನ್ಯುಮರೇಷನ್ ಫಾರ್ಮ್ ಭರ್ತಿ ಮಾಡಿ ಬಿಎಲ್‌ಒಗಳಿಗೆ ಕೊಡಬೇಕಿದೆ. ಎನ್ಯುಮರೇಷನ್ ಫಾರ್ಮ್ ಭರ್ತಿ ಮಾಡುವ ವಿಚಾರದಲ್ಲೂ ತರಬೇತಿ ಕೊಟ್ಟಿದ್ದೇವೆ. ಆದರೂ ಇದರ ವಿಚಾರದಲ್ಲಿ ಗೊಂದಲ– ಆತಂಕವಿದೆ ಎಂದು ಹೇಳಿದರು. ಮತದಾರರಿಗೆ ಮಾಹಿತಿ ಕೊಡುವ ಕೆಲಸವನ್ನು ನಾವು ಮಾಡುತ್ತಿದ್ದೇವೆ. ಎಲ್ಲ ಮನೆಗಳನ್ನು ತಲುಪುವ ಉದ್ದೇಶ ಇದರ ಹಿಂದಿದೆ ಎಂದು ಹೇಳಿದ್ದಾರೆ. ಶಾಸಕರು, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರು, ಮಾಜಿ ಶಾಸಕರು, ವಿಧಾನಪರಿಷತ್

## ಗುರುತಿಸಿದ್ದು 5133 ವಾಹನಗಳು, ತೆರವುಗೊಳಿಸಿದ್ದು 54 ಮಾತ್ರ

**ಬೆಂಗಳೂರು, ಜು.25:** ಸಾರ್ವಜನಿಕ ರಸ್ತೆಗಳಲ್ಲಿ ವರ್ಷಗಳಿಂದ ಅನಾಥವಾಗಿ ಬಿದ್ದಿರುವ ವಾಹನಗಳನ್ನು ತೆರವುಗೊಳಿಸುವ ಅಭಿಯಾನ ಆರಂಭಿಸಿರುವ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಇದುವರೆಗೆ ಗುರುತಿಸಿರುವ 5,133 ವಾಹನಗಳ ಪೈಕಿ ಕೇವಲ 54 ವಾಹನಗಳನ್ನು ಮಾತ್ರ ತೆರವುಗೊಳಿಸಲು ಯಶಸ್ವಿಯಾಗಿದೆ. ಎರಡು ವಾರಗಳ ಹಿಂದೆ ಈ ವಿಶೇಷ ಕಾರ್ಯಾಚರಣೆ ಆರಂಭಿಸಲಾಗಿದ್ದು, ಕಳೆದ ವಾರದಿಂದ ವಾಹನಗಳನ್ನು ಟೋಯಿಂಗ್ ಮಾಡುವ ಪ್ರಕ್ರಿಯೆ ಶುರುವಾಗಿದೆ. ಆದರೆ ಐದು ನಗರ ನಿಗಮಗಳ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಿರೀಕ್ಷಿತ ವೇಗದಲ್ಲಿ ಸಾಗುತ್ತಿಲ್ಲ. ಜಿಬಿಎ ಮುಖ್ಯ ಆಯುಕ್ತರ ಮಾಹಿತಿ ಪ್ರಕಾರ, ಬೆಂಗಳೂರು ಸಂಚಾರ ಪೊಲೀಸರು ಹಾಗೂ ಜಿಬಿಎ ಜಂಟಿ ಸಮೀಕ್ಷೆ, ಜೊತೆಗೆ ಸಾರ್ವಜನಿಕರಿಂದ ಬಂದ ದೂರುಗಳ ಆಧಾರದ ಮೇಲೆ ಒಟ್ಟು 5,133 ಅನಾಥ ವಾಹನಗಳನ್ನು ಗುರುತಿಸ ಲಾಗಿದೆ. ಜಿಬಿಎ ಹಿರಿಯ ಅಧಿಕಾರಿ ಯೊಬ್ಬರು ಮಾತನಾಡಿ, "ಇದುವರೆಗೆ ಸುಮಾರು 1,300 ವಾಹನಗಳಿಗೆ ಎಚ್ಚರಿಕೆ ಸ್ಟಿಕ್ಕರ್ ಅಂಟಿಸಲಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ವಾಹನಗಳಿಗೆ ಸ್ಟಿಕ್ಕರ್ ಅಂಟಿಸಿ ತೆರವುಗೊಳಿಸುವ ಕಾರ್ಯವನ್ನು ತೀವ್ರಗೊಳಿಸಲಾಗುತ್ತದೆ. ಪ್ರಸ್ತುತ ಎಸ್‌ಐಆರ್ (ಖಖಖ) ಸಂಬಂಧಿತ ಕೆಲಸಗಳಿಗೆ ಹೆಚ್ಚಿನ ಅಧಿಕಾರಿಗಳನ್ನು ನಿಯೋಜಿಸಿರುವುದರಿಂದ ಈ ಕಾರ್ಯ ಸ್ವಲ್ಪ ನಿಧಾನವಾಗಿದೆ. ಶೀಘ್ರದಲ್ಲೇ ಗುರಿ ನಿಗದಿಪಡಿಸಿ ವಾಹನ ತೆರವು ಕಾರ್ಯಕ್ಕೆ ವೇಗ ನೀಡಲಾಗುತ್ತದೆ" ಎಂದು ತಿಳಿಸಿದ್ದಾರೆ.



**ಎಐ ತಂತ್ರಜ್ಞಾನದಿಂದಲೂ ವಾಹನಗಳ ಪತ್ತೆ:** ಅಧಿಕಾರಿಗಳ ಮಾಹಿತಿ ಪ್ರಕಾರ, ಒಟ್ಟು ಪ್ರಕರಣಗಳ ಪೈಕಿ 2,367 ವಾಹನಗಳನ್ನು ಬೆಂಗಳೂರು ಸಂಚಾರ ಪೊಲೀಸರು ಮತ್ತು ಜಿಬಿಎ ನಡೆಸಿದ ಸಮೀಕ್ಷೆಯಲ್ಲಿ ಗುರುತಿಸಲಾಗಿದೆ. ಈ ಸಮೀಕ್ಷೆಯನ್ನು Actionable Intelligence for Sustainable Traffic Management ಎಂಬ ಎಐ ಆಧಾರಿತ ತಂತ್ರಜ್ಞಾನದ ಮೂಲಕ ನಡೆಸಲಾಗಿದ್ದು, ಸಂಚಾರ ನಿಯಮ ಉಲ್ಲಂಘನೆಗಳನ್ನು ಪತ್ತೆಹಚ್ಚಲು ಈ ವ್ಯವಸ್ಥೆಯನ್ನು ಬಳಸಲಾಗುತ್ತಿದೆ. ಉಳಿದ 2,766 ವಾಹನಗಳ ಕುರಿತು ಸಾರ್ವಜನಿಕರು ಜಿಬಿಎ ಹಾಗೂ ಸಂಚಾರ ಪೊಲೀಸರಿಗೆ ದೂರು ನೀಡಿದ್ದಾರೆ.

**15 ದಿನಗಳಲ್ಲಿ ಮಾಲೀಕರು ಬಾರದಿದ್ದರೆ ಹರಾಜು:** ಈ ಹಿಂದೆ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು, ಅನಾಥ ವಾಹನಗಳ ವಿರುದ್ಧ ಮೊದಲ ಬಾರಿ ?500 ದಂಡ ವಿಧಿಸಲಾಗುವುದು. ಮರುಕಳಿಸಿದರೆ ದಂಡವನ್ನು ದ್ವಿಗುಣಗೊಳಿಸಲಾಗುವುದು ಎಂದು ಘೋಷಿಸಿದ್ದರು. ಅಲ್ಲದೆ, 15 ದಿನಗಳೊಳಗೆ ವಾಹನದ ಮಾಲೀಕರು ಮುಂದೆ ಬರದಿದ್ದರೆ, ಅಂತಹ ವಾಹನಗಳನ್ನು ಜಿಬಿಎ ಹರಾಜು ಹಾಕಲಿದೆ ಎಂದು ಅವರು ತಿಳಿಸಿದ್ದರು.

**ಸಾರ್ವಜನಿಕರಿಂದ ಸ್ವಾಗತ:** ಜಿಬಿಎ ಕೈಗೊಂಡಿರುವ ಈ ಕ್ರಮಕ್ಕೆ ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ಬೆಂಗಳೂರಿನ ನಿವಾಸಿಗಳಿಂದ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ. ಸಾರ್ವಜನಿಕ ರಸ್ತೆಗಳ ಮೇಲೆ ದೀರ್ಘಕಾಲದಿಂದ ಬಿದ್ದಿರುವ ಅನಾಥ ವಾಹನಗಳಿಂದ ಪಾದಚಾರಿಗಳ ಸಂಚಾರಕ್ಕೆ ತೊಂದರೆ ಉಂಟಾಗುತ್ತಿದೆ. ಅಲ್ಲದೆ, ಇವು ನಗರದ ಸೌಂದರ್ಯ ಹಾಳು ಮಾಡುವುದರ ಜೊತೆಗೆ ಸ್ವಚ್ಛತೆ, ಆರೋಗ್ಯ ಸಮಸ್ಯೆಗಳನ್ನು ಉಂಟು ಮಾಡುತ್ತಿವೆ. ಅನೇಕ ಕಡೆ ಇಂತಹ ವಾಹನಗಳು ಇಲಿ ಸೇರಿದಂತೆ ಕೀಟಗಳ ಆಶ್ರಯ ತಾಣಗಳಾಗಿದ್ದು, ಅಪಘಾತಗಳಿಗೆ ಕಾರಣವಾಗುವ 'ಬ್ಲ್ಯಾಕ್ ಸ್ಪಾಟ್'ಗಳಾಗಿಯೂ ಪರಿಣಮಿಸುತ್ತಿವೆ ಎಂಬ ಆತಂಕವನ್ನು ನಿವಾಸಿಗಳು ವ್ಯಕ್ತಪಡಿಸಿದ್ದಾರೆ.

## ಧಾರ್ಮಿಕ ದತ್ತಿ ಇಲಾಖೆ ಕಿರಿಯ ಶ್ರೇಣಿ ಅಧಿಕಾರಿಗಳಿಗೆ ಮುಂಬಡ್ತಿ ನೀಡಿ ಸರ್ಕಾರ ಆದೇಶ

**ಬೆಂಗಳೂರು, ಜು.25:** ಧಾರ್ಮಿಕ ದತ್ತಿ ಇಲಾಖೆಯಲ್ಲಿ ಮಹತ್ವದ ಆಡಳಿತಾತ್ಮಕ ಬದಲಾವಣೆ ಜಾರಿಯಾಗಿದೆ. ಸಮೂಹ ಎ ಕಿರಿಯ ಶ್ರೇಣಿ ಅಧಿಕಾರಿಗಳಿಗೆ ಹಿರಿಯ ಶ್ರೇಣಿ ಹುದ್ದೆಗೆ ಮುಂಬಡ್ತಿ ನೀಡಿ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರ ಆದೇಶ ಹೊರಡಿಸಿದೆ.

ಪಿ. ಜಯಮ್ಮ ಸಹಾಯಕ ಆಯುಕ್ತರು, ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು – ಕಾರ್ಯನಿರ್ವಾಹಕ ಅಧಿಕಾರಿ, ಕೊಲ್ಲೂರು ಶ್ರೀ ಮೂಕಾಂಬಿಕಾ ದೇವಾಲಯ, ಉಡುಪಿ ಜಿಲ್ಲೆ (ಖಾಲಿ ಹುದ್ದೆ).

ಸಿ.ಜಿ. ಕೃಷ್ಣ, ಕಾರ್ಯನಿರ್ವಾಹಕ ಅಧಿಕಾರಿ, ಶ್ರೀಕಂಠೇಶ್ವರಸ್ವಾಮಿ ದೇವಾಲಯ, ನಂಜನಗೂಡು – ಕಾರ್ಯದರ್ಶಿ, ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ, ಮೈಸೂರು (ಶ್ರೀಮತಿ ಎಂ.ಜೆ. ರೂಪಾ ಅವರ ಜಾಗಕ್ಕೆ).

ಎಸ್. ಲಕ್ಷ್ಮೀನಾರಾಯಣ, ಕಾರ್ಯನಿರ್ವಾಹಕ ಅಧಿಕಾರಿ, ಶ್ರೀ ಕಬ್ಬಾಳಮ್ಮ ದೇವಾಲಯ, ರಾಮನಗರ – ಕಾರ್ಯನಿರ್ವಾಹಕ ಅಧಿಕಾರಿ, ಶ್ರೀಕಂಠೇಶ್ವರಸ್ವಾಮಿ ದೇವಾಲಯ, ನಂಜನಗೂಡು, ಮೈಸೂರು (ಖಾಲಿ ಹುದ್ದೆ). ಪ್ರಶಾಂತ್ ಕುಮಾರ್ ಶೆಟ್ಟಿ ಅವರನ್ನು ಸಹಾಯಕ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ದಕ್ಷಿಣ ಕನ್ನಡ, ಮಂಗಳೂರು ಹುದ್ದೆಗೆ ನಿಯುಕ್ತಿಗೊಳಿಸಲಾಗಿದೆ.

ಎಂ.ಜೆ. ರೂಪ ಅವರ ಸೇವೆಯನ್ನು ಅವರ ಮೂಲ ಇಲಾಖೆಯಾದ ಸಿಬ್ಬಂದಿ ಆಡಳಿತ ಸುಧಾರಣೆ ಇಲಾಖೆಗೆ ಹಿಂದಿರುಗಿಸಲಾಗಿದೆ.

## ಉಮರ್‌ಖಾಲಿದ್ ಪರ ಪೋಸ್ಟರ್ ವಶಕ್ಕೆ ಪಡೆದ ಪೊಲೀಸರು

**ಬೆಂಗಳೂರು, ಜು.25:** ನಗರದ ಫ್ರೀಡಂ ಪಾರ್ಕ್‌ನಲ್ಲಿ ನಡೆದ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿರೋಧಿ ಪ್ರತಿಭಟನೆ ವೇಳೆ 2020ರ ದೆಹಲಿ ಗಲಭೆ ಪ್ರಕರಣದ ಆರೋಪಿ ಉಮರ್ ಖಾಲಿದ್ ಪರವಾಗಿ ಪೋಸ್ಟರ್ ಪ್ರದರ್ಶಿಸಿದ್ದು ವಿವಾದಕ್ಕೆ ಕಾರಣವಾಗಿದೆ.

ಪ್ರತಿಭಟನೆಯ ವೇಳೆ ಮಹಿಳೆಯೊಬ್ಬರು 2020ರ ಈಶಾನ್ಯ ದೆಹಲಿ ಗಲಭೆ ಪ್ರಕರಣದ ಆರೋಪಿಗಳಾದ ಉಮರ್ ಖಾಲಿದ್ ಮತ್ತು ಶರ್ಜೀಲ್ ಇಮಾಮ್ ಪರ ಪೋಸ್ಟರ್ ಪ್ರದರ್ಶಿಸಿದ್ದರಿಂದ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು. ವಿದ್ಯಾರ್ಥಿಗಳ ಪ್ರತಿಭಟನೆ ನಡೆಯುತ್ತಿದ್ದ ವೇಳೆ ಮಹಿಳೆಯೊಬ್ಬರು ಉಮರ್ ಖಾಲಿದ್ ಹಾಗೂ ಶರ್ಜೀಲ್ ಇಮಾಮ್ ಬೆಂಬಲಿಸುವ ಪೋಸ್ಟರ್ ಹಿಡಿದುಕೊಂಡಿದ್ದರು.

ಇಂತಹ ಪೋಸ್ಟರ್‌ಗಳು ಪ್ರತಿಭಟನೆಯ ಮೂಲ ಉದ್ದೇಶವನ್ನು ಹಾಳು ಮಾಡುತ್ತವೆ ಎಂದು ಹೇಳಿ, ಮಹಿಳೆಗೆ ಸ್ಥಳದಿಂದ ತೆರಳುವಂತೆ ಸೂಚಿಸಿದರು. ವಿಷಯ ಪೊಲೀಸರ ಗಮನಕ್ಕೂ ಬಂದಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸರು ತಕ್ಷಣವೇ ಅದನ್ನು ವಶಪಡಿಸಿಕೊಂಡರು.


## ಪತ್ರಿಕೋದ್ಯಮದಲ್ಲಿ ನೈತಿಕತೆ ತರಲು ಮಾಧ್ಯಮ ಆಯೋಗ ಅಥವಾ ಒಂಬುಡ್ಸ್ ಮನ್ ರಚಿಸಿ: ಮುಖ್ಯಮಂತ್ರಿಗೆ ಎಂ.ಎ.ಪೊನ್ನಪ್ಪ ಮನವಿ

**ಬೆಂಗಳೂರು,ಜು.25:** ಮುದ್ರಣ. ದೂರದರ್ಶನ, ಡಿಜಿಟಲ್ ಸುದ್ದಿ, ಆನ್‌ಲೈನ್ ಪ್ರಕಟಣೆಗಳು ಮತ್ತು ಸಾಮಾಜಿಕ ಮಾಧ್ಯಮ ಸೇರಿದಂತೆ ಎಲ್ಲಾ ವೇದಿಕೆಗಳಲ್ಲಿ ಮಾಧ್ಯಮ ವೃತ್ತಿಪರರ ನಡವಳಿಕೆಯಲ್ಲಿ ಹೊಣೆಗಾರಿಕೆಯನ್ನು ಮೇಲ್ವಿಚಾರಣೆ ಮಾಡಲು ಮಾಧ್ಯಮ ಆಯೋಗ ಅಥವಾ ಒಂಬುಡ್ಸ್ ಮನ್ ಸ್ಥಾಪಿಸಬೇಕೆಂದು ಹಿರಿಯ ಪತ್ರಕರ್ತರ ವೇದಿಕೆ ಅಧ್ಯಕ್ಷ ಎಂ.ಎ. ಪೊನ್ನಪ್ಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಮಾಡಿದ್ದಾರೆ.

ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿದ ಎಂ.ಎ.ಪೊನ್ನಪ್ಪ, ಮಾಧ್ಯಮ ಕ್ಷೇತ್ರದ ಮೇಲ್ವಿಚಾರಣೆ ಮಾಡಲು ಕಾನೂನು, ಶೈಕ್ಷಣಿಕ ಮತ್ತು ತಂತ್ರಜ್ಞಾನ ಕ್ಷೇತ್ರಗಳ ಪ್ರಾತಿನಿಧ್ಯದೊಂದಿಗೆ ನಿವೃತ್ತ ಹೈಕೋರ್ಟ್ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಸ್ವತಂತ್ರ ಮಾಧ್ಯಮ ಆಯೋಗವನ್ನು (ಮಾಧ್ಯಮ ಒಂಬುಡ್ಸ್ ಮನ್) ಸ್ಥಾಪಿಸುವ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಕೋರಿದ್ದಾರೆ.

ಇಂತಹ ಶಾಸನಬದ್ಧ, ಸ್ವಾಯತ್ತ ಸಂಸ್ಥೆಯು ನೈತಿಕ ಪತ್ರಿಕೋದ್ಯಮವನ್ನು ಎತ್ತಿಹಿಡಿಯಲು, ವಾಕ್ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ರಕ್ಷಿಸಲು ಮತ್ತು ಸ್ವಾತಂತ್ರ್ಯದ ಜವಾಬ್ದಾರಿತನವನ್ನು ಖಚಿತಪಡಿಸಿಕೊಳ್ಳಲು, ತಪ್ಪು ಮಾಹಿತಿ, ಪಾವತಿ ಸುದ್ದಿ, ದ್ವೇಷಭಾಷಣ, ಅನೈತಿಕ ವರದಿಗಾರಿಕೆ ತಡೆಯಲು ನಿಷ್ಪಕ್ಷಪಾತವಾಗಿ ಮಾಧ್ಯಮ ಕಾರ್ಯನಿರ್ವಹಿಸಲು ಇಂತಹ ಆಯೋಗದ ಅಗತ್ಯವಿದೆ. ಆಯೋಗವನ್ನು ಸ್ಪಷ್ಟ ಮಾಧ್ಯಮ ನೀತಿಯ ಆಧಾರದ ಮೇಲೆ ರಚಿಸಬೇಕು ಮತ್ತು ಅದರ ಮೂಲ ಉದ್ದೇಶಗಳಲ್ಲಿ ಒಂದು ಪತ್ರಕರ್ತರ ಹಕ್ಕುಗಳನ್ನು ರಕ್ಷಿಸುವ ಕಾನೂನಾಗಿರಬೇಕು. ಎಂದು ಪ್ರತಿಪಾದಿಸಿದ್ದಾರೆ.

ಜೊತೆಗೆ ಹಿರಿಯ ಪತ್ರಕರ್ತರ ಕಲ್ಯಾಣದ ಜೊತೆಗೆ ಅವರ ಘನತೆ ಮತ್ತು ಆರ್ಥಿಕ ಭದ್ರತೆಯನ್ನು ಒದಗಿಸಲು ಕ್ರಮ ತೆಗೆದುಕೊಳ್ಳಬೇಕು. ಹಿರಿಯ ಪತ್ರಕರ್ತರು ಜನರ ಧ್ವನಿಯನ್ನು ಪ್ರತಿನಿಧಿಸುವಲ್ಲಿ ಮತ್ತು ಸಂಸ್ಥೆಗಳನ್ನು ಹೊಣೆಗಾರರನ್ನಾಗಿ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಪತ್ರಿಕೋದ್ಯಮವು ವಾಣಿಜ್ಯ ಹಿತಾಸಕ್ತಿಗಳಿಗಿಂತ ಹೆಚ್ಚಾಗಿ ಸೇವಾ ಮನೋಭಾವದಿಂದ ಪ್ರೇರೇಪಿಸಲ್ಪಟ್ಟಿದ್ದ ಕಾಲಘಟ್ಟದಲ್ಲಿ, ಅನೇಕರು ತಮ್ಮ ಇಡೀ ವೃತ್ತಿಜೀವನವನ್ನು ಸಾರ್ವಜನಿಕ ಸೇವೆಗಾಗಿ ಮುಡಿಪಾಗಿಟ್ಟಿದ್ದಾರೆ. ಅವರು ಹೆಚ್ಚಾಗಿ ಅತ್ಯಲ್ಪ ವೇತನಕ್ಕೆ ಕಠಿಣ ಪರಿಸ್ಥಿತಿಗಳಲ್ಲಿ ಮತ್ತು ಶಾಸನಬದ್ಧ ವೇತನ ರಕ್ಷಣೆಗಳ ಸಂಪೂರ್ಣ ಪ್ರಯೋಜನಗಳಿಲ್ಲದೆ ಸೇವೆ ಸಲ್ಲಿಸಿದ್ದಾರೆ.



ಇಂದು ಅನೇಕ ಹಿರಿಯ ಪತ್ರಕರ್ತರು ಆರ್ಥಿಕ ಸಂಕಷ್ಟ, ಅಸಮರ್ಪಕ ಆರೋಗ್ಯ ಸೇವೆಗಳು ಮತ್ತು ಪದೇಪದೇ ಆಡಳಿತಾತ್ಮಕ ತೊಂದರೆಗಳನ್ನು ಎದುರಿಸುತ್ತಿದ್ದಾರೆ. ಕನಿಷ್ಠ ಮೂಲಭೂತ ಸೌಲಭ್ಯಗಳನ್ನು ಪಡೆಯಲು ಅವರು ಅನೇಕ ಅಧಿಕಾರಿಗಳ ಬಳಿ ಅಲೆಯಬೇಕಾದ ಅನಿವಾರ್ಯತೆಗೆ ಸಿಲುಕಿದ್ದಾರೆ. ಸುಸ್ಥಿರ ಪಿಂಚಣಿ ಯೋಜನೆ, ಕೈಗೆಟುಕುವ ದರದಲ್ಲಿ ಆರೋಗ್ಯ ಸೇವೆಗಳ ಲಭ್ಯತೆ, ಗೌರವಧನ ಮತ್ತು ರಾಜ್ಯಮಟ್ಟದ ಮಾನ್ಯತೆ ನೀಡಲು ಕ್ರಮ ತೆಗೆದುಕೊಳ್ಳಬೇಕು.

ಸ್ವತಂತ್ರ ಪತ್ರಕರ್ತರ ಮಾನ್ಯತಾ ಪತ್ರದ ಪ್ರಕ್ರಿಯೆಯ ಸರಳೀಕರಣಗೊಳಿಸಬೇಕು. 25 ವರ್ಷಗಳಿಗೂ ಹೆಚ್ಚು ವೃತ್ತಿಪರ ಸೇವೆ ಸಲ್ಲಿಸಿರುವ ಅನೇಕ ಹಿರಿಯ ಪತ್ರಕರ್ತರು ವಾರ್ಷಿಕ ನವೀಕರಣದ ಸಮಯದಲ್ಲಿ ಅನಗತ್ಯ ಅಧಿಕಾರಶಾಹಿ ಅಡೆತಡೆಗಳು ಮತ್ತು ಅಸಮರ್ಪಕ ನಡವಳಿಕೆಗಳನ್ನು ಎದುರಿಸುತ್ತಿದ್ದಾರೆ. ಸೂಕ್ತ ವೃತ್ತಿಪರ ಮಾನದಂಡಗಳು ಮತ್ತು ಪರಿಶೀಲನೆಗೆ ಒಳಪಟ್ಟು, ಅರ್ಹ ಹಿರಿಯ ಪತ್ರಕರ್ತರಿಗೆ ದೀರ್ಘಾವಧಿಯ, ಜೀವಿತಾವಧಿಯ ಅಥವಾ ಸರಳೀಕೃತ ಮಾನ್ಯತಾ ಪ್ರಕ್ರಿಯೆಯನ್ನು ಪರಿಚಯಿಸಬೇಕೆಂದು ಎಂ.ಎ. ಪೊನ್ನಪ್ಪ ಮನವಿ ಮಾಡಿದ್ದಾರೆ.

### ಕಾರ್ಗಿಲ್ ವಿಜಯೋತ್ಸವ: 1,200ಕ್ಕೂ ಹೆಚ್ಚು ಮಂದಿ ಭಾಗಿ

## ಹುತಾತ್ಮಯೋಧರಿಗೆ ಗೌರವ ನಮನ ಸಲ್ಲಿಸಿದ ಭವ್ಯ ಕಾರ್ಗಿಲ್ ರನ್

**ಬೆಂಗಳೂರು, ಜು.25:** ಕಾರ್ಗಿಲ್ ವಿಜಯೋತ್ಸವದ 27ನೇ ವರ್ಷದ ಸ್ಮರಣಾರ್ಥ ಅಖಿಲ ಕರ್ನಾಟಕ ಮಾಜಿ ಸೈನಿಕರ ಫೌಂಡೇಶನ್ ಹಾಗೂ ಪ್ರಿಯಾಕೃಷ್ಣ ಫೌಂಡೇಶನ್ ಸಂಯುಕ್ತ ಆಶ್ರಯದಲ್ಲಿ ವಿಜಯನಗರದ ಬಿಜಿಎಸ್ ಮೈದಾನದಲ್ಲಿ ಆಯೋಜಿಸಿದ್ದ 'ಕಾರ್ಗಿಲ್ ರನ್–2026' (5 ಕಿ.ಮೀ. ಮ್ಯಾರಥಾನ್ ಮತ್ತು ವಾಕ್‌ಥಾನ್) ದೇಶಭಕ್ತಿ, ಶಿಸ್ತು ಹಾಗೂ ರಾಷ್ಟ್ರೀಯ ಏಕತೆಯ ಸಂಕೇತವಾಗಿ ಅತ್ಯಂತ ಯಶಸ್ವಿಯಾಗಿ ನಡೆಯಿತು.

ಕಾರ್ಗಿಲ್ ಯುದ್ಧದಲ್ಲಿ ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ವೀರ ಯೋಧರ ತ್ಯಾಗ, ಸಾಹಸ ಮತ್ತು ದೇಶಪ್ರೇಮವನ್ನು ಸ್ಮರಿಸುವ ಉದ್ದೇಶದಿಂದ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಸುಮಾರು 1,200ಕ್ಕೂ ಹೆಚ್ಚು ಮಾಜಿ ಸೈನಿಕರು, ಸೇವೆಯಲ್ಲಿರುವ ಸೈನಿಕರು, ಶಾಲಾ–ಕಾಲೇಜು ವಿದ್ಯಾರ್ಥಿಗಳು, ಹಿರಿಯ ನಾಗರಿಕರು, ವಿವಿಧ ಸಂಘ–ಸಂಸ್ಥೆಗಳ ಸದಸ್ಯರು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಭಾಗವಹಿಸಿದರು.




ಕಾರ್ಗಿಲ್ ಯುದ್ಧದ ಹುತಾತ್ಮ ಯೋಧ ಶಿವಬಸಯ್ಯ ಅವರ ಧರ್ಮಪತ್ನಿ ಶ್ರೀಮತಿ ನಿರ್ಮಲಾ ಕುಲಕರ್ಣಿ ಹಾಗೂ ಕೊಪ್ಪಳದ ಶ್ರೀಮತಿ ಸರೋಜ ಮಲ್ಲಯ್ಯ ಮೇಗಲಮಠ ಅವರು ರಾಷ್ಟ್ರಧ್ವಜ ಪ್ರದರ್ಶಿಸುವ ಮೂಲಕ ಮ್ಯಾರಥಾನ್‌ಗೆ ಚಾಲನೆ ನೀಡಿದರು.

ಮ್ಯಾರಥಾನ್ ವಿಜಯನಗರದ ಬಿಜಿಎಸ್ ಮೈದಾನದಿಂದ ಆರಂಭವಾಗಿ ಗೋವಿಂದರಾಜನಗರ ಅತ್ತಿಗುಪ್ಪೆ ವೃತ್ತದವರೆಗೆ ಸುಮಾರು 5 ಕಿಲೋಮೀಟರ್ ಸಂಚರಿಸಿ ಪುನಃ ಬಿಜಿಎಸ್ ಮೈದಾನಕ್ಕೆ ತಲುಪಿತು. ಮಾರ್ಗದುದ್ದಕ್ಕೂ ಭಾಗವಹಿಸಿದ್ದವರು ದೇಶಭಕ್ತಿ ಘೋಷಣೆಗಳನ್ನು ಕೂಗಿ ಕಾರ್ಗಿಲ್ ವೀರ ಯೋಧರಿಗೆ ಗೌರವ ನಮನ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ವಿಧಾನಸಭಾ ಸದಸ್ಯರಾದ ಪ್ರಿಯಾಕೃಷ್ಣ ಅವರು ಭಾಗವಹಿಸಿ ದೇಶ ರಕ್ಷಣೆಗಾಗಿ ತಮ್ಮ ಅಮೂಲ್ಯ ಜೀವವನ್ನು ಅರ್ಪಿಸಿದ ಯೋಧರ ಸೇವೆಯನ್ನು ಸ್ಮರಿಸಿದರು. ಇಂತಹ ಕಾರ್ಯಕ್ರಮಗಳು ಯುವಜನರಲ್ಲಿ ದೇಶಭಕ್ತಿ, ಶಿಸ್ತು, ಸೇವಾ ಮನೋಭಾವ ಹಾಗೂ ರಾಷ್ಟ್ರೀಯ ಏಕತೆಯ ಮೌಲ್ಯಗಳನ್ನು ಬೆಳೆಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ಅಖಿಲ ಕರ್ನಾಟಕ ಮಾಜಿ ಸೈನಿಕರ ಫೌಂಡೇಶನ್ ಅಧ್ಯಕ್ಷ ಶಿವಣ್ಣ ಮಾತನಾಡಿ, ಕಾರ್ಗಿಲ್ ಯುದ್ಧದಲ್ಲಿ ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ಹುತಾತ್ಮ ಯೋಧರ ತ್ಯಾಗವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಹಾಗೂ ರಾಷ್ಟ್ರಸೇವೆಯ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಈ ಮ್ಯಾರಥಾನ್ ಆಯೋಜಿಸಲಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಫೌಂಡೇಶನ್ ಕಾರ್ಯದರ್ಶಿ ಉಮಾಶಂಕರ್, ಉತ್ತಪ್ಪ, ನಾಗರಾಜ್, ಕೃಷ್ಣಕುಮಾರ್, ನಾರಾಯಣ್ ಸೇರಿದಂತೆ ಮಾಜಿ ಸೈನಿಕರು, ಗಣ್ಯರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಮ್ಯಾರಥಾನ್‌ನಲ್ಲಿ ಭಾಗವಹಿಸಿದ ಎಲ್ಲರಿಗೂ ಸ್ಮರಣಿಕೆ ಪದಕ, ಟಿ–ಶರ್ಟ್ ಹಾಗೂ ಇ–ಪ್ರಮಾಣ ಪತ್ರ ವಿತರಿಸಲಾಯಿತು. ಕಾರ್ಯಕ್ರಮವು ರಾಷ್ಟ್ರಗೀತೆ ಹಾಗೂ ಭಾರತ ಮಾತೆಗೆ ಜಯ ಘೋಷದೊಂದಿಗೆ ದೇಶಭಕ್ತಿಯ ವಾತಾವರಣದಲ್ಲಿ ಯಶಸ್ವಿಯಾಗಿ ಸಮಾಪ್ತಿಯಾಯಿತು.

### ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಸೆಕ್ಷನ್ 353(2) ರ ಅಡಿಯಲ್ಲಿ ಪ್ರಕರಣ

## ದ್ವೇಷಭಾಷಣ ಆರೋಪ: ಎಂಎಲ್‌ಸಿ ಸಿ.ಟಿ. ರವಿ ವಿರುದ್ಧ ಎಫ್‌ಐಆರ್ ದಾಖಲು

**ಬೆಂಗಳೂರು, ಜು.25:** ದೇಶಾದ್ಯಂತ ಮತ್ತು ರಾಷ್ಟ್ರ ರಾಜಧಾನಿಯಲ್ಲಿ ನಡೆದ ನೀಟ್ ಪತ್ರಿಕೆ ಸೋರಿಕೆ ಪ್ರತಿಭಟನೆಗಳ ಕುರಿತು ದ್ವೇಷ ಭಾಷಣ ಮಾಡಿದ ಆರೋಪದ ಮೇಲೆ ಬಿಜೆಪಿ ಎಂಎಲ್‌ಸಿ ಸಿ.ಟಿ. ರವಿ ವಿರುದ್ಧ ಕರ್ನಾಟಕ ಪೊಲೀಸರು ಶನಿವಾರ ಎಫ್‌ಐಆರ್ ದಾಖಲಿಸಿದ್ದಾರೆ.

ಕೋಮು ವಿಷಯಗಳನ್ನು ನೀಟ್ ವಿವಾದಕ್ಕೆ ಎಳೆದು ತಂದಿದ್ದಕ್ಕಾಗಿ ರವಿ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ರಾಜ್ಯ ಮುಸ್ಲಿಂ ಫೆಡರೇಶನ್ ಸರ್ಕಾರವನ್ನು ಒತ್ತಾಯಿಸಿದೆ.

ಚಿಕ್ಕಮಗಳೂರಿನ ಪ್ರಧಾನ ಸಿವಿಲ್ ನ್ಯಾಯಾಧೀಶ ಮತ್ತು ಮುಖ್ಯ ನ್ಯಾಯ ಮ್ಯಾಜಿಸ್ಟ್ರೇಟ್ (ಸಿಜೆಎಂ) ನ್ಯಾಯಾಲಯದ ನಿರ್ದೇಶನದ ಮೇರೆಗೆ ಚಿಕ್ಕಮಗಳೂರು ಪಟ್ಟಣ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಸೆಕ್ಷನ್ 353(2) ರ ಅಡಿಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಚಿಕ್ಕಮಗಳೂರಿನ ಜಾಮಿಯಾ ಮಸೀದಿಯ ಅಧ್ಯಕ್ಷ ಮುದಾಸೀರ್ ಪಾಷಾ ಅವರು ದೂರು ದಾಖಲಿಸಿದ್ದಾರೆ. ಎಫ್‌ಐಆರ್ ಪ್ರಕಾರ, ಚಿಕ್ಕಮಗಳೂರಿನಲ್ಲಿ ಯೂತ್ ಫಾರ್ ನೇಷನ್ ಸಂಘಟನೆ ಆಯೋಜಿಸಿದ್ದ ಪ್ರತಿಭಟನಾ ಮೆರವಣಿಗೆಯ ನಂತರ ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, "ಮುಲ್ಲಾಗಳಿಗೂ ನೀಟ್ ಪರೀಕ್ಷೆಗೂ ಸಂಬಂಧವೇನು ಸಂಪೂರ್ಣವಾಗಿ ಅನಕ್ಷರಸ್ಥನಾದ ಒಬ್ಬ ಮುಲ್ಲಾ ಬಂದು ನೀಟ್ ಪ್ರತಿಭಟನೆಯಲ್ಲಿ ಭಾಗವಹಿಸುತ್ತಾನೆ" ಎಂದು ರವಿ ಹೇಳಿದ್ದರು ಎನ್ನಲಾಗಿದೆ.



# 300 ಮನೆಗಳ ತೆರವಿಗೆ ಕೋರ್ಟ್ ಆದೇಶ: ಆತಂಕದಲ್ಲಿ ಕಲಬುರಗಿ ಜನರು



**ಕಲಬುರಗಿ, ಜು. 25:** ನಗರದ ಆಳಂದ ಚೆಕ್ ಪೋಸ್ಟ್ ಬಳಿಕಯ ಸಿದ್ದರಾಮೇಶ್ವರ ಕಾಲೋನಿ ನಿವಾಸಿಗಳು ತೀವ್ರ ಆತಂಕಕ್ಕೆ ಒಳಗಾಗುವಂಥ ಘಟನೆಗಳು ನಡೆದಿವೆ. ಏಕೆಂದರೆ ಸಿಜೆಎಂ ಕೋರ್ಟ್ ಆದೇಶ ಹಿನ್ನೆಲೆ ಸರ್ವೆ ನಂಬರ್ 36 ಮತ್ತು 95ರಲ್ಲಿನ ಮನೆ ಮತ್ತು ಕಟ್ಟಡಗಳ ತೆರವಿಗೆ ಅಧಿಕಾರಿಗಳು ಮುಂದಾಗಿದ್ದಾರೆ. ಹೀಗಾಗಿ ಕಾಲೋನಿ ನಿವಾಸಿಗಳಲ್ಲಿ ಆತಂಕ ಸೃಷ್ಟಿಸಿದೆ.

**ನಡೆದಿದ್ದೇನು?:** ಸಿದ್ದರಾಮೇಶ್ವರ ಕಾಲೋನಿಯಲ್ಲಿ ನಿವಾಸಿಗಳು ನೋಟರಿ ಮೇಲೆ ಸೈಟ್ ಖರೀದಿ ಮಾಡಿ ಮನೆ ಕಟ್ಟಿಕೊಂಡು ಸುಮಾರು 30ರಿಂದ 40 ವರ್ಷಗಳಿಂದ ವಾಸ ಮಾಡುತ್ತಿದ್ದಾರೆ. ಮೂಲ ಜಮೀನುದಾರರ ಬಳಿ ನೋಟರಿ ಅಗ್ರಿಮೆಂಟ್ ಮೇಲೆ ನಿವಾಸಿಗಳು ಸೈಟ್ ಖರೀದಿ ಮಾಡಿದ್ದಾರೆ.

ಇದೇ ಜಮೀನಿನಲ್ಲಿ ಸದ್ಯ 300ಕ್ಕೂ ಅಧಿಕ ಮನೆಗಳು ಮತ್ತು ಕಟ್ಟಡಗಳು ನಿರ್ಮಾಣ ಆಗಿವೆ. ಆದರೆ ಇದೀಗ ಪಹಣಿ ಆಧಾರದ ಮೇಲೆ ಒಟ್ಟು 13 ಎಕರೆ ಜಮೀನು ತನ್ನದೆಂದು ಜಮೀನು ಮಾಲೀಕ ಮಹ್ಮದ್ ಸಲೀಮುದ್ದಿನ್ ಜಮೀನು ಕಬ್ಜಾ ಮಾಡಿಸಿಕೊಡಬೇಕೆಂದು ಕೋರ್ಟ್ ಮೊರೆ ಹೋಗಿದ್ದರು. ಇದೀಗ ಕೋರ್ಟ್ ಕಟ್ಟಡಗಳ ತೆರವುಗೊಳಿಸುವಂತೆ ಆದೇಶ ನೀಡಿದೆ. ಆದರೆ ಪ್ರಾಣ ಹೋದರೂ ಮನೆ, ಕಟ್ಟಡಗಳ ತೆರವು ಮಾಡಲು ಬಿಡಲ್ಲ ಎಂದ ನಿವಾಸಿಗಳು ಪಟ್ಟು ಹಿಡಿದಿದ್ದಾರೆ.

ಇದೀಗ ಕೋರ್ಟ್ ಆದೇಶದಂತೆ ಪೊಲೀಸ್ ಬಂದೋಬಸ್ತ್‌ನೊಂದಿಗೆ ಅಧಿಕಾರಿಗಳು ಮನೆ ಮತ್ತು ಕಟ್ಟಡಗಳ ತೆರವಿಗೆ ಮುಂದಾಗಿದ್ದರು. ಈ ವೇಳೆ ಮುಖ್ಯ ರಸ್ತೆ ಬಂದ್ ಮಾಡಿದ ನೂರಾರು ನಿವಾಸಿಗಳು ಮನೆ, ಕಟ್ಟಡಗಳ ತೆರವಿಗೆ ತೀವ್ರ ವಿರೋಧ ವ್ಯಕ್ತಪಡಿಸಿದರು. ಪ್ರಾಣ ಹೋದರೂ ಮನೆಗಳ, ಕಟ್ಟಡಗಳ ತೆರವು ಮಾಡಲು ಬಿಡಲ್ಲ ಎಂದು ಪಟ್ಟು ಹಿಡಿದರು.

ಈ ವೇಳೆ ಸರ್ವೆ ಅಧಿಕಾರಿಗಳ ಜೊತೆ ನಿವಾಸಿಗಳ ಮಾತಿನ ಚಕಮಕಿ ಉಂಟಾಗಿದೆ. ತೀವ್ರ ವಿರೋಧ ಹಿನ್ನಲೆ ಮನೆ ಮತ್ತು ಕಟ್ಟಡಗಳ ತೆರವು ಮಾಡದೇ ಅಧಿಕಾರಿಗಳು ವಾಪಸ್ ತೆರಳಿದ್ದಾರೆ.

# ಹಣ, ಸೀರೆ, ಲಂಡನ್ ಜೀನ್ಸ್ ಲಂಚ ಕೇಳಿದ್ದ

## ಎಪಿಪಿ ಕೋರ್ಟ್ ಆವರಣದಲ್ಲೇ ಲೋಕಾ ಬಲೆಗೆ..!



**ಕಲಬುರಗಿ, ಜು. 25:** ನ್ಯಾಯಾಲಯದಲ್ಲಿ ರಾಜಿ ಅರ್ಜಿ ಸಲ್ಲಿಸುವ ಕೆಲಸ ಮಾಡಿಕೊಡಲು ಲಂಚದ ರೂಪದಲ್ಲಿ ಹಣ ಹಾಗೂ ಸೀರೆ, ಲಂಡನ್ ಜೀನ್ಸ್ ಪ್ಯಾಂಟ್ ಸೇರಿದಂತೆ ಬಟ್ಟೆ-ಬರೆಗಳಿಗೆ ಬೇಡಿಕೆಯಿಟ್ಟಿದ್ದ ಸಹಾಯಕ ಸರ್ಕಾರಿ ಅಭಿಯೋಜಕರೊಬ್ಬರು (ಎಪಿಪಿ) ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ಕಲಬುರಗಿಯ ಕೋರ್ಟ್ ಆವರಣದಲ್ಲೇ ಲಂಚದ ಹಣ ಪಡೆಯುತ್ತಿದ್ದಾಗ ಅಧಿಕಾರಿಗಳು ದಾಳಿ ನಡೆಸಿ ಆರೋಪಿಯನ್ನು ಬಂಧಿಸಿದ್ದಾರೆ. 5ನೇ ಜೆಎಂಎಫ್‌ಸಿ ನ್ಯಾಯಾಲಯದ ಎಪಿಪಿ ಸಂತೋಷ್ ಕುಮಾರ್ ಲೋಖಂಡೆ ಲೋಕಾಯುಕ್ತ ಬಲೆಗೆ ಸಿಕ್ಕಿಬಿದ್ದ ಆರೋಪಿಯಾಗಿದ್ದಾರೆ.

ರಾಹುಲ್ ಹೈದರಾಬಾದ್ ಎಂಬುವವರು ಈ ಸಂಬಂಧ ಲೋಕಾಯುಕ್ತಕ್ಕೆ ದೂರು ನೀಡಿದ್ದರು. ನ್ಯಾಯಾಲಯದಲ್ಲಿ ರಾಜಿ ಅರ್ಜಿ ಸಲ್ಲಿಸುವ ಕೆಲಸ ಬಾಕಿ ಇದ್ದ ಹಿನ್ನೆಲೆಯಲ್ಲಿ ಸಂತೋಷ್‌ಕುಮಾರ್ ಅವರು ದೂರುದಾರರಿಂದ ಹಣ ಹಾಗೂ ಬಟ್ಟೆಗಳನ್ನು ಲಂಚದ ರೂಪದಲ್ಲಿ ನೀಡುವಂತೆ ಪಟ್ಟು ಹಿಡಿದಿದ್ದರು.

ಲಂಚದ ಆಸೆಗೆ ಬಿದ್ದಿದ್ದ ಈ ಎಪಿಪಿ ಅಧಿಕಾರಿ, ಬರೋಬ್ಬರಿ 10,000 ರೂಪಾಯಿ ನಗದು ಹಣದ ಜೊತೆಗೆ 9 ಸೀರೆಗಳು, 4 ಶರ್ಟ್‌ಗಳು, 4 ಲಂಡನ್ ಜೀನ್ಸ್ ಪ್ಯಾಂಟ್‌ಗಳು, 1 ಜೋಡಿ ಶೂ, 4 ಮಹಿಳೆಯರ ಉಡುಪುಗಳು ಹಾಗೂ 6 ಜೋಡಿ ಮಹಿಳೆಯರ ಚಪ್ಪಲಿಗಳನ್ನು ತಂದುಕೊಡುವಂತೆ ದೂರುದಾರರಿಗೆ ತಾಕೀತು ಮಾಡಿದ್ದರು. ಲಂಚ ನೀಡಲು ಇಷ್ಟವಿಲ್ಲದ ರಾಹುಲ್ ಈ ಬಗ್ಗೆ ಲೋಕಾಯುಕ್ತ ಪೊಲೀಸರ ಮೊರೆ ಹೋಗಿದ್ದರು.

**ಲಂಚ ಪಡೆಯುವಾಗ ಅರೆಸ್ಟ್:** ಕರ್ನಾಟಕ ಲೋಕಾಯುಕ್ತ ಕಲಬುರಗಿ ವಿಭಾಗದ ಪೊಲೀಸ್ ಅಧೀಕ್ಷಕರಾದ ಸಿದ್ಧರಾಜು ಸಿ. ಅವರ ಮಾರ್ಗದರ್ಶನದಲ್ಲಿ, ಲೋಕಾಯುಕ್ತ ತನಿಖಾಧಿಕಾರಿಯಾದ ಪೊಲೀಸ್ ಇನ್ಸ್‌ಪೆಕ್ಟರ್ ಅರುಣ್ ಕುಮಾರ್ ನೇತೃತ್ವದಲ್ಲಿ ದಾಳಿಗೆ ಬಲೆ ಬೀಸಲಾಗಿತ್ತು. ನ್ಯಾಯಾಲಯದ ಸಂಕೀರ್ಣದ ಬಳಿ ದೂರುದಾರರಿಂದ 10,000 ರೂ ಲಂಚದ ಹಣವನ್ನು ಸ್ವೀಕರಿಸುತ್ತಿದ್ದ ವೇಳೆಯಲ್ಲೇ ದಾಳಿ ನಡೆಸಿದ ಇನ್ಸ್‌ಪೆಕ್ಟರ್ ಅರುಣ್ ಕುಮಾರ್ ಹಾಗೂ ಸಿಬ್ಬಂದಿ, ಆರೋಪಿ ಸಂತೋಷ್ ಕುಮಾರ್‌ನನ್ನು ಸಾಕ್ಷಿಸಮೇತಗಿ ಹಿಡಿದು ಬಂಧಿಸಿದ್ದಾರೆ. ಸದ್ಯ ಆರೋಪಿಯನ್ನು ವಶಕ್ಕೆ ಪಡೆದಿರುವ ಪೊಲೀಸರು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

# ಗ್ಲೌಸ್ ಸೇರಿದಂತೆ ಸುರಕ್ಷತಾ ಪರಿಕರ ಧಾರಣೆ ಕಡ್ಡಾಯ: ಡಿಸಿ ಇಕ್ರಮುಲ್ಲಾ ಶರೀಫ್ ಸೂಚನೆ



**ಕಲಬುರಗಿ, ಜು. 25:** ಪೌರಕಾರ್ಮಿಕರ ಆರೋಗ್ಯ, ಸುರಕ್ಷತೆಯ ಹಿತದೃಷ್ಟಿಯಿಂದ ಕೆಲಸದ ಅವಧಿಯಲ್ಲಿ ಗ್ಲೌಸ್ ಸೇರಿದಂತೆ ಎಲ್ಲಾ ರೋಗ ನಿರೋಧಕ ಸುರಕ್ಷತಾ ಪರಿಕರಗಳನ್ನು ಧರಿಸಬೇಕು. ಈ ಬಗ್ಗೆ ಸ್ಥಳೀಯ ಮುಖ್ಯ ಅಧಿಕಾರಿಗಳು ಇದರ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ ಇಕ್ರಮುಲ್ಲಾ ಶರೀಫ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸದ್ಯ ಕೆಲವು ಕಾರ್ಮಿಕರು ಗ್ಲೌಸ್ ಧರಿಸುವುದರಿಂದ ಕೈ ಬೆವರುತ್ತದೆ ಎಂಬ ಕಾರಣ ನೀಡಿ, ನೇರವಾಗಿ ಕೈಯಿಂದಲೇ ಕಸ ವಿಲೇವಾರಿ ಮಾಡುತ್ತಿರುವುದು ಗಮನಕ್ಕೆ ಬಂದಿದೆ. ಸುರಕ್ಷತಾ ಪರಿಕರಗಳ ಬಳಕೆ ಕರ್ತವ್ಯದ ಒಂದು ಭಾಗವಾಗಿದ್ದು, ಇದರಲ್ಲಿ ಯಾವುದೇ ವಿನಾಯಿತಿ ನೀಡಬಾರದು, ಪೌರಕಾರ್ಮಿಕರ ಸುರಕ್ಷತಾ ಪರಿಕರ ಧರಿಸದೆ ಇದ್ದಲ್ಲಿ ಅವರನ್ನು ಕೆಲಸದಿಂದ ತಗೆದು ಹಾಕಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.


ಕೂಡಲೇ ವಾರ್ಡ್ ಮಟ್ಟದಲ್ಲಿ ಪೌರಕಾರ್ಮಿಕರ ಸಭೆ ಕರೆದು ಈ ನಿಯಮವನ್ನು ಕಡ್ಡಾಯಗೊಳಿಸಬೇಕು. ಪೌರ ಕಾರ್ಮಿಕರ ಆರೋಗ್ಯದ ಹಿತದೃಷ್ಟಿಯಿಂದ ಪ್ರತಿ ಮೂರು ತಿಂಗಳಿಗೊಮ್ಮೆ ಕಡ್ಡಾಯ ಆರೋಗ್ಯ ತಪಾಸಣೆ ಮತ್ತು ವರ್ಷಕ್ಕೊಮ್ಮೆ ಮಾಸ್ಟರ್ ಹೆಲ್ತ್ ಚೆಕ್-ಅಪ್ ಮಾಡಿಸಲು ಕ್ರಮವಹಿಸಬೇಕು ಎಂದರು.

ಜಿಲ್ಲೆಯಲ್ಲಿ ಮ್ಯಾನುಯಲ್ ಸ್ಕ್ಯಾವೆಂಜರ್ಸ್ ನಿರ್ಮೂಲನೆ ಹಾಗೂ ಕಾರ್ಮಿಕರ ಸುರಕ್ಷತೆ ಕುರಿತು ಸುದೀರ್ಘ ಚರ್ಚೆ ಜರುಗಿತು. ಮಾನವ ಚಾಲಿತ ಮಲಸಂಸ್ಕಾರ ತಡೆಯಲು ಯುಜಿಡಿ ಇಲ್ಲದ ಪಟ್ಟಣ ಪಂಚಾಯಿತಿಗಳಿಗೂ ಸಣ್ಣ ಸಕ್ಕಿಂಗ್ ಹಾಗೂ ಜೆಟ್ಟಿಂಗ್ ಯಂತ್ರಗಳನ್ನು ಒದಗಿಸಲು ಚರ್ಚಿಸಲಾಯಿತು.

ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ಹಾಗೂ ಸ್ವಯಂ ಉದ್ಯೋಗ ಯೋಜನೆಗಳ ಪ್ರಗತಿ ಪರಿಶೀಲನೆ ವೇಳೆ, 2022-23ನೇ ಸಾಲಿನ ಯೋಜನೆಗಳು ಕಳೆದ ನಾಲ್ಕು ವರ್ಷಗಳಿಂದ ಬಾಕಿ ಉಳಿದಿರುವುದಕ್ಕೆ ಅಧಿಕಾರಿ ಸಂಪೂರ್ಣ ವಿಫಲರಾಗಿದ್ದಾರೆ. ರಾಜ್ಯದ 29 ಜಿಲ್ಲೆಗಳಲ್ಲಿ ಈ ಯೋಜನೆಗಳು ಯಶಸ್ವಿಯಾಗಿ ಅನುಷ್ಠಾನಗೊಳ್ಳುತ್ತಿರುವಾಗ, ನಮ್ಮ ಜಿಲ್ಲೆಯಲ್ಲಿ ಮಾತ್ರ ಯಾಕೆ ವಿಳಂಬವಾಗುತ್ತಿದೆ? ಕೆಲಸ ಮಾಡಲು ಆಸಕ್ತಿ ಇಲ್ಲದಿದ್ದರೆ ಕಠಿಣ ಕ್ರಮ ಎದುರಿಸಬೇಕಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ತಿಳಿಸಿದರು.

# ಮೈದುಂಬಿಕೊಂಡ ಹೊಸದೇವತಾ ಫಾಲ್ಸ್: ಕಣ್ತುಂಬಿಕೊಳ್ಳಲು ಪ್ರವಾಸಿಗರ ದಾಂಗುಡಿ

**ಅಂಕೋಲಾಜು.25--:** ಮಳೆ ಚೆನ್ನಾಗಿ ಆಗುತ್ತಿರುವುದರಿಂದ ಇಲ್ಲಿಯ ಹಲವು ಜಲಪಾತಗಳು ತನ್ನ ವೈಭವವನ್ನು ಹೆಚ್ಚಿಸಿಕೊಂಡಿದ್ದು, ಅದರಲ್ಲಿ ವಾಸರಕುದ್ರಿಗೆ ಪಂಚಾಯಿತಿ ವ್ಯಾಪ್ತಿಗೆ ಬರುವ ಹೊಸದೇವತಾ ಫಾಲ್ಸ್, ಬೆಳಸೆ ಗ್ರಾ.ಪಂ. ವ್ಯಾಪ್ತಿಗೆ ಬರುವ ತಳಗದ್ದೆಯ ದೊಣ್ಣೆಫಾಲ್ಸ್ ಕೂಡ ಒಂದಾಗಿದೆ. ಇಲ್ಲಿಗೆ ಪ್ರತಿದಿನ ಹಲವರು ಭೇಟಿ ನೀಡುತ್ತಿದ್ದು, ಇದರ ಸೌಂದರ್ಯಕ್ಕೆ ಮಾರು ಹೋಗುತ್ತಿದ್ದಾರೆ. ಹೊಸದೇವತಾ ದೇವಸ್ಥಾನದ ಪಕ್ಕದಲ್ಲಿಯೇ ಈ ನೀರು ಹರಿಯುತ್ತಿರುವುದರಿಂದಾಗಿ ಹಾಗೇ ಅಷ್ಟೇನು ಅಪಾಯ ಇಲ್ಲದಿರುವುದರಿಂದ ಪ್ರವಾಸಿಗರು ಅಲ್ಲಿಗೆ ತೆರಳಿ ಈಜು ಹಾಗೂ ಫೋಟೋಗಳನ್ನು ಕ್ಲಿಕ್ಕಿಸಿಕೊಳ್ಳುತ್ತಿದ್ದಾರೆ. ಅದರಂತೆ ತಳಗದ್ದೆಯ ದೊಣ್ಣೆಫಾಲ್ಸ್ ಕೂಡ ಮನಮೋಹಕವಾಗಿದ್ದು ಇಲ್ಲಿಯೂ ಕೂಡ ಅಪಾಯಕಾರಿಯಲ್ಲದಿರುವುದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುತ್ತಾರೆ. ಹಾಗೇ ಶನಿವಾರ ಮತ್ತು ಭಾನುವಾರ ರಜೆ ಇರುವುದರಿಂದ ಇಲ್ಲಿಗೆ ಪ್ರವಾಸಿಗರ ಸಂಖ್ಯೆ ಕೂಡ ಅಧಿಕವಾಗುತ್ತದೆ.



# ಅರ್ಹ ಫಲಾನುಭವಿಗಳಿಗೆ ಗ್ಯಾರಂಟಿ ಯೋಜನೆ ತಲುಪಿಸಿ: ಪಾಮಯ್ಯಮುರಾರಿ



**ರಾಯಚೂರು, ಜು. 25:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಬಡ ಜನರ ಆರ್ಥಿಕ ಅಭಿವೃದ್ಧಿಗೆ ಸಹಕಾರಿಯಾಗಿವೆ. ಕಾರ್ಯಕ್ರಮಗಳನ್ನು ಪ್ರತಿ ಹಂತದಲ್ಲಿ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ಪ್ರಾಮಾಣಿಕತೆಯಿಂದ ಅರ್ಹ ಫಲಾನುಭವಿಗಳಿಗೆ ತಲುಪಿಸುವ ಕೆಲಸವನ್ನು ನಿಷ್ಠೆಯಿಮದ ಮಡಬೇಕು ಎಂದು ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಪಾಮಯ್ಯ ಮುರಾರಿ ಹೇಳಿದರು.

ನಗರದ ಜಿ.ಪಂ ಜಲನಿರ್ಮಲ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗೃಹಲಕ್ಷ್ಮಿ ಯೋಜನೆಯಡಿ ನೋಂದಣಿಯಾದ ಮನೆ ಯಜಮಾನಿಗೆ ಪ್ರತಿ ತಿಂಗಳು ಕಡ್ಡಾಯವಾಗಿ ಹಣ ಜಮೆಯಾಗುವಂತೆ ಸಂಬಂಧಿಸಿದ ಅಧಿಕಾರಿಗಳು ಜಾಗ್ರತಿ ವಹಿಸಬೇಕು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಜಿಲ್ಲೆಯಲ್ಲಿ ಈವರೆಗೆ 29 ಕಂತಿನ ಮೂಲಕ ಅರ್ಹರ ಖಾತೆಗೆ ಹಣ ಸಂದಾಯ ಮಾಡಲಾಗಿದೆ. ಈ ಯೋಜನೆಯಡಿ ಗೊಂದಲಕ್ಕೆ ಅವಕಾಶ ನೀಡಬಾರದು ಎಂದರು.

ಜಿಲ್ಲೆಯಲ್ಲಿ ಒಟ್ಟು ನೋಂದಣಿ ಮತ್ತು ಅನರ್ಹ ಫಲಾನುಭವಿಗಳ ಎಷ್ಟು ಖಾತೆಗಳನ್ನು ಬಂದ್ ಮಾಡಲಾಗಿದೆ. ಎಂಬ ಮಾಹಿತಿಯನ್ನು ಸರಿಯಾಗಿ ನೀಡಬೇಕು. ಯೋಜನೆಯ ಫಲಾನುಭವಿಗಳು ಮರಣ ಹೊಂದಿದ್ದಲ್ಲಿ ನಾಡ ಕಾರ್ಯಾಲಯದಿಂದ ನೀಡಿದ ಮರಣ ಪ್ರಮಾಣ ಪತ್ರವನ್ನು ಮೂಲ ದಾಖಲಾತಿಯಾಗಿ ಪರಿಗಣಿಸಬೇಕು. ಅಲ್ಲದೆ ಅಂಗನವಾಡಿ ಕಾರ್ಯ ಕರ್ತೆಯರ ಮೂಲಕ ಮೃತಪಟ್ಟ ಫಲಾನುಭವಿಗಳ ಹೆಸರು ಖಾತರಿಪಡಿಸಿಕೊಳ್ಳಬೇಕು. ಗ್ಯಾರಂಟಿ ಯೋಜನೆಗಳ ಕುರಿತು ಸಭೆಗೆ ಸರಿಯಾದ ಮಾಹಿತಿ ನೀಡದ ಅಧಿಕಾರಿಗಳ ವಿರುದ್ಧ ಜಿ.ಪಂ ಸಿಇಒ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಕೋಟ್ಯಂತರ ರೂಪಾಯಿ ವೆಚ್ಚ ಮಾಡು ತ್ತಿದೆ. ಗೃಹಜ್ಯೋತಿ ಯೋಜನೆಯನ್ನು ಪರಿಷ್ಕರಣೆ ಮಾಡಲಾಗುತ್ತಿದೆ. ಈ ಯೋಜನೆಯ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಬೇಕು. ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳು ಮುಂದಿನ ದಿನಗಳಲ್ಲಿ ಇದರ ಪರಿಣಾಮ ಎದುರಿಸ ಬೇಕಾಗುತ್ತದೆ ಎಂದು ಎಚ್ಚರಿಸಿದರು.

ರಾಯಚೂರು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಪವನಕಿಶೋರ ಪಾಟೀಲ ಮಾತನಾಡಿ, ರಾಯಚೂರು ತಾಲ್ಲೂಕಿನ ಗ್ರಾಮೀಣ ಭಾಗದಲ್ಲಿ ಮೂವರು ಬದುಕಿದ್ದರೂ ಮೃತಪಟ್ಟಿದ್ದಾರೆ ಹೇಳಲಾಗುತ್ತಿದೆ. ಸರಿಯಾಗಿ ಪರಿಶೀಲಿಸಿ ಮಾಹಿತಿ ಒದಗಿಸಬೇಕು ಎಂದರು.

ಇತ್ತೀಚೆಗೆ ನಿಧನರಾದ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷ ಸೂರಜ್ ಹೆಗಡೆ ಹಾಗೂ ರಾಯಚೂರು ನಗರ ಕ್ಷೇತ್ರದ ಮಾಜಿ ಶಾಸಕ ಸೈಯಾದ್ ಯಾಸಿನ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಜಿ.ಪಂ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋನಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಮಟ್ಟದ ಉಪಾಧ್ಯಕ್ಷ ನಾಗೇಂದ್ರ ಮಟಮಾರಿ, ಗಫೂರ್ ಸಾಬ್, ಹನುಮಂತಪ್ಪ ಜಾಲಿಬೆಂಚಿ, ಶೇಖರ ಗೌಡ ತುರ್ವಿಹಾಳ, ಸದಸ್ಯರಾದ ಬಿ.ಕೆ.ಅಮರೇಶ, ಲಕ್ಷ್ಮಣ ಜ್ಯೋತಿ, ಮೆಹಬೂಬ್ ಸಾಬ್, ಅನಿಲಕುಮಾರ, ವೆಂಕಟೇಶ, ಆದನಗೌಡ, ಜಾಫರ್ ಪಟೇಲ್, ಪ್ರಭಾರಿ ಉಪ ನಿರ್ದೇಶಕ ನಜೀರ್ ಅಹಮದ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ, ಜೆಸ್ಕಾಂ ಇಲಾಖೆಯ ಮೋಹನ್, ಜಿಲ್ಲಾ ಉದ್ಯೋಗಾಧಿಕಾರಿ ನವೀನಕುಮಾರ್ ಸಂಗೇಪಾಗ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಕಂದಗಲ್ ಹಾಜರಿದ್ದರು.

# ತುಂಗಭದ್ರಾ ನದಿ ತೀರದಲ್ಲಿ ಸಾವಿರಾರು ಮೀನುಗಳ ಮಾರಣಹೋಮ....!



**ರಾಯಚೂರು, ಜು. 25:** ಯಾವ ನದಿ ಕೋಟ್ಯಂತರ ಜೀವಿಗಳಿಗೆ ತಾಯಿಯಾಗಿ ಜೀವದಾತೆಯಾಗಬೇಕಿತ್ತೋ, ಇಂದು ಅದೇ ನದಿಯ ಒಡಲು ಜಲಚರಗಳ ಪಾಲಿಗೆ ಸ್ಮಶಾನವಾಗಿ ಮಾರ್ಪಟ್ಟಿದೆ. ಹೌದು, ಇದು ಜಿಲ್ಲೆಯ ಕಾರಟಗಿ ತಾಲೂಕು ಸಿದ್ದಾಪುರ ಹೋಬಳಿಯ ಕಕ್ಕರಗೋಳ ಮತ್ತು ನಂದಿಹಳ್ಳಿ ಗ್ರಾಮಗಳ ಬಳಿ ಹರಿಯುವ ಜೀವನದಿ ತುಂಗಭದ್ರೆಯ ಒಡಲು ಸಂಪೂರ್ಣ ಬರಿದಾಗಿದ್ದು, ಹನಿ ನೀರಿಲ್ಲದೆ, ಸೂಕ್ತ ಪ್ರಮಾಣದ ಆಮ್ಲಜನಕ ಸಿಗದೇ ಸಾವಿರಾರು ಮೀನುಗಳು ನದಿಯ ದಂಡೆಯಲ್ಲೇ ತರಗೆಲೆಗಳಂತೆ ಉಸಿರು ಚೆಲ್ಲುತ್ತಿವೆ. ನದೀತೀರದುದ್ದಕ್ಕೂ ಸಾಲು ಸಾಲು ಕಿಲೋಮೀಟರ್ ಗಟ್ಟಲೇ ದೂರದ ವರೆಗೂ ಮೀನುಗಳು ಸತ್ತು ಬಿದ್ದಿರುವ ಈ ದೃಶ್ಯ ಯಾವುದೇ ಕಠೋರ ಹೃದಯವನ್ನೂ ಕರಗಿಸುವಂತಿದೆ.

ಕೆಸರು ಗುಂಡಿಯಾದ ನದಿ, ಉಸಿರುಗಟ್ಟಿ ತೀರಕ್ಕೆ ಬಿದ್ದ ಜೀವರಾಶಿ: ಮಳೆಗಾಲದಲ್ಲಿಯೇ ನದಿಯಲ್ಲಿ ನೀರಿನ ಮಟ್ಟ ಸಂಪೂರ್ಣವಾಗಿ ಕುಸಿದಿದ್ದು, ಕಲ್ಲು-ಬಂಡೆಗಳು ಹಾಗೂ ಒಣಗಿದ ಹಸಿರು ಪಾಚಿ ಮಾತ್ರ ಕಣ್ಣಿಗೆ ಕಾಣಿಸುತ್ತಿದೆ. ಅಲ್ಲಲ್ಲಿ ನಿಂತಿರುವ ಅಲ್ಪಸ್ವಲ್ಪ ಕೆಸರು ಮಿಶ್ರಿತ ಕಲುಷಿತ ನೀರಿನಲ್ಲೇ ಮೀನುಗಳು ಬದುಕಲು ಹೋರಾಡುತ್ತಿವೆ. ಆದರೆ, ತಾಪಮಾನದ ತೀವ್ರ ಹೆಚ್ಚಳ ಹಾಗೂ ನೀರಿನಲ್ಲಿ ಆಮ್ಲಜನಕದ (ಆಕ್ಸಿಜೆನ್) ಕೊರತೆಯಿಂದಾಗಿ ಉಸಿರುಗಟ್ಟಿ ತೀರಕ್ಕೆ ಬಂದು ಪ್ರಾಣ ಬಿಡುತ್ತಿವೆ.

ಭೀಕರ ದೃಶ್ಯ: ಪ್ರಸ್ತುತ ನದಿಯ ದಂಡೆಯುದ್ದಕ್ಕೂ ಸಾವಿರಾರು ಸತ್ತು ಬಿದ್ದಿರುವ ಮೀನುಗಳು ಕೊಳೆಯುತ್ತಿದ್ದು, ಇಡೀ ಪ್ರದೇಶದಲ್ಲಿ ತೀವ್ರ ದುರ್ವಾಸನೆ ಹರಡಿದೆ. ಇದರಿಂದಾಗಿ ಸುತ್ತಮುತ್ತಲಿನ ಹಳ್ಳಿಗಳ ಜನರಲ್ಲಿ ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಎದುರಾಗಿದೆ. ಇನ್ನು ಸತ್ತು ಬಿದ್ದಿರುವ ಮೂಕ ಜೀವಿಗಳನ್ನು ತಿನ್ನಲು ನೂರಾರು ಕಾಗೆಗಳು ಹಾಗೂ ಪಕ್ಷಿಗಳು ನದಿಯತ್ತ ಲಗ್ಗೆ ಇಡುತ್ತಿದ್ದು, ಇಡೀ ಪರಿಸರ ವ್ಯವಸ್ಥೆಯೇ ತಲ್ಲಣಗೊಂಡಿದೆ.

**ರೋಗಭೀತಿ:** ಕೊಳೆಯುತ್ತಿರುವ ಮೀನುಗಳಿಂದಾಗಿ ಸುತ್ತಮುತ್ತಲಿನ ಹಳ್ಳಿಗಳಲ್ಲಿ ತೀವ್ರ ಆತಂಕ ಮೂಡಿದೆ. ನಮ್ಮ ಕಣ್ಣೆದುರೇ ನದಿಯ ಜೀವರಾಶಿಗಳು ಹೀಗೆ ಸಾಯುತ್ತಿರುವುದು ತೀವ್ರ ಆತಂಕ ಹಾಗೂ ಬೇಸರ ಮೂಡಿಸಿದೆ. ಜಲಾಶಯದಿಂದ ನದಿ ಪಾತ್ರದಲ್ಲಿ ಕನಿಷ್ಠ ಪ್ರಮಾಣದ ನೀರನ್ನಾದರೂ ಕಾಯ್ದುಕೊಳ್ಳಲು ಸರ್ಕಾರ ಅಥವಾ ಸಂಬಂಧಪಟ್ಟ ಅಧಿಕಾರಿಗಳು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕಿತ್ತು. ತಕ್ಷಣವೇ ನದಿಗೆ ನೀರು ಹರಿಸದಿದ್ದರೆ ಮುಂದಿನ ದಿನಗಳಲ್ಲಿ ನಮಗೆ ಕುಡಿಯುವ ನೀರಿಗೂ ತತ್ವಾರ ಎದುರಾಗಲಿದೆ, ಎಂದು ಸ್ಥಳೀಯ ಗ್ರಾಮಸ್ಥರು ಹಾಗೂ ಪರಿಸರ ಪ್ರೇಮಿಗಳು ತೀವ್ರ ಆಕ್ರೋಶ ಹೊರಹಾಕಿದ್ದಾರೆ.

ಇನ್ನಾದರೂ ಎಚ್ಚೆತ್ತುಕೊಳ್ಳುವುದೇ ಇಲಾಖೆ: ಪರಿಸರ ದುರಂತ ಹೀಗೆಯೇ ಮುಂದುವರಿದರೆ ನದಿಯ ಪರಿಸರ ವ್ಯವಸ್ಥೆ ಸಂಪೂರ್ಣವಾಗಿ ನಾಶವಾಗುವುದರಲ್ಲಿ ಯಾವುದೇ ಸಂಶಯವಿಲ್ಲ. ಸಂಬಂಧಪಟ್ಟ ಮೀನುಗಾರಿಕಾ ಇಲಾಖೆ ಹಾಗೂ ಜಲಸಂಪನ್ಮೂಲ ಇಲಾಖೆಯ ಅಧಿಕಾರಿಗಳು ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕಿದೆ. ಜಲಚರಗಳ ರಕ್ಷಣೆಗೆ ಕನಿಷ್ಠ ಪ್ರಮಾಣದ ನೀರನ್ನು ಜಲಾಶಯದಿಂದ ಬಿಡಲು ಅಥವಾ ಪರ್ಯಾಯ ತುರ್ತು ವ್ಯವಸ್ಥೆ ಮಾಡಲು ಪರಿಸರ ಪ್ರೇಮಿಗಳು ಒತ್ತಾಯಿಸಿದ್ದಾರೆ.

# ನಾಟಿಕೋಳಿ ಸಾಕಣೆಯಿಂದ ವಾರ್ಷಿಕ 8 ಲಕ್ಷ ಗಳಿಸುತ್ತಿರುವ ಪದವೀಧರ

**ಬೀದರ, ಜು. 25:** ಫ್ರೀ ರೇಂಜ್ ನಾಟಿಕೋಳಿ ಸಾಕಣೆಯು ಬೀದರ್ ತಾಲ್ಲೂಕಿನ ಕಮಠಾಣ ಗ್ರಾಮದ ಪದವೀಧರ ರಾಜಶೇಖರ ಸಂತರಾಮ ಕುಂಚೆ ಅವರ ಕೈ ಹಿಡಿದಿದೆ. ನಾಟಿಕೋಳಿ, ಮರಿ ಹಾಗೂ ಮೊಟ್ಟೆ ಮಾರಾಟದಿಂದ ಅವರು ವಾರ್ಷಿಕ 8 ಲಕ್ಷ ಗಳಿಕೆ ಮಾಡುತ್ತಿದ್ದಾರೆ. ಸರ್ಕಾರಿ ಕೆಲಸದಲ್ಲಿದ್ದ ಅವರು, ಕೆಲಸಕ್ಕೆ ಸಲಾಮು ಹೊಡೆದು ನಾಲ್ಕು ವರ್ಷಗಳ ಹಿಂದೆ ಕೋಳಿ ಸಾಕಣೆ ಆರಂಭಿಸಿದ್ದು, ಕೇವಲ ನಾಲ್ಕು ಕೋಳಿಗಳಿಂದ. ಸದ್ಯ ಅವರ ಬಳಿ 800ಕ್ಕೂ ಹೆಚ್ಚು ಕೋಳಿಗಳು ಇವೆ.

ಸ್ವಂತ ಉದ್ಯೋಗ ಮಾಡಬೇಕೆನ್ನುವ ಅಪೇಕ್ಷೆಯಿಂದ 60 ಸಾವಿರ ಖರ್ಚಿನಲ್ಲಿ ನಮ್ಮ ತೋಟದಲ್ಲಿ ಶೆಡ್ ನಿರ್ಮಿಸಿ, ನಾಟಿಕೋಳಿ ಸಾಕಣೆ ಪ್ರಾರಂಭಿಸಿದೆ. ಇದೀಗ ಉದ್ಯಮ ದೊಡ್ಡದಾಗಿ ಬೆಳೆದಿದೆ. ಜಿಲ್ಲೆ ಹಾಗೂ ನೆರೆ ರಾಜ್ಯಗಳ ವ್ಯಾಪಾರಿಗಳು ನಮ್ಮ ಫಾರಂನ ಕೋಳಿ, ಮರಿ ಹಾಗೂ ಮೊಟ್ಟೆಗಳನ್ನು ಖರೀದಿಸಿಕೊಂಡು ಹೋಗುತ್ತಿದ್ದಾರೆ ಎಂದು ತಿಳಿಸುತ್ತಾರೆ ರಾಜಶೇಖರ ಕುಂಚೆ.

ಸರ್ಕಾರಿ ಕೆಲಸದಲ್ಲಿ ಏನು ಸಿಗುತ್ತೆ ಹೇಳಿ. ತಿಂಗಳಿಗೆ ಒಂದು ನಿಗದಿತ ಸಂಬಳ. ನಿವೃತ್ತಿ ನಂತರ ಪಿಂಚಣಿ. ಹೆಚ್ಚಿಗೆ ಗಳಿಸಬೇಕೆಮದರೆ ಲಂಚ ತಿನ್ನಬೇಕು. ಕೈಕಪ್ಪು ಮಾಡಿಕೊಂಡು ಮರ್ಯಾದೆಯಿಲ್ಲದೇ ಬದುಕುವುದು ಅದೂ ಒಂದು ಜೀವನವೇ? ಆದ್ದರಿಮದ ಸ್ವಂತ ಉದ್ಯಮ ಮಾಡಬೇಕೆಂದು ಹೊರಟೆ. ಈ ಉದ್ಯಮ ಸರಳವಾಗಿ ಕಮಡಿತು. ಆರಂಭಿಸಿದೆ. ಶೆಡ್ ಒಳಗೆ ಕೋಳಿ ಸಾಕಾಣಿಕೆಗೆ ಅಧಿಕ ಬಂಡವಾಳ ಬೇಕು. ಹೀಗಾಗಿ ಕಡಿಮೆ ಖರ್ಚಿನ ಹಾಗೂ ನಾಟಿಕೋಳೀಳನ್ನು ನೈಸರ್ಗಿಕವಾಗಿ ಬೆಳೆಸುವ ಫ್ರೀ ರೇಂಜ್ ಸಾಕಣೆ ಪದ್ಧತಿಯನ್ನು ಅನುಸರಿಸಿದೆ. ಕೈತುಂಬ ಹಣ ಬರುತ್ತಿದೆ. ಯಾರ ಹಮಗಿಲ್ಲದೇ, ಯಾರಿಗೂ ಕೈಚಾಚದೇ ಬದುಕ ಕಟ್ಟಿಕೊಳ್ಳಲು ಸಾಧ್ಯವಾಗಿದೆ ಎಂದು ಹೇಳುತ್ತಾರೆ.

ಶೆಡ್‌ನೊಳಗೆ ಸಾಕಿದ್ದರೆ ನನ್ನ ಬಳಿ ಇರುವ 800 ಕೋಳಿಗಳ ಆಹಾರಕ್ಕೆ ನಿತ್ಯ 2,000 ಬೇಕಾಗುತ್ತಿತ್ತು. ಆದರೆ, ಈ ನಾಟಿಕೋಳಿಗಳು ಬೆಳಿಗ್ಗೆಯಿಂದ ಸಂಜೆ ವರೆಗೆ ತೋಟದಲ್ಲೇ ಸುತ್ತಾಡಿ, ಮೇಯ್ದು ರಾತ್ರಿ ಮಾತ್ರ ಶೆಡ್‌ನಲ್ಲಿ ಬಂದು ಕುಳಿತುಕೊಳ್ಳುತ್ತವೆ. ಹೀಗಾಗಿ ಪ್ರತಿ ದಿನ 200 ಖರ್ಚು ಮಾತ್ರ ಬರುತ್ತಿದೆ. ಮಾಸಿಕ 65 ಸಾವಿರಕ್ಕೂ ಅಧಿಕ ಆದಾಯವಾಗುತ್ತಿದೆ ಎಂದು ತಿಳಿಸುತ್ತಾರೆ.

ಬಾಯ್ಲರ್ ಕೋಳಿ ಮಾಂಸದ ಬೆಲೆ ಕೆ.ಜಿ.ಗೆ 220, ಮೊಟ್ಟೆ ಬೆಲೆ 7 ಇದ್ದರೆ, ನಾಟಿಕೋಳಿ ಮಾಂಸದ ಬೆಲೆ ಕೆ.ಜಿ.ಗೆ 600 ಹಾಗೂ ಮೊಟ್ಟೆ ಬೆಲೆ 25 ಇದೆ. ನಾಟಿಕೋಳಿಗಳು ಮಾರಾಟಕ್ಕೆ ಬರಲು ನಾಲ್ಕು ತಿಂಗಳು ಹಾಗೂ ಮೊಟ್ಟೆ ಇಡಲು 6 ತಿಂಗಳು ಬೇಕಾಗುತ್ತದೆ ಎಂದು ಹೇಳುತ್ತಾರೆ.

ತೋಟದಲ್ಲಿ ಮೊಟ್ಟೆಯಿಂದ ಕೋಳಿ ಮರಿ ತಯಾರಿಸಲಾಗುತ್ತದೆ.

# ಪದೇ ಪದೇ ಕರೆಂಟ್ ಏಕೆ ತೆಗಿತೀರಿ?: ಸಂಸದ ಸಾಗರ್ ಖಂಡ್ರೆ



**ಬೀದರ್, ಜು. 25:** ವಿದ್ಯುತ್ ಕಂಬ, ತಂತಿ ಹಾಕುವುದಕ್ಕೆ ಜೆಸ್ಕಾಂ ಅಧಿಕಾರಿಗಳು ಹಣ ಕೇಳುತ್ತಿದ್ದಾರೆ ಎಂಬ ಆರೋಪಗಳಿವೆ. ಪದೇ ಪದೇ ಕರೆಂಟ್ ಏಕೆ ತೆಗಿತೀರಿ? ಇದರಿಂದ ರೈತರಿಗೆ ಮತ್ತು ಸಾರ್ವಜನಿಕರಿಗೂ ಬಹಳ ತೊಂದರೆಯಾಗುತ್ತಿದೆ. ಈ ಹಿಂದೆ ಕೆಇಬಿ ಬಗ್ಗೆ ದೂರುಗಳು ಬರುತ್ತಿರಲಿಲ್ಲ. ಕಳೆದ ಒಂದು ತಿಂಗಳಿಂದ ಅತಿಹೆಚ್ಚು ದೂರುಗಳು ಬರುತ್ತಿವೆ. ಏಕೆ ಹೀಗಾಗುತ್ತಿದೆ ಎಂದು ಸಂಸದ ಸಾಗರ್ ಖಂಡ್ರೆ ಜೆಸ್ಕಾಂ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ, ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ವೇಳೆ ಮೇಲಿನಂತೆ ಕೇಳಿದರು. ಕಳೆದ ಒಂದು ತಿಂಗಳಿಂದ ರೈತರು ನಿರಂತರವಾಗಿ ನನ್ನ ಬಳಿ ಬಂದು ಕರೆಂಟ್ ಸಮಸ್ಯೆ ಬಗ್ಗೆ ದೂರು ಕೊಡುತ್ತಿದ್ದಾರೆ. ನಾನು ಕೂಡ ಸಂಬಂಧಿಸಿದವರಿಗೆ ವಿಷಯ ತಿಳಿಸಿದ್ದೆ. ಆದರೂ ಕೂಡ ಸಮಸ್ಯೆ ಏಕೆ ಬಗೆಹರಿದಿಲ್ಲ ಎಂದು ಜೆಸ್ಕಾಂ ಅಧಿಕಾರಿಗಳನ್ನು ಪ್ರಶ್ನಿಸಿ ಅಸಮಾಧಾನ ವ್ಯಕ್ತಪಡಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜೆಸ್ಕಾಂ ಇಇ ಶಶಿರೇಖಾ ಹಾಗೂ ಇತರೆ ಅಧಿಕಾರಿಗಳು, ಎರಡು ವಾರಗಳ ಹಿಂದೆ ಜಿಲ್ಲೆಯಾದ್ಯಂತ ಸಾಕಷ್ಟು ಗಾಳಿ ಬೀಸಿದ್ದರಿಂದ ಅನೇಕ ಕಡೆಗಳಲ್ಲಿ ಲೈನ್ ಕಟ್ ಆಗಿ ಸಮಸ್ಯೆ ಆಗಿದೆ. ಇದಕ್ಕೆ ಸಾಗರ್ ಖಂಡ್ರೆ, ನಾನು ಇತ್ತೀಚಿನ ವಿಚಾರ ಮಾತನಾಡುತ್ತಿಲ್ಲ. ಒಂದು ತಿಂಗಳಿಂದ ಹೀಗಾಗುತ್ತಿದೆ. ರೈತರಿಗೆ ಸಮರ್ಪಕವಾಗಿ ವಿದ್ಯುತ್ ಪೂರೈಕೆಗೆ ಏನು ಕಷ್ಟ. ನಾನು ಯಾವುದೇ ಹಳ್ಳಿಗೆ ಹೋದರೂ ರೈತರು ಕರೆಂಟ್ ಏಕೆ ಕೊಡುತ್ತಿಲ್ಲ ಎಂದೇ ಕೇಳುತ್ತಿದ್ದಾರೆ ಎಂದರು.

ಹೊಸದಾಗಿ ಕೂರಿಸಿದ ಟ್ರಾನ್ಸ್‌ಫಾರ್ಮರ್‌ಗಳು ವಾರದೊಳಗೆ ಸುಟ್ಟು ಹೋಗುತ್ತಿವೆ. ಇದರಿಂದಲೂ ರೈತರಿಗೆ ಸಮಸ್ಯೆ ಆಗುತ್ತಿದೆ ಎಂದು ಗೊತ್ತಾಗಿದೆ. ಜಿಲ್ಲೆಯಲ್ಲಿ ಎಲ್ಲೆಲ್ಲಿ ಪದೇ ಪದೇ ಟ್ರಾನ್ಸ್‌ಫಾರ್ಮರ್‌ಗಳು ಸುಟ್ಟುಹೋಗಿ ಸಮಸ್ಯೆ ಎದುರಾಗುತ್ತಿದೆ ಎನ್ನುವುದರ ಬಗ್ಗೆ ನನಗೆ ವಿಸ್ತೃತವಾದ ವರದಿ ಸಲ್ಲಿಸಬೇಕು. ಟಿ.ಸಿಗಳ ಸಮಸ್ಯೆ ಹೇಳಿಕೊಳ್ಳಲು ಜನರು ಜನಪ್ರತಿನಿಧಿಗಳ ಬಳಿ ಬರಬಾರದು ಎಂದು ಖಡಕ್ ಆಗಿ ಸೂಚಿಸಿದರು.

# ನಾಳೆ ಕಮಲಾಪುರದಲ್ಲಿ "ಎರಬೂತ (ಗ್ರೇಟ್ ಇಂಡಿಯನ್ ಬಸ್ಟರ್ಡ್)" ಸಂರಕ್ಷಣೆ ಕುರಿತು ಪ್ರಾದೇಶಿಕ ಕಾರ್ಯಾಗಾರ



**ಬಳ್ಳಾರಿ,ಜು.25.**ಕರ್ನಾಟಕ ಅರಣ್ಯ ಇಲಾಖೆಯ ಬಳ್ಳಾರಿ ವಿಭಾಗದ ವತಿಯಿಂದ ಅಳಿವಿನಂಚಿನಲ್ಲಿರುವ ಅಪರೂಪದ ಹಕ್ಕಿಯಾದ "ಎರಬೂತ" (ಗ್ರೇಟ್ ಇಂಡಿಯನ್ ಬಸ್ಟರ್ಡ್ – GIB) ಸಂರಕ್ಷಣೆ, ಅದರ ಎದುರಿನ ಸವಾಲುಗಳು ಮತ್ತು ದೀರ್ಘಕಾಲೀನ ರಕ್ಷಣಾ ಕಾರ್ಯತಂತ್ರ ಗಳ ಕುರಿತು ಜುಲೈ 27 ರಂದು ಕಮಲಾಪುರದ ದರೋಜಿ ಕರಡಿ ಧಾಮ ಪ್ರಕೃತಿ ನಿರೂಪಣಾ ಕೇಂದ್ರದಲ್ಲಿ ಪ್ರಾದೇಶಿಕ ಕಾ ಂ ು ಾ ್ ಗಾ ರ ವ ನ ್ ು ಆಯೋಜಿಸಲಾಗಿದೆ. ಈ ವಿಶೇಷ ಕಾರ್ಯಾಗಾರದಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಹಾಗೂ ಮುಖ್ಯ ವನ್ಯಜೀವಿ ಪರಿಪಾಲಕರಾದ ಕುಮಾರ್ ಪುಷ್ಕರ್ ಅವರು ಭಾಗವಹಿಸಲಿದ್ದಾರೆ. ಅಲ್ಲದೆ, ಭಾರತೀಯ ವನ್ಯಜೀವಿ ಸಂಸ್ಥೆ (ಹಾಗೂ ಬಾಂಬೆ ನ್ಯಾಚುರಲ್ ಹಿಸ್ಟರಿ ಸೊಸೈಟಿ ಸಂಸ್ಥೆಗಳ ಪ್ರಸಿದ್ಧ ವಿಜ್ಞಾನಿಗಳು ಮತ್ತು ಸಂರಕ್ಷಣಾ ಜೀವಶಾಸ್ತ್ರಜ್ಞರು ಆಗಮಿಸಿ ಕ್ಷೇತ್ರ ಮಟ್ಟದ ತಮ್ಮ ಅನುಭವ ಹಾಗೂ ವೈಜ್ಞಾನಿಕ ವಿಚಾರಗಳನ್ನು ಹಂಚಿಕೊಳ್ಳಲಿದ್ದಾರೆ.

**ಕಾರ್ಯಾಗಾರದ ಪ್ರಮುಖ ಉದ್ದೇಶಗಳು:** ಎರಬೂತ / ಉಖಃ ತಳಿಯ ಪ್ರಸ್ತುತ ಸ್ಥಿತಿಗತಿ ಮತ್ತು ಸಂರಕ್ಷಣಾ ವಿಧಾನಗಳ ಬಗ್ಗೆ ಮಾಹಿತಿ ಹಂಚಿಕೊಳ್ಳುವುದು. ತೀವ್ರ ಅಳಿವಿನಂಚಿನಲ್ಲಿರುವ ಈ ಪಕ್ಷಿ ಪ್ರಭೇದ ಎದುರಿಸುತ್ತಿರುವ ಬೆದರಿಕೆಗಳು ಹಾಗೂ ಸಂರಕ್ಷಣೆಗೆ ಇರುವ ಅವಕಾಶಗಳನ್ನು ಗುರುತಿಸುವುದು. ವಿವಿಧ ಇಲಾಖೆಗಳ ನಡುವೆ ಉತ್ತಮ ಸಮನ್ವಯ ಸಾಧಿಸಿ, ಆವಾಸಸ್ಥಾನಗಳ ಪುನಶ್ಚೇತನಕ್ಕೆ ಪ್ರಾದೇಶಿಕ ಹಂತದಲ್ಲಿ ಸೂಕ್ತ ಕಾರ್ಯತಂತ್ರ ರೂಪಿಸುವುದು.

**12 ಜಿಲ್ಲೆಗಳ ಅಧಿಕಾರಿಗಳ ಭಾಗವಹಿಸುವಿಕೆ:** ಉತ್ತರ ಕರ್ನಾಟಕ ಭಾಗದ (ಕಲ್ಯಾಣ ಕರ್ನಾಟಕ ಹಾಗೂ ಕಿತ್ತೂರು ಕರ್ನಾಟಕ ಪ್ರದೇಶಗಳ) 12 ಜಿಲ್ಲೆಗಳ ಅರಣ್ಯಾಧಿಕಾರಿಗಳು ಮತ್ತು ಜಿಲ್ಲಾ ಆಡಳಿತ ವ್ಯವಸ್ಥೆ ಈ ಕಾರ್ಯಾಗಾರದಲ್ಲಿ ಕೈಜೋಡಿಸಲಿದೆ.

# ಲಾರ್ಡ್ಸ್ ಇಂಡೋ-ಅಮೆರಿಕನ್ ಪಿಯು ಕಾಲೇಜು: ನವವಿದ್ಯಾರ್ಥಿಗಳಿಗೆ ಸ್ವಾಗತ




**ಬಳ್ಳಾರಿ, ಜು 25.** ಬಳ್ಳಾರಿ ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ಲಾರ್ಡ್ಸ್ ಇಂಡೋ-ಅಮೆರಿಕನ್ ಪಿಯು ಕಾಲೇಜಿನ ಆವರಣದಲ್ಲಿ, ದಿನಾಂಕ 25.07.2026 ರಂದು ಹೊಸದಾಗಿ ಪ್ರವೇಶ ಪಡೆದ ವಿದ್ಯಾರ್ಥಿಗಳನ್ನು ಆತ್ಮೀಯವಾಗಿ ಬರಮಾಡಿಕೊಳ್ಳುವ ಉದ್ದೇಶದಿಂದ ಫ್ರೆಶರ್ಸ್ ಡೇ ಕಾರ್ಯಕ್ರಮವನ್ನು ಅತ್ಯಂತ ಸಂಭ್ರಮ ಮತ್ತು ಸಡಗರದಿಂದ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಮುಖ್ಯ ಅತಿಥಿಗಳಾದ ಯು ಸೋಮಶೇಖರ್, ರಿಟೈರ್ಡ್ ಕಾಮರ್ಸ್ ಪ್ರೊಫೆಸರ್ ಎಎಸ್‌ಎಂ ಉಮೆನ್ಸ್ ಕಾಲೇಜ್ ಬಳ್ಳಾರಿ, ಕಾರ್ಯಕ್ರಮದ ಅಧ್ಯಕ್ಷರಾದ ಪಿ ಹೆಚ್ ನಾಯ್ಡು ಫೌಂಡರ್ ಚೇರ್ಮನ್ ಆಫ್ ಲಾರ್ಡ್ಸ್ ಇಂಡೋ-ಅಮೆರಿಕನ್ ಸ್ಕೂಲ್ ಅಂಡ್ ಕಾಲೇಜ್ ಬಳ್ಳಾರಿ ಹಾಗೂ ಕಾಲೇಜಿನ ಪ್ರಾಂಶುಪಾಲ ರಾಜೇಶ ಬಿ ವಿ, ಉಪನ್ಯಾಸಕ ಸುಧೀರ್ ಕುಮಾರ್ ಕೆ ಪಿ, ಶೇಕ್ ಸಲೀಂ ಭಾಷಾ ಮತ್ತು ಅಡ್ಮಿನಿಸ್ಟ್ರೇಟರ್ ಆದ ಪಿ ಉದಯ ಭಾಸ್ಕರ್ ಇವರು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ತಮ್ಮ ಭಾಷಣದಲ್ಲಿ ಹೊಸ ವಿದ್ಯಾರ್ಥಿಗಳು ಶಿಸ್ತು, ಪರಿಶ್ರಮ ಮತ್ತು ಉತ್ತಮ ಮೌಲ್ಯಗಳನ್ನು ಅಳವಡಿಸಿಕೊಂಡು ವಿದ್ಯಾಭ್ಯಾಸದಲ್ಲಿ ಸಾಧನೆ ಮಾಡಬೇಕೆಂದು ಕರೆ ನೀಡಿದರು.

ವಿದ್ಯಾರ್ಥಿಗಳು ನೃತ್ಯ, ಗಾಯನ, ನಾಟಕ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರದರ್ಶಿಸಿ ಎಲ್ಲರ ಮೆಚ್ಚುಗೆಗೆ ಪಾತ್ರರಾದರು. ಹಿರಿಯ ವಿದ್ಯಾರ್ಥಿಗಳು ಹೊಸ ವಿದ್ಯಾರ್ಥಿಗಳನ್ನು ಆತ್ಮೀಯವಾಗಿ ಸ್ವಾಗತಿಸಿ, ಕಾಲೇಜಿನ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಿದರು.

ಕೊನೆಯಲ್ಲಿ, ಆಯೋಜಕರ ಪರವಾಗಿ ಎಲ್ಲ ಅತಿಥಿಗಳು, ಬೋಧಕ, ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳಿಗೆ ಧನ್ಯವಾದಗಳನ್ನು ಅರ್ಪಿಸಲಾಯಿತು.

# ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ ವಿದ್ಯಾರ್ಥಿಗಳು ಐಇಇಇ ಸ್ಪೇಸ್ ಸಮ್ಮೇಳನದಲ್ಲಿ ಭಾಗಿ




**ಕಲಬುರಗಿ, ಜು. 25:** ಇಲ್ಲಿನ ಕರ್ನಾಟಕ ಕೇಂದ್ರೀಯ ವಿಶ್ವ ವಿದ್ಯಾಲಯದ (ಸಿಯುಕೆ) ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ಇಂಜಿನಿಯರಿಂಗ್ ವಿಭಾಗವು ಬೆಂಗಳೂರಿನಲ್ಲಿ ಇತ್ತೀಚಿಗೆ ನಡೆದ ಐಇಇಇ ಸ್ಪೇಸ್–2026 ಸಮ್ಮೇಳನದಲ್ಲಿ ಭಾಗವಹಿಸಿತು.

ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಟ್ಟು ಸತ್ಯನಾರಾಯಣ ಹಾಗೂ ಇಂಜಿನಿಯರಿಂಗ್ ನಿಕಾಯದ ಡೀನ್ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಪ್ರೊ.ಪರಮೇಶ ಹಾಗೂ ಸಹಾಯಕ ಪ್ರಾಧ್ಯಾಪಕ ಡಾ.ನರಸಿಂ ಚರಣ್ ಪ್ರಧಾನ್ ಸೇರಿ ವಿಭಾಗದ 15 ಸ್ನಾತಕೋತ್ತರ ಮತ್ತು ಸಂಶೋಧನಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ದೇಶದ ಬಾಹ್ಯಾಕಾಶ, ವೈಮಾನಿಕ ವಲಯ ಮತ್ತು ಸುಧಾರಿತ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸೇರಿದೇಶದ ವಿವಿಧ ಭಾಗಗಳಿಂದ ಸುಮಾರು 70ಕ್ಕೂ ಹೆಚ್ಚು ಕುಲಪತಿಗಳು, ನಿರ್ದೇಶಕರು, ಖ್ಯಾತ ವಿಜ್ಞಾನಿಗಳು, ಕೈಗಾರಿಕಾ ಕ್ಷೇತ್ರದ ಪ್ರಮುಖರು ಹಾಗೂ ಶಿಕ್ಷಣ ತರು ಈ ಸಮ್ಮೇಳನದಲ್ಲಿ ಭಾಗವಹಿಸಿದ್ದರು. ಭಾರತದ ಪ್ರತಿಷ್ಠಿತ ಸಮ್ಮೇಳನ ಗಳಲ್ಲಿ ಇದು ಯಶಸ್ವಿಯಾಗಿ ಹೊರಹೊಮ್ಮಿತು.ಈ ಸಮ್ಮೇಳನದಲ್ಲಿ ಪ್ರಮುಖವಾಗಿ ದೇಶದ ಪ್ರತಿಷ್ಠಿತ ಸಂಶೋಧನಾ ಕೇಂದ್ರವಾದ ಇಸ್ರೋ ಮತ್ತು ಡಿಆರ್‌ಡಿಒ ಕೇಂದ್ರಗಳ ಅಧ್ಯಕ್ಷರು, ಖ್ಯಾತ ವಿಜ್ಞಾನಿಗಳು ಸೇರಿದಂತೆ ರಕ್ಷಣಾ ವಲಯ, ಬಾಹ್ಯಾಕಾಶ, ವೈಮಾನಿಕ ವಲಯ ಮತ್ತು ಸಂಶೋಧನಾ ಕ್ಷೇತ್ರದ ಅನೇಕ ಗಣ್ಯರು ಉಪಸ್ಥಿತರಿದ್ದರು.

ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಟ್ಟು ಸತ್ಯನಾರಾಯಣ ಅವರು, ದೇಶದ ಪ್ರಮುಖ ಹಿರಿಯ ವಿಜ್ಞಾನಿಗಳಾದ ಡಾ.ಜಿ.ಸತೀಶ್ ರೆಡ್ಡಿ, ಡಾ.ಬಿ.ಕೆ. ದಾಸ್, ಡಾ.ಎಸ್.ಸೋಮನಾಥ್ ಸೇರಿ ಹಲವಾರು ಹಿರಿಯ ವಿಜ್ಞಾನಿಗಳೊಂದಿಗೆ ಕೇಂದ್ರೀಯ ವಿವಿಯ ಭವಿಷ್ಯದ ಶೈಕ್ಷಣಿಕ ಸಹಭಾಗಿತ್ವ, ಜಂಟಿ ಸಂಶೋಧನೆ ಹಾಗೂ ಮುಂಬರುವ ಆಯೋಜನೆ ಮಾಡುವ ಪ್ರಮುಖ ಯೋಜನೆಗಳ ಕುರಿತು ಚರ್ಚೆ ನಡೆಸಿದರು. ನಮ್ಮ ವಿಶ್ವ ವಿದ್ಯಾಲಯಕ್ಕೆ ಭೇಟಿ ನೀಡುವುದು, ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡುವಂತೆ ಹಿರಿಯ ವಿಜ್ಞಾನಿಗಳನ್ನು ಆಹ್ವಾನಿಸಿದರು.

ಸಮ್ಮೇಳನದ ಪ್ರಮುಖ ಆಕರ್ಷಣೆಯಾಗಿ ಭಾರತೀಯ ಗಗನಯಾತ್ರಿಗಳಾದ ಅಂಗದ್ ಪ್ರತಾಪ್ ಹಾಗೂ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರೊಂದಿಗೆ ವಿದ್ಯಾರ್ಥಿಗಳು ಸಂವಾದ ನಡೆಸಿದರು.

ಭಾರತದ ಬಾಹ್ಯಾಕಾಶ ಅನ್ವೇಷಣೆಯ ಭವಿಷ್ಯದ ಕುರಿತು ತಮ್ಮ ಅನುಭವ ಮತ್ತು ದೂರದೃಷ್ಟಿ ಹಂಚಿಕೊಂಡರು. ಇದು ವಿದ್ಯಾರ್ಥಿಗಳಿಗೆ ಸ್ಫೂರ್ತಿದಾಯಕವಾಯಿತು. ಈ ಸಮ್ಮೇಳನದಲ್ಲಿ ನಮ್ಮ ವಿಶ್ವವಿದ್ಯಾಲಯದ ಸಂಶೋಧನಾ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ತಮ್ಮ ಸಂಶೋಧನಾ ಪ್ರಬಂಧ ಮಂಡಿಸಿದರು. ಈ ಸಮ್ಮೇಳನವು ತಮ್ಮ ಸಂಶೋಧನಾ ಸಾಧನೆಗಳನ್ನು ರಾಷ್ಟ್ರೀಯ ಮಟ್ಟದಲ್ಲಿ ಪ್ರದರ್ಶಿಸಲು ಉತ್ತಮ ವೇದಿಕೆಯಾಗಿತ್ತು.



ಬಾಗಲಕೋಟೆಯ ಹಂಸನೂರಿನಲ್ಲಿ ಶನಿವಾರ ಮಳೆಗಾಗಿ ಪ್ರಾರ್ಥಿಸಲು ರೈತರು ಗುಗ್ಗರಿ ಜಾತ್ರೆಯನ್ನು ಆಚರಿಸಿದರು.

### ಡ್ರಾಟ್ ಟ್ರಿಗರ್ ನಿಯಮದಡಿ ಬರ ಘೋಷಣೆಗೆ ಪ್ರಸ್ತಾವನೆ ಸಲ್ಲಿಕೆ

# ಮುಂಗಾರು ಮಳೆ ಕೊರತೆ: ವಿವಿಧ ಗ್ರಾಮದ ಬೆಳೆ ವೀಕ್ಷಿಸಿದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ



**ಬಳ್ಳಾರಿ,ಜು.25.**ಮುಂಗಾರು ಮಳೆ ಕೊರತೆ ಹಿನ್ನೆಲೆಯಲ್ಲಿ ಬಳ್ಳಾರಿ ತಾಲೂಕಿನ ಹಲಕುಂದಿ, ಮಿಂಚೇರಿ ಹಾಗೂ ಸಂಜಿರಾಯನಕೋಟೆ ಗ್ರಾಮಗಳ ಕೃಷಿ ಜಮೀನುಗಳಿಗೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಅವರು ಶುಕ್ರವಾರ ಭೇಟಿ ನೀಡಿ, ಬೆಳೆಗಳ ಪರಿಸ್ಥಿತಿಯನ್ನು ವೀಕ್ಷಿಸಿದರು.

ಜಮೀನಿನಲ್ಲಿ ಬಿತ್ತನೆಯಾಗಿರುವ ತೊಗರಿ, ಹತ್ತಿ, ಸಜ್ಜೆ ಮತ್ತು ಸೂರ್ಯಕಾಂತಿ ಬೆಳೆಗಳನ್ನು ಪರಿಶೀಲಿಸಿ, ರೈತರಿಂದ ಮಾಹಿತಿ ಪಡೆದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಲಕುಂದಿ, ಮಿಂಚೇರಿ ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಲ್ಲಿ ಕಳೆದ 25 ದಿನಗಳಿಂದ ಹನಿಯೂ ಮಳೆಯಾಗಿಲ್ಲ. ಶೇ.80 ರಷ್ಟು ಕೃಷಿ ಭೂಮಿಯಲ್ಲಿ ಬಿತ್ತನೆಯಾಗಿರುವ ತೊಗರಿ, ಸೂರ್ಯಕಾಂತಿ ಹಾಗೂ ಹತ್ತಿ ಬೆಳೆಗಳು ತೇವಾಂಶ ಅಭಾವದಿಂದ ಬಳಲುತ್ತಿವೆ. ಶೇ.100 ರಷ್ಟು ಬೆಳೆಯಬೇಕಿದ್ದ ಜಾಗದಲ್ಲಿ ಕೇವಲ ಶೇ.30 ರಷ್ಟು ಮಾತ್ರ ಬೆಳೆದಿದೆ ಎಂದು ತಿಳಿಸಿದರು.

ಎಲ್ ನಿನೋ ಪರಿಣಾಮದಿಂದ ಜಲಾನಯನ ಪ್ರದೇಶಗಳಲ್ಲಿ ನಿರೀಕ್ಷಿತ ಮಳೆಯಾಗಿಲ್ಲ. ಕಳೆದ ವರ್ಷ ಇದೇ ಅವಧಿಯಲ್ಲಿ ತುಂಗಭದ್ರಾ ಜಲಾಶಯದಲ್ಲಿ 80 ಟಿಎಂಸಿಗೂ ಹೆಚ್ಚು ನೀರಿತ್ತು. ಆದರೆ ಪ್ರಸ್ತುತ ಕೇವಲ 28 ಟಿಎಂಸಿ ನೀರು ಮಾತ್ರ ಸಂಗ್ರಹವಿದೆ. ಕಾಲುವೆಗೆ ನೀರು ಬಿಡುಗಡೆಯಾಗದ ಕಾರಣ ಸಿರುಗುಪ್ಪ, ಕಂಪ್ಲಿ ಮತ್ತು ಬಳ್ಳಾರಿ ಭಾಗದಲ್ಲಿ ಭತ್ತದ ಬಿತ್ತನೆ ಸಾಧ್ಯವಾಗಿಲ್ಲ. ಹೀಗಾಗಿ ರೈತರು ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸಬೇಕು ಹಾಗೂ ಪರ್ಯಾಯ ಬೆಳೆಗಳಿಗೆ ಆದ್ಯತೆ ನೀಡಬೇಕು ಎಂದು ಮನವಿ ಮಾಡಿದರು.

ಮುಖ್ಯಮಂತ್ರಿಗಳ ಆದೇಶದಂತೆ ತಾಲೂಕು ಮಟ್ಟದ ಅಧಿಕಾರಿಗಳ ತಂಡ ಕ್ಷೇತ್ರ ಭೇಟಿ ಪರಿಶೀಲನೆ ನಡೆಸುತ್ತಿದ್ದು, ಸರ್ಕಾರಕ್ಕೆ ಸಮಗ್ರ ವರದಿ ಸಲ್ಲಿಸಲಾಗುವುದು. ಕೇಂದ್ರದ ಡ್ರಾಟ್ ಮಾನಿಟರಿಂಗ್ ಸೆಲ್ ಮೂಲಕ ಹವಾಮಾನ ದತ್ತಾಂಶ ಹಾಗೂ ಒಣ ಹವೆ ಆಧಾರದ ಮೇಲೆ ಡ್ರಾಟ್ ಟ್ರಿಗರ್ ನಿಯಮಾವಳಿಗಳಂತೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

ಬಳ್ಳಾರಿ ತಾಲೂಕಿನ ಹಲಕುಂದಿ ಗ್ರಾಮದಲ್ಲಿ ಸ್ಪಾಂಜ್ ಐರನ್ ಕಾರ್ಖಾನೆ ಧೂಳಿನಿಂದ ಬೆಳೆ ನಷ್ಟ ಮತ್ತು ಸಾರ್ವಜನಿಕರ ಉಸಿರಾಟದ ತೊಂದರೆ ಕುರಿತು ಸ್ಪಂದಿಸಿದ ಜಿಲ್ಲಾಧಿಕಾರಿ, ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಅವರು ಈಗಾಗಲೇ ಸ್ಥಳ ಪರಿಶೀಲನೆ ನಡೆಸಿದ್ದಾರೆ. ತನಿಖಾ ವರದಿ ಬಂದ ತಕ್ಷಣ ಕಾನೂನು ಹಾಗೂ ನ್ಯಾಯಾಲಯದ ವ್ಯಾಪ್ತಿಯಲ್ಲಿ ರೈತರ ಹಿತರಕ್ಷಣೆಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ಕೆ.ಎಂ.ಸೋಮಸುಂದರ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ್, ಉಪ ನಿರ್ದೇಶಕ ಎಸ್.ಎನ್. ಮಂಜುನಾಥ್, ಬಳ್ಳಾರಿ ಸಹಾಯಕ ಕೃಷಿ ನಿರ್ದೇಶಕ ಗರ್ಜಪ್ಪ, ತಹಶೀಲ್ದಾರರಾದ ಟಿ.ರೇಖಾ ಸೇರಿದಂತೆ ರೈತರು ಹಾಗೂ ಇತರರಿದ್ದರು.

# ಮೊದಲ ಮದುವೆ ಅವಧಿಯಲ್ಲೇ ಎರಡನೇ ಮದುವೆ ಅನೂರ್ಜಿತ: ಹೈಕೋರ್ಟ್ ಪೀಠ ಮಹತ್ವದ ತೀರ್ಪು




**ಧಾರವಾಡ, ಜು.25:** ಮುಸ್ಲಿಂ ಪುರುಷನೊಬ್ಬ ಮೊದಲ ಮದುವೆಯ ಅವಧಿಯಲ್ಲಿ ಮಾಡಿಕೊಂಡ ಎರಡನೇ ಮದುವೆಯು ವಿಶೇಷ ವಿವಾಹ ಕಾಯಿದೆ 1954ರ ಅಡಿಯಲ್ಲಿ ಅನೂರ್ಜಿತವಾಗುತ್ತದೆ ಎಂದು ಹೈಕೋರ್ಟ್‌ನ ಧಾರವಾಡ ಪೀಠ ಇತ್ತೀಚೆಗೆ ತೀರ್ಪು ನೀಡಿದೆ.

ಮುಸ್ಲಿಂ ವೈಯಕ್ತಿಕ ಕಾನೂನು ಪುರುಷರು ಬಹುವಿವಾಹ ಮಾಡಿಕೊಳ್ಳಲು ಅವಕಾಶ ನೀಡಿದ್ದರೂ, ವೈಯಕ್ತಿಕ ಕಾನೂನಿನ ಅಡಿಯಲ್ಲಿ ವಿವಾಹಗಳು ಶಾಸ್ತ್ರೋಕ್ತವಾಗಿ ನಡೆದರೆ ಮಾತ್ರ ಈ ಕಾನೂನು ಸ್ಥಾನವು ಚಾಲ್ತಿಯಲ್ಲಿರುತ್ತದೆ ಎಂದು ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಮ್ ಅವರ ಏಕಸದಸ್ಯ ಪೀಠ ಹೇಳಿದೆ.

ವಿಶೇಷ ವಿವಾಹ ಕಾಯಿದೆ ಅಡಿಯಲ್ಲಿ ವಿವಾಹವಾಗಲು ಪಕ್ಷಕಾರರು ಆಯ್ಕೆ ಮಾಡಿಕೊಂಡರೆ ಕಾನೂನು ಸ್ಥಾನವು ಬದಲಾಗುತ್ತದೆ, ಇದು ಈಗಾಗಲೇ ವಿವಾಹವಾದ ವ್ಯಕ್ತಿಯ ಹಿಂದಿನ ವಿವಾಹ ಇನ್ನೂ ಅಸ್ತಿತ್ವದಲ್ಲಿದ್ದರೆ ಈ ಕಾಯಿದೆ ಅಡಿಯಲ್ಲಿ ಮತ್ತೊಂದು ವಿವಾಹವನ್ನು ಮಾಡಿಕೊಳ್ಳಲು ಸಾಧ್ಯವಿಲ್ಲ ಎಂದು ಹೇಳುತ್ತದೆ.

"ಒಮ್ಮೆ ಪಕ್ಷಕಾರರು ತಮ್ಮ ವೈಯಕ್ತಿಕ ಕಾನೂನಿನ ಬದಲು ಕಾಯಿದೆಯ ನಿಬಂಧನೆಗಳನ್ನು ಪ್ರಜ್ಞಾಪೂರ್ವಕವಾಗಿ ಅನ್ವಯಿಸಿದರೆ, ಅವರು ಸಂಸತ್ತು ಜಾರಿಗೆ ತಂದ ಕಡ್ಡಾಯ ಶಾಸನಬದ್ಧ ಆಡಳಿತಕ್ಕೆ ತಮ್ಮನ್ನು ತಾವು ಒಳಪಡಿಸಿಕೊಳ್ಳುತ್ತಾರೆ. ಆದ್ದರಿಂದ ಅಂತಹ ವಿವಾಹದಿಂದ ಬರುವ ಹಕ್ಕುಗಳು ಮತ್ತು ಬಾಧ್ಯತೆಗಳನ್ನು ವೈಯಕ್ತಿಕ ಕಾನೂನಿನಿಂದ ನಿರ್ಧರಿಸಲಾಗುವುದಿಲ್ಲ, ಬದಲಿಗೆ ಕಾಯಿದೆಯ ನಿಬಂಧನೆಗಳಿಂದ ಮಾತ್ರ ನಿರ್ಧರಿಸಲಾಗುತ್ತದೆ" ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ವಿಶೇಷ ವಿವಾಹ ಕಾಯಿದೆ ಅಡಿ 2008ರಲ್ಲಿ ಮುಸ್ಲಿಂ ಪುರುಷನನ್ನು ಮದುವೆಯಾಗಿದ್ದ ಮಹಿಳೆಯೊಬ್ಬರು ತನ್ನನ್ನು ಕಾನೂನುಬದ್ಧ ಉತ್ತರಾಧಿಕಾರಿ ಎಂದು ಗುರುತಿಸಲು ನಿರಾಕರಿಸಿದ್ದನ್ನು ಪ್ರಶ್ನಿಸಿದ ಪ್ರಕರಣದಲ್ಲಿ ನ್ಯಾಯಾಲಯವು ಈ ಅಭಿಪ್ರಾಯ ನೀಡಿತು. ದಂಪತಿಗೆ ಒಂದು ಹೆಣ್ಣು ಮಗು ಕೂಡ ಇದೆ.

ವ್ಯಕ್ತಿಯು 2024ರಲ್ಲಿ ತನ್ನ ಸಹೋದರ ಹೂಡಿದ್ದ ವಿಭಜನಾ ದಾವೆ ವಿಚಾರಣೆಯಲ್ಲಿದ್ದಾಗ ನಿಧನರಾಗಿದ್ದಾರೆ. ಆ ವ್ಯಕ್ತಿಯ ಮರಣದ ನಂತರ, ಅರ್ಜಿದಾರರು ಮತ್ತು ಅವರ ಮಗಳು ವಿಭಜನಾ ದಾವೆಯಲ್ಲಿ ತಮ್ಮನ್ನು ಪ್ರತಿವಾದಿಯಾಗಿಸಲು ಕೋರಿದ್ದರು.

ಆದಾಗ್ಯೂ, ವಿಚಾರಣಾ ನ್ಯಾಯಾಲಯವು ಅವರನ್ನು ಕಾನೂನುಬದ್ಧವಾಗಿ ವಿವಾಹಿತ ಪತ್ನಿ ಎಂದು ಗುರುತಿಸಲು ಅಥವಾ ಅವರನ್ನು ಪಕ್ಷಾನ್ನಾಗಿ ಮಾಡಲು ನಿರಾಕರಿಸಿತ್ತು. ದಂಪತಿಯ ಮಗಳನ್ನು ಮೊಕದ್ದಮೆಯಲ್ಲಿ ಪಕ್ಷಕಾರರನ್ನಾಗಿ ಸೇರಿಸಲಾಗಿತ್ತು ಅರ್ಜಿದಾರರು ವಿಚಾರಣಾ ನ್ಯಾಯಾಲಯದ ತೀರ್ಪನ್ನು ಹೈಕೋರ್ಟ್‌ನಲ್ಲಿ ಪ್ರಶ್ನಿಸಿದ್ದರು.

ಹೈಕೋರ್ಟ್ ವಿಚಾರಣಾ ನ್ಯಾಯಾಲಯದ ತೀರ್ಪನ್ನು ಎತ್ತಿಹಿಡಿದಿದೆ. ವಿಶೇಷ ವಿವಾಹ ಕಾಯಿದೆ ಅಡಿಯಲ್ಲಿ ಎರಡನೇ ವಿವಾಹವಾದಾಗ ಅರ್ಜಿದಾರರ ಮೊದಲ ವಿವಾಹ ಇನ್ನೂ ಅಸ್ತಿತ್ವದಲ್ಲಿದ್ದರಿಂದ, ಅರ್ಜಿದಾರರು ಮತ್ತು ಮೃತ ವ್ಯಕ್ತಿಯ ನಡುವಿನ ವಿವಾಹವು ಅನೂರ್ಜಿತವಾಗಿದೆ ಎಂದು ನ್ಯಾಯಾಲಯವು ಜುಲೈ 15ರ ಆದೇಶದಲ್ಲಿ ತೀರ್ಮಾನಿಸಿತು. ವಿಶೇಷ ವಿವಾಹ ಕಾಯಿದೆ ಸೆಕ್ಷನ್ 4(ಎ) ಪ್ರಕಾರ ಮೊದಲ ಮದುವೆ ರದ್ದಾಗದೇ ಇದ್ದಾಗ ಎರಡನೇ ಮದುವೆಗೆ ಅವಕಾಶವಿರುವುದಿಲ್ಲ.

"ಹಿಂದಿನ ವಿವಾಹದ ಚಾಲ್ತಿಯಲ್ಲಿರುವುದರಿಂದ ಕಾಯಿದೆಯಡಿಯಲ್ಲಿ ನಡೆದ ವಿವಾಹವು ಅನೂರ್ಜಿತವಾಗಿದೆ ಮತ್ತು ಅದು ಪತಿ ಮತ್ತು ಪತ್ನಿಯ ಕಾನೂನುಬದ್ಧ ಸ್ಥಾನಮಾನವನ್ನು ಪಕ್ಷಕಾರರಿಗೆ ನೀಡುವುದಿಲ್ಲ" ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ಆದಾಗ್ಯೂ, ದಂಪತಿ ಮಗಳು ಮೃತ ವ್ಯಕ್ತಿಯ ಕಾನೂನುಬದ್ಧ ಉತ್ತರಾಧಿಕಾರಿಯಾಗಿ ವಿಭಜನಾ ಮೊಕದ್ದಮೆಯಲ್ಲಿ ಪಕ್ಷಕಾರಳಾಗಲು ಅರ್ಹಳು ಎಂಬ ವಿಚಾರಣಾ ನ್ಯಾಯಾಲಯದ ತೀರ್ಪಿಗೆ ಹೈಕೋರ್ಟ್ ಒಪ್ಪಿದೆ. "ಅಮಾನ್ಯ ವಿವಾಹದಿಂದ ಜನಿಸಿದ ಮಕ್ಕಳು ಶಾಸನಬದ್ಧ ರಕ್ಷಣೆಗೆ ಅರ್ಹರಾಗಿರುತ್ತಾರೆ ಮತ್ತು ಸೂಕ್ತ ಪ್ರಕ್ರಿಯೆಗಳಲ್ಲಿ ತಮ್ಮ ಕಾನೂನು ಹಕ್ಕುಗಳನ್ನು ಪ್ರತಿನಿಧಿಸಲು ಸಮರ್ಥರಾಗಿರುತ್ತಾರೆ. ನಿರ್ಧರಿತವಾಗಿರುವ ಈ ಕಾನೂನು ಸ್ಥಾನವನ್ನು ಗಮನದಲ್ಲಿಟ್ಟುಕೊಂಡು, ವಿಚಾರಣಾ ನ್ಯಾಯಾಲಯವು ಪ್ರಸ್ತಾವಿತ ಪ್ರತಿವಾದಿ ನಂ.2(ಎಫ್), ಅಂದರೆ ಮಗಳು, ದಾಖಲೆಯಲ್ಲಿ ಬರಲು ಅನುಮತಿ ನೀಡಿದೆ" ಎಂದಿದೆ.

## ಬೆಸ್ಟ್ ಕಾಲೇಜಿನಲ್ಲಿ ಮಾದಕ ದ್ರವ್ಯ ಮುಕ್ತ ಭಾರತ ಮತ್ತು ಪೋಕ್ಸೋ ಕಾನೂನು ಕುರಿತು ಅರಿವು



**ಬಳ್ಳಾರಿ, ಜು 25:** ಬಳ್ಳಾರಿಯ ಪ್ರತಿಷ್ಠಿತ ಬೆಸ್ಟ್ ಕಾಲೇಜಿನಲ್ಲಿ ಮಾದಕ ದ್ರವ್ಯ ಮುಕ್ತ ಭಾರತ ಮತ್ತು ಪೋಕ್ಸೋ ಕಾನೂನು ಕುರಿತು ಕಾನೂನು ಅರಿವು–ನೆರವು ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು. ಕಾರ್ಯಕ್ರಮವನ್ನು ಎಚ್.ಶಶಿಧರ್ ಶೆಟ್ಟಿ ಸದಸ್ಯ ಕಾರ್ಯದರ್ಶಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರು ಉದ್ಘಾಟಿಸಿದರು. ಜಿ.ಶ್ರೀನಿವಾಸ ರೆಡ್ಡಿ, ಉಪಪ್ರಾಂಶುಪಾಲರು, ಬಿ.ಐ.ಪಿ.ಯು ಕಾಲೇಜು, ಬಳ್ಳಾರಿ ಇವರು ಸ್ವಾಗತ ಕೋರಿದರು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಜೈಶಂಕರ್, ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶರು ಮತ್ತು ಅಧ್ಯಕ್ಷರು, ಶಾಶ್ವತ ಲೋಕ ಅದಾಲತ್ ಮಂಗಳೂರು, ಪಿ.ಎಂ. ಬಾಲಸುಬ್ರಮಣಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು, ರಾಜೇಶ್ ಎನ್.ಹೊಸಮನೆ, ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬಳ್ಳಾರಿ, ಡಾ॥ ಮೋಹನ್ ರಾವ್ ನಲವಡೆ, ಸದಸ್ಯರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು., ಆಗಮಿಸಿದ್ದರು. ಮುಖ್ಯ ಅತಿಥಿಗಳು ಎಚ್.ಶಶಿಧರ್ ಶೆಟ್ಟಿ, ಮಾತನಾಡುತ್ತಾ ಮಾದಕ ದ್ರವ್ಯ ಮುಕ್ತ ಭಾರತ ಮತ್ತು ಪೋಕ್ಸೋ ಕಾನೂನು ಕುರಿತು ಕಾನೂನು ಅರಿವು– ನೆರವು ಬಗ್ಗೆ ವಿದ್ಯಾರ್ಥಿಗಳಿಗೆ ಸವಿವರವಾಗಿ ವಿವರಿಸಿ ಸಂವಾದ ನಡೆಸಿದರು.

# ಜು. 31 ರವರೆಗೆ ಅಬಕಾರಿ ಸನ್ನದುಗಳ ಇ–ಹರಾಜು: ಅಬಕಾರಿ ಆಯುಕ್ತ ಆರ್.ವೆಂಕಟೇಶ ಕುಮಾರ್



**ಬಳ್ಳಾರಿ,ಜು.25.**2025–26 ರ ಆಯವ್ಯಯ ಘೋಷಣೆಯಂತೆ ಕರ್ನಾಟಕ ಸರ್ಕಾರವು ಖಾಲಿ ಅಥವಾ ಲಭ್ಯವಿರುವ ಮದ್ಯದ ಸನ್ನದುಗಳನ್ನು ಪಾರದರ್ಶಕ ಎಲೆಕ್ಟ್ರಾನಿಕ್ ಹರಾಜಿನ ಮೂಲಕ ಹಂಚಿಕೆ ಮಾಡಿ, ಹೆಚ್ಚುವರಿ ರಾಜಸ್ವ ಸಂಗ್ರಹಣೆ ಮಾಡುವ ನಿರೀಕ್ಷಿಸಿದೆ ಎಂದು ಪ್ರಸ್ತಾಪಿಸಿದ ಹಿನ್ನೆಲೆಯಲ್ಲಿ ,ಅಬಕಾರಿ ಇಲಾಖೆಯು ಅಬಕಾರಿ ನಿಯಮಗಳಿಗೆ ಅಗತ್ಯ ತಿದ್ದುಪಡಿಗಳನ್ನು ತಂದು, ಒಟ್ಟಾರೆ 579 ಸನ್ನದುಗಳನ್ನು ಎಲೆಕ್ಟ್ರಾನಿಕ್ ಇ–ಹರಾಜು ಮೂಲಕ ಹಂಚಿಕೆ ಮಾಡಲು ಸರ್ಕಾರವು ಅಧಿಸೂಚನೆ ಹೊರಡಿಸಿದೆ.

ಸ್ಥಗಿತಗೊಂಡಿರುವ ಮತ್ತು ಹಂಚಿಕೆಯಾಗದೇ ಇರುವ ಸಿಎಲ್–2 ಮತ್ತು ಸಿಎಲ್(11–ಸಿ) ಸನ್ನದುಗಳನ್ನು ಸಿಎಲ್(2–ಎ) ಎಂದು ಮತ್ತು ಸ್ಥಗಿತಗೊಂಡಿರುವ ಸಿಎಲ್–9 ಸನ್ನದುಗಳನ್ನು ಸಿಎಲ್(9–ಎ) ಎಂದು ವರ್ಗೀಕರಿಸಿ 569 ಸನ್ನದುಗಳ ಪೈಕಿ ಹರಾಜು ಪ್ರಕ್ರಿಯೆಗೆ 483 ಸಿಎಲ್(2–ಎ) ಮತ್ತು 96 ಸಿಎಲ್ (9–ಎ) ಸನ್ನದುಗಳನ್ನು ಇ–ಹರಾಜಿಗೆ ಪ್ರಕಟಿಸಲಾಗಿದೆ. ಸರ್ಕಾರವು ಸಿಎಲ್(2–ಎ) ಮತ್ತು ಸಿಎಲ್(9–ಎ) ಸನ್ನದುಗಳನ್ನು ಇ–ಹರಾಜಿನಲ್ಲಿ ಹರಾಜು ಮಾಡಲಿದೆ.ವಿವಿಧ ವರ್ಗಗಳಿಗೆ ಮೀಸಲಾತಿ ಕಲ್ಪಿಸಲಾಗಿದೆ.

ಬಿಡ್‌ದಾರರ ನೋಂದಣಿಯು ಜುಲೈ 3 ರಿಂದ ಪ್ರಾರಂಭವಾಗಿದ್ದು, ನೇರ ಹರಾಜು (Live Bidding) ಜುಲೈ 24 ರಿಂದ 31ರವರೆಗೆ ಜರುಗಲಿದೆ.

ಇ–ಹರಾಜು ಅಧಿಸೂಚನೆ ಮತ್ತು ಬಿಡ್ಡಿಂಗ್‌ಗಾಗಿ ನೋಂದಾಯಿಸಿಕೊಳ್ಳುವ ವಿಧಾನವು ಅಬಕಾರಿ ಇಲಾಖೆಯ https://stateexcise.karnataka.gov.in ರಲ್ಲಿ ಮತ್ತು MSTC ಇ–ಹರಾಜು ಪೋರ್ಟಲ್ https://www.mstcecommerce.com ನಲ್ಲಿ ಲಭ್ಯವಿರುತ್ತದೆ ಎಂದು ಅಬಕಾರಿ ಆಯುಕ್ತರಾದ ಆರ್. ವೆಂಕಟೇಶ ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏನ್ಯುಮರೇಷನ್ ಫಾರ್ಮ ಎಲ್ಲರೂ ಭರ್ತಿ ಮಾಡಿಕೊಡಿ: ಭಗವಂತ ಖೂಬಾ



**ಬೀದರ್, ಜು.25–**ದಿ. 25 ಮತ್ತು 26 ರಂದು ರಾಜ್ಯಾದ್ಯಂತ ಭಾರತೀಯ ಜನತಾ ಪಕ್ಷದಿಂದ ಹಮ್ಮಿಕೊಂಡಿರುವ ಎಸ್.ಐ.ಆರ್ ಮನೆ – ಮನೆ ಸಂಪರ್ಕ ಅಭಿಯಾನದ ಭಾಗವಾಗಿ ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ, ನಗರದ ವಾರ್ಡ್ ಸಂಖ್ಯೆ 18ರ ಬೂತ್ ನಂ. 155 ನಂದಿ ಕಾಲೋನಿಯ ಮನೆ ಮನೆಗೆ ತೆರಳಿ ಮತದಾರರಿಗೆ ಜಾಗೃತಿ ಮೂಡಿಸಿ, ಅಭಿಯಾನದಲ್ಲಿ ಪಾಲ್ಗೊಂಡರು.

ಹಾಗೂ ಕೆಲವು ಕುಟುಂಬಗಳಲ್ಲಿ ಅನುಕೂಲವಿಲ್ಲದೆ ಇರುವ ಕಡೆ ಖೂಬಾ ಅವರು ಸ್ವತಃ ಮತದಾರರ ಎನ್ಯುಮರೇಷನ್ ಫಾರ್ಮ ಭರ್ತಿ ಮಾಡಿಕೊಟ್ಟರು ಹಾಗೆ ಇದನ್ನು ಕೂಡಲೆ ಸರ್ಕಾರಿ ಬಿ.ಎಲ್.ಓಗಳಿಗೆ ತಲುಪಿಸಿ, ಡಿಜಿಟಲೈಸೇಷನ್ ಮಾಡಿಕೊಳ್ಳುವಂತೆ ತಿಳಿಸಿದರು.

ಮತದಾರರ ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಈಗಾಗಲೆ ಜನರು ಫಾರಂಗಳು ಭರ್ತಿ ಮಾಡಿ ಕೊಟ್ಟಿರುವುದಾಗಿ ತಿಳಿಸಿದರು ಮತ್ತು ಕೆಲವು ಕಡೆ ಜನರಎನ್ಯುಮರೇಷನ್ ಫಾರ್ಮಗಳು ತುಂಬಿದ್ದಾರೆ, ಆದರೆ ಬಿ.ಎಲ್.ಓಗಳಿಗೆ ತಲುಪಿಸಿಲ್ಲಾ ಮತ್ತು ಇನ್ನೊಂದಿಷ್ಟು ಜನ, ಇನ್ನು ಸಮಯವಿದೆ ಎಂದು ಫಾರಂಗಳು ತುಂಬದೆ ಹಾಗೆ ಇಟ್ಟುಕೊಂಡಿರುವ ಬಗ್ಗೆಯೂ ಖೂಬಾ ಮತ್ತು ಅವರ ಜೊತೆಗಿದ್ದ ಪಕ್ಷದ ಮುಖಂಡರ ಗಮನಕ್ಕೆ ಬಂದಿತು,

ಆದರೆ ತರಹ ಸಮಯ ವ್ಯರ್ಥ ಮಾಡದೆ ನಿಮ್ಮ ಫಾರಂಗಳು ಭರ್ತಿ ಮಾಡಿ, ಬಿ.ಎಲ್.ಓಗಳಿಗೆ ನೀಡುವ ಜವಬ್ದಾರಿ ತಮ್ಮದಿದೆ, ಆದ್ದರಿಂದ ಆದಷ್ಟೂ ಬೇಗ ಫಾರಂಗಳು ಭರ್ತಿ ಮಾಡಿಕೊಡಿ, ಕೊನೆಯ ದಿನಾಂಕ ದವರೆಗೆ ಕಾಯ ಬೇಡಿ ಎಂದು ವಿನಂತಿಸಿ ಕೊಂಡರು.

# ಸಂಪತ್ತು ಬೆಳೆದಂತೆಲ್ಲ ಮಾನವೀಯ ಸಂಬಂಧಗಳು ಸಡಿಲಗೊಳ್ಳಬಾರದು - ಶ್ರೀ ರಂಭಾಪುರಿ ಜಗದ್ಗುರುಗಳು.



**ಹಗರಿಬೊಮ್ಮನಹಳ್ಳಿ–ಜು.25.** ಸಂತೃಪ್ತಿ ಸಮೃದ್ಧಿಗಾಗಿ ಧರ್ಮಾಚರಣೆ ಬೇಕು. ಧರ್ಮದ ದಾರಿ ಮೋಕ್ಷಕ್ಕೆ ಹೆದ್ದಾರಿ. ಪರಿಶ್ರಮವಿಲ್ಲದೇ ಶ್ರೇಯಸ್ಸು ಸಿದ್ಧಿಸದು. ಆಡಿದ ಮಾತು ಉಳಿಸಿಕೊಂಡು ಬಾಳುವುದೇ ನಿಜವಾದ ಧರ್ಮ. ಸಂಪತ್ತು ಬೆಳೆದಂತೆಲ್ಲ ಸಮಾಜದಲ್ಲಿ ಮಾನವೀಯ ಸಂಬಂಧಗಳು ಸಡಿಲಗೊಳ್ಳಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಜೀವಾತ್ಮನು ಧಾರ್ಮಿಕತೆಯ ದೇಗುಲದಲ್ಲಿ ಪುಣ್ಯದ ಸೆಲೆ ಸಂತೋಷದ ನೆಲೆ ಕಾಣಲು ಸಾಧ್ಯ. ಸಾಮಾಜಿಕ ಸಂಪ್ರದಾಯಗಳು ಬದಲಾಗಬಹುದು. ಆದರೆ ನೈತಿಕ ನಿಯಮಗಳು ಶಾಶ್ವತವಾಗಿರುತ್ತವೆ. ಪುಟ ಪುಸ್ತಕ ಬದಲಾಯಿಸಬಹುದು. ಆದರೆ ಇತಿಹಾಸವನ್ನು ಬದಲಿಸಲು ಯಾರಿಂದಲೂ ಸಾಧ್ಯವಿಲ್ಲ. ಬಿತ್ತಿದ ಬೀಜದಂತೆ ಫಸಲು ಹ್ಯಾಗೋ ಹಾಗೆಯೇ ನಮ್ಮ ಆಚರಣೆಯಂತೆ ಫಲ ಪ್ರಾಪ್ತಿಯಾಗುತ್ತದೆ. ಬೆಳೆಯುವ ಯುವ ಜನಾಂಗ ರಾಷ್ಟ್ರದ ಅಮೂಲ್ಯ ಸಂಪತ್ತು ಮತ್ತು ಆಸ್ತಿ. ಯುವ ಜನಾಂಗದಲ್ಲಿ ವೈಚಾರಿಕತೆ ಇರಲಿ. ಆದರೆ ನಾಸ್ತಿಕ ಭಾವನೆಗಳು ಬೆಳೆಯಬಾರದು. ವೀರಶೈವ ಧರ್ಮದಲ್ಲಿ ಜಂಗಮರ ಪಾತ್ರ ಬಹಳ ಮಹತ್ವದ್ದು. ಹುಟ್ಟಿನಿಂದ ಹಿಡಿದು ಸಾವಿನವರೆಗೆ ಜಂಗಮ ಸಂಸ್ಕಾರ ಸಂಸ್ಕೃತಿ ಅರುಹಿ ಧರ್ಮ ಸಂರಕ್ಷಕನಾಗಿ ಕಾರ್ಯ ಮಾಡುತ್ತಾನೆ. ಗುರು ಲಿಂಗ ಜಂಗಮ ಸಾಕ್ಷಾತ್ ಪರಮಾತ್ಮನ ಸ್ವರೂಪವೆಂದು ಭಾವಿಸಿ ಭಕ್ತರು ನಡೆದುಕೊಳ್ಳುತ್ತಾರೆ. ವೀರಶೈವ ಜಂಗಮರು ಧರ್ಮ ಪರಂಪರೆ ಆದರ್ಶ ಮೌಲ್ಯಗಳನ್ನು ಸಂವರ್ಧಿಸುವ ನಿಟ್ಟಿನಲ್ಲಿ ಜಂಗಮ ಕ್ಷೇಮಾಭಿವೃದ್ಧಿ ಸಂಘ ಕಾರ್ಯ ಮಾಡಲಿ. ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಜಿ.ಎಂ.ಜಗದೀಶ ಮೊದಲ್ಗೊಂಡು ಎಲ್ಲಾ ಪದಾಧಿಕಾರಿಗಳು ಅತ್ಯುತ್ತಮವಾದ ಧಾರ್ಮಿಕ ಮತ್ತು ಸಾಮಾಜಿಕ ಕಾರ್ಯಗಳನ್ನು ಮಾಡಿ ಸಮಾಜಕ್ಕೆ ದಿಕ್ಸೂಚಿಯಾಗಲೆಂದು ಶುಭ ಹಾರೈಸಿದರು.

ಸಮಾರಂಭ ಉದ್ಘಾಟಿಸಿದ ಹಗರಿಬೊಮ್ಮನಹಳ್ಳಿ ಕ್ಷೇತ್ರದ ಶಾಸಕ ನೇಮಿರಾಜ ನಾಯ್ಕ ಮಾತನಾಡಿ ಬೆಟ್ಟಕ್ಕೆ ಬೆಟ್ಟದ ಅವಶ್ಯಕತೆ ಇಲ್ಲದಿರಬಹುದು. ಆದರೆ ಮನುಷ್ಯನಿಗೆ ಮನುಷ್ಯನ ಅವಶ್ಯಕತೆಯಿದೆ. ಮನುಷ್ಯನಲ್ಲಿ ಮಾನವೀಯತೆ, ಕರುಣೆ, ಪರೋಪಕಾರಗಳು ಬೆಳೆದು ಬರಬೇಕು. ಬಲ್ಲವರು ಹೇಳುವ ಬೆಲ್ಲದಂತಹ ಮಾತಿಗೆ ಮೌಲ್ಯವನ್ನಿತ್ತು ಬಾಳನ್ನು ಬೆಳೆಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಜಂಗಮ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಧರ್ಮ ಸಂಸ್ಕೃತಿ ಬೆಳೆಸುವ ಮಹತ್ಕಾರ್ಯ ಮಾಡಲೆಂದರು. ಹರಿಹರದ ಮಾಜಿ ಶಾಸಕ ಎಚ್.ಎಸ್.ಶಿವಶಂಕರ ಮಾತನಾಡಿ ಸಮಾಜ ಸದೃಢವಾಗಲು ವೀರಶೈವ ಲಿಂಗಾಯತದ ಎಲ್ಲ ಒಳಪಂಗಡಗಳು ಒಂದಾಗುವ ಅವಶ್ಯಕತೆಯಿದೆ. ಪಂಚ ಪೀಠಗಳೇ ವೀರಶೈವ ಧರ್ಮದ ಮೂಲ ಗುರು ಪೀಠಗಳು ಎಂದರು.

# ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯಕ್ರಮದಲ್ಲಿ ಬಿಜೆಪಿ ಯುವ ಮುಖಂಡ ಪಾಲಣ್ಣ ಭಾಗಿ



**ಬಳ್ಳಾರಿ ಜು 25.** ಭಾರತೀಯ ಜನತಾ ಪಕ್ಷದ ವತಿಯಿಂದ ಹಮ್ಮಿಕೊಳ್ಳಲಾದ ಮಹಾಸಂಪರ್ಕ ಅಭಿಯಾನ ಕಾರ್ಯಕ್ರಮದಲ್ಲಿ ಪಿ. ಪಾಲಣ್ಣ ಮಾಜಿ ಬುಡಾ ಅಧ್ಯಕ್ಷರು, ಬಿಜೆಪಿ ಯುವ ಮುಖಂಡರು ವಾರ್ಡು ನಂಬರ್ 34 ಬೂತ್ ಸಂಖ್ಯೆ 19ರಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು.

ಪಾಲಣ್ಣ ಅವರು ಮಾತನಾಡುತ್ತಾ ನನಗೆ ನೀಡಲಾದ ಮತಗಟ್ಟೆ ವ್ಯಾಪ್ತಿಯಲ್ಲಿರುವ ಸುಮಾರು 20ಕ್ಕೂ ಹೆಚ್ಚು ಮನೆಗಳಿಗೆ ಭೇಟಿ ನೀಡಿ ಮತದಾರರ ಎನ್ಯೂಮರೇಷನ್ ಪತ್ರಗಳನ್ನು ಪರಿಶೀಲಿಸಿ ಈ ಕಾರ್ಯಕ್ರಮವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಯಿತು.

ಈ ವೇಳೆ ಮತದಾರರೊಂದಿಗೆ ಆತ್ಮೀಯವಾಗಿ ಸಂವಾದ ನಡೆಸಿ, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಖಖಖ) ಕುರಿತು ಅಗತ್ಯ ಮಾಹಿತಿಯನ್ನು ನೀಡಲಾಯಿತು ಎಂದು ತಿಳಿಸಿದರು.

# ಸುಂದರ ಕೈಬರಹದಿಂದ ಜೀವನ ಸುಂದರ: ಮಲ್ಲಿಕಾರ್ಜುನರಾವ್




**ಬೀದರ, ಜು. 25:** ಸುಂದರ ಮತ್ತು ಶುದ್ಧ ಕೈಬರಹಗಳು ಜೀವನವನ್ನೇ ಸುಂದರಗೊಳಿಸುತ್ತದೆ. ಆದ್ದರಿಂದ ಕೈಬರಹ ಯಾವಾಗಲೂ ಸುಂದರವಗಿರುವಂತೆ ಅಭ್ಯಾಸ ಮಾಡಿಕೊಳ್ಳಬೇಕು ಎಂದು ಸುಂದರ ಕೈಬರಹ ತಜ್ಞ ವೈ.ಮಲ್ಲಿಕಾರ್ಜುನರಾವ್ ಹೇಳಿದರು.

ಬೀದರ್ ತಾಲ್ಲೂಕಿನ ಆಣದೂರಿನ ಕಲ್ಯಾಣ ಭಾರತಿ ಪಬ್ಲಿಕ್ ಶಾಲೆಯಲ್ಲಿ ನಡೆದ ಸುಂದರ ಕೈ ಬರಹ ಕಾರ್ಯಾಗಾರದಲ್ಲಿ ಮಾತನಡಿದ ಅವರು, ಸುಂದರ ಮತ್ತು ವಿಶಿಷ್ಟ ಶೈಲಿಯ ಕೈಬರಹಗಳನ್ನು ರೂಢಿಸಿಕೊಂಡರೆ ಅಂಥ ಅಕ್ಷರಗಳು ಮತ್ತು ಬರಹಗಳಿಗೆ ಶಾಶ್ವತ ಆಯುಷ್ಯ ಇರುತ್ತದೆ. ಎಲ್ಲರೂ ಅದನ್ನು ಸಂಗ್ರಾಹ್ಯವೆಂದು ಸಂಗ್ರಹಿಸಿಡುತ್ತಾರೆ. ಆದ್ದರಿಂದ ನಿಮ್ಮ ಕೈಬರಹ ಯಾವಾಗಲೂ ಸುಂದರ ಮತ್ತು ಶುದ್ಧವಾಗಿರುವಂತೆ ರೂಢಿಸಿಕೊಳ್ಳಬೇಕೆಂದರು.

ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ರಾವ್ ಅವರು, ಕಾರ್ಯಾಗಾರದಲ್ಲಿ ಪಾಲ್ಗೊಮಡ ವಿದ್ಯಾರ್ಥಿಗಳಿಗೆ ಪೆನ್ನು, ಪೆನ್ಸಿಲ್ ಹಿಡಿಯುವ ಸರಿಯಾದ ವಿಧಾನ, ಅಕ್ಷರಗಳ ವಿನ್ಯಾಸ ಹಾಗೂ ಅಂದದ ಬರವಣಿಗೆ ತಂತ್ರಗಳನ್ನು ಹೇಳಿಕೊಟ್ಟು, ಅದನ್ನು ನಿರಂತರ ಬರವಣಿಗೆಯಿಂದ ಮುಂದೆ ಎಷ್ಟೇ ಅವಸರವಾದರೂ ಕೈಬರಹ ಸುಂದರ ಮತ್ತು ಶುದ್ಧವಾಗಿರುತ್ತವೆ ಎಂದು ಅಭಿಪ್ರಾಯಪಟ್ಟರು.

# ಸೌದಿಯ ಜಿಜಾನ್ ಮೇಲೆ ಉಗ್ರರ ದಾಳಿ

**ಸನಾ/ಜಿಜಾನ್, ಜು.25:** ರಿಯಾದ್ (ಸೌದಿ ಅರೇಬಿಯಾ) ರಾತ್ರೋರಾತ್ರಿ ನಡೆಸಿದ ದಾಳಿಗೆ ಪ್ರತೀಕಾರವಾಗಿ ಸೌದಿ ಅರೇಬಿಯಾದ ಜಿಜಾನ್ ನಗರದ ಮೇಲೆ ಕ್ಷಿಪಣಿ ದಾಳಿ ನಡೆಸಿರುವುದಾಗಿ ಇರಾನ್ ಬೆಂಬಲಿತ ಹೌತಿ ದಂಗೆಕೋರರು ಶನಿವಾರ ಹೇಳಿಕೊಂಡಿದ್ದಾರೆ.

ಯೆಮೆನ್ ಕ್ಷಿಪಣಿ ದಾಳಿಯು ನಗರದಲ್ಲಿ ಬೆಂಕಿ ಕಾಣಿಸಿಕೊಳ್ಳಲು ಕಾರಣವಾಯಿತು ಎಂದು ಹೌತಿಗಳ ಅನ್ಸಾರುಲ್ಲಾ ಮಾಧ್ಯಮ ಚಾನೆಲ್ ಟೆಲಿಗ್ರಾಮ್‌ನಲ್ಲಿ ತಿಳಿಸಿದೆ. ಸೌದಿ ಅರೇಬಿಯಾ ಸರ್ಕಾರವು ಪ್ರಾಂತ್ಯದಾದ್ಯಂತ ತುರ್ತು ಎಚ್ಚರಿಕೆಯನ್ನು ನೀಡಿದೆಯಾದರೂ, ವರದಿಯಾದ ದಾಳಿ ಅಥವಾ ಉಂಟಾದ ಹಾನಿಯ ಕುರಿತು ತಕ್ಷಣವೇ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

ಯೆಮೆನ್‌ನ ಬಂದರು ನಗರವಾದ ಹೊದೈಡಾ ಮತ್ತು ಹತ್ತಿರದ ಕಮರನ್ ದ್ವೀಪದಲ್ಲಿರುವ ಹೌತಿ–ಸಂಬಂಧಿತ ತಾಣಗಳನ್ನು ಗುರಿಯಾಗಿಸಿಕೊಂಡು ಶುಕ್ರವಾರ ಸೌದಿ ಅರೇಬಿಯಾ ನಡೆಸಿದ ವಾಯುದಾಳಿಗಳ ಬೆನ್ನಲ್ಲೇ ಈ ಕ್ಷಿಪಣಿ ದಾಳಿ ನಡೆದಿದೆ.

ಸೌದಿ ಶತ್ರುಗಳು ಹೊದೈಡಾ ಮತ್ತು ಕಮರನ್ ದ್ವೀಪದಲ್ಲಿರುವ ನಾಗರಿಕ ಸೌಲಭ್ಯಗಳನ್ನು ಗುರಿಯಾಗಿಸಿಕೊಂಡಿರುವುದು



ಅಪಾಯಕಾರಿ ಬೆಳವಣಿಗೆಯಾಗಿದೆ," ಎಂದು ಅನ್ಸಾರುಲ್ಲಾ ಮಾಧ್ಯಮ ಹೇಳಿದ್ದು, "ಈ ಇತ್ತೀಚಿನ ಅಪರಾಧಗಳು ಉತ್ತರವಿಲ್ಲದೆ ಹೋಗುವುದಿಲ್ಲ ಎಂದು ನಾವು ಪ್ರತಿಪಾದಿಸುತ್ತೇವೆ," ಎಂದು ಸೇರಿಸಿದೆ.

ಕಳೆದ ಎರಡು ವಾರಗಳಲ್ಲಿ ಮೊದಲ ಬಾರಿಗೆ ಯುಎಸ್ (ಅಮೆರಿಕ) ಅಥವಾ ಇರಾನ್ ಎರಡೂ ವಿಶಾಲ ಪ್ರದೇಶದಲ್ಲಿ ಯಾವುದೇ ವಾಯುದಾಳಿ ನಡೆಸಿದ ವರದಿಗಳು ಬರದಿದ್ದ ಸಂದರ್ಭದಲ್ಲೇ ಈ ದಾಳಿ ನಡೆದಿದೆ. ಇರಾನ್ ಮೇಲಿನ ಸತತ 13 ರಾತ್ರಿಗಳ ದಾಳಿಯ ನಂತರ, ಯುಎಸ್ ಮಿಲಿಟರಿ ಶನಿವಾರ ಇರಾನ್ ವಿರುದ್ಧ ಯಾವುದೇ ಹೊಸ ದಾಳಿಗಳನ್ನು ಘೋಷಿಸಿಲ್ಲ.

ಇದೇ ಅವಧಿಯಲ್ಲಿ, ಇರಾನ್ ಗಲ್ಫ್ ಪ್ರದೇಶದಾದ್ಯಂತ ಇರುವ ಯುಎಸ್ ಮಿಲಿಟರಿ ನೆಲೆಗಳು ಮತ್ತು ಸೌಲಭ್ಯಗಳ ವಿರುದ್ಧ ಸತತ ಡ್ರೋನ್ ದಾಳಿಗಳನ್ನು ನಡೆಸಿದೆ. ಈ ಮಧ್ಯೆ, ಇರಾನ್‌ನ ಸರ್ಕಾರಿ ಮಾಧ್ಯಮ ಐಆರ್‌ಎನ್‌ಎ ಸುದ್ದಿ ಸಂಸ್ಥೆಯ ಪ್ರಕಾರ, ಹಾರ್ಮುಜ್ ಜಲಸಂಧಿಯ ಕುರಿತು ಮಾತುಕತೆ ನಡೆಸಲು ಓಮನ್ ನಿಯೋಗವು ತೆಹ್ರಾನ್‌ಗೆ ಆಗಮಿಸಿದೆ. ಓಮನ್ ಈ ಜಲಸಂಧಿಯ ದಕ್ಷಿಣ ಕರಾವಳಿಯನ್ನು ನಿಯಂತ್ರಿಸುತ್ತದೆ.

ಶುಕ್ರವಾರ ಶ್ವೇತಭವನದಲ್ಲಿ ಮಾತನಾಡಿದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇರಾನ್ ಜೊತೆಗಿನ ಮಾತುಕತೆಗಳು ಮುಂದುವರಿದಿವೆ ಆದರೆ ಮಿಲಿಟರಿ ಆಯ್ಕೆಗಳು ಸಹ ಮುಕ್ತವಾಗಿವೆ ಎಂದು ಎಚ್ಚರಿಸಿದ್ದಾರೆ. "ನಾವು ಅವರೊಂದಿಗೆ ಮಾತನಾಡುತ್ತಿದ್ದೇವೆ. ಅವರು ಗಂಭೀರವಾಗಿದ್ದಾರೆಂದು ನಾನು ಭಾವಿಸುತ್ತೇನೆ. ನಾವು ಈವರೆಗೆ ನೋಡಿದ್ದಕ್ಕಿಂತಲೂ ಅವರು ಅತ್ಯಂತ ಗಂಭೀರವಾಗಿದ್ದಾರೆಂದು ನಾನು ಭಾವಿಸುತ್ತೇನೆ, ಆದರೆ ನಾವು ಒಪ್ಪಂದಕ್ಕೆ ತಲುಪುತ್ತೇವೆ ಎಂದು ಇದರರ್ಥವಲ್ಲ," ಎಂದು ಟ್ರಂಪ್ ಹೇಳಿದರು.

ಪ್ರತ್ಯೇಕವಾಗಿ, ಇರಾನ್ ಬಂದರುಗಳ ಮೇಲಿನ ಅಮೆರಿಕದ ದಿಗ್ಬಂಧನದಿಂದ ತಪ್ಪಿಸಿಕೊಳ್ಳಲು ಯತ್ನಿಸುತ್ತಿದ್ದ ಓಮನ್ ಕೊಲ್ಲಿಯ ಟ್ಯಾಂಕರ್ ಒಂದರ ಮೇಲೆ ಶುಕ್ರವಾರ ಗುಂಡಿನ ದಾಳಿ ನಡೆಸಿ ಅದನ್ನು ನಿಷ್ಕ್ರಿಯಗೊಳಿಸಿರುವುದಾಗಿ ಯುಎಸ್ ಮಿಲಿಟರಿ ತಿಳಿಸಿದೆ. ಈ ತಿಂಗಳ ಆರಂಭದಲ್ಲಿ ವಾಷಿಂಗ್ಟನ್ ದಿಗ್ಬಂಧನವನ್ನು ಮರುಹೇರಿದ ನಂತರ ಯುಎಸ್ ಪಡೆಗಳು ನಿಷ್ಕ್ರಿಯಗೊಳಿಸಿದ ಎರಡನೇ ವಾಣಿಜ್ಯ ಹಡಗು ಇದಾಗಿದೆ.



ರೊಮೇನಿಯಾಕ್ಕೆ ಶನಿವಾರ ಕೈಗೊಂಡಿದ್ದ ತಮ್ಮ ಅಧಿಕೃತ ಭೇಟಿಯ ಸಮಾರೋಪದ ದಿನದಂದು, ಭಾರತೀಯ ವಲಸಿಗರು ಮತ್ತು 'ಫ್ರೆಂಡ್ಸ್ ಆಫ್ ಇಂಡಿಯಾ' ಸದಸ್ಯರ ಸಂಭ್ರಮದಲ್ಲಿ ಉದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗಿಯಾಗಿದ್ದರು.

# ವಿಶ್ವ ಪಾರಂಪರಿಕ ತಾಣದ ಪಟ್ಟಿಗೆ ಸಾರನಾಥ ಸೇರ್ಪಡೆ

**ವಾರಣಾಸಿ, ಜು.25:** ಪ್ಯಾರಿಸ್‌ನಲ್ಲಿ ಶನಿವಾರ ನಡೆದ ಸಮಾರಂಭದಲ್ಲಿ ಸಾರನಾಥ ತಾಣಕ್ಕೆ ನಿರೀಕ್ಷೆಯಂತೆ ಯುನೆಸ್ಕೋ ವಿಶ್ವ ಪರಂಪರೆಯ ತಾಣದ ಸ್ಥಾನಮಾನ ನೀಡಲಾಯಿತು. ಇದು ಉತ್ತರ ಪ್ರದೇಶದ ಪ್ರಮುಖ ಜಾಗತಿಕ ತಾಣವಾಗಿದೆ. ವಾರಣಾಸಿಯಲ್ಲಿರುವ ಪ್ರಾಚೀನ ಬೌದ್ಧ ತಾಣ ಸಾರನಾಥವನ್ನು ಯುನೆಸ್ಕೋ ವಿಶ್ವ ಪರಂಪರೆಯ ಪಟ್ಟಿಯಲ್ಲಿ ಸೇರಿಸಲಾಗಿದೆ. ಯುನೆಸ್ಕೋ ವಿಶ್ವ ಪರಂಪರೆಯ ಸಮಿತಿಯ 48ನೇ ಅಧಿವೇಶನದಲ್ಲಿ ಪ್ಯಾರಿಸ್‌ನಲ್ಲಿ ಇದನ್ನು ಘೋಷಿಸಲಾಯಿತು.

ಬೌದ್ಧಧರ್ಮದ ಸಂದರ್ಭದಲ್ಲಿ ಸಾರನಾಥವು ಅಪಾರ ಐತಿಹಾಸಿಕ ಮಹತ್ವವನ್ನು ಹೊಂದಿದೆ. ಭಗವಾನ್ ಬುದ್ಧನು ತನ್ನ ಮೊದಲ ಧರ್ಮೋಪದೇಶಗಳನ್ನು ನೀಡಿದ ಸ್ಥಳ ಇದು. ಇಲ್ಲಿರುವ ಪ್ರಮುಖ ಬೌದ್ಧ ತಾಣವಾದ ಧಮೇಕ್ ಸ್ತೂಪವು ಇದನ್ನು ಇನ್ನಷ್ಟು ಮಹತ್ವದ್ದಾಗಿ ಮಾಡುತ್ತದೆ. ಈ ಸ್ತೂಪವನ್ನು



3ನೇ ಶತಮಾನದಲ್ಲಿ ಚಕ್ರವರ್ತಿ ಅಶೋಕನು ನಿರ್ಮಿಸಿದನು. ಬೌದ್ಧ ಕಲೆ ಮತ್ತು ಸಂಸ್ಕೃತಿಯ ಅದ್ಭುತ ಉದಾಹರಣೆಗಳನ್ನು ನೀಡುವ ಚೌಖಂಡಿ ಸ್ತೂಪ ಮತ್ತು ಸಾರನಾಥ ವಸ್ತುಸಂಗ್ರಹಾಲಯದಂತಹ ಇತರ ಪ್ರಮುಖ ರಚನೆಗಳನ್ನು ಸಹ ಸಾರನಾಥ ಹೊಂದಿದೆ.

ಯುನೆಸ್ಕೋದ ವಿಶ್ವ ಪರಂಪರೆಯ ತಾಣ ಪದನಾಮವು ಸಾರನಾಥದ ಐತಿಹಾಸಿಕ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಗುರುತಿಸುವುದಲ್ಲದೆ, ಪ್ರದೇಶದ ಅಭಿವೃದ್ಧಿ ಮತ್ತು ಪ್ರವಾಸೋದ್ಯಮವನ್ನು ಉತ್ತೇಜಿಸುತ್ತದೆ. ಈ ನಿರ್ಧಾರವು ಸ್ಥಳೀಯ ಆರ್ಥಿಕತೆಗೆ ಪ್ರಯೋಜನವನ್ನು ನೀಡುತ್ತದೆ. ಹೆಚ್ಚಿನ ಪ್ರವಾಸಿಗರನ್ನು ಆಕರ್ಷಿಸುತ್ತದೆ ಮತ್ತು ಉದ್ಯೋಗಾವಕಾಶಗಳನ್ನು ಹೆಚ್ಚಿಸುತ್ತದೆ.

ಸಾರನಾಥ ಬೌದ್ಧರಿಗೆ ಒಂದು ಪವಿತ್ರ ಯಾತ್ರಾ ಸ್ಥಳವಾಗಿದೆ. ಪ್ರತಿ ವರ್ಷ ಸಾವಿರಾರು ಜನರು ಈ ಸ್ಥಳಕ್ಕೆ ಭೇಟಿ ನೀಡುತ್ತಾರೆ. ಧಾರ್ಮಿಕ ದೃಷ್ಟಿಕೋನದಿಂದ ಮಾತ್ರವಲ್ಲದೆ ಐತಿಹಾಸಿಕ ಮತ್ತು ಸಾಂಸ್ಕೃತಿಕ ದೃಷ್ಟಿಕೋನದಿಂದಲೂ ಇದರ ಮಹತ್ವವನ್ನು ಗುರುತಿಸುತ್ತಾರೆ. ಯುನೆಸ್ಕೋ ವಿಶ್ವ ಪರಂಪರೆಯ ಪಟ್ಟಿಯಲ್ಲಿ ಸೇರ್ಪಡೆಗೊಳ್ಳುವುದರಿಂದ ಸಾರನಾಥದ ಗುರುತನ್ನು ಮತ್ತಷ್ಟು ಬಲಪಡಿಸುತ್ತದೆ ಮತ್ತು ಜಾಗತಿಕ ಮನ್ನಣೆಯನ್ನು ಪಡೆಯುತ್ತದೆ.

# ಹಾರ್ಮುಜ್‌ನಲ್ಲಿ ವಾಣಿಜ್ಯ ಹಡಗುಗಳ ಸುರಕ್ಷತೆಗೆ ಜಾಗತಿಕ ಒಕ್ಕೂಟ ರಚನೆ

**ವಾಷಿಂಗ್ಟನ್/ಲಂಡನ್, ಜು.25:** ಹಾರ್ಮುಜ್ ಜಲಸಂಧಿಯ ಮೂಲಕ ಹಾದುಹೋಗುವ ವಾಣಿಜ್ಯ ಹಡಗುಗಳನ್ನು ರಕ್ಷಿಸಲು ಅಂತರರಾಷ್ಟ್ರೀಯ ಒಕ್ಕೂಟವನ್ನು ರಚಿಸುವ ಕುರಿತು ಚರ್ಚಿಸಲು ಅಮೆರಿಕ ಮತ್ತು ಬ್ರಿಟನ್ ಮುಂದಿನ ವಾರ ಲಂಡನ್‌ನಲ್ಲಿ ಉನ್ನತ ಮಟ್ಟದ ಸಭೆಯನ್ನು ಕರೆಯಲು ಯೋಜಿಸುತ್ತಿವೆ ಎಂದು ಇಬ್ಬರು ಯುರೋಪಿಯನ್ ಮುತ್ಸದ್ದಿಗಳು ಮತ್ತು ಯೋಜನೆಗಳ ನಿಕಟ ಪರಿಚಯವಿರುವ ಇತರ ಇಬ್ಬರು ಮೂಲಗಳು ತಿಳಿಸಿವೆ. ದಿನಾಂಕ ಮತ್ತು ಕಾರ್ಯಸೂಚಿಯನ್ನು ಇನ್ನು ನಿರ್ಧರಿಸಲಾಗುತ್ತಿರುವ ಈ ಸಭೆಯಲ್ಲಿ ಪಾಶ್ಚಿಮಾತ್ಯ ದೇಶಗಳು ಮತ್ತು ಪ್ರಾದೇಶಿಕ ಪಾಲುದಾರರ ರಕ್ಷಣಾ ಸಚಿವರು ಹಾಗೂ ಹಿರಿಯ ಮಿಲಿಟರಿ ಕಮಾಂಡರ್‌ಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದು ಆಕ್ಸಿಯೋಸ್ ವರದಿ ಮಾಡಿದೆ.

ಮೂಲಗಳ ಪ್ರಕಾರ, ಯುಎಸ್ ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಮತ್ತು ಜಂಟಿ ಚೀಫ್ಸ್ ಆಫ್ ಸ್ಟಾಫ್ ಅಧ್ಯಕ್ಷ ಜನರಲ್ ಡ್ಯಾನ್ ಕೇನ್ ಭಾಗವಹಿಸುವ ನಿರೀಕ್ಷೆಯಿದೆ. ವಾಷಿಂಗ್ಟನ್ ಮತ್ತು ಲಂಡನ್ ಈ ಸಮ್ಮೇಳನವನ್ನು ಆಯೋಜಿಸಲು ಕೆಲಸ ಮಾಡುತ್ತಿವೆ ಎಂದು ಶ್ವೇತಭವನದ ಅಧಿಕಾರಿಯೊಬ್ಬರು ದೃಢಪಡಿಸಿದ್ದರೆ, ವಾಷಿಂಗ್ಟನ್‌ನಲ್ಲಿರುವ ಬ್ರಿಟಿಷ್ ರಾಯಭಾರ ಕಚೇರಿ ಪ್ರತಿಕ್ರಿಯಿಸಲು ನಿರಾಕರಿಸಿದೆ.

ಇರಾನ್ ಜೊತೆಗಿನ ಸಂಘರ್ಷವನ್ನು ಅಂತ್ಯಗೊಳಿಸಲು ಮತ್ತು ಜಾಗತಿಕ ಇಂಧನ ಮಾರುಕಟ್ಟೆಗಳನ್ನು ಸ್ಥಿರಗೊಳಿಸಲು ಹಾರ್ಮುಜ್ ಜಲಸಂಧಿಯನ್ನು ಮರುಸಂಚಾರಕ್ಕೆ ಮುಕ್ತಗೊಳಿಸುವುದು ವಾಷಿಂಗ್ಟನ್‌ನ ಪ್ರಮುಖ ಉದ್ದೇಶವಾಗಿದ್ದು, ಈ ಸಂಭಾವ್ಯ ಒಕ್ಕೂಟದ ರಚನೆಗೆ ಮುಂದಾಗಿದೆ.

# ಬಾಂಗ್ಲಾದೇಶದಲ್ಲಿ ಮತ್ತೆ ಡೆಂಗಾರ ಉಲ್ಬಣ

ಢಾಕಾ, ಜು. 25: ಬಾಂಗ್ಲಾದೇಶದಲ್ಲಿ ದಡಾರ ಹರಡುವಿಕೆ ತೀವ್ರಗೊಂಡಿದ್ದು, ಜುಲೈ 25ಕ್ಕೆ ಕೊನೆಗೊಂಡ ಕಳೆದ 24 ಗಂಟೆಗಳಲ್ಲಿ ಮತ್ತೆ ಆರು ಮಕ್ಕಳು ದಡಾರ ಮಾದರಿಯ ಲಕ್ಷಣಗಳಿಂದ ಮೃತಪಟ್ಟಿದ್ದಾರೆ. ಇದರೊಂದಿಗೆ ದೇಶದಲ್ಲಿ ದೃಢಪಟ್ಟ ಮತ್ತು ಶಂಕಿತ ದಡಾರ ಸಂಬಂಧಿತ ಒಟ್ಟು ಸಾವುಗಳ ಸಂಖ್ಯೆ 816ಕ್ಕೆ ಏರಿಕೆಯಾಗಿದೆ.

ಆರೋಗ್ಯ ಸೇವೆಗಳ ಡೈರೆಕ್ಟರೇಟ್ ಜನರಲ್ ನೀಡಿದ ದತ್ತಾಂಶದ ಪ್ರಕಾರ, ದೇಶದಲ್ಲಿ ಶಂಕಿತ ದಡಾರ ಸಾವುಗಳ ಸಂಖ್ಯೆ 721ಕ್ಕೆ ಏರಿದ್ದರೆ, ಪ್ರಯೋಗಾಲಯದಲ್ಲಿ ದೃಢಪಟ್ಟ ದಡಾರ ಸಾವುಗಳ ಸಂಖ್ಯೆ 95ಕ್ಕೆ ತಲುಪಿದೆ ಎಂದು ವರದಿಯಾಗಿದೆ. ಇದೇ ಅವಧಿಯಲ್ಲಿ (ಕಳೆದ 24 ಗಂಟೆಗಳಲ್ಲಿ) ಒಟ್ಟು 613 ಹೊಸ ಶಂಕಿತ ದಡಾರ ಪ್ರಕರಣಗಳು ವರದಿಯಾಗಿದ್ದು, ದೇಶಾದ್ಯಂತ ಶಂಕಿತ ಪ್ರಕರಣಗಳ ಒಟ್ಟು ಸಂಖ್ಯೆ 1,22,763ಕ್ಕೆ ತಲುಪಿದೆ.

ಹೆಚ್ಚುವರಿಯಾಗಿ 78 ಹೊಸ ದೃಢಪಟ್ಟ ದಡಾರ ಪ್ರಕರಣಗಳು ದಾಖಲಾಗಿದ್ದು, ಪ್ರಯೋಗಾಲಯದಲ್ಲಿ ದೃಢಪಟ್ಟ ಒಟ್ಟು ಸೋಂಕುಗಳ ಸಂಖ್ಯೆ 15,272ಕ್ಕೆ ತಲುಪಿದೆ.

ಡಿಜಿಎಚ್‌ಎಸ್ ದತ್ತಾಂಶದ ಪ್ರಕಾರ, ಮಾರ್ಚ್ 15 ರಿಂದ ದೇಶಾದ್ಯಂತ ಶಂಕಿತ ದಡಾರ ಹೊಂದಿದ್ದ ಒಟ್ಟು 1,05,298 ರೋಗಿಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರಲ್ಲಿ 1,01,535 ರೋಗಿಗಳು ಗುಣಮುಖರಾಗಿದ್ದಾರೆ.

ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ, ಮಾರ್ಚ್ 15 ರಿಂದ ವರದಿಯಾದ ಒಟ್ಟು ಸೋಂಕುಗಳಲ್ಲಿ ಢಾಕಾ (8,263 ಪ್ರಕರಣಗಳು), ರಾಜಶಾಹಿ (3,747



ಪ್ರಕರಣಗಳು), ಚಟ್ಟೋಗ್ರಾಮ್ (2,514 ಪ್ರಕರಣಗಳು) ಮತ್ತು ಖುಲ್ನಾ (1,568 ಪ್ರಕರಣಗಳು) ಹೆಚ್ಚು ಹಾನಿಗೊಳಗಾದ ಪ್ರದೇಶಗಳಾಗಿವೆ. ಢಾಕಾದಲ್ಲಿ ಡೆಮ್ರಾ, ಜತ್ರಾಬಾರಿ, ಕಮರಂಗಿರ್ಚಾರ್, ಕೊರೈಲ್, ಮಿರ್‌ಪುರ್ ಹಾಗೂ ತೇಜ್‌ಗಾಂವ್ ಕೈಗಾರಿಕಾ ಮತ್ತು ಕೊಳಚೆ ಪ್ರದೇಶಗಳು ಸೇರಿದಂತೆ ದಟ್ಟವಾದ ಜನಸಾಂದ್ರತೆ ಹೊಂದಿರುವ ನಿವಾಸಗಳಲ್ಲಿ ಸೋಂಕು ಹೆಚ್ಚು ಕೇಂದ್ರೀಕೃತವಾಗಿದೆ. ಇದಲ್ಲದೆ, ಸೋಂಕಿತರಲ್ಲಿ ಐದು ವರ್ಷ ಅಥವಾ ಅದಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಬಹುಪಾಲು ಅಂದರೆ ಅಂದಾಜು ಶೇ. 79 ರಷ್ಟಿದ್ದಾರೆ.

ಮೈಮೆನ್‌ಸಿಂಗ್‌ನಂತಹ ಜಿಲ್ಲೆಗಳ ಪ್ರಾದೇಶಿಕ ಆಸ್ಪತ್ರೆಗಳು ತಮ್ಮ ನಿಗದಿತ ಹಾಸಿಗೆ ಸಾಮರ್ಥ್ಯಕ್ಕಿಂತ ದುಪ್ಪಟ್ಟು ರೋಗಿಗಳನ್ನು ನಿರ್ವಹಿಸುತ್ತಿದ್ದು, ವೈದ್ಯರು ತೀವ್ರ ಸ್ಥಿತಿಯಲ್ಲಿರುವ ಹೊಸ ರೋಗಿಗಳಿಗೆ ಜಾಗ ಮಾಡಲು ಕಾಯಂ ಕಾರಿಡಾರ್‌ಗಳಲ್ಲಿ ಮಕ್ಕಳಿಗೆ ಚಿಕಿತ್ಸೆ ನೀಡುವ ಹಾಗೂ ಬೇಗನೆ ಡಿಸ್ಚಾರ್ಜ್ ಮಾಡುವ ಪರಿಸ್ಥಿತಿಗೆ ತಳ್ಳಲ್ಪಟ್ಟಿದ್ದಾರೆ. ಇದರಿಂದ ದೇಶದ ಆರೋಗ್ಯ ವ್ಯವಸ್ಥೆಯ ಮೇಲೆ ತೀವ್ರ ಒತ್ತಡ ಉಂಟಾಗಿದೆ.

# ವಾಣಿಜ್ಯ ಹಡಗಿನ ಮೇಲೆ ದಾಳಿ, ಭಾರತೀಯ ಸಾವು: ವಿದೇಶಾಂಗ ಸಚಿವಾಲಯ ಖಂಡನೆ

**ನವದೆಹಲಿ, ಜು.25:** ಕಪ್ಪು ಸಮುದ್ರದಲ್ಲಿ ಸಂಚರಿಸುತ್ತಿದ್ದ ವಾಣಿಜ್ಯ ಹಡಗಿನ ಮೇಲೆ ನಡೆದ ಭೀಕರ ದಾಳಿಯಲ್ಲಿ ಓರ್ವ ಭಾರತೀಯ ಪ್ರಜೆ ಸಾವನ್ನಪ್ಪಿರುವ ಘಟನೆ ಶುಕ್ರವಾರ ನಡೆದಿದೆ. ಜುಲೈ 18ರಂದು ರಷ್ಯಾದ ಪ್ರಾದೇಶಿಕ ಜಲಪ್ರದೇಶದಲ್ಲಿ ಚಲಿಸುತ್ತಿದ್ದ 'ಎಂವಿ ಒಮೊರ್ಫಿ' ಎಂಬ ವಾಣಿಜ್ಯ ಸರಕು ಸಾಗಣೆ ಹಡಗಿನ ಮೇಲೆ ಈ ದಾಳಿ ನಡೆದಿದೆ ಎಂದು ವರದಿಯಾಗಿದೆ. ಹಡಗಿನಲ್ಲಿದ್ದ ಒಟ್ಟು ಹತ್ತು ಸಿಬ್ಬಂದಿ ಪೈಕಿ ಮೂವರು ಭಾರತೀಯರಾಗಿದ್ದರು. ಈ ಪೈಕಿ ಒಬ್ಬರು ದಾಳಿಗೆ ಬಲಿಯಾಗಿದ್ದು, ಉಳಿದ ಇಬ್ಬರು ಭಾರತೀಯರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಈ ಘಟನೆಯನ್ನು ಭಾರತ ಸರ್ಕಾರದ ವಿದೇಶಾಂಗ ವ್ಯವಹಾರಗಳ ಸಚಿವಾಲಯವು ತೀವ್ರವಾಗಿ ಖಂಡಿಸಿದೆ. ಅಂತಾರಾಷ್ಟ್ರೀಯ ಜಲಪ್ರದೇಶದಲ್ಲಿ ವಾಣಿಜ್ಯ ಹಡಗುಗಳ ಮೇಲಿನ ದಾಳಿಗಳು ಯಾವುದೇ ಕಾರಣಕ್ಕೂ ಒಪ್ಪಿಕೊಳ್ಳಲು ಸಾಧ್ಯವಿಲ್ಲ. ಇದು ಜಾಗತಿಕ ಮುಕ್ತ ವ್ಯಾಪಾರ ಮತ್ತು ಹಡಗು ಸಂಚಾರದ ಭದ್ರತೆಗೆ ತಂದೊಡ್ಡಿರುವ ದೊಡ್ಡ ಬೆದರಿಕೆಯಾಗಿದೆ ಎಂದು ಕಳವಳ ವ್ಯಕ್ತಪಡಿಸಿದೆ.

ಎಂಇಎ ಬಿಡುಗಡೆ ಮಾಡಿದ ಪ್ರಕಟಣೆಯಲ್ಲಿ, ಎಂವಿ ಒಮೊರ್ಫಿ ಹೆಸರಿನ ವಾಣಿಜ್ಯ ಹಡಗು ಕಪ್ಪು ಸಮುದ್ರದಲ್ಲಿ, ರಷ್ಯಾದ ಪ್ರಾದೇಶಿಕ ಜಲಪ್ರದೇಶದಲ್ಲಿ ಸಂಚರಿಸುತ್ತಿದ್ದ ವೇಳೆ ದಾಳಿಗೆ ಒಳಗಾಯಿತು.

ರಷ್ಯಾದ ಪ್ರಾದೇಶಿಕ ಜಲಪ್ರದೇಶದಲ್ಲಿ ಸಂಚರಿಸುತ್ತಿದ್ದಾಗ ದಾಳಿಗೆ ಒಳಗಾಗಿದೆ ಎಂಬ ಮಾಹಿತಿ ನಮಗೆ ಲಭಿಸಿದೆ. ಘಟನೆ ನಡೆದ ಸಂದರ್ಭದಲ್ಲಿ ಹಡಗಿನಲ್ಲಿ ಒಟ್ಟು 10 ಸಿಬ್ಬಂದಿ ಇದ್ದರು. ಅವರಲ್ಲಿ ಮೂವರು ಭಾರತೀಯ ಪ್ರಜೆಗಳಾಗಿದ್ದರು. ಈ ದಾಳಿಯಲ್ಲಿ ಓರ್ವ ಭಾರತೀಯ ಪ್ರಜೆ ದುರಂತವಾಗಿ ಮೃತಪಟ್ಟಿದ್ದಾರೆ. ಮೃತರ ಕುಟುಂಬಕ್ಕೆ ನಮ್ಮ ಸಂತಾಪಗಳನ್ನು ಸೂಚಿಸುತ್ತೇವೆ. ಹಡಗಿನಲ್ಲಿ ಇದ್ದ ಉಳಿದ ಇಬ್ಬರು ಭಾರತೀಯರು ಸುರಕ್ಷಿತರಾಗಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

# ಪ್ರಿಯಕರನಿಂದಲೇ ಭಾರತೀಯ ಮೂಲದ ಮಹಿಳೆ ಹತ್ಯೆ

**ಎಡ್ಮಂಟನ್, ಜು.25:** ಕೆನಡಾದ ಎಡ್ಮಂಟನ್‌ನಲ್ಲಿ ಭಾರತೀಯ ಮೂಲದ ಮಹಿಳೆಯನ್ನು ಆಕೆಯ ಲಿವ್ ಇನ್ ಪ್ರಿಯಕರ ಹತ್ಯೆ ಮಾಡಿದ್ದು, ಆತನನ್ನು ಪೊಲೀಸರು ಬಂಧಿಸಿದ್ದಾರೆ. ಪಂಜಾಬ್‌ನ ಲುಧಿಯಾನ ಜಿಲ್ಲೆಯ ಸಮ್ರಾಲಾ ಮೂಲದ ದಮನ್‌ಪ್ರೀತ್ ಕೌರ್ (23) ಹತ್ಯೆಯಾದ ಮಹಿಳೆ. ಆಕೆಯ ಪ್ರಿಯಕರ ರಿತೀಶ್ ಕುಮಾರ್ (22) ಕೊಲೆಗೈದ ಆರೋಪಿಯಾಗಿದ್ದಾನೆ. ಜು.9 ರಂದು ರಿತೀಶ್ ಆಕೆಯ ಕತ್ತು ಹಿಸುಕಿ, ಮಾರಣಾಂತಿಕ ಹಲ್ಲೆ ಮಾಡಿದ್ದ. ಆಕೆ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದುದ್ದನ್ನು ಕಂಡ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದರು. ಬಳಿಕ ಆಕೆಯನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಇದಾದ ಮೂರು ದಿನಗಳ ಬಳಿಕ ಚಿಕಿತ್ಸೆ ಫಲಿಸದೇ ಆಕೆ ಸಾವನ್ನಪ್ಪಿದ್ದಳು. ತನಿಖೆ ನಡೆಸಿದ ಪೊಲೀಸರು ಜುಲೈ 14 ರಂದು ಇದು ಕೊಲೆ ಎಂದು ಘೋಷಿಸಿದ್ದರು. ಜು.22 ರಂದು ಆರೋಪಿಯನ್ನು ಬಂಧಿಸಿದ್ದರು. ಬಳಿಕ ಜುಲೈ 23 ರಂದು ಪೊಲೀಸರು ಮಹಿಳೆಯನ್ನು ಕತ್ತು ಹಿಸುಕಿಕೊಲೆ ಮಾಡಲಾಗಿದೆ ಎಂದು ಬಹಿರಂಗಪಡಿಸಿದರು. ತನಿಖೆ ಕಾರಣದಿಂದಾಗಿ ಈ ವಿಚಾರವನ್ನು ಪೊಲೀಸರು ಅಲ್ಲಿಯ ತನಕ ತಡೆಹಿಡಿದಿದ್ದರು ಎಂದು ತಿಳಿದುಬಂದಿದೆ.

# ಅಕ್ಷರ್ ಯೋಗಕೇಂದ್ರ ಗ್ಲೋಬಲ್ ಯೋಗ ಎಕ್ಸಲೆನ್ಸ್ ಅವಾರ್ಡ್ಸ್, ಗಿನ್ನೆಸ್ ವರ್ಲ್ಡ್ ರೆಕಾರ್ಡ್ಸ್ ಸಂಭ್ರಮ

**ಬೆಂಗಳೂರು, ಜು.25:** ಹಿಮಾಲಯದ ಯೋಗ ವಿಜ್ಞಾನವನ್ನು ಸಂರಕ್ಷಿಸಿ ವಿಶ್ವದಾದ್ಯಂತ ಪ್ರಚಾರ ಮಾಡುವ ಅಂತರರಾಷ್ಟ್ರೀಯ ಖ್ಯಾತಿಯ ಸಂಸ್ಥೆಯಾದ ಅಕ್ಷರ್ ಯೋಗ ಕೇಂದ್ರ 21 ಹೊಸ ಗಿನ್ನೆಸ್ ವಿಶ್ವದಾಖಲೆಗಳನ್ನು ತನ್ನ ಹೆಸರಿಗೆ ಸೇರಿಸಿಕೊಂಡಿದ್ದು, ಒಟ್ಟು ದಾಖಲೆಗಳ ಸಂಖ್ಯೆ ಈಗ 42ಕ್ಕೆ ಏರಿದೆ.

ಈ ಐತಿಹಾಸಿಕ ಸಾಧನೆಯನ್ನು ಸ್ಮರಿಸಲು ಅಕ್ಷರ್ ಯೋಗ ಕೇಂದ್ರ ಗ್ಲೋಬಲ್ ಯೋಗ ಎಕ್ಸಲೆನ್ಸ್ ಅವಾರ್ಡ್ಸ್ ಹಾಗೂ ಗಿನ್ನೆಸ್ ವರ್ಲ್ಡ್ ರೆಕಾರ್ಡ್ಸ್ ಸಂಭ್ರಮ 2026 ಕಾರ್ಯಕ್ರಮವನ್ನು ಶೆರಾಟನ್ ಗ್ರ್ಯಾಂಡ್ ನಲ್ಲಿ ಆಯೋಜಿಸಲಾಯಿತು. ಈ ಸಾಧನೆ ಸಾಧ್ಯವಾಗಲು ಶ್ರಮಿಸಿದ ವ್ಯಕ್ತಿಗಳು, ಶಿಕ್ಷಣ ಸಂಸ್ಥೆಗಳು, ಸ್ವಯಂಸೇವಕರು, ಸಹಭಾಗಿತ್ವ ಸಂಸ್ಥೆಗಳು ಹಾಗೂ ಸಾವಿರಾರು ಭಾಗವಹಿಸಿದವರನ್ನು ಈ ಸಂದರ್ಭದಲ್ಲಿ ಗೌರವಿಸಲಾಯಿತು. 80ಕ್ಕೂ ಹೆಚ್ಚು ದೇಶಗಳ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಹಿಮಾಲಯನ್ ಸಿದ್ಧ ಅಕ್ಷರ್, ಅಕ್ಷರ್ ಯೋಗ ಕೇಂದ್ರದ ಸಂಸ್ಥಾಪಕರು ಹಾಗೂ ವರ್ಲ್ಡ್ ಯೋಗ ಆರ್ಗನೈಸೇಶನ್‌ನ ಅಧ್ಯಕ್ಷರು, ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ, ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ, ಬಿಡಿಎ ಅಧ್ಯಕ್ಷ ಎನ್.ಎ. ಹ್ಯಾರಿಸ್, ಹಿರಿಯ ಅಧಿಕಾರಿಗಳು, ಗಣ್ಯರು ಭಾಗವಹಿಸಿದ್ದರು.

ಈ 21 ಹೊಸ ಗಿನ್ನೆಸ್ ವರ್ಲ್ಡ್ ರೆಕಾರ್ಡ್ಸ್ ಗಳನ್ನು 2026ರ ಜೂನ್




21ರಂದು ಅಂತರರಾಷ್ಟ್ರೀಯ ಯೋಗ ದಿನದ ಅಂಗವಾಗಿ ನಿರ್ಮಿಸಲಾಯಿತು. ವಿದ್ಯಾರ್ಥಿಗಳು, ಯೋಗ ಶಿಕ್ಷಕರು, ಆರೋಗ್ಯ ಕ್ಷೇತ್ರದ ವೃತ್ತಿಪರರು, ಪೊಲೀಸ್ ಸಿಬ್ಬಂದಿ, ರಕ್ಷಣಾ ಪಡೆಗಳು, ಶಿಕ್ಷಣ ಸಂಸ್ಥೆಗಳು ಹಾಗೂ ಕಾರ್ಪೊರೇಟ್ ಸಂಸ್ಥೆಗಳ ಪ್ರತಿನಿಧಿಗಳು ಈ ಪ್ರಯತ್ನದಲ್ಲಿ ಪಾಲ್ಗೊಂಡಿದ್ದರು. ವಿವಿಧ ಖಂಡಗಳ ಸಾವಿರಾರು ಜನರನ್ನು ಒಂದೇ ವೇದಿಕೆಗೆ ಜೋಡಿಸಿದ ಗ್ಲೋಬಲ್ ಆನ್‌ಲೈನ್ ತ್ರಾಟಕ ಧ್ಯಾನ ಪ್ರಯತ್ನ ಪ್ರಮುಖ ಆಕರ್ಷಣೆಯಾಗಿತ್ತು. ಈ ಸಂಭ್ರಮಾಚರಣೆಯ ಅಂಗವಾಗಿ, ಈ ಸಾಧನೆ ಸಾಧ್ಯವಾಗಲು ಶ್ರಮಿಸಿದ ಸಂಸ್ಥೆಗಳು, ತರಬೇತುದಾರರು, ಸಂಯೋಜಕರು ಮತ್ತು ಸ್ವಯಂಸೇವಕರನ್ನು ಅಕ್ಷರ್ ಯೋಗ ಕೇಂದ್ರ ಸನ್ಮಾನಿಸಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಕ್ಷರ್ ಯೋಗ ಕೇಂದ್ರದ ಸಂಸ್ಥಾಪಕ ಹಿಮಾಲಯನ್ ಸಿದ್ಧ ಅಕ್ಷರ್, ,"ಯೋಗವು ಭಾರತವು ಮಾನವಕುಲಕ್ಕೆ ನೀಡಿದ ಅಮೂಲ್ಯ ಕೊಡುಗೆಯಾಗಿದೆ. ಇದು ಮಾನವ ಚೇತನದ ಬೆಳವಣಿಗೆಗೆ ದಾರಿ ತೋರುವ ಸಂಪೂರ್ಣ ವಿಜ್ಞಾನ. ಯೋಗವು ದೇಹಕ್ಕೆ ಆರೋಗ್ಯ, ಮನಸ್ಸಿಗೆ ಸ್ಪಷ್ಟತೆ, ಭಾವನೆಗಳಿಗೆ ಸಮತೋಲನ ಮತ್ತು ವ್ಯಕ್ತಿಯಲ್ಲಿರುವ ಅತ್ಯುನ್ನತ ಸಾಮರ್ಥ್ಯವನ್ನು ಜಾಗೃತಗೊಳಿಸುತ್ತದೆ. ಅಕ್ಷರ್ ಯೋಗ ಕೇಂದ್ರದಲ್ಲಿ ನಮ್ಮ ಉದ್ದೇಶ ಹಿಮಾಲಯದ ಯೋಗ ಪರಂಪರೆಯ ಮೂಲ ಸ್ವರೂಪವನ್ನು ಉಳಿಸಿಕೊಂಡು, ಜಾತಿ, ದೇಶ, ಭಾಷೆ ಅಥವಾ ಸಂಸ್ಕೃತಿಯ ಭೇದವಿಲ್ಲದೆ ಪ್ರತಿಯೊಬ್ಬರಿಗೂ ಈ ಜ್ಞಾನವನ್ನು ತಲುಪಿಸುವುದಾಗಿದೆ. ಕ್ರಮಬದ್ಧ, ಪ್ರಾಮಾಣಿಕ ಹಾಗೂ ಏಕರೂಪದ ತರಬೇತಿ ಪಡೆದ ಪ್ರತಿಯೊಬ್ಬ ಯೋಗ ಶಿಕ್ಷಕರೂ ಈ ಪ್ರಾಚೀನ ಜ್ಞಾನವನ್ನು ಕುಟುಂಬಗಳು, ಸಮಾಜಗಳು ಮತ್ತು ರಾಷ್ಟ್ರಗಳಿಗೆ ಮುಂದಿನ ಪೀಳಿಗೆಗಳವರೆಗೆ ತಲುಪಿಸುವ ಬೆಳಕಿನ ದೀಪವಾಗುತ್ತಾರೆ." ಎಂದರು.

ಈ ವರ್ಷಾಂತ್ಯದೊಳಗೆ 1 ಲಕ್ಷ ಪ್ರಮಾಣಿತ ಯೋಗ ಶಿಕ್ಷಕರನ್ನು ತಯಾರಿಸುವ ಮಹತ್ವಾಕಾಂಕ್ಷಿ ಗುರಿಯನ್ನು ಅಕ್ಷರ್ ಯೋಗ ಕೇಂದ್ರ ಘೋಷಿಸಿತು. ಇದರ ಭಾಗವಾಗಿ ಸ್ಕಾಲರ್‌ಶಿಪ್ ಯೋಗ ಟೀಚರ್ ಟ್ರೈನಿಂಗ್ ಪ್ರೋಗ್ರಾಂ ಮೂಲಕ ಆರ್ಥಿಕವಾಗಿ ಹಿಂದುಳಿದ ಹಾಗೂ ಸಮಾಜದ ಅಂಚಿನ ಸಮುದಾಯಗಳ ವ್ಯಕ್ತಿಗಳಿಗೆ ಒಂದು ತಿಂಗಳ ಸಂಪೂರ್ಣ ಉಚಿತ ವಸತಿ ಸಹಿತ ಯೋಗ ಶಿಕ್ಷಕರ ತರಬೇತಿ ನೀಡಲಾಗುತ್ತದೆ.

## ಕಾಮನ್‌ವೆಲ್ತ್ ಗೇಮ್ಸ್ 2026: ಭಾರತಕ್ಕೆ ಮೊದಲ ಪದಕ

# ಪ್ಯಾರಾ ವೇಟ್‌ಲಿಫ್ಟರ್ ಜಂಡುಗೆ ಕಂಚು



**ನವದೆಹಲಿ, ಜು.25:** ಗ್ಲಾಸ್ಗೋದಲ್ಲಿ ನಡೆಯುತ್ತಿರುವ 2026ರ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಶುಕ್ರವಾರ ನಡೆದ ಪುರುಷರ ಹೆವಿವೇಟ್ ಪ್ಯಾರಾ ಪವರ್‌ಲಿಫ್ಟಿಂಗ್ ಸ್ಪರ್ಧೆಯಲ್ಲಿ ಬಿಹಾರದ ಜಂಡು ಕುಮಾರ್ ಕಂಚಿನ (ಬ್ರಾಂಜ್) ಪದಕ ಗೆಲ್ಲುವ ಮೂಲಕ ಭಾರತದ ಪದಕದ ಖಾತೆಯನ್ನು ತೆರೆದಿದ್ದಾರೆ.

ಹೆಚ್ಚಿನ ಕ್ರೀಡಾಪಟುಗಳಿಗೆ ಕಾಮನ್‌ವೆಲ್ತ್ ಗೇಮ್ಸ್ ಪದಕವು ವರ್ಷಗಳ ಶ್ರಮಕ್ಕೆ ಸಿಗುವ ಪ್ರತಿಫಲವಾಗಿದೆ. ಆದರೆ ನಾಲ್ಕಂದ ಜಿಲ್ಲೆಯ ಹರ್ನೌತ್‌ನ 28 ವರ್ಷದ ಯುವಕನಿಗೆ, ಇದು ಅದ್ಭುತ ಚೇತರಿಕೆಯ ಹಾದಿಯಲ್ಲಿ ಬರೆದ ಹೊಸ ಅಧ್ಯಾಯವಾಗಿದೆ.

ಎರಡು ಗುಂಪುಗಳ ಮಾದರಿಯಲ್ಲಿ ನಡೆದ ಸ್ಪರ್ಧೆಯಲ್ಲಿ ಜಂಡು ಬಿ ಗ್ರೂಪ್‌ನಲ್ಲಿ 130.9 ಅಂಕ ಗಳಿಸುವ ಮೂಲಕ ಅಗ್ರಸ್ಥಾನ ಪಡೆದರು. ಉಗಾಂಡಾದ ಡೆನ್ನಿಸ್ ಎಂಬಾಜಿರಾ (114.1) ಮತ್ತು ಆಸ್ಟ್ರೇಲಿಯಾದ ಬೆನ್ ರೈಟ್ (110.9) ಅವರನ್ನು ಸುಲಭವಾಗಿ ಹಿಂದಿಕ್ಕಿ ಪದಕದ ರೇಸ್‌ಗೆ ಬಂದರು. ಸಂಯೋಜಿತ ಅಂಕಗಳ ಪಟ್ಟಿಯಲ್ಲಿ ಅವರ ಈ ಪ್ರದರ್ಶನಕ್ಕೆ ಕಂಚಿನ ಪದಕ ದಕ್ಕಿದೆ.

ನೈಜೀರಿಯಾದ 21 ವರ್ಷದ ರಿಲ್ವಾನ್ ಇದ್ರಿಸ್ 132.8 ಅಂಕಗಳೊಂದಿಗೆ ಚಿನ್ನದ ಪದಕ ಗೆದ್ದರೆ, ಇಂಗ್ಲೆಂಡ್‌ನ ಮ್ಯಾಥ್ಯೂ ಹಾರ್ಡಿಂಗ್ 131.0 ಅಂಕಗಳೊಂದಿಗೆ ಬೆಳ್ಳಿ ಪದಕ ಪಡೆದರು. ಜಂಡು ಅವರು ಹಾರ್ಡಿಂಗ್ ಅವರಿಗಿಂತ ಕೇವಲ 0.1 ಅಂಕಗಳ ಅಂತರದಲ್ಲಿ ಬೆಳ್ಳಿ ಪದಕವನ್ನು ಕೈತಪ್ಪಿಸಿಕೊಂಡರು.

### ಪ್ರಧಾನಿ ಪ್ರಶಂಸೆ

**ಪದಕದ ಸಾಧನೆಗೆ ಪ್ರಧಾನಿ ನರೇಂದ್ರ ಮೋದಿ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. "ಪುರುಷರ ಹೆವಿವೇಟ್ ಪ್ಯಾರಾ ಪವರ್‌ಲಿಫ್ಟಿಂಗ್ ಸ್ಪರ್ಧೆಯಲ್ಲಿ ಕಂಸದ ಪದಕ ಗೆಲ್ಲುವ ಮೂಲಕ #ಅಘಉ2026 ನಲ್ಲಿ ಭಾರತದ ಪದಕದ ಖಾತೆಯನ್ನು ತೆರೆದಿರುವ ಜಂಡು ಕುಮಾರ್ ಅವರಿಗೆ ಅಭಿನಂದನೆಗಳು, ಅತ್ಯುತ್ತಮ ಪ್ರದರ್ಶನ!" ಎಂದು ಪ್ರಧಾನಿ ಮೋದಿ ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ.**